23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 320 | ನವದೆಹಲಿ | ಬೆಲೆ ₹10 | ಮೇ 26 2026, ಮಂಗಳವಾರ

## ಒಳಪುಟಗಳಲ್ಲಿ

ಮೇಕೆದಾಟು ಯೋಜನೆ: ಡಿಕೆಶಿ ಹೇಳಿಕೆಗೆ ತಮಿಳುನಾಡಿನಲ್ಲಿ ಆಕ್ರೋಶ - ಪು.4

ಗೃಹಲಕ್ಷ್ಮೀ, ಗೃಹಜ್ಯೋತಿ ಫಲಾನುಭವಿಗಳ ಪಟ್ಟಿ ಪರಿಷ್ಕರಣೆಗೆ ಸರ್ಕಾರ ನಿರ್ಧಾರ - ಪು.5

ಕಲಬುರಗಿಯಲ್ಲಿ 'ಪಿಎಂ ಮಿತ್ರ ಜವಳಿ ಪಾರ್ಕ್' ನಿರ್ಮಾಣ ಕಾಮಗಾರಿಗಳಿಗೆ ಮತ್ತಷ್ಟು ವೇಗ: ಎಂ.ಬಿ.ಪಾಟೀಲ್ - ಪು.6

# ರಾಜ್ಯಾದ್ಯಂತ ಅತ್ಯಾಧುನಿಕ ಆ್ಯಂಬುಲೆನ್ಸ್ ಸೇವೆ: ಮುಖ್ಯಮಂತ್ರಿ ಚಾಲನೆ

**ಬೆಂಗಳೂರು, ಮೇ.25:** ಸೋಮವಾರದಿಂದ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಅತ್ಯಾಧುನಿಕ ತಂತ್ರಜ್ಞಾನವುಳ್ಳ ಆಂಬುಲೆನ್ಸ್ ಸೇವೆ ಲಭ್ಯವಾಗಲಿದ್ದು, ಈ ಸೇವೆ ಪರಿಣಾಮಕಾರಿಯಾಗಿ ಜನರಿಗೆ ತಲುಪಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ "108 ಆರೋಗ್ಯ ಕವಚ ಕೇಂದ್ರೀಕೃತ ಕಮಾಂಡ್ ಮತ್ತು ಕಂಟ್ರೋಲ್ ಕೇಂದ್ರ"ವನ್ನು ಉದ್ಘಾಟಿಸಿದ ಅವರು, ಇಡೀ ದೇಶದಲ್ಲಿಯೇ ಪ್ರಥಮ ಬಾರಿಗೆ ಕರ್ನಾಟಕದಲ್ಲಿ 108 ಆರೋಗ್ಯ ಕವಚ ಕೇಂದ್ರೀಕೃತ ಕಮಾಂಡ್ ಮತ್ತು ಕಂಟ್ರೋಲ್ ಕೇಂದ್ರದ ಆರೋಗ್ಯ ಸೇವೆಯನ್ನು ಪ್ರಾರಂಭಿಸಲಾಗಿದೆ. ತುರ್ತು ಸಂದರ್ಭಗಳಲ್ಲಿ ತ್ವರಿತಗತಿಯಲ್ಲಿ ಚಿಕಿತ್ಸೆ ದೊರೆಯಬೇಕು. ಈ ದಿಸೆಯಲ್ಲಿ ಅತ್ಯಾಧುನಿಕ ಮಾದರಿಯಲ್ಲಿ ಆರೋಗ್ಯ ಸೇವೆ ದೊರೆಯಲು ಈ ಕೇಂದ್ರ ಅತ್ಯಂತ ಸಹಕಾರಿಯಾಗಿದೆ. ರಾಜ್ಯದಲ್ಲಿ ಸುಮಾರು 18 ವರ್ಷಗಳಿಂದ 108 ಆ್ಯಂಬುಲೆನ್ಸ್ ಸೇವೆ ನಡೆಯುತ್ತಿದೆ. 2025–26 ರ ಬಜೆಟ್ ಘೋಷಣೆಯಂತೆ 108 ತುರ್ತು ಆ್ಯಂಬುಲೆನ್ಸ್ ಸೇವೆಗಳ ನಿರ್ವಹಣೆಗೆ ಮೀಸಲಾದ ವ್ಯವಸ್ಥೆಯನ್ನು ರೂಪಿಸಲಾಗಿದೆ. ಈ ಸೇವೆ ಪರಿಣಾಮಕಾರಿಯಾಗಿ ಜನರಿಗೆ ಲಭಿಸುವಂತಾಗುವುದು ಮುಖ್ಯ. ಸರ್ಕಾರದ ಗುಣಮಟ್ಟದ ಆರೋಗ್ಯ ಸೇವೆಯಿಂದ ಜನರ ವಿಶ್ವಾಸ ಹೆಚ್ಚುತ್ತದೆ ಎಂದರು.



ರಸ್ತೆ ಅಪಘಾತಗಳು, ಹೆರಿಗೆ, ಹೃದಯರೋಗಿ ಸೇರಿದಂತೆ ಹಲವು ಕ್ಲಿಷ್ಟ ಸಂದರ್ಭಗಳಲ್ಲಿ ತುರ್ತುಚಿಕಿತ್ಸೆಯ ಅತ್ಯವಶ್ಯವಾಗಿದ್ದು, ಆ ಗೋಲ್ಡನ್ ಅವರ್‌ನಲ್ಲಿ ಚಿಕಿತ್ಸೆ ದೊರೆತರೆ, ರೋಗಿಗಳು ಬದುಕುವ ಸಾಧ್ಯತೆ ಹೆಚ್ಚಿರುತ್ತದೆ. ಗೋಲ್ಡನ್ ಅವರ್‌ನಲ್ಲಿ ದೊರೆತ ಚಿಕಿತ್ಸೆಯಲ್ಲಿ ಸುಮಾರು ಶೇ.80 ರಷ್ಟು ಜನರು ಬದುಕುಳಿದಿದ್ದಾರೆ. ಜೀವನ್ಮರಣದ ಹೋರಾಟದಲ್ಲಿ ತುರ್ತು ಚಿಕಿತ್ಸೆ ಹೆಚ್ಚಿನ ಮಹತ್ವವನ್ನು ಹೊಂದಿದೆ. ಬೆಂಗಳೂರು ನಗರದಲ್ಲಿ 65 ರಿಂದ 70 ಆ್ಯಂಬುಲೆನ್ಸ್‌ಗಳಿದ್ದು, ತುರ್ತು ಚಿಕಿತ್ಸೆಗೆ ನೆರವಾಗಿವೆ. 108 ಆ್ಯಂಬುಲೆನ್ಸ್ ವ್ಯವಸ್ಥೆ ಖಾಸಗಿಯವರ ಕೈಯಲ್ಲಿದ್ದಾಗ, ಅವರ ಹೊಣೆಗಾರಿಕೆಯನ್ನು ಪ್ರಶ್ನಿಸುವಂತಿರಲಿಲ್ಲ. ಆದರೆ ಪ್ರಸ್ತುತ ಈ ವ್ಯವಸ್ಥೇ ಸರ್ಕಾರದ ಅಧೀನದಲ್ಲಿರುವುದರಿಂದ ಈ ಸೇವೆಯ ಹೊಣೆಗಾರಿಕೆ ಹೆಚ್ಚಿದೆ ಎಂದರು. ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ತಮ್ಮ ಆರೋಗ್ಯ ಸಮಸ್ಯೆಗೆ ನೆರವು ಕೇಳಿ ಬರುವ ಜನರು, ಸರ್ಕಾರದ ಧನಸಹಾಯವನ್ನು ಬಯಸುತ್ತಾರೆ. ಆದರೆ ಜನರು ಖಾಸಗಿ ಆಸ್ಪತ್ರೆಗೆ ಹೋಗಿ, ಸರ್ಕಾರದಿಂದ ಧನಸಹಾಯ ಕೇಳುವ ಬದಲು, ಚಿಕಿತ್ಸೆಗೆ ಸರ್ಕಾರಿ ಆಸ್ಪತ್ರೆಗೆ ಹೋಗಬೇಕು. ಕ್ಯಾನ್ಸರ್ ಸೇರಿದಂತೆ ಹಲವು ಕಾಯಿಲೆಗಳಿಗೆ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ದುಬಾರಿಯಾಗಿದ್ದು, ಸರ್ಕಾರಿ ಆಸ್ಪತ್ರೆಯಲ್ಲಿ ಗುಣಮಟ್ಟದ ಚಿಕಿತ್ಸೆಯ ವ್ಯವಸ್ಥೆಯಿದೆ. ಸಾಮಾನ್ಯ ಜನರಿಗೆ ಗುಣಮಟ್ಟದ ಆರೊಗ್ಯ ವ್ಯವಸ್ಥೆಯನ್ನು ನೀಡಲು ಆರೋಗ್ಯ ಕ್ಷೇತ್ರದ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದೆ ಎಂದು ಸಿಎಂ ಸಿದ್ದರಾಮಯ್ಯ ನುಡಿದರು.

# ಎರಡು ವಾರದಲ್ಲಿ ನಾಲ್ಕನೇ ಬಾರಿಗೆ ಇಂಧನ ಬೆಲೆ ಏರಿಕೆ

**ನವದೆಹಲಿ, ಮೇ 25:** ದೇಶದಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಮತ್ತೆ ಏರಿಕೆಯಾಗಿದ್ದು, ಇಂದು ಬೆಳಿಗ್ಗೆ ಪೆಟ್ರೋಲ್‌ಗೆ ಲೀಟರ್‌ಗೆ 2.61 ಹಾಗೂ ಡೀಸೆಲ್‌ಗೆ 2.71 ಹೆಚ್ಚಳ ಮಾಡಲಾಗಿದೆ. ಕಳೆದ ಎರಡು ವಾರಗಳೊಳಗೆ ಇದು ನಾಲ್ಕನೇ ಬಾರಿ ಬೆಲೆ ಏರಿಕೆಯಾಗಿದೆ. ಮೇ 15ರಿಂದ ಇಂಧನ ದರ ಪರಿಷ್ಕರಣೆ ಪುನರಾರಂಭವಾದ ನಂತರ ಪೆಟ್ರೋಲ್ ಮತ್ತು ಡೀಸೆಲ್ ಬೆಲೆಯಲ್ಲಿ ಒಟ್ಟಾರೆ ಪ್ರತಿ ಲೀಟರ್‌ವರೆಗೆ ಸುಮಾರು 7.5 ಏರಿಕೆ ದಾಖಲಾಗಿದ್ದು, ಇದರಿಂದ ದರ ಏರಿಕೆ ಹಾಗೂ ಸಾರಿಗೆ ವೆಚ್ಚ ಹೆಚ್ಚಳದ ಬಗ್ಗೆ ಆತಂಕ ಮೂಡಿದೆ.

ಇತ್ತೀಚಿನ ಪರಿಷ್ಕರಣೆಯ ನಂತರ ದೆಹಲಿಯಲ್ಲಿ ಪೆಟ್ರೋಲ್ ದರ ಲೀಟರ್‌ಗೆ 99.51 ರಿಂದ 102.12 ರೂ.ಗಳಿಗೆ ಏರಿಕೆಯಾಗಿದೆ. ಡೀಸೆಲ್ ಬೆಲೆ 92.49ರಿಂದ 95.20ರೂ.ವರೆಗೆ ಹೆಚ್ಚಳವಾಗಿದೆ. ಜಾಗತಿಕ ಮಾರುಕಟ್ಟೆಯಲ್ಲಿ ಕಚ್ಚಾತೈಲದ ಬೆಲೆ ಏರಿಕೆ, ರಿಫೈನಿಂಗ್ ವೆಚ್ಚದ ಹೆಚ್ಚಳ ಹಾಗೂ ರೂಪಾಯಿ ಮೌಲ್ಯ ಕುಸಿತದಿಂದ ಆಮದು ವೆಚ್ಚ ಏರಿಕೆಯಾಗಿರುವುದು ಬೆಲೆ ಹೆಚ್ಚಳಕ್ಕೆ ಪ್ರಮುಖ ಕಾರಣ ಎಂದು ಮೂಲಗಳು ತಿಳಿಸಿವೆ. ಹೊಸ ದರ ಪರಿಷ್ಕರಣೆಯ ನಂತರ ಮುಂಬೈನಲ್ಲಿ ಪೆಟ್ರೋಲ್ ದರ 111.21 ಮತ್ತು ಡೀಸೆಲ್ 97.83ಕ್ಕೆ ತಲುಪಿದೆ. ಕೋಲ್ಕತ್ತಾದಲ್ಲಿ ಪೆಟ್ರೋಲ್ 113.51 ಹಾಗೂ ಡೀಸೆಲ್ 99.82 ಆಗಿದೆ. ಚೆನ್ನೈನಲ್ಲಿ ಪೆಟ್ರೋಲ್ 107.77 ಮತ್ತು ಡೀಸೆಲ್ 99.55 ಆಗಿದೆ.



**ಲೀಟರ್ ಪೆಟ್ರೋಲ್ 2.61 ರೂಪಾಯಿ ಡೀಸೆಲ್ 2.71 ರೂ. ಹೆಚ್ಚಳ**

ರಾಜ್ಯವಾರು ತೆರಿಗೆ ದರಗಳ ಕಾರಣ ವಿವಿಧ ನಗರಗಳಲ್ಲಿ ಇಂಧನ ದರಗಳು ಬದಲಾಗುತ್ತವೆ.ಅಮೆರಿಕಾ–ಇರಾನ್ ಯುದ್ಧದ ನಂತರ ಜಾಗತಿಕ ತೈಲ ಸಾಗಣೆಯ ಪ್ರಮುಖ ಮಾರ್ಗವಾದ ಹಾರ್ಮುಜ್ ಜಲಸಂಧಿಯಲ್ಲಿ ಉಂಟಾದ ಅಡಚಣೆಯಿಂದ ಫೆಬ್ರವರಿ ಅಂತ್ಯದಿಂದ ಕಚ್ಚಾತೈಲದ ಬೆಲೆ 50 ಶೇಕಡಕ್ಕೂ ಹೆಚ್ಚು ಏರಿಕೆಯಾಗಿದೆ.



ಶತಾವಧಾನಿ ಡಾ.ಆರ್.ಗಣೇಶ್‌ಗೆ ರಾಷ್ಟ್ರಪತಿ ಭವನದಲ್ಲಿ ಸೋಮವಾರ ಪದ್ಮಭೂಷಣ ಪ್ರಶಸ್ತಿ ಪ್ರದಾನ ಮಾಡಿದ ರಾಷ್ಟ್ರಪತಿ ದ್ರೌಪದಿ ಮುರ್ಮು


# ಪ್ರಧಾನಿ ಹಣದುಬ್ಬರದ ಮನುಷ್ಯ: ರಾಹುಲ್‌ಗಾಂಧಿ ಆರೋಪ

**ನವದೆಹಲಿ, ಮೇ 25:** ಪೆಟ್ರೋಲ್ ಮತ್ತು ಡೀಸೆಲ್ ಬೆಲೆಗಳ ಇತ್ತೀಚಿನ ಏರಿಕೆಗೆ ಸಂಬಂಧಿಸಿದಂತೆ ನರೇಂದ್ರ ಮೋದಿ ನೇತೃತ್ವದ ಸರ್ಕಾರದ ಮೇಲೆ ಕಾಂಗ್ರೆಸ್ ಸೋಮವಾರ ತೀವ್ರ ದಾಳಿ ನಡೆಸಿದೆ.

ಕೇಂದ್ರವು ಪದೇಪದೇ ಇಂಧನ ಏರಿಕೆಯಿಂದ ನಾಗರಿಕರ ಮೇಲೆ ಹೊರೆ ಹಾಕುತ್ತಿದೆ ಮತ್ತು ಆರ್ಥಿಕತೆಯಾದ್ಯಂತ ಹಣದುಬ್ಬರದ ಒತ್ತಡವನ್ನು ಉಂಟುಮಾಡುತ್ತಿದೆ ಎಂದು ಆರೋಪಿಸಿದೆ.

ಸಾರ್ವಜನಿಕರ ಆಕ್ರೋಶವನ್ನು ತಪ್ಪಿಸಲು ಸರ್ಕಾರ ಉದ್ದೇಶಪೂರ್ವಕವಾಗಿ ಇಂಧನ ಬೆಲೆಗಳನ್ನು ಹಂತ ಹಂತವಾಗಿ ಹೆಚ್ಚಿಸುತ್ತಿದೆ ಮತ್ತು ಮನೆಯ ಹಣಕಾಸಿನ ಮೇಲಿನ ದಾಳಿ ಎಂದು ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಹೇಳಿದ್ದಾರೆ. ಮುಂದುವರಿದು ಪ್ರಧಾನಿ ನರೇಂದ್ರ ಮೋದಿ "'ಹಣದುಬ್ಬರದ ಮನುಷ್ಯ' ಮತ್ತೆ ದಾಳಿ ಮಾಡುತ್ತಾರೆ. ಪೆಟ್ರೋಲ್ ಮತ್ತು ಡೀಸೆಲ್ ಬೆಲೆಗಳನ್ನು ಕಂತುಗಳಲ್ಲಿ ಹೆಚ್ಚಿಸುತ್ತಾರೆ, ಇದರಿಂದ ನಿಮ್ಮ ಜೇಬುಗಳು ಸದ್ದಿಲ್ಲದೆ, ಸ್ವಲ್ಪಸ್ವಲ್ಪವೇ ಕರಗುತ್ತವೆ ಎಂದು ಹೇಳಿದ್ದಾರೆ.

**ಇಂಧನ ಬೆಲೆ ಏರಿಕೆಗೆ ಕೇಂದ್ರದ ವಿರುದ್ಧ ಆಕ್ರೋಶ**



ಬೆಲೆ ಏರಿಕೆ ಬಗ್ಗೆ ತಿಂಗಳ ಹಿಂದೆಯೇ ಎಚ್ಚರಿಸಿದ್ದೆ. ಪ್ರಧಾನಿ ನರೇಂದ್ರ ಮೋದಿ ಅವರು ಆರ್ಥಿಕ ಕಾಳಜಿಗಳಿಗಿಂತ ಚುನಾವಣೆಗಳಿಗೆ ಆದ್ಯತೆ ನೀಡುತ್ತಿದ್ದಾರೆ. ಚುನಾವಣೆಗಳು ಮುಗಿದ ತಕ್ಷಣ, ಪೆಟ್ರೋಲ್ ಮತ್ತು ಡೀಸೆಲ್ 8 ರೂ. ದುಬಾರಿ ಮಾಡಲಾಯಿತು. ಈ ಬೆಲೆ ಏರಿಕೆ ಮುಂದುವರಿಯುತ್ತಿದೆ ಎಂದಿದ್ದಾರೆ.

ಸರ್ಕಾರವು ಚುನಾವಣೆಗಳ ಸಮಯದಲ್ಲಿ ಭರವಸೆಗಳನ್ನು ನೀಡುತ್ತದೆ ಆದರೆ ನಂತರ ಜನರ ಮೇಲೆ ಆರ್ಥಿಕ ಹೊರೆಗಳನ್ನು ಹೇರುತ್ತದೆ ಎಂದು ಗಾಂಧಿಯವರು ಆರೋಪಿಸಿದರು. "'ಹಣದುಬ್ಬರದ ಮನುಷ್ಯ' ಮೋದಿ ಚುನಾವಣೆಗಳ ಸಮಯದಲ್ಲಿ ಕೇವಲ ಒಂದು ಉದ್ಯೋಗ ಭರವಸೆಯನ್ನು ನೀಡುತ್ತಾರೆ ಮತ್ತು ಉಳಿದ ಸಮಯದಲ್ಲಿ ಸಾರ್ವಜನಿಕರ ಜೇಬಿನ ಮೇಲೆ ದಾಳಿ ಮಾಡುತ್ತಾರೆ" ಎಂದು ಹೇಳಿದ್ದಾರೆ.

## ಜನರ ಉಳಿತಾಯ ಸುಟ್ಟುಹಾಕಲು ಮೋದಿ ಸರ್ಕಾರ ಪೆಟ್ರೋಲ್ ಸುರಿಯುತ್ತಿದೆ: ಖರ್ಗೆ

ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕೂಡ ಇಂಧನ ಬೆಲೆ ಏರಿಕೆಯ ಬಗ್ಗೆ ಕೇಂದ್ರವನ್ನು ಟೀಕಿಸಿದರು, ಅವುಗಳನ್ನು "ಇಂಧನ ಲೂಟಿ" ಎಂದು ಬಣ್ಣಿಸಿದರು ಮತ್ತು ಇತ್ತೀಚಿನ ಪರಿಷ್ಕರಣೆಯು 10 ದಿನಗಳಲ್ಲಿ ನಾಲ್ಕನೇ ಹೆಚ್ಚಳವಾಗಿದೆ ಎಂದು ಹೇಳಿದ್ದಾರೆ. "ಇಂಧನ ಲೂಟಿಯ ದೈನಂದಿನ ದಾಳಿ ಇನ್ನೂ ಮುಗಿದಿಲ್ಲ. "10 ದಿನಗಳಲ್ಲಿ 4ನೇ ಏರಿಕೆ" ಎಂದು ಖರ್ಗೆ ಎಕ್ಸ್‌ನಲ್ಲಿ ಬರೆದಿದ್ದಾರೆ, ಇತ್ತೀಚಿನ ಅವಧಿಯಲ್ಲಿ ಪೆಟ್ರೋಲ್ ಬೆಲೆ ಲೀಟರ್‌ಗೆ 7.35 ರೂ. ಮತ್ತು ಡೀಸೆಲ್ ಲೀಟರ್‌ಗೆ 7.53 ರೂ. ಏರಿಕೆಯಾಗಿದೆ. ಸಾಮಾನ್ಯ ಜನರ ಉಳಿತಾಯವನ್ನು ಸುಡಲು ಮೋದಿ ಸರ್ಕಾರ ಪೆಟ್ರೋಲ್ ಸಿಂಪಡಿಸಿದೆ ಎಂದು ಹೇಳಿದರು. ಬಿಜೆಪಿ ನೇತೃತ್ವದ ಸರ್ಕಾರದ ಅವಧಿಯಲ್ಲಿ ಅಂತರರಾಷ್ಟ್ರೀಯ ಕಚ್ಚಾ ತೈಲ ಬೆಲೆಗಳು ಗಮನಾರ್ಹ ಏರಿಕೆ ಕಂಡಿಲ್ಲ, ಆದರೆ ದೇಶೀಯ ಇಂಧನ ಬೆಲೆಗಳು ಏರಿಕೆಯಾಗುತ್ತಲೇ ಇದ್ದವು ಎಂದು ಖರ್ಗೆ ಹೇಳಿದ್ದಾರೆ. 2014 ರಲ್ಲಿ ಲೀಟರ್‌ಗೆ 71.41 ರೂ. ಇದ್ದ ಪೆಟ್ರೋಲ್ ಬೆಲೆಯನ್ನು 2026 ರಲ್ಲಿ ಲೀಟರ್ ಗೆ 102.12 ರೂ.ಗೆ ಹೆಚ್ಚಿಸಿದೆ, ಇದು 43.01% ಏರಿಕೆಯಾಗಿದೆ ಮತ್ತು ಡೀಸೆಲ್ ಬೆಲೆ ಲೀಟರ್ ಗೆ 56.71 ರೂ. ನಿಂದ 95.20 ರೂ.ಗೆ, ಇದು 67.87% ಹೆಚ್ಚಳವಾಗಿದೆ" ಎಂದು ಅವರು ಹೇಳಿದರು. ಕಳೆದ ದಶಕದಲ್ಲಿ ಇಂಧನ ತೆರಿಗೆಯ ಮೂಲಕ ಸರ್ಕಾರವು ಭಾರಿ ಆದಾಯವನ್ನು ಸಂಗ್ರಹಿಸಿದೆ ಎಂದು ಖರ್ಗೆ ಆರೋಪಿಸಿದ್ದಾರೆ.



ಕಳೆದ 12 ವರ್ಷಗಳಲ್ಲಿ ಮೋದಿ ಸರ್ಕಾರ 43 ಲಕ್ಷ ಕೋಟಿ ರೂ.ಗಳನ್ನು ಲೂಟಿ ಮಾಡಿದೆ, ಇದು ಪ್ರತಿದಿನ 1000 ರೂ.ಗಳ ಲೂಟಿಯಾಗಿದೆ" ಎಂದು ಅವರು ಹೇಳಿದ್ದಾರೆ. ಇಂಧನ ಬೆಲೆ ಪರಿಷ್ಕರಣೆಯನ್ನು ಸಾರ್ವಜನಿಕ ವಲಯದ ತೈಲ ಮಾರುಕಟ್ಟೆ ಕಂಪನಿಗಳ ಷೇರುಗಳ ಲಾಭಕ್ಕೆ ಜೋಡಿಸಿ, ಇತ್ತೀಚಿನ ಏರಿಕೆ ಘೋಷಣೆಯ ನಂತರ ಹಿಂದೂಸ್ತಾನ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್, ಭಾರತ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್ ಮತ್ತು ಇಂಡಿಯನ್ ಆಯಿಲ್ ಕಾರ್ಪೊರೇಷನ್ ಷೇರುಗಳ ಬೆಲೆಗಳು ಏರಿಕೆಯಾಗಿವೆ ಎಂದು ಖರ್ಗೆ ಹೇಳಿದ್ದಾರೆ.

ಪೆಟ್ರೋಲ್ ಮತ್ತು ಡೀಸೆಲ್ ಬೆಲೆಗಳ ಏರಿಕೆಯೊಂದಿಗೆ ಸರ್ಕಾರಿ ಸ್ವಾಮ್ಯದ 3 ತೈಲ ಕಂಪನಿಗಳ ಷೇರುಗಳು ಕ್ರಮವಾಗಿ 5.8%, 4.44% ಮತ್ತು 3.90% ರಷ್ಟು ಏರಿಕೆಯಾಗಿವೆ. ಜನರ ಮೇಲಿನ ಲಾಭವು ಬಿಜೆಪಿಯ ಡಿಎನ್‌ಎ! ಎಂದು ಖರ್ಗೆ ಆರೋಪಿಸಿದರು. "ಪ್ರತಿ ಇಂಧನ ಬೆಲೆ ಏರಿಕೆಯು ಮನೆಯ ಬಜೆಟ್‌ಗೆ ಮತ್ತೊಂದು ಹೊಡೆತವಾಗಿದೆ ಮತ್ತು ಆರ್ಥಿಕತೆಯ ಪ್ರತಿಯೊಂದು ಅಂಶಗಳ ಮೇಲೆ ಪರಿಣಾಮ ಬೀರುತ್ತದೆ. ರೈತರಿಂದ ಹಿಡಿದು ಎಂಎಸ್‌ಎಂಇಗಳವರೆಗೆ, ಸಮಾಜದ ಪ್ರತಿಯೊಂದು ಸ್ತರವು ಬಿಜೆಪಿಯ ಲೂಟಿಯ ಹೊರೆಯನ್ನು ಹೊರಬೇಕಾಗಿದೆ. ಈ ದೈನಂದಿನ ದರೋಡೆಯ ಲಾಭ ಯಾರಿಗೆ ಸಿಗುತ್ತಿದೆಎಂದು ಪ್ರಶ್ನಿಸಿದ್ದಾರೆ.

# ಮೇಕೆದಾಟು: ಕಾನೂನು ಹೋರಾಟ ಮುಂದುವರಿಸಲು ಸಿಎಂ ವಿಜಯ್ ಸೂಚನೆ



**ಚೆನ್ನೈ, ಮೇ 25:** ಮೇಕೆದಾಟು ಯೋಜನೆಯ ವಿರುದ್ಧ ಕಾನೂನು ಹೋರಾಟ ಮುಂದುವರಿಸಲು ಮುಖ್ಯಮಂತ್ರಿ ಜೋಸೆಫ್ ವಿಜಯ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಕಾನೂನು ಕ್ರಮಗಳನ್ನು ತ್ವರಿತಗತಿಯಲ್ಲಿ ಕೈಗೊಳ್ಳುವಂತೆ ಹಾಗೂ ತಮಿಳುನಾಡಿನ ನೀರಾವರಿ ಹಕ್ಕುಗಳನ್ನು ರಕ್ಷಿಸುವಲ್ಲಿ ಯಾವುದೇ ಕೊರತೆಯಾಗಬಾರದು ಎಂದು ನಿರ್ದೇಶಿಸಿದ್ದಾರೆ. ಕಾವೇರಿ ಜಲ ಮತ್ತು ಕಾನೂನು ತಜ್ಞರೊಂದಿಗೆ ಸಭೆ ನಡೆಸಿದ ವಿಜಯ್, ಜಲವಿವಾದದ ಇತಿಹಾಸ, ನೀರು ಹಂಚಿಕೆ ಮತ್ತು ಮೇಕದಾಟು ಆಣೆಕಟ್ಟು ನಿರ್ಮಾಣ ಮಾಡುವ ಕರ್ನಾಟಕದ ಪ್ರಸ್ತಾಪಗಳ ಬಗ್ಗೆ ಮಾಹಿತಿ ಪಡೆದುಕೊಂಡರು. ಸಭೆಯಲ್ಲಿ ಮೇಕೇದಾಟು ಅಣೆಕಟ್ಟು ಯೋಜನೆಯು ಸುಪ್ರೀಂ ಕೋರ್ಟ್ ತೀರ್ಪಿಗೆ ವಿರುದ್ಧವಾಗಿದೆ ಎಂದು ಸಿಎಂಗೆ ತಿಳಿಸಲಾಯಿತು. 2025 ನವೆಂಬರ್ 13 ರಂದು ನಡೆದ ವಿಚಾರಣೆಯಲ್ಲಿ ಸುಪ್ರೀಂ ಕೋರ್ಟ್ ಮೇಕೇದಾಟು ಯೋಜನೆಗೆ ಯಾವುದೇ ಅನುಮತಿ ನೀಡಿಲ್ಲ ಎಂದು ತಿಳಿಸಲಾಯಿತು. ಯೋಜನೆ ಇನ್ನೂ ಪ್ರಾಥಮಿಕ ಹಂತದಲ್ಲಿದೆ ಎಂದು ಹೇಳಿದ ಕೋರ್ಟ್, ಈ ಯೋಜನೆ ಹಿಂದಿನ ತೀರ್ಪಿನ ವ್ಯಾಪ್ತಿಗೆ ಬರುತ್ತದೆಯೇ ಎಂಬುದನ್ನು ಕೇಂದ್ರ ಜಲ ಆಯೋಗ ನಿರ್ಧರಿಸಬೇಕು ಎಂದು ಅಭಿಪ್ರಾಯಪಟ್ಟು ಪ್ರಕರಣಗಳನ್ನು ವಜಾಗೊಳಿಸಿತ್ತು.

ಈ ತೀರ್ಪನ್ನು ಪ್ರಶ್ನಿಸಿದ್ದ ತಮಿಳುನಾಡು ಸರ್ಕಾರದ ಅರ್ಜಿಯನ್ನು ಸುಪ್ರೀಂ ಕೋರ್ಟ್ ತಿರಸ್ಕರಿಸಿದೆ ಎಂದು ಸಭೆಯಲ್ಲಿ ತಿಳಿಸಲಾಯಿತು. ವಿವರವಾದ ಕಾನೂನು ಚರ್ಚೆಯ ನಂತರ ಮುಖ್ಯಮಂತ್ರಿ ಸಿ. ಜೋಸೆಫ್ ವಿಜಯ್ ಅವರು ತಕ್ಷಣವೇ ಕಾನೂನು ಹೋರಾಟ ಮುಂದುವರಿಸಲು ಸೂಚಿಸಿದ್ದು, ತಮಿಳುನಾಡಿನ ನೀರಾವರಿ ಹಕ್ಕುಗಳನ್ನು ರಕ್ಷಿಸುವಲ್ಲಿ ಯಾವುದೇ ಕೊರತೆಯಾಗಬಾರದು ಎಂದು ಹೇಳಿದ್ದಾರೆ.

## ಯೋಜನೆ ತಡೆಯುವ ಹಕ್ಕು ತಮಿಳುನಾಡಿಗಿಲ್ಲ



ಮೇಕೆದಾಟು ಯೋಜನೆಯನ್ನು ನಿಲ್ಲಿಸುವ ಹಕ್ಕು ತಮಿಳುನಾಡು ಸರ್ಕಾರಕ್ಕೆ ಇಲ್ಲ. ತಮಿಳುನಾಡು ಕಾವೇರಿ ಜಲ ಸಮಿತಿ ಮುಂದೆ ದೂರು ನೀಡಿದರೆ, ಸಿಡಬ್ಲ್ಯುಸಿಯವರು ಕರ್ನಾಟಕ ಸರ್ಕಾರ ಪರವಾಗಿ ಅರ್ಜಿ ವಜಾ ಮಾಡಲಿದ್ದಾರೆ ಎಂದು ಡಿಸಿಎಂ ಡಿ ಕೆ ಶಿವಕುಮಾರ್ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಬೆಂಗಳೂರಿನಲ್ಲಿ ಮಾತನಾಡಿದ ಅವರು, ಮೇಕೆದಾಟು ಯೋಜನೆ ಬಗ್ಗೆ ಡಿಪಿಆರ್ ಸಿದ್ಧ ಮಾಡಿದ್ದೇವೆ. ಮೇಕೆದಾಟು ಕಚೇರಿ ತೆರೆದಿದ್ದೇವೆ, ಜಮೀನು ಗುರುತಿಸಿದ್ದೇವೆ. ಹೊಸ ಡಿಪಿಆರ್ ನೀಡುತ್ತಿದ್ದೇವೆ. ಕೇಂದ್ರ ಸರ್ಕಾರ ಅನುಮತಿ ನೀಡಿದ ಮೇಲೆ ಭೂಮಿಪೂಜೆ ನೆರವೇರಿಸುತ್ತೇವೆ ಎಂದರು. ಮೇಕೆದಾಟು ಅಣೆಕಟ್ಟು ವಿವಾದವು ಮತ್ತೆ ಕರ್ನಾಟಕ ಮತ್ತು ತಮಿಳುನಾಡು ನಡುವಿನ ರಾಜಕೀಯ ಕಿಚ್ಚನ್ನು ಹೊತ್ತಿಸಿದೆ. ಈ ಬಾರಿ ಇದು ಮುಖ್ಯಮಂತ್ರಿ ಸಿ ಜೋಸೆಫ್ ವಿಜಯ್ ಅವರ ಹೊಸ ಸರ್ಕಾರಕ್ಕೆ ಮೊದಲ ದೊಡ್ಡ ರಾಜಕೀಯ ಸವಾಲಾಗಿ ಪರಿಣಮಿಸಿದೆ. ಕರ್ನಾಟಕ ಉಪ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರು ಮೇಕೆದಾಟು ಯೋಜನೆಗೆ ಸಂಬಂಧಿಸಿದ ಪರಿಷ್ಕೃತ ವಿವರವಾದ ಯೋಜನಾ ವರದಿ ಯನ್ನು ಶೀಘ್ರದಲ್ಲೇ ಕೇಂದ್ರ ಸರ್ಕಾರಕ್ಕೆ ಸಲ್ಲಿಸಿ, ಯೋಜನೆಯನ್ನು ಮುಂದುವರಿಸಲಾಗುವುದು ಎಂದು ಹೇಳಿದ ಬಳಿಕ ಈ ವಿವಾದ ಮತ್ತೆ ತೀವ್ರಗೊಂಡಿದೆ.

# ಫ್ರಾನ್ಸ್‌ನಿಂದ 114 ರಫೇಲ್ ಯುದ್ಧ ವಿಮಾನಗಳ ಖರೀದಿಗೆ ಭಾರತ ಸಜ್ಜು

**ನವದೆಹಲಿ, ಮೇ 25:** ಭಾರತೀಯ ವಾಯುಪಡೆಯ ಸಾಮರ್ಥ್ಯವನ್ನು ಬಲಪಡಿಸಲು ಕೇಂದ್ರ ಸರ್ಕಾರ ಮಹತ್ವದ ನಿರ್ಧಾರ ತೆಗೆದುಕೊಂಡಿದೆ. ಭಾರತವು ಫ್ರಾನ್ಸ್‌ನಿಂದ 114 ರಫೇಲ್ ಯುದ್ಧ ವಿಮಾನಗಳನ್ನು ಸುಮಾರು 3.25 ಲಕ್ಷ ಕೋಟಿ ರೂ. ವೆಚ್ಚದಲ್ಲಿ ಖರೀದಿಸಲು ಅಂತಿಮ ಪ್ರಸ್ತಾವವನ್ನು ಸಿದ್ಧಪಡಿಸಿದೆ. ಇದಕ್ಕಾಗಿ ಕಾರ್ಯಾದೇಶವನ್ನು ಫ್ರಾನ್ಸ್‌ಗೆ ಶೀಘ್ರದಲ್ಲೇ ಕಳುಹಿಸಲು ಭಾರತ ಸಿದ್ಧವಾಗಿದೆ. ಅಧಿಕಾರಿಗಳ ಪ್ರಕಾರ, ಈ 114 ರಫೇಲ್ ಜೆಟ್‌ಗಳ ಪೈಕಿ 90 ವಿಮಾನಗಳನ್ನು ಭಾರತದಲ್ಲೇ ತಯಾರಿಸಲಾಗುವುದು. ಫ್ರೆಂಚ್ ಏರೋಸ್ಪೇಸ್ ಕಂಪನಿ ಡಸಾಲ್ಟ್ ಏವಿಯೇಷನ್ ಮತ್ತು ಭಾರತೀಯ ಸಂಸ್ಥೆಯ ನಡುವಿನ ಪಾಲುದಾರಿಕೆಯಲ್ಲಿ ಇದು ಸಾಧ್ಯವಾಗುತ್ತದೆ. ಉಳಿದ ವಿಮಾನಗಳು ಹಾರಾಟದ ಸ್ಥಿತಿಯಲ್ಲಿ ಭಾರತಕ್ಕೆ ಬರಲಿವೆ. ರಫೇಲ್ ಖರೀದಿ ಪ್ರಕ್ರಿಯೆಯಲ್ಲಿ ಕಾರ್ಯಾದೇಶ ಎಂಬುದು ಸರ್ಕಾರ ಮಟ್ಟದ ಅಧಿಕೃತ ದಾಖಲೆಯಾಗಿದೆ. ಇದು ಅಂತರ ಸರ್ಕಾರಿ ಒಪ್ಪಂದದ ಮೂಲಕ ಖರೀದಿಯನ್ನು ಪ್ರಾರಂಭಿಸುತ್ತದೆ. ಮೂರು ತಿಂಗಳ ಹಿಂದೆ ರಕ್ಷಣಾ ಸಂಗ್ರಹ ಮಂಡಳಿ ಈ ಪ್ರಸ್ತಾವಕ್ಕೆ ಅನುಮೋದನೆ ನೀಡಿತ್ತು. ಫ್ರಾನ್ಸ್ ಪ್ರತಿಕ್ರಿಯೆ ನೀಡಿದ ನಂತರ ಭಾರತ ಔಪಚಾರಿಕ ಪ್ರಸ್ತಾವ ಹೊರಡಿಸಲಿದೆ. ಎರಡು ದೇಶಗಳ ನಡುವಿನ ಮಾತುಕತೆಯ ನಂತರ ಕೇಂದ್ರ ಸಂಪುಟದ ಭದ್ರತಾ ವಿಭಾಗ ಅನುಮೋದನೆಯೊಂದಿಗೆ ಒಪ್ಪಂದಕ್ಕೆ ಸಹಿ ಹಾಕಲಾಗುವುದು. ಈ ವರ್ಷದ ಅಂತ್ಯಕ್ಕೆ ಒಪ್ಪಂದ ಪೂರ್ಣಗೊಳಿಸುವ ಗುರಿ ಇದೆ.



# ಯುದ್ಧ ಅಂತ್ಯಗೊಳಿಸುವ ಮಾತುಕತೆ ಉತ್ತಮವಾಗಿದೆ: ಟ್ರಂಪ್

**ವಾಷಿಂಗ್ಟನ್, ಮೇ 25:** ಯುದ್ಧವನ್ನು ಕೊನೆಗೊಳಿಸಲು ಇರಾನ್‌ನೊಂದಿಗೆ ವಾಷಿಂಗ್ಟನ್ ನಡೆಸುತ್ತಿರುವ ಮಾತುಕತೆಗಳು "ಉತ್ತಮವಾಗಿ ಮುಂದುವರಿಯುತ್ತಿವೆ" ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸೋಮವಾರ ಹೇಳಿದ್ದಾರೆ. ಇದೇ ವೇಳೆ, ಒಪ್ಪಂದಕ್ಕೆ ಬರಲು ವಿಫಲವಾದರೆ ಮತ್ತೆ ಯುದ್ಧಕ್ಕೆ ಮರಳಬೇಕಾಗುತ್ತದೆ ಮತ್ತು ಆ ಯುದ್ಧವು "ಹಿಂದೆಂದಿಗಿಂತಲೂ ದೊಡ್ಡದಾಗಿ ಮತ್ತು ಬಲವಾಗಿರುತ್ತದೆ" ಎಂದು ಇಸ್ಲಾಮಿಕ್ ಗಣರಾಜ್ಯ ಇರಾನ್‌ಗೆ ಎಚ್ಚರಿಕೆ ನೀಡಿದ್ದಾರೆ.

ಟ್ರುತ್ ಸೋಶಿಯಲ್‌ನಲ್ಲಿ ಸುದೀರ್ಘ ಪೋಸ್ಟ್ ಹಂಚಿಕೊಂಡಿರುವ ಟ್ರಂಪ್, ಟೆಹರಾನ್‌ನೊಂದಿಗೆ ಯಾವುದೇ ಭವಿಷ್ಯದ ಒಪ್ಪಂದದ ಜೊತೆಗೆ ಇಸ್ರೇಲ್‌ನೊಂದಿಗೆ ಅರಬ್ ರಾಷ್ಟ್ರಗಳು ಸಂಬಂಧವನ್ನು ಸಹಜಗೊಳಿಸಿದ ಒಪ್ಪಂದವಾದ 'ಅಬ್ರಹಾಂ ಅಕಾರ್ಡ್ಸ್'ಗೆ ಸೌದಿ ಅರೇಬಿಯಾ ಮತ್ತು ಕತಾರ್‌ನಂತಹ ಗಲ್ಫ್ ರಾಷ್ಟ್ರಗಳು ತಕ್ಷಣವೇ ಸಹಿ ಹಾಕಬೇಕೆಂದು ಒತ್ತಾಯಿಸಿದ್ದಾರೆ. ಅಲ್ಲದೆ, ಇದರಲ್ಲಿ ಸೇರಲು ಇಷ್ಟವಿಲ್ಲದ ದೇಶಗಳು "ಈ ಒಪ್ಪಂದದ ಭಾಗವಾಗಬಾರದು" ಎಂದು ಪ್ರತಿಪಾದಿಸಿದ್ದಾರೆ.

ಹಲವಾರು ಶ್ರೇಷ್ಠ ನಾಯಕರೊಂದಿಗೆ ಮಾತನಾಡಿದ್ದೇನೆ. ನಮ್ಮ ಒಪ್ಪಂದದ ದಾಖಲೆಗೆ ಸಹಿ ಬಿದ್ದ ತಕ್ಷಣ, ಇಸ್ಲಾಮಿಕ್ ರಿಪಬ್ಲಿಕ್ ಆಫ್ ಇರಾನ್ ಅನ್ನು ಅಬ್ರಹಾಂ ಅಕಾರ್ಡ್ಸ್‌ನ ಭಾಗವಾಗಿ ಹೊಂದಲು ಅವರೆಲ್ಲ ಹೆಮ್ಮೆಪಡುತ್ತಾರೆ," ಎಂದು ಟ್ರಂಪ್ ಬರೆದುಕೊಂಡಿದ್ದಾರೆ. ಇದು ನಿಜಕ್ಕೂ ವಿಶೇಷವಾದ ಸಂಗತಿಯಾಗಿರುತ್ತದೆ ಎಂದಿದ್ದಾರೆ.



**ಒಪ್ಪಂದ ವಿಫಲವಾದರೆ ಹಿಂದೆಂದಿಗಿಂತಲೂ ಭೀಕರವಾದ ಯುದ್ಧ: ಇರಾನ್‌ಗೆ ಅಮೆರಿಕ ಅಧ್ಯಕ್ಷ ಎಚ್ಚರಿಕೆ**

**ಇರಾನ್ ಸ್ಪಷ್ಟನೆ:**ವಾಷಿಂಗ್ಟನ್ ಜೊತೆಗಿನ ಮಾತುಕತೆಗಳು ಮುಂದುವರಿದಿರುವುದನ್ನು ಇರಾನ್ ವಿದೇಶಾಂಗ ಸಚಿವಾಲಯದ ವಕ್ತಾರ ಇಸ್ಮಾಯಿಲ್ ಬಘೇಯ್ ಖಚಿತಪಡಿಸಿದ್ದಾರೆ. ಆದರೆ, ಟ್ರಂಪ್ ಆಡಳಿತದ "ಸ್ಥಿರ ನಿಲುವುಗಳ ಕೊರತೆ ಮತ್ತು ಪರಸ್ಪರ ವಿರೋಧಾಭಾಸಗಳು" ರಾಜತಾಂತ್ರಿಕ ಯಶಸ್ಸಿಗೆ "ಸಮಸ್ಯೆಗಳು ಮತ್ತು ಅಡೆತಡೆಗಳನ್ನು" ಸೃಷ್ಟಿಸುತ್ತಿವೆ ಎಂದು ಗಮನಿಸಿದ್ದಾರೆ. ಪ್ರಸ್ತುತ ಚರ್ಚೆಯಲ್ಲಿರುವ ಪ್ರಸ್ತಾವಿತ 14–ಅಂಶಗಳ ಜ್ಞಾಪಕ ಪತ್ರವು ಟೆಹ್ರಾನ್‌ನಿಂದ ತಕ್ಷಣದ ಪರಮಾಣು ರಿಯಾಯಿತಿಗಳನ್ನು ಒತ್ತಾಯಿಸುವುದಕ್ಕಿಂತ ಹೆಚ್ಚಾಗಿ, ಯುದ್ಧವನ್ನು ಕೊನೆಗೊಳಿಸುವುದು ಮತ್ತು ಹಾರ್ಮುಜ್ ಮೂಲಕ ಕಡಲ ಸಂಚಾರವನ್ನು ಪುನಾರಂಭಿಸುವುದರ ಮೇಲೆ ಪ್ರಮುಖವಾಗಿ ಗಮನ ಹರಿಸಿದೆ ಎಂದು ಬಘೇಯ್ ಹೇಳಿದ್ದಾರೆ. ಇದು ಸಾಧ್ಯವಾದರೆ, 60 ದಿನಗಳ ಅವಧಿಯೊಳಗೆ ಪರಮಾಣು ಸಂಬಂಧಿತ ವಿಷಯಗಳ ಬಗ್ಗೆ ಚರ್ಚೆಗಳು ನಡೆಯುತ್ತವೆ. ಪ್ರಸ್ತಾವಿತ ವ್ಯವಸ್ಥೆಯು ಹಾರ್ಮುಜ್ ಜಲಸಂಧಿಯನ್ನು ಹಂತ–ಹಂತವಾಗಿ ಪುನಃ ತೆರೆಯುವುದು ಮತ್ತು ಫೆಬ್ರವರಿಯಲ್ಲಿ ಸಂಘರ್ಷ ಪ್ರಾರಂಭವಾದಾಗಿನಿಂದ ಎರಡೂ ಕಡೆಯವರು ವಿಧಿಸಿರುವ ಹಡಗು ಸಂಚಾರದ ಮೇಲಿನ ನಿರ್ಬಂಧಗಳನ್ನು ಕ್ರಮೇಣ ಸಡಿಲಗೊಳಿಸುವುದನ್ನು ಒಳಗೊಂಡಿರುತ್ತದೆ ಎಂದಿದ್ದಾರೆ.

**ನಿತ್ಯ ಪಂಚಾಂಗ 26.05.2026 ಮಂಗಳವಾರ**



**ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ-ವಸಂತ/ಗ್ರೀಷ್ಮ ಋತು, ಚಾಂದ್ರಮಾನ, ವೈಶಾಖ ಅಧಿಕ ಜ್ಯೇಷ್ಠ ಮಾಸ**

**ಅಧಿಕ ಜ್ಯೇಷ್ಠ ಶುದ್ಧ, ದಶಮಿ, ಉತ್ತರಾ ನಕ್ಷತ್ರ, ಕಿನ್ನಿಮಾನಿ ವರ್ಧಂತಿ**

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# 2028ಕ್ಕೆ ರಾಜ್ಯದಲ್ಲಿ ಇದೇ ಡಿ.ಕೆ. ಶಿವಕುಮಾರ್ – ಕಾಂಗ್ರೆಸ್ ಅಧಿಕಾರಕ್ಕೆ: ಡಿ.ಕೆ.ಶಿ. ಭವಿಷ್ಯ ನುಡಿ



**ಬೆಂಗಳೂರು, ಮೇ.25:** 2028ಕ್ಕೆ ರಾಜ್ಯದಲ್ಲಿ ಇದೇ ಡಿ.ಕೆ. ಶಿವಕುಮಾರ್ ಮತ್ತು ಕಾಂಗ್ರೆಸ್ ಅಧಿಕಾರಕ್ಕೆ ಬರಲಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಾರ್ಮಿಕವಾಗಿ ಹೇಳಿದ್ದಾರೆ.

ಸುದ್ದಿಗೋಷ್ಠಿಯಲ್ಲಿ 2028ಕ್ಕೆ ನಮ್ಮ ಸರ್ಕಾರ ಬರುವ ಕನಸು ಕಾಣಬೇಡಿ ಕೆಲಸ ಮಾಡಿ ಎಂಬ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತೀನ್ ನಬೀನ್ ಅವರು ರಾಜ್ಯ ನಾಯಕರಿಗೆ ಸೂಚನೆ ನೀಡಿರುವ ಬಗ್ಗೆ ಕೇಳಿದಾಗ, ಅಮಿತ್ ಶಾ ಅವರು ಬಿಜೆಪಿಗೆ 122 ಸೀಟು ಬರುತ್ತದೆ, ಎಲ್ಲರೂ ಸೂಟುಬೂಟು ಸಿದ್ಧಮಾಡಿಕೊಳ್ಳಿ ಎಂದಿದ್ದರು. ನಾನು ನಮಗೆ 136 ಸೀಟು ಬರಲಿದೆ ಎಂದು ಹೇಳಿದ್ದೆ. ಈಗಲೂ ಹೇಳುತ್ತಿದ್ದೇನೆ ಬರೆದುಕೊಳ್ಳಿ, 2028ಕ್ಕೆ ಇದೇ ಡಿ.ಕೆ. ಶಿವಕುಮಾರ್ ಹಾಗೂ ಕಾಂಗ್ರೆಸ್ ಪಕ್ಷ ರಾಜ್ಯದಲ್ಲಿ ಅಧಿಕಾರಕ್ಕೆ ಬರಲಿದೆ ಎಂದು ಭವಿಷ್ಯ ನುಡಿದರು.

ನೀವು ದೆಹಲಿ ಪ್ರವಾಸ ಮಾಡುತ್ತೀರಾ ಎಂದು ಕೇಳಿದಾಗ, ನಮ್ಮನ್ನು ಕರೆದರೆ ಹೋಗುತ್ತೇವೆ. ಸುರ್ಜೆವಾಲ ಅವರು ನಿಮಗೆ ಏನು ಹೇಳಿದ್ದಾರೋ ಗೊತ್ತಿಲ್ಲ. ಅವರು ದೆಹಲಿಗೆ ಬನ್ನಿ ಎಂದರೆ ನಾನು ಹೋಗುತ್ತೇನೆ. ಇಲ್ಲವಾದರೆ ಇಲ್ಲೇ ಉಳಿಯುತ್ತೇನೆ. ಪಕ್ಷ ಕರೆದಾಗ ನಾವು ಹೋಗಲೇಬೇಕಾಗುತ್ತದೆ ಎಂದು ತಿಳಿಸಿದರು.

ಮುಖ್ಯಮಂತ್ರಿ ಸ್ಥಾನ ವಿಚಾರವಾಗಿ ಚರ್ಚೆ ನಡೆಯುವುದೇ ಎಂದು ಕೇಳಿದಾಗ, ನನಗೆ ಅದರ ಬಗ್ಗೆ ಗೊತ್ತಿಲ್ಲ. ಈ ವಿಚಾರವಾಗಿ ನಾನು ಯಾವುದೇ ಪ್ರತಿಕ್ರಿಯೆ ನೀಡುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಬಿಜೆಪಿಯ ಕೇಂದ್ರ ಸರ್ಕಾರ ಬೆಲೆ ಏರಿಕೆ ಮೂಲಕ ಜನರ ಮೇಲೆ ಆರ್ಥಿಕ ಹೊರೆ ಹೆಚ್ಚಿಸಿದರೆ, ರಾಜ್ಯ ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಯೋಜನೆಗಳ ಮೂಲಕ ಜನಸಾಮಾನ್ಯರ ಆರ್ಥಿಕ ಹೊರೆ ಇಳಿಸುತ್ತಿದೆ. ಕಾಂಗ್ರೆಸ್ ಗ್ಯಾರಂಟಿ ಇಲ್ಲವಾಗಿದ್ದರೆ ಪರಿಸ್ಥಿತಿ ಯಾವ ರೀತಿ ಇರುತ್ತಿತ್ತು ಎಂದು ಆಲೋಚನೆ ಮಾಡಿ ಎಂದು ತಿಳಿಸಿದರು.

ನಮ್ಮ ಗ್ಯಾರಂಟಿ ಕೇವಲ ಕರ್ನಾಟಕಕ್ಕೆ ಮಾತ್ರವಲ್ಲ, ಇಡೀ ದೇಶವೇ ಮೆಚ್ಚಿದೆ. ವಿಶ್ವಸಂಸ್ಥೆಯೇ ಪ್ರಶಂಸೆ ನೀಡಿದೆ. ಬೆಲೆ ಏರಿಕೆ ಗಗನಕ್ಕೆ, ಆದಾಯ ಪಾತಾಳಕ್ಕೆ ಕುಸಿಯುತ್ತಿದೆ. ಅನೇಕ ಹೊಟೇಲ್‌ಗಳು ಸಿಲಿಂಡರ್ ದರ ಏರಿಕೆ ಹಾಗೂ ಅಭಾವದಿಂದ ಅರ್ಧ ಬಂದ್ ಮಾಡಿದ್ದಾರೆ. ಈ ವರ್ಷ ವಾಣಿಜ್ಯ ಸಿಲಿಂಡರ್ ಬೆಲೆಯನ್ನು ಮಾರ್ಚ್ 1ರಂದು 28, ಮಾರ್ಚ್ 7ರಂದು 114.50, ಮಾರ್ಚ್ 23ರಂದು 49, ಏಪ್ರಿಲ್ 1ರಂದು 195 ರಿಂದ 218 ರವರೆಗೆ, ಮೇ 1ರಂದು 993 ನಷ್ಟು ಏರಿಕೆ ಮಾಡಿದ್ದಾರೆ ಎಂದು ವಿವರಿಸಿದರು.

ಬೆಲೆ ಏರಿಕೆ ವಿರುದ್ಧ ಜನರ ಗಮನ ಸೆಳೆಯುವುದು, ಜಾಗೃತಿ ಮೂಡಿಸುವ ಕೆಲಸ ಮಾಡುತ್ತೇವೆ. ಜನರೇ ಈ ಜನವಿರೋಧಿ ಕೇಂದ್ರ ಸರ್ಕಾರವನ್ನು ಕಿತ್ತೊಗೆಯುವ ಕೆಲಸ ಆಗಬೇಕು. ಮೋದಿ ಅವರ ನೇತೃತ್ವದ ಬಿಜೆಪಿ ಸರ್ಕಾರ ಸಾಧನೆ ಬಗ್ಗೆ ಮಾತನಾಡುತ್ತಾರೆ. ಮೋದಿ ಅವರು ಮದುವೆಗೆ ಚಿನ್ನ ಖರೀದಿ ಮಾಡಬೇಡಿ, ಸರಿಯಾಗಿ ಊಟ ಮಾಡಬೇಡಿ ಎಂದು ಹೇಳಿ ಜನರನ್ನು ನಿಯಂತ್ರಿಸಲು ಹೇಗೆ ಸಾಧ್ಯ ಒಂದು ದಿನ ಮೆಟ್ರೋದಲ್ಲಿ ಸಂಚರಿಸಿದ ಬಿಜೆಪಿ ನಾಯಕರು, ಕೇಂದ್ರ ಸಚಿವರು, ಅಧಿಕಾರಿಗಳು ಈಗ ಸಾರ್ವಜನಿಕ ಸಾರಿಗೆ ಬಳಸುತ್ತಿದ್ದಾರಾ ಕೇವಲ ಮಾಧ್ಯಮಗಳಲ್ಲಿ ಪ್ರಚಾರ ಪಡೆಯಲು ಒಂದು ದಿನ ಫೋಟೋ ಶೂಟ್ ಮಾಡಿಕೊಂಡಿದ್ದಾರೆ. ಇದು ವಾಸ್ತವವಾಗಿ ಜಾರಿ ಮಾಡಲು ಆಗದ ಕೆಲಸ. ಜನರಿಗೆ ತೊಂದರೆ ಆಗಲಿ ಎಂಬ ಉದ್ದೇಶದಿಂದ ಇಂತಹ ಕಾರ್ಯಕ್ರಮ ರೂಪಿಸುತ್ತಿದ್ದಾರೆ ಎಂದು ಹರಿಹಾಯ್ದರು.

ಎರಡು ತಿಂಗಳಿನಿಂದ ಅನ್ನಭಾಗ್ಯ ಅಕ್ಕಿ ಸರಿಯಾಗಿ ತಲುಪುತ್ತಿಲ್ಲ ಎಂದು ಕೇಳಿದಾಗ, ಕೇಂದ್ರ ಸರ್ಕಾರ ಅಕ್ಕಿ ಬಿಡುಗಡೆ ಮಾಡುತ್ತಿಲ್ಲ. ಕೇವಲ ಕರ್ನಾಟಕ ಮಾತ್ರವಲ್ಲ, ನಮ್ಮ ಸರ್ಕಾರ ಇರುವ ರಾಜ್ಯಗಳಲ್ಲಿ ಈ ರೀತಿ ಮಾಡುತ್ತಿದ್ದಾರೆ ಎಂದು ಕಿಡಿಕಾರಿದರು.

# ಲೋಪವಾಗದಂತೆ ಪಡಿತರ ವಿತರಣೆಗೆ ಸರ್ಕಾರ ಬದ್ಧ ಕೆ.ಎಚ್. ಮುನಿಯಪ್ಪ

**ತಡವಾದರೂ ಕಾರ್ಡುದಾರರಿಗೆ ಸಿಗಬೇಕಾದ ಆಹಾರ ಪದಾರ್ಥ ಫಲಾನುಭವಿಗಳಿಗೆ ಸಿಗಲಿದೆ**



"ರಾಜ್ಯದಲ್ಲಿ ಪಡಿತರ ಅಕ್ಕಿ ವಿತರಣೆಗೆ ಸಂಬಂಧಿಸಿದಂತೆ ಯಾವುದೇ ಸಮಸ್ಯೆಗಳಿಲ್ಲ. ಎಲ್ಲೂ ಕೊರತೆಯಾಗಿಲ್ಲ. ಒಂದು ವೇಳೆ ಪಡಿತರವನ್ನು ನಿಗದಿತ ಪ್ರಮಾಣಕ್ಕಿಂತ ಕಡಿಮೆ ನೀಡಲಾಗುತ್ತಿದೆ ಎಂಬ ದೂರು ಬಂದರೆ ತಕ್ಷಣವೇ ಗಮನಕ್ಕೆ ತನ್ನಿ. ಅಂತವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುತ್ತೇನೆ.

–ಕೆ.ಎಚ್. ಮುನಿಯಪ್ಪ

ದೇವನಹಳ್ಳಿ, ಮೇ 25: ರಾಜ್ಯದ ಜನತೆಗೆ ಪಡಿತರ ವಿತರಣೆ ಮಾಡುವಲ್ಲಿ ಸರ್ಕಾರ ಬದ್ಧವಾಗಿದೆ. ರಾಗಿ ವಿತರಣೆ ಕೊಂಚ ತಡವಾಗಿದ್ದರೂ ಸಹ, ಆಯಾ ತಿಂಗಳಿಗೆ ಸಿಗಬೇಕಾದ ಪಡಿತರವನ್ನು ಖಂಡಿತವಾಗಿಯೂ ನೀಡಲಾಗುವುದು ಎಂದು ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಎಚ್. ಮುನಿಯಪ್ಪ ಭರವಸೆ ನೀಡಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಪಡಿತರ ವಿತರಣೆಯ ಸದ್ಯದ ಸ್ಥಿತಿಗತಿ ಹಾಗೂ ಇಂದಿರಾ ಕಿಟ್ ಯೋಜನೆಯ ಪ್ರಗತಿಯ ಬಗ್ಗೆ ಪ್ರಮುಖ ಜನತೆಗೆ ಸಿಗುತ್ತಿರುವ ಪಡಿತರ ಪ್ರಮಾಣದ ಬಗ್ಗೆ ಸ್ಪಷ್ಟನೆ ನೀಡಿದ ಸಚಿವರು, "ಸದ್ಯ ಕೇಂದ್ರ ಸರ್ಕಾರದಿಂದ 3 ಕೆಜಿ ಹಾಗೂ ರಾಜ್ಯ ಸರ್ಕಾರದಿಂದ 3 ಕೆಜಿ ಸೇರಿದಂತೆ ಒಟ್ಟು 6 ಕೆಜಿ ರಾಗಿಯನ್ನು ನೀಡಲಾಗುತ್ತಿದೆ. ಇದರೊಂದಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದ ಸಹಯೋಗದಲ್ಲಿ ತಲಾ 4 ಕೆಜಿ ಅಕ್ಕಿಯನ್ನು ವಿತರಿಸಲಾಗುತ್ತಿದೆ. ಈ ಮೂಲಕ ಒಟ್ಟಾರೆಯಾಗಿ ಫಲಾನುಭವಿಗೆ 10 ಕೆಜಿ ಧಾನ್ಯವನ್ನು ವ್ಯವಸ್ಥಿತವಾಗಿ ತಲುಪಿಸಲಾಗುತ್ತಿದೆ ಎಂದು ಅಂಕಿ-ಅಂಶಗಳ ಸಮೇತ ವಿವರಿಸಿದರು.

ರಾಜ್ಯದಲ್ಲಿ ಸದ್ಯ ರಾಗಿ ದಾಸ್ತಾನು ಸಾಕಷ್ಟು ಪ್ರಮಾಣದಲ್ಲಿದೆ. ಪ್ಯಾಕಿಂಗ್ ಪ್ರಕ್ರಿಯೆಯಿಂದಾಗಿ ರಾಗಿ ವಿತರಣೆ ಕೊಂಚ ತಡವಾಗಿರಬಹುದು. ಆದರೆ ಸಾರ್ವಜನಿಕರು ಆತಂಕ ಪಡುವ ಅಗತ್ಯವಿಲ್ಲ.

ತಡವಾದರೂ ಸಹ ಆಯಾ ತಿಂಗಳು ಫಲಾನುಭವಿಗಳಿಗೆ ಸಿಗಬೇಕಾದ ಪಡಿತರ ಸಿಗಲಿದೆ ಎಂದರು.

ಇಂದಿರಾ ಕಿಟ್ ಯೋಜನೆಯ ಬಗ್ಗೆ ಮಾತನಾಡಿದ ಕೆ.ಎಚ್. ಮುನಿಯಪ್ಪ ಅವರು, ಇಂದಿರಾ ಕಿಟ್ ವಿತರಣೆಗೆ ಸಂಬಂಧಿಸಿದಂತೆ ಪ್ರಸ್ತುತ ಟೆಂಡರ್ ಪ್ರಕ್ರಿಯೆಗಳು ಚುರುಕಾಗಿ ನಡೆಯುತ್ತಿವೆ. ಪ್ರಕ್ರಿಯೆಗಳು ಮುಗಿಯುತ್ತಿದ್ದಂತೆ ಅರ್ಹ ಫಲಾನುಭವಿಗಳಿಗೆ ಕಿಟ್‌ಗಳನ್ನು ತಲುಪಿಸುವ ಕೆಲಸ ಆರಂಭವಾಗಲಿದೆ ಎಂದರು.

# ಬಿಜೆಪಿ ಸರ್ಕಾರ ಮಾಡಿದ ಡೀಮ್ಡ್ ಅರಣ್ಯ ತಪ್ಪು ಸರಿಪಡಿಸಲು ಯತ್ನ: ಈಶ್ವರ ಖಂಡ್ರೆ

**ಸುಪ್ರೀಂಕೋರ್ಟ್‌ಗೆ ಮನವಿ ಸಲ್ಲಿಸಲು ಸಮಿತಿ ರಚನೆ: ಈಶ್ವರ ಖಂಡ್ರೆ**



**ಕಾರ್ಕಳ, ಮೇ 25:** ಪರಿಭಾವಿತ (ಡೀಮ್ಡ್) ಅರಣ್ಯ ಪ್ರದೇಶದಲ್ಲಿ ಸರ್ಕಾರಿ ಕಟ್ಟಡ, ಆಸ್ಪತ್ರೆ, ಅಂಗನವಾಡಿ ಇತ್ಯಾದಿ ಇದ್ದು, ಬಿಜೆಪಿ ಸರ್ಕಾರದ ಆಡಳಿತದಲ್ಲಿ ಆಗಿರುವ ತಪ್ಪು ಸರಿಪಡಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತಿರುವುದಾಗಿ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ.

ಕಾರ್ಕಳದಲ್ಲಿ ವಲಯ ಅರಣ್ಯಾಧಿಕಾರಿಗಳ ಮತ್ತು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಯವರ ನೂತನ ಕಟ್ಟಡ ಉದ್ಘಾಟಿಸಿ, ಅರಣ್ಯ ಹುತಾತ್ಮರಿಗೆ ಪುಷ್ಪನಮನ ಸಲ್ಲಿಸಿ ಮಾತನಾಡಿದ ಅವರು, ಡೀಮ್ಡ್ ಅರಣ್ಯ ಸಮಸ್ಯೆ ಪರಿಹರಿಸಲು ಕೊನೆಯ ಅವಕಾಶ ದೊರೆತಿದ್ದು, ಸರ್ವೋಚ್ಚ ನ್ಯಾಯಾಲಯಕ್ಕೆ ಮರುಮನವಿ ಸಲ್ಲಿಸಲು ಜಿಲ್ಲಾಮಟ್ಟ ಮತ್ತು ರಾಜ್ಯಮಟ್ಟದಲ್ಲಿ ಸಮಿತಿ ರಚಿಸಲಾಗಿದೆ ಎಂದರು.

ಮೊದಲಿಗೆ ಸುಪ್ರೀಂಕೋರ್ಟ್‌ಗೆ ಪ್ರಮಾಣಪತ್ರ ಸಲ್ಲಿಸಿದಾಗ 9 ಲಕ್ಷ ಹೆಕ್ಟೇರ್ ಜಮೀನನ್ನು ಡೀಮ್ಡ್ ಎಂದು ಗುರುತಿಸಲಾಗಿತ್ತು, ನಂತರ 2022ರಲ್ಲಿ ಪ್ರಮಾಣಪತ್ರ ಸಲ್ಲಿಸಿದಾಗ 3 ಲಕ್ಷ 33 ಸಾವಿರ ಹೆಕ್ಟೇರ್ ಜಮೀನು ಎಂದು ಪರಿಷ್ಕರಿಸಲಾಯಿತು. ಆಗ ಸಮರ್ಪಕವಾಗಿ ಸರ್ವೆ ನಡೆಸದೆ, ಖುದ್ದು ಪರಿಶೀಲಿಸದ ಕಾರಣ ಸರ್ಕಾರಿ ಕಟ್ಟಡ, ಶಾಲೆ, ಆಸ್ಪತ್ರೆ, ಪಟ್ಟಾ ಭೂಮಿ ಸೇರಿದೆ. ಬಡ ಮತ್ತು ಮಧ್ಯಮ ವರ್ಗದ ಜನರು ಸಂಕಷ್ಟ ಎದುರಿಸುತ್ತಿದ್ದು, ಈ ಲೋಪ ಸರಿಪಡಿಸಬೇಕಾಗಿದೆ ಎಂದರು.

ಕುದುರೆಮುಖ ಕಬ್ಬಿಣದ ಅದಿರು ಕಂಪನಿ ಅರಣ್ಯ ಇಲಾಖೆಗೆ ದಂಡ ಮತ್ತು ಇತರ ಶುಲ್ಕವನ್ನು ಪಾವತಿಸಬೇಕಾಗಿದೆ. ಪ್ರಸ್ತುತ ಹೈಕೋರ್ಟ್ ಈ ಸಂಬಂಧ ನಿರ್ದೇಶನ ನೀಡಿದ್ದು, ನ್ಯಾಯಾಲಯದ ಆದೇಶದಂತೆ ಸರ್ಕಾರ ನಡೆಯಲಿದೆ ಎಂದರು.

ಇದೇ ಸಂದರ್ಭದಲ್ಲಿ ವಲಯ ಅರಣ್ಯಾಧಿಕಾರಿಗಳ ಕಚೇರಿಯ ಆವರಣದಲ್ಲಿ ಸಸಿ ನೆಟ್ಟು ನೀರೆರೆದರು.

ಇದಕ್ಕೂ ಮುನ್ನ ಕಟೀಲು ದುರ್ಗಾ ಪರಮೇಶ್ವರಿ ದೇವಾಲಯಕ್ಕೆ ತೆರಳಿದ ಈಶ್ವರ ಖಂಡ್ರೆ ದೇವರ ದರ್ಶನ ಪಡೆದು, ರಾಜ್ಯದಲ್ಲಿ ಉತ್ತಮ, ಮಳೆ, ಬೆಳೆ, ಆಗಲಿ, ಸಮೃದ್ಧಿ ನೆಲೆಸಲಿ ಎಂದು ಪ್ರಾರ್ಥಿಸಿದರು.

ಈ ಸಂದರ್ಭದಲ್ಲಿ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಕರಿಕಾಲನ್, ಕಮಲಾ ಕರಿಕಾಲನ್ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.

**ಬೇಸೂರು ಅಣುಸ್ಥಾವರ: ಸರ್ಕಾರದ ಮುಂದೆ ಪ್ರಸ್ತಾವನೆ ಬಂದಿಲ್ಲ: ಅರಣ್ಯ ಸಚಿವ ಈಶ್ವರ ಖಂಡ್ರೆ**

ಶಿವಮೊಗ್ಗ ಜಿಲ್ಲೆಯ ಸಾಗರ ತಾಲ್ಲೂಕಿನ ಬೇಸೂರಿನಲ್ಲಿ ಅಣು ಸ್ಥಾವರ ಘಟಕ ನಿರ್ಮಾಣಕ್ಕೆ ಸಂಬಂಧಿಸಿ ಸರ್ಕಾರದ ಮುಂದೆ ಇದುವರೆಗೆ ಯಾವುದೇ ಪ್ರಸ್ತಾವನೆ ಬಂದಿಲ್ಲ ಎಂದು ಅರಣ್ಯ ಸಚಿವ ಈಶ್ವರ ಖಂಡ್ರೆ ಹೇಳಿದರು. ಈಗಾಗಲೇ ಪಶ್ಚಿಮ ಘಟ್ಟದ ಸಂರಕ್ಷಣೆಗೆ ಎಲ್ಲಾ ರೀತಿಯ ಕ್ರಮವನ್ನು ಸರ್ಕಾರ ಕೈಗೊಂಡಿದೆ. ಅಣುಸ್ಥಾವರಕ್ಕೆ ಸಂಬಂಧಿಸಿ ಸಮೀಕ್ಷೆ ನಡೆಯುತ್ತಿರುವ ವಿಚಾರವು ನಮ್ಮ ಗಮನಕ್ಕೆ ಬಂದಿಲ್ಲ. ಪ್ರಸ್ತಾವನೆ ಬಂದಾಗ ಪ್ರತಿಕ್ರಿಯೆ ನೀಡುತ್ತೇವೆ. ಕಸ್ತೂರಿ ರಂಗನ್ ವರದಿಯಿಂದ ಜನರಿಗೆ ಸಮಸ್ಯೆಯಾಗಬಾರದು ಎಂದು ಆ ವರದಿಯನ್ನು ನಾವು ಒಪ್ಪಲಿಲ್ಲ. ತಿರಸ್ಕಾರ ಮಾಡಬೇಕೆಂದು ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದೇವೆ. ನಮ್ಮಲ್ಲಿ ಶೇ.83ರಷ್ಟು ಪಶ್ಚಿಮಘಟ್ಟ ಸುರಕ್ಷಿತವಾಗಿದೆ ಎಂದು ತಿಳಿಸಿದರು.

# ಮಿಸ್ ಯೂನಿವರ್ಸ್ ಕರ್ನಾಟಕ-2026

**ಸ್ಪರ್ಧಿ ಲೇಖನಾ ಮಲ್ಲಿಖಾರ್ಜುನ ಹೆಗ್ಡೆ ಅವರಿಗೆ ದೆಹಲಿ ಕರ್ನಾಟಕ ಸಂಘದ ಅಭಿನಂದನೆ**



ನವದೆಹಲಿ, ಮೇ 25: ದೆಹಲಿ ಕರ್ನಾಟಕ ಸಂಘ ಮಿಸ್ ಯೂನಿವರ್ಸ್ ಕರ್ನಾಟಕ – 2026, ಲೇಖನಾ ಮಲ್ಲಿಖಾರ್ಜುನ ಹೆಗ್ಡೆ ಅವರಿಗೆ ಅಭಿನಂದನಾ ಕಾರ್ಯಕ್ರಮವನ್ನು ಏರ್ಪಡಿಸಿತ್ತು.

ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದ ಕುಮಾರಿ. ಲೇಖನಾ ಹೆಗ್ಡೆ ಅವರು ಬಾಲ್ಯದಲ್ಲಿ ಕ್ರೀಡೆಯಲ್ಲಿ ಭಾಗವಹಿಸುವುದರಿಂದ ಸೋಲಿನಿಂದ ಕಲಿಯಬಹುದಾದ ಪಾಠವನ್ನು ಕಲಿತು ಗೆಲುವಿನ ಬೆನ್ನತ್ತುವ ಸಾಮರ್ಥ್ಯ ಬೆಳೆಯುತ್ತದೆ ಎಂದು ಯುವ ಸಮುದಾಯಕ್ಕೆ ಸಲಹೆ ನೀಡಿದರು. ಕೊನೆಯಲ್ಲಿ ಮಾತನಾಡಿ, 'ನಾನು ಇನ್ನು 8 ತಿಂಗಳಿಗೆ ಮತ್ತೊಮ್ಮೆ ಬಂದಾಗ ಇನ್ನು ಉತ್ತಮವಾಗಿ ಕನ್ನಡ ಕಲಿತು ನಿರರ್ಗಳವಾಗಿ ನಿಮ್ಮೊಂದಿಗೆ ಕನ್ನಡದಲ್ಲಿ ಮಾತನಾಡುತ್ತೇನೆ' ಎಂದು ಹೇಳಿದರು.

ದೆಹಲಿ ಕರ್ನಾಟಕ ಸಂಘದ ಅಧ್ಯಕ್ಷ ರೇಣುಕುಮಾರ್ ಅವರು ಮಾತನಾಡಿ ಒಂದು ಕಾರ್ಯಕ್ರಮ ಎಲ್ಲರನ್ನು ಖುಷಿ ಪಡಿಸಿದರೆ ಆ ಕಾರ್ಯಕ್ರಮ ಸಾರ್ಥಕತೆ ಕಂಡಿದೆ ಎಂದು ಅರ್ಥ. ಈ ದಿನದ ಕಾರ್ಯಕ್ರಮ ಅಂತಹ ಪಟ್ಟಿಗೆ ಸೇರುತ್ತದೆ. ಸಾಧಕರ ಜೊತೆ ಗುದ್ದಾಡುವುದರಿಂದ ಸಾರ್ಥಕ ಗುಣ ಅಳವಡಿಸಿಕೊಳ್ಳಬಹುದು ಮತ್ತು ಇಂತಹ ಸಾರ್ಥಕತೆ ಮರುಕಳಿಸಬೇಕು. ಆಟೋಟ ಮತ್ತು ಕ್ರೀಡೆಯಲ್ಲಿ ಮಕ್ಕಳು ಭಾಗಿಯಾಗುವುದರಿಂದ ಅವರಲ್ಲಿ ಶಿಸ್ತು ಮತ್ತು ಗುರಿ ಸಾಧಿಸುವ ಛಲ ಬೆಳೆಯುತ್ತದೆ. ಲೇಖನಾ ಹೆಗ್ಡೆ ಅವರು ಭುವನ ಸುಂದರಿ ಸ್ಪರ್ಧೆಯನ್ನು ಗೆದ್ದು ಬರಲಿ ಎಂದು ದೆಹಲಿ ಕನ್ನಡಿಗರ ಪರವಾಗಿ ಹಾರೈಸಿದರು. ಕಾರ್ಯಕ್ರಮದ ಮೊದಲಿಗೆ ದೆಹಲಿ ಕರ್ನಾಟಕ ಸಂಘದ ಉಪಾಧ್ಯಕ್ಷ ವಸಂತಶೆಟ್ಟಿ ಬೆಳ್ಳಾರೆ ಸ್ವಾಗತ ಭಾಷಣ ಮಾಡಿದರು, ದೆಹಲಿ ಕರ್ನಾಟಕ ಸಂಘದ ಖಜಾಂಚಿ ಆಶಾಲತಾ ಮಹದೇವ್ ಅತಿಥಿಗಳನ್ನು ಪರಿಚಯಿಸಿದರು. ಜಂಟಿ ಕಾರ್ಯದರ್ಶಿಗಳಾದ ಅಶ್ವಿನಿ .ಬಿ.ಎಸ್ ಅವರು ವಂದನಾರ್ಪಣೆ ಸಲ್ಲಿಸಿದರು. ಪ್ರಧಾನ ಕಾರ್ಯದರ್ಶಿ ರಾಧಾಕೃಷ್ಣ, ಖಜಾಂಚಿ ಆಶಾಲತಾ ಎಂ., ಮತ್ತು ಕಾರ್ಯಕಾರಿ ಸಮಿತಿ ಸದಸ್ಯೆ ಪೂಜಾ ಪಿ. ರಾವ್, ಅವರು ಲೇಖನಾ ಹೆಗ್ಡೆಯನ್ನು ಬರಮಾಡಿಕೊಂಡರು.

# ಜೆಡಿಎಸ್ ಗ್ರೇಟರ್ ಬೆಂಗಳೂರು ಸಮಿತಿಗೆ ವಿವಿಧ ವಿಭಾಗಗಳಿಗೆ ಅಧ್ಯಕ್ಷರು, ಪದಾಧಿಕಾರಿಗಳ ನೇಮಕ

**ಕೇಂದ್ರ ಸಚಿವ, ಪಕ್ಷದ ರಾಜ್ಯಾಧ್ಯಕ್ಷ ಎಚ್.ಡಿ. ಕುಮಾರಸ್ವಾಮಿ ಮಾರ್ಗದರ್ಶನದಂತೆ ನೇಮಕಾತಿ**

**ನೇಮಕ ಆದೇಶಪತ್ರಗಳನ್ನು ನೀಡಿದ ಕೋರ್ ಸಮಿತಿ ಅಧ್ಯಕ್ಷ ಎಂ. ಕೃಷ್ಣಾರೆಡ್ಡಿ, ಗ್ರೇಟರ್ ಬೆಂಗಳೂರು ಜೆಡಿಎಸ್ ಅಧ್ಯಕ್ಷ ಎಚ್.ಎಂ. ರಮೇಶ್ ಗೌಡ**



ಬೆಂಗಳೂರು, ಮೇ 25: ಜೆಡಿಎಸ್ ಪಕ್ಷದ ರಾಜ್ಯಾಧ್ಯಕ್ಷ ಹಾಗೂ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರ ಮಾರ್ಗದರ್ಶನದ ಮೇರೆಗೆ ಜೆಡಿಎಸ್ ರಾಜ್ಯ ಕೋರ್ ಕಮಿಟಿ ಅಧ್ಯಕ್ಷ ಎಂ. ಕೃಷ್ಣಾರೆಡ್ಡಿ ಹಾಗೂ ಗ್ರೇಟರ್ ಬೆಂಗಳೂರು ಜೆಡಿಎಸ್ ಅಧ್ಯಕ್ಷ ಎಚ್‌ಎಂ ರಮೇಶ್‌ಗೌಡರು ನೂತನ ಪದಾಧಿಕಾರಿಗಳನ್ನು ನೇಮಿಸಿ ಆದೇಶ ಪತ್ರಗಳನ್ನು ಹಸ್ತಾಂತರ ಮಾಡಿದರು. ಪಕ್ಷದ ಕಚೇರಿ ಜೆಪಿ ಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಅವರು ಮುಂದಿನ ಪದಾಧಿಕಾರಿಗಳಿಗೆ ನೇಮಕಾತಿ ಪತ್ರಗಳನ್ನು ನೀಡಿದರು.

**ವಿವಿಧ ವಿಭಾಗಗಳ ಅಧ್ಯಕ್ಷರು:**

ಮಹಿಳಾ ವಿಭಾಗದ ಅಧ್ಯಕ್ಷರಾಗಿ ಶೈಲಾ ಸಂತೋಜಿ ರಾವ್, ಯುವ ಜನತಾದಳ ಅಧ್ಯಕ್ಷರಾಗಿ ಆರ್. ಸಾಮ್ಯುಯಲ್, ಕಾರ್ಮಿಕ ವಿಭಾಗದ ಅಧ್ಯಕ್ಷರಾಗಿ ಎಂ ಗೋಪಾಲ್, ಸೇವಾದ ವಿಭಾಗದ ಅಧ್ಯಕ್ಷರಾಗಿ ಪಿ.ಮಹೇಶ್, ಪರಿಶಿಷ್ಟ ಪಂಗಡ ವಿಭಾಗದ ಅಧ್ಯಕ್ಷರಾಗಿ ವಿ.ಜನಾರ್ದನ್, ಮಾಹಿತಿ ತಂತ್ರಜ್ಞಾನ ವಿಭಾಗದ ಅಧ್ಯಕ್ಷರಾಗಿ ಫಣಿರಾಜ್ ಹಿರಿಯಣ್ಣ ಗೌಡ, ಮುಸ್ಲಿಂ ಅಲ್ಪಸಂಖ್ಯಾತರ ವಿಭಾಗದ ಅಧ್ಯಕ್ಷರಾಗಿ ಅಫ್ರೋಜ್ ಬೇಗ್, ಕ್ರೈಸ್ತ ಅಲ್ಪಸಂಖ್ಯಾತರ ವಿಭಾಗದ ಅಧ್ಯಕ್ಷರಾಗಿ ಚಂದ್ರನ್ ಚಾರ್ಲ್ಸ್, ಕಾನೂನು ವಿಭಾಗದ ಅಧ್ಯಕ್ಷರಾಗಿ ಆದಿತ್ಯ ಎಸ್.ರಾಜ್, ಈ ವಿಭಾಗದ ಕಾರ್ಯಾಧ್ಯಕ್ಷರನ್ನಾಗಿ ವಿನಯ್ ಕುಮಾರ್, ಮಹಾಪ್ರದಾನ ಕಾರ್ಯದರ್ಶಿಯಾಗಿ ಚೇತನ್ ಸೂರ್ಯ ಮತ್ತು ವೈದ್ಯಕೀಯ ವಿಭಾಗದ ಅಧ್ಯಕ್ಷರಾಗಿ ಡಾ. ಎಂ.ಭರದ್ವಾಜ್ ಅವರನ್ನು ನೇಮಕ ಮಾಡಲಾಗಿದೆ.

**ಗ್ರೇಟರ್ ಬೆಂಗಳೂರು ಜೆಡಿಎಸ್ ನೂತನ ಪದಾಧಿಕಾರಿಗಳು:**

ಕಾರ್ಯಾಧ್ಯಕ್ಷರಾಗಿ ಟಿ.ಆರ್. ತುಳಸಿರಾಮ್, ಮಹಾಪ್ರದಾನ ಕಾರ್ಯದರ್ಶಿಯಾಗಿ ಎಸ್ ರಮೇಶ್, ಹಿರಿಯ ಉಪಾಧ್ಯಕ್ಷರಾಗಿ ಬಿ.ಅಂದಾನಪ್ಪ, ಕೆ.ಬಾಗೇಗೌಡ, ಎಚ್.ಎಂ. ರಾಮಯ್ಯ ಮತ್ತು ಶ್ರೀರಾಮೇಗೌಡ ಎನ್ ಕೃಷ್ಣಪ್ಪ, ಉಪಾಧ್ಯಕ್ಷರಾಗಿ ಬಿ. ಭದ್ರೇಗೌಡ, ಎಚ್.ಜಿ. ಉಮೇಶ್, ಲಕ್ಷ್ಮೀನಾರಾಯಣ್, ಸುರೇಶ್ ನಾಗವಾರ, ಎ.ರುದ್ರಪ್ಪ, ತಾರಾ ಲೋಕೇಶ್, ಎಂ. ಚಂದ್ರೇಗೌಡ ಅವರನ್ನು; ಪ್ರಧಾನ ಕಾರ್ಯದರ್ಶಿಗಳಾಗಿ ಆರ್. ಅಭಿಷೇಕ್, ಶ್ವೇತಾ ಯಾದವ್, ಕೆ.ಬಿ. ಶ್ರೀನಿವಾಸ್, ಎಚ್.ಪಿ. ರತ್ನ ರಾಜೇಗೌಡ ಅವರನ್ನು ನೇಮಿಸಿ ಗ್ರೇಟರ್ ಬೆಂಗಳೂರು ಜೆಡಿಎಸ್ ಅಧ್ಯಕ್ಷ ಎಚ್.ಎಂ. ರಮೇಶ್ ಗೌಡರು ಆದೇಶಪತ್ರಗಳನ್ನು ಪಕ್ಷದ ಕಚೇರಿಯಲ್ಲಿ ಹಸ್ತಾಂತರ ಮಾಡಿದರು

**ಸಂಘಟನೆ ಮತ್ತು ಗ್ರೇಟರ್ ಬೆಂಗಳೂರು ಚುನಾವಣೆಗೆ ತಯಾರಾಗಿ:**

ಪಕ್ಷದ ರಾಷ್ಟ್ರೀಯ ಅಧ್ಯಕ್ಷರು ಹಾಗೂ ಮಾಜಿ ಪ್ರಧಾನಿಗಳಾದ ಎಚ್.ಡಿ. ದೇವೇಗೌಡರು ಹಾಗೂ ಕೇಂದ್ರ ಸಚಿವರಾದ ಎಚ್.ಡಿ. ಕುಮಾರಸ್ವಾಮಿ ಅವರು ಬೆಂಗಳೂರು ಚುನಾವಣೆಗೆ ಬಿರುಸಿನ ತಯಾರಿ ನಡೆಸುವಂತೆ ಸ್ಪಷ್ಟವಾಗಿ ಸೂಚಿಸಿದ್ದಾರೆ. ಹೀಗಾಗಿ ನೂತನ ಪದಾಧಿಕಾರಿಗಳು ಹಾಗೂ ನಗರದ ಎಲ್ಲಾ ಮುಖಂಡರು, ಕಾರ್ಯಕರ್ತರು ಸಮರ್ಪಣಾ ಭಾವದಿಂದ ಪಕ್ಷದ ಗೆಲುವಿಗೆ ದುಡಿಮೆ ಮಾಡಬೇಕು ಎಂದು ಅವರು ನಿರ್ದೇಶನ ನೀಡಿದರು.

ನೂತನ ಪದಾಧಿಕಾರಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ವಾರ್ಡ್ ಹಾಗೂ ಮತಗಟ್ಟೆ ಮಟ್ಟದಲ್ಲಿ ಪದಾಧಿಕಾರಿಗಳು ಅತ್ಯಂತ ಉತ್ತಮವಾಗಿ ಪಕ್ಷವನ್ನು ಸಂಘಟಿಸಬೇಕು. ಈಗಾಗಲೇ ಪಕ್ಷದ ರಾಜ್ಯಾಧ್ಯಕ್ಷರು ಕೆಲ ಸೂಚನೆಗಳನ್ನು ನೀಡಿ ಅವುಗಳನ್ನು ಅನುಷ್ಠಾನಕ್ಕೆ ತರಬೇಕು ಎಂದು ಸ್ಪಷ್ಟವಾಗಿ ಆದೇಶ ಮಾಡಿದ್ದಾರೆ ಎಂದರು.

**ನೂತನ ಜೈವಿಕ ಇಂಧನ ನೀತಿ, ಯೋಜನೆಗಳು, ಹಸಿರು ಇಂಧನ ಕುರಿತು ಚರ್ಚೆ**

# ಮಧ್ಯಪ್ರದೇಶ್ ಸಿಎಂ ಜೊತೆ ಎಸ್.ಈ.ಸುಧೀಂದ್ರ ಮಾತುಕತೆ



**ಬೆಂಗಳೂರು, ಮೇ 25:** ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ (ಕೆಎಸ್‌ಬಿಡಿಬಿ) ಅಧ್ಯಕ್ಷ ಎಸ್. ಈ. ಸುಧೀಂದ್ರ ಅವರು ಮಧ್ಯಪ್ರದೇಶದ ಮುಖ್ಯಮಂತ್ರಿ ಡಾ. ಮೋಹನ್ ಯಾದವ್ ಅವರನ್ನು ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಭೇಟಿಮಾಡಿ ಮಹತ್ವದ ಚರ್ಚೆ ನಡೆಸಿದರು.

ಭೇಟಿಯ ಸಂದರ್ಭದಲ್ಲಿ ಕರ್ನಾಟಕದಲ್ಲಿ ರೂಪುಗೊಳ್ಳುತ್ತಿರುವ ನೂತನ ಜೈವಿಕ ಇಂಧನ ನೀತಿ, ರಾಜ್ಯದಲ್ಲಿ ಪ್ರಗತಿಯಲ್ಲಿರುವ ಜೈವಿಕ ಇಂಧನ ಯೋಜನೆಗಳು ಹಾಗೂ ಹಸಿರು ಇಂಧನ ಕ್ಷೇತ್ರದಲ್ಲಿ ರಾಜ್ಯಾಂತರ ಸಹಭಾಗಿತ್ವದ ಅವಕಾಶಗಳ ಕುರಿತು ವಿಸ್ತೃತವಾಗಿ ಮಾತುಕತೆ ನಡೆಯಿತು.

ಈ ವೇಳೆ ಮಾತನಾಡಿದ ಎಸ್. ಈ. ಸುಧೀಂದ್ರ ಅವರು, ಕರ್ನಾಟಕ ಸರ್ಕಾರದ ಪ್ರಸ್ತಾವಿತ ಜೈವಿಕ ಇಂಧನ ನೀತಿಯು ಇಂಧನ ಕ್ಷೇತ್ರದಲ್ಲಿ ಸ್ವಾವಲಂಬನೆ ಸಾಧಿಸುವುದರ ಜೊತೆಗೆ ರೈತರ ಆದಾಯವನ್ನು ಹೆಚ್ಚಿಸುವುದು, ಗ್ರಾಮೀಣ ಪ್ರದೇಶಗಳಲ್ಲಿ ಉದ್ಯೋಗಾವಕಾಶಗಳನ್ನು ನಿರ್ಮಿಸುವುದು ಮತ್ತು ಹೂಡಿಕೆದಾರರನ್ನು ಆಕರ್ಷಿಸುವ ಗುರಿಯನ್ನು ಹೊಂದಿದೆ ಎಂದು ತಿಳಿಸಿದರು. ಜೊತೆಗೆ ಜೈವಿಕ ಇಂಧನ ಮೂಲಸೌಕರ್ಯ ಅಭಿವೃದ್ಧಿ, ಸಂಶೋಧನೆ, ತಾಂತ್ರಿಕ ನವೀಕರಣ ಮತ್ತು ಸುಸ್ಥಿರ ಇಂಧನ ಬಳಕೆಗೆ ಕರ್ನಾಟಕ ಕೈಗೊಂಡಿರುವ ವಿವಿಧ ಕ್ರಮಗಳ ಬಗ್ಗೆ ವಿವರಿಸಿದರು.

ಈ ಸಂದರ್ಭದಲ್ಲಿ ಮಧ್ಯಪ್ರದೇಶದ ಗೌರವಾನ್ವಿತ ಮುಖ್ಯಮಂತ್ರಿ ಡಾ. ಮೋಹನ್ ಯಾದವ್ ಅವರು, ಎಸ್. ಈ. ಸುಧೀಂದ್ರ ಅವರ ನೇತೃತ್ವದಲ್ಲಿ ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ ಕೈಗೊಂಡಿರುವ ನವೀನ ಮತ್ತು ಪರಿಣಾಮಕಾರಿ ಕಾರ್ಯಗಳನ್ನು ಶ್ಲಾಘಿಸಿದರು. ಜೈವಿಕ ಇಂಧನ ಕ್ಷೇತ್ರದಲ್ಲಿ ಕರ್ನಾಟಕ ಮಾದರಿಯ ಕಾರ್ಯಪದ್ಧತಿ, ತಾಂತ್ರಿಕ ಪ್ರಗತಿ ಹಾಗೂ ಸುಸ್ಥಿರ ಇಂಧನ ಅಭಿವೃದ್ಧಿಗೆ ಮಂಡಳಿ ನೀಡುತ್ತಿರುವ ಕೊಡುಗೆ ರಾಷ್ಟ್ರಮಟ್ಟದಲ್ಲಿ ಮಾದರಿಯಾಗುತ್ತಿದೆ ಎಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಇಬ್ಬರು ನಾಯಕರು ಈ ಹಿಂದೆಯೂ ಜೈವಿಕ ಇಂಧನ ಕ್ಷೇತ್ರದ ಅಭಿವೃದ್ಧಿ ಕುರಿತಾಗಿ ಚರ್ಚೆ ನಡೆಸಿದ್ದನ್ನು ಸ್ಮರಿಸಿಕೊಂಡು, ಮಧ್ಯಪ್ರದೇಶದ ಜೈವಿಕ ಇಂಧನ ಸಾಮರ್ಥ್ಯವನ್ನು ಮತ್ತಷ್ಟು ಅನ್ವೇಷಿಸುವ ದಿಕ್ಕಿನಲ್ಲಿ ಸಹಕಾರ ಮುಂದುವರಿಸಲು ಒಪ್ಪಿಕೊಂಡರು. ಇದೇ ವೇಳೆ ಮಧ್ಯಪ್ರದೇಶ ಮುಖ್ಯಮಂತ್ರಿ ಡಾ. ಮೋಹನ್ ಯಾದವ್ ಅವರು, ರಾಜ್ಯದಲ್ಲಿನ ಜೈವಿಕ ಇಂಧನ ಅವಕಾಶಗಳನ್ನು ಅಧ್ಯಯನ ಮಾಡಲು ಹಾಗೂ ಪರಸ್ಪರ ಸಹಯೋಗ ವಿಸ್ತರಿಸಲು ಮಧ್ಯಪ್ರದೇಶಕ್ಕೆ ಭೇಟಿ ನೀಡುವಂತೆ ಎಸ್. ಈ. ಸುಧೀಂದ್ರ ಅವರನ್ನು ಆಹ್ವಾನಿಸಿದರು.

ಚರ್ಚೆಯ ಪ್ರಮುಖ ಭಾಗವಾಗಿ, ಗೋವಿನ ಸಗಣಿ ಮತ್ತು ನಗರ ಘನ ತ್ಯಾಜ್ಯ (ಎಂಎಸ್‌ಡಬ್ಲ್ಯೂ) ನಿರ್ವಹಣೆಗೆ ಮಧ್ಯಪ್ರದೇಶದಲ್ಲಿ ಅನುಷ್ಠಾನಗೊಳ್ಳುತ್ತಿರುವ ಸಿಬಿಜಿ ತಂತ್ರಜ್ಞಾನವು ಬೆಂಗಳೂರಿನಿಂದ ರೂಪುಗೊಂಡ ತಂತ್ರಜ್ಞಾನವಾಗಿರು ವುದನ್ನು ಉಲ್ಲೇಖಿಸಲಾಯಿತು. ಕೆಎಸ್‌ಬಿಡಿಬಿಯ ವಿಶ್ವಮಟ್ಟದ ಪ್ರಯೋಗಾಲಯ ಸೌಲಭ್ಯಗಳು, ಸಂಶೋಧನಾ ಸಾಮರ್ಥ್ಯ, ತಾಂತ್ರಿಕ ಪರಿಣಿತಿ ಹಾಗೂ ಜೈವಿಕ ಇಂಧನ ಪರಿಸರ ವ್ಯವಸ್ಥೆ ನಿರ್ಮಾಣದಲ್ಲಿ ನೀಡುತ್ತಿರುವ ನೀತಿ ಬೆಂಬಲದ ಕುರಿತು ಸಹ ಚರ್ಚೆ ನಡೆಯಿತು. ಈ ಸಭೆಯು ಹಸಿರು ಇಂಧನ, ಪರಿಸರಸ್ನೇಹಿ ಅಭಿವೃದ್ಧಿ ಮತ್ತು ದೇಶದ ಜೈವಿಕ ಇಂಧನ ಭವಿಷ್ಯವನ್ನು ಮತ್ತಷ್ಟು ಬಲಪಡಿಸುವ ಉದ್ದೇಶದೊಂದಿಗೆ ಎರಡೂ ರಾಜ್ಯಗಳ ಸಾಮೂಹಿಕ ಬದ್ಧತೆಯನ್ನು ಪ್ರತಿಬಿಂಬಿಸಿತು.

Chief reporter : SANDEEP RENU 99728 72151 | Executive Editor : SHARAT JYOTSNA B.R 9886766483 vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಕ್ವಿನ್ ಸಿಟಿಯಲ್ಲಿ ಟೊಯೋಟಾ ಬಿಡ್ಡಿ ಇಂಟೆಲ್ ಹಬ್



**ಬೆಂಗಳೂರು, ಮೇ.25:** ದಾಬಸ್‌ಪೇಟೆ-ದೊಡ್ಡಬಳ್ಳಾಪುರ ನಡುವೆ ರಾಜ್ಯ ಸರಕಾರವು ಅಭಿವೃದ್ಧಿಪಡಿಸುತ್ತಿರುವ ಮಹತ್ವಾಕಾಂಕ್ಷಿ ಕ್ವಿನ್ ಸಿಟಿಯಲ್ಲಿ ಟೊಯೋಟಾ ಕಿರ್ಲೋಸ್ಕರ್ ಮೋಟಾರ್ಸ್ ಕಂಪನಿಯು 1,200 ಕೋಟಿ ರೂಪಾಯಿ ಹೂಡಿಕೆಯೊಂದಿಗೆ ಜಾಗತಿಕ ಮಟ್ಟದ ತನ್ನ 'ಬಿಡ್ಡಿಇಂಟೆಲ್ ಹಬ್ ಸ್ಥಾಪಿಸಲಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಬೃಹತ್ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಅವರ ಸಮ್ಮುಖದಲ್ಲಿ ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಎಸ್.ಸೆಲ್ವಕುಮಾರ್ ಮತ್ತು ಟೊಯೋಟಾ ಕಂಪನಿಯು ಪರವಾಗಿ ಅದರ ಸಿಓಓ ಮತ್ತು ವಿಶೇಷ ಯೋಜನೆಯ ನಿರ್ದೇಶಕ ಸುದೀಪ್ ದಳವಿ ಅವರು ಈ ಕುರಿತ ಒಪ್ಪಂದಕ್ಕೆ ಅಂಕಿತ ಹಾಕಿದರು.

ಮುಖ್ಯಮಂತ್ರಿ ಸಿದ್ಧರಾಮಯ್ಯ ಮಾತನಾಡಿ, ಹೂಡಿಕೆಗೆ ಪೂರ್ಣ ಸಹಕಾರ ನೀಡುವುದಾಗಿ ಹೇಳಿದರು. ಈ ರೀತಿಯ ಘಟಕ ಸ್ಥಾಪನೆ ಆಗುತ್ತಿರುವುದು ವಿಶ್ವದಲ್ಲೇ ಮೊದಲು ಎನ್ನುವ ವಿಷಯ ಕೇಳಿ ಸಂತಸವಾಯಿತು ಎಂದು ಅವರು ಹೇಳಿದರು.

**1,200 ಕೋಟಿ ರೂಪಾಯಿ ಹೂಡಿಕೆಗೆ ಒಡಂಬಡಿಕೆ**

ಸಚಿವ ಪಾಟೀಲ ಅವರು ಮಾತನಾಡಿ, ಇದು ಕ್ವಿನ್ ಸಿಟಿಯಲ್ಲಿ ನಡೆಯುತ್ತಿರುವ ಪ್ರಥಮ ಹೂಡಿಕೆಯಾಗಿದೆ. ಕಂಪನಿಯು ಐದು ವರ್ಷಗಳಲ್ಲಿ 1,200 ಕೋಟಿ ರೂ.ಗಳನ್ನು ಆರಂಭಿಕ ಬಂಡವಾಳವಾಗಿ ಹೂಡಲಿದ್ದು, ಇದರಿಂದ 200 ಉದ್ಯೋಗ ಸೃಷ್ಟಿಯಾಗಲಿವೆ. ಇದಕ್ಕಾಗಿ ಅಲ್ಲಿ ಟೊಯೋಟಾ ಕಂಪನಿಗೆ 300 ಎಕರೆ ಭೂಮಿ ಒದಗಿಸಲಾಗುವುದು. ಇಲ್ಲಿ ವಾಹನಗಳ ತಯಾರಿಕೆ, ಪರೀಕ್ಷೆಗಳು, ಆಧುನಿಕ ವಾಹನ ತಯಾರಿಕಾ ಸ್ಥಾವರ ಆರಂಭ ಎಲ್ಲವೂ ನಡೆಯಲಿವೆ. ಇದು ರಾಜ್ಯದ ಯುವಜನರಿಗೆ ವರದಾನವಾಗಲಿದೆ ಎಂದರು.

ಕ್ವಿನ್ ಸಿಟಿಯಲ್ಲಿ ನಾವೀನ್ಯತೆ, ಆರೋಗ್ಯ ಸೇವೆಗಳು ಮತ್ತು ಐಟಿ ತಂತ್ರಜ್ಞಾನಕ್ಕೆ ಅಗ್ರ ಆದ್ಯತೆ ಕೊಡಲಾಗುವುದು. ಇಲ್ಲಿ ಹೂಡಿಕೆ ಮಾಡಲು ಜಾಗತಿಕ ಮಟ್ಟದ ಏಳೆಂಟು ವಿಶ್ವವಿದ್ಯಾಲಯಗಳು, ಆರೋಗ್ಯ ಸಂಸ್ಥೆಗಳು, ಸಂಶೋಧನಾ ಸಂಸ್ಥೆಗಳು ಈಗಾಗಲೇ ಮುಂದೆ ಬಂದಿವೆ. ಅವುಗಳೊಂದಿಗೂ ಆದಷ್ಟು ತ್ವರಿತವಾಗಿ ಒಡಂಬಡಿಕೆಗೆ ಅಂತಿಮರೂಪ ನೀಡಲಾಗುವುದು ಎಂದು ಅವರು ಮಾಹಿತಿ ನೀಡಿದರು. ಈ ಅತ್ಯಾಧುನಿಕ ನಗರವು ಒಟ್ಟು 5,800 ಎಕರೆಯಲ್ಲಿ ಹಂತಹಂತವಾಗಿ ಅಸ್ತಿತ್ವಕ್ಕೆ ಬರಲಿದೆ. ಈಗಾಗಲೇ ಮೊದಲ ಹಂತದ ಅಭಿವೃದ್ಧಿ ಪ್ರಗತಿಯಲ್ಲಿದೆ. ಈ ಯೋಜನೆಗೆ ಒಟ್ಟು 48 ಸಾವಿರ ಕೋಟಿ ರೂಪಾಯಿ ಹೂಡಿಕೆ ಆಗಲಿದ್ದು, ಒಟ್ಟಾರೆಯಾಗಿ 1 ಲಕ್ಷ ಉದ್ಯೋಗಗಳು ಸೃಷ್ಟಿಯಾಗಲಿವೆ ಎಂದು ಪಾಟೀಲ ನುಡಿದಿದ್ದಾರೆ.

ಕೈಗಾರಿಕಾ ಇಲಾಖೆ ಆಯುಕ್ತೆ ಖುಷ್ಬೂ ಗೋಯೆಲ್, ಕೆಐಎಡಿಬಿ ಸಿಇಒ ಗೋವಿಂದ ರೆಡ್ಡಿ, ಟೊಯೊಟಾ ಕಂಪನಿಯ ಮುಖ್ಯ ತಾಂತ್ರಿಕ ಅಧಿಕಾರಿ ಯೋಶಿನೋರಿ ನೋರಿಟಾಕೆ, ಉನ್ನತ ಮಟ್ಟದ ಪ್ರತಿನಿಧಿಗಳಾದ ಜಿ.ಶಂಕರ್, ವಿಕ್ರಮ್ ಗುಲಾಟಿ, ಉಪಾಧ್ಯಕ್ಷ ರಮೇಶ್ ರಾವ್, ಜನರಲ್ ಮ್ಯಾನೇಜರ್ ಎಚ್ ಜೆ ಕಿರಣ್, ಉಪಸ್ಥಿತರಿದ್ದರು.

# ರಾಜ್ಯಸಭೆ ಸ್ಥಾನಕ್ಕೆ ನಾನೂ ಆಕಾಂಕ್ಷಿ



**ಬೆಂಗಳೂರು, ಮೇ 25:** ಲೋಕಸಭೆ ಚುನಾವಣೆಯ ಟಿಕೆಟ್ ಕೈತಪ್ಪಿದ ಬಳಿಕ ರಾಜಕೀಯ ನಿವೃತ್ತಿಯ ಮಾತುಗಳನ್ನಾಡಿದ್ದ ಮಾಜಿ ಮುಖ್ಯಮಂತ್ರಿ ಡಿ.ವಿ. ಸದಾನಂದಗೌಡ ಅವರು ಈಗ ಮತ್ತೊಮ್ಮೆ ಸಕ್ರಿಯ ರಾಜಕಾರಣಕ್ಕೆ ಮರಳಲು ಕಸರತ್ತು ಆರಂಭಿಸಿದ್ದಾರೆ. ಮುಂಬರುವ ರಾಜ್ಯಸಭೆ ಚುನಾವಣೆಗೆ ನಾನೂ ಕೂಡ ಪ್ರಬಲ ಆಕಾಂಕ್ಷಿಯಾಗಿದ್ದೇನೆ ಎಂದು ಬಹಿರಂಗವಾಗಿ ಘೋಷಿಸುವ ಮೂಲಕ ಡಿವಿಎಸ್ ಬಿಜೆಪಿ ಹೈಕಮಾಂಡ್‌ಗೆ ನೇರ ಸಂದೇಶ ರವಾನಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯಸಭೆ ಪ್ರವೇಶಿಸುವ ತಮ್ಮ ಇಂಗಿತವನ್ನು ಮುಚ್ಚುಮರೆ ಇಲ್ಲದೆ ಹಂಚಿಕೊಂಡಿದ್ದಾರೆ. ರಾಜ್ಯಸಭೆ ಚುನಾವಣೆಯ ಟಿಕೆಟ್ ಆಕಾಂಕ್ಷಿಗಳ ಕುರಿತು ಕೇಳಲಾದ ಪ್ರಶ್ನೆಗೆ ಉತ್ತರಿಸಿದ ಸದಾನಂದಗೌಡರು, "ರಾಜ್ಯಸಭೆಗೆ ಹೋಗಲು ನಾನೂ ಆಕಾಂಕ್ಷಿ. ಪಕ್ಷದ ವರಿಷ್ಠರಾದ ಜೆ.ಪಿ. ನಡ್ಡಾ, ಕೇಂದ್ರ ಸಚಿವ ಅಮಿತ್ ಶಾ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರ ಬಳಿ ಈಗಾಗಲೇ ಈ ಬಗ್ಗೆ ಮಾತನಾಡಿದ್ದೇನೆ. ಅವರು ನನ್ನ ಮನವಿಗೆ ಸಕಾರಾತ್ಮಕವಾಗಿ ಸ್ಪಂದಿಸುವ ವಿಶ್ವಾಸವಿದೆ" ಎಂದು ತಿಳಿಸಿದರು.

ಲೋಕಸಭೆ ಚುನಾವಣೆಯ ಸಂದರ್ಭದಲ್ಲಿ ತಮಗೆ ಟಿಕೆಟ್ ತಪ್ಪಿದ್ದನ್ನು ಪರೋಕ್ಷವಾಗಿ ನೆನಪಿಸಿದ ಅವರು, ಪಕ್ಷಕ್ಕಾಗಿ ದುಡಿದ ಹಿರಿಯ ನಾಯಕರಿಗೆ ಹೈಕಮಾಂಡ್ ಸೂಕ್ತ ಸ್ಥಾನಮಾನ ನೀಡಲಿದೆ ಎಂಬ ನಂಬಿಕೆ ತಮಗಿದೆ. ತಮ್ಮ ಆಕಾಂಕ್ಷೆಯನ್ನು ವರಿಷ್ಠರ ಮುಂದಿಟ್ಟಿದ್ದೇನೆ. ಅಂತಿಮವಾಗಿ ಪಕ್ಷ ತೆಗೆದುಕೊಳ್ಳುವ ನಿರ್ಧಾರಕ್ಕೆ ತಲೆಬಾಗುವುದಾಗಿ ಸ್ಪಷ್ಟಪಡಿಸಿದರು.

ನನ್ನ ರಾಜಕೀಯ ಅನುಭವ ಮತ್ತು ಹಿರಿತನವನ್ನು ಪರಿಗಣಿಸಿ ಹೈಕಮಾಂಡ್ ನನಗೆ ಈ ಬಾರಿ ರಾಜ್ಯಸಭೆಗೆ ಸ್ಪರ್ಧಿಸಲು ಅವಕಾಶ ನೀಡಬಹುದು ಎಂಬ ನಿರೀಕ್ಷೆಯಲ್ಲಿದ್ದೇನೆ. ಒಂದು ವೇಳೆ ಪಕ್ಷ ಬೇರೆಯವರಿಗೆ ಅವಕಾಶ ನೀಡಿದರೂ ನಾನು ಪಕ್ಷದ ಶಿಸ್ತಿನ ಸಿಪಾಯಿಯಾಗಿ ವರಿಷ್ಠರ ತೀರ್ಮಾನವನ್ನು ಗೌರವಿಸುತ್ತೇನೆ" ಎಂದು ಅವರು ಮಾರ್ಮಿಕವಾಗಿ ನುಡಿದರು.

# ದೇವೇಗೌಡರ ನಾಮನಿರ್ದೇಶನ: ಬಿಜೆಪಿಯೇ ತೀರ್ಮಾನಿಸಲಿ



**ಬೆಂಗಳೂರು, ಮೇ 25:** ಬಿಜೆಪಿ ಅಂಗಳಕ್ಕೆ ಚೆಂಡು ಎಸೆದ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ, ಮಾಜಿ ಪ್ರಧಾನಿ ಹೆಚ್ ಡಿ ದೇವೇಗೌಡ ಅವರನ್ನು ಮತ್ತೊಮ್ಮೆ ರಾಜ್ಯಸಭೆಗೆ ನಾಮನಿರ್ದೇಶನ ಮಾಡಬೇಕೇ ಬೇಡವೇ ಎಂಬುದನ್ನು ಬಿಜೆಪಿ ತೀರ್ಮಾನಿಸಬೇಕು ಎಂದು ಹೇಳಿದ್ದಾರೆ. ಕರ್ನಾಟಕದ ನಾಲ್ಕು ರಾಜ್ಯಸಭಾ ಸ್ಥಾನಗಳು ಖಾಲಿಯಾಗಿದ್ದು ಇದರಲ್ಲಿ ದೇವೇಗೌಡರ ಸ್ಥಾನವೂ ಸೇರಿದೆ. ಜೂನ್ 18ರಂದು ಚುನಾವಣೆ ನಡೆಯಲಿದೆ. ಕಾಂಗ್ರೆಸ್ ಮೂರು ಸ್ಥಾನಗಳನ್ನು ಗೆಲ್ಲುವ ಸಾಧ್ಯತೆ ಹೊಂದಿದ್ದರೆ, ಬಿಜೆಪಿ ಒಂದು ಸ್ಥಾನ ಗೆಲ್ಲಬಹುದು. ಜೆಡಿಎಸ್ ಪಕ್ಷಕ್ಕೆ ವಿಧಾನಸಭೆಯಲ್ಲಿ ಅಗತ್ಯ ಸಂಖ್ಯಾಬಲ ಇಲ್ಲದಿರುವುದರಿಂದ ದೇವೇಗೌಡರು ಮತ್ತೊಮ್ಮೆ ರಾಜ್ಯಸಭೆಗೆ ಆಯ್ಕೆಯಾಗಲು ಬಿಜೆಪಿಯ ಬೆಂಬಲದ ಮೇಲೆ ಅವಲಂಬಿತರಾಗಿದ್ದಾರೆ. ನಾನಾಗಲಿ, ದೇವೇಗೌಡರಾಗಲಿ ಈ ವಿಷಯವನ್ನು ಯಾರೊಂದಿಗೂ ಚರ್ಚಿಸಿಲ್ಲ ಎಂದು ಎಚ್.ಡಿ ಕುಮಾರಸ್ವಾಮಿ ಹೇಳಿದರು. ಬಿಜೆಪಿಗೆ 63 ಶಾಸಕರು ಇದ್ದಾರೆ. ಅವರ ಪಕ್ಷದಲ್ಲೇ ಹಲವು ಸಮಸ್ಯೆಗಳಿವೆ. ನಾನು ಅಥವಾ ದೇವೇಗೌಡರು ಇದನ್ನು ಏಕೆ ಚರ್ಚಿಸಬೇಕು. ದೆಹಲಿಯಲ್ಲಿ ಯಾವ ನಿರ್ಧಾರವಾಗುತ್ತದೆಯೋ ಅದೇ ಅಂತಿಮ. ದೇವೇಗೌಡರಿಗಾಗಿ ಮತ್ತೊಬ್ಬರ ಅವಕಾಶ ಕಸಿದುಕೊಳ್ಳಬೇಕು ಎಂದು ನಾವು ಹೇಳಲು ಸಾಧ್ಯವಿಲ್ಲ. ಅವರು ಏನು ಮಾಡಲು ಬಯಸುತ್ತಾರೆ ಎಂಬುದನ್ನು ಅವರೇ ತೀರ್ಮಾನಿಸಲಿ ಎಂದು ಹೇಳಿದರು.

# ಜನಸಾಮಾನ್ಯರನ್ನು ಪ್ರಧಾನಿ ಲೂಟಿ ಮಾಡುತ್ತಿದ್ದಾರೆ: ಕಾಂಗ್ರೆಸ್ ಕಿಡಿ

**ಕೇಂದ್ರ ಸರ್ಕಾರದಿಂದ ಸತತ ನಾಲ್ಕನೇ ಬಾರಿಗೆ ಪೆಟ್ರೋಲ್-ಡೀಸೆಲ್ ಬೆಲೆ ಏರಿಕೆ: ಜನಾಕ್ರೋಶಕ್ಕೆ ಬಿಜೆಪಿ ಹೊಣೆ**



**ಬೆಂಗಳೂರು, ಮೇ 25:** ಮೋದಿಯವರು ಪ್ರಧಾನಿ ಆದ ಬಳಿಕ ಸತತವಾಗಿ ಪೆಟ್ರೋಲ್, ಡೀಸೆಲ್ ಬೆಲೆ ಏರಿಸುವುದನ್ನು ರೂಢಿ ಮಾಡಿಕೊಂಡಿದ್ದು ಈ ಬಾರಿ ಸತತ ನಾಲ್ಕನೇ ದಿನ ಇಂಧನ ದರ ಏರಿಕೆ ಮಾಡಿ ದೇಶವನ್ನು ಹಾಗೂ ಜನಸಾಮಾನ್ಯರನ್ನು ಲೂಟಿ ಮಾಡುತ್ತಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ, ಕರ್ನಾಟಕ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆಕ್ರೋಶ ವ್ಯಕ್ತಪಡಿಸಿದರು.

ನಗರದಲ್ಲಿ ಸೋಮವಾರ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿ, ಕೇಂದ್ರ ಸರ್ಕಾರ ಪೆಟ್ರೋಲ್, ಡೀಸೆಲ್ ಮತ್ತು ಗ್ಯಾಸ್ ದರಗಳ ಏರಿಸಿದ್ದು, ದೇಶದ ಇತಿಹಾಸದಲ್ಲಿ ಈ ರೀತಿ ಏರಿಕೆಯಾದ ಉದಾಹರಣೆಗಳಿಲ್ಲ. ಬೆಲೆ ಏರಿಕೆಯಿಂದ ಜನಸಾಮಾನ್ಯರು, ಮಧ್ಯಮ ವರ್ಗದವರ ಜೀವನ ದುಸ್ತರವಾಗಿದೆ, ಜನ ತತ್ತರಿಸಿದ್ದಾರೆ ಎಂದರು.

**ಅಚ್ಛೇ ದಿನ್ ಎಂದು ಜನರಿಗೆ ಟೋಪಿ:** ಬಿಜೆಪಿ ಅಧಿಕಾರಕ್ಕೆ ಬಂದರೆ ಗುಜರಾತ್ ಮಾದರಿ ಸರ್ಕಾರ ಬರುತ್ತದೆ, ಒಳ್ಳೆಯ ದಿನಗಳು ಬರುತ್ತವೆ ಎಂದು ಹೇಳಿ ಜನರಿಗೆ ಟೋಪಿ ಹಾಕಿದ್ದಾರೆ. ಕಳೆದ 11 ದಿನಗಳಿಂದ 4 ಬಾರಿ ಪೆಟ್ರೋಲ್, ಡೀಸೆಲ್ ಹಾಗೂ ಗ್ಯಾಸ್ ದರ ಏರಿಕೆಯಾಗಿದೆ. ಬೆಂಗಳೂರಿನಲ್ಲಿ ಪೆಟ್ರೋಲ್ ಬೆಲೆ 110 .93 ರೂ.ಗಳಾಗಿವೆ. ಡೀಸೆಲ್ ದರ 98.89 ರೂ.ಗಳಾಗಿವೆ. 7. 52 ರೂ. ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆಯಾಗಿದೆ. ಪ್ರಧಾನಿ ಮೋದಿಯವರು ದೇಶವನ್ನು ಲೂಟಿ ಮಾಡುತ್ತಿರುವುದು ರುಜುವಾತಾಗುತ್ತಿದೆ ಎಂದು ಸಿದ್ದರಾಮಯ್ಯ ಹೇಳಿದರು.

ಮೋದಿ ಸರ್ಕಾರವು ಅಬಕಾರಿ ಸುಂಕವನ್ನು 21 ಬಾರಿ ಪರಿಷ್ಕರಿಸಿದ್ದು, ಅದರಲ್ಲಿ 12 ಬಾರಿ ಬೆಲೆ ಹೆಚ್ಚಳ ಮಾಡಿದೆ. ಇದು "ಬೆಲೆಗಳನ್ನು ಕಡಿತಗೊಳಿಸುತ್ತೇವೆ" ಎಂದು ಹೇಳುತ್ತಲೇ ಸಾಮಾನ್ಯ ಜನರಿಂದ ಹಣವನ್ನು ದೋಚುವ ವ್ಯವಸ್ಥಿತ ಮಾದರಿಯನ್ನು ತೋರಿಸುತ್ತದೆ.

**ಕಚ್ಚಾತೈಲ ದರ ಕಡಿಮೆಯಿದ್ದಾಗಿನ ಲಾಭ ಗ್ರಾಹಕರಿಗೆ ದೊರೆಯಲಿಲ್ಲ**

**ಮನಮೋಹನ್ ಸಿಂಗ್ ಪ್ರಧಾನಿಯಾಗಿದ್ದಾಗ 2014ರ ಮೇ ತಿಂಗಳಲ್ಲಿ 71.41 ರೂ. ಪೆಟ್ರೋಲ್ ಲೀ. ಒಂದಕ್ಕೆ ಬೆಲೆಯಿದ್ದರೆ, ಡೀಸೆಲ್ 56.71 ಪೈಸೆಯಿತ್ತು. ಅಂದು 412 ರೂ. ಆಗಿದ್ದ ಗ್ಯಾಸ್ ಸಿಲಿಂಡರ್ ಬೆಲೆ , ಇಂದು 915 ರೂ. ಆಗಿದೆ , ಇದು ದುಪ್ಪಟ್ಟಿಗಿಂತ ಹೆಚ್ಚಾಗಿದೆ. ಮನಮೋಹನ್ ಸಿಂಗ್ ಅವರ ಅವಧಿಯಲ್ಲಿ ಕಚ್ಚಾ ತೈಲದ ಬೆಲೆ ಹೋಲಿಸಿದರೆ ಪ್ರಸ್ತುತ ಬೆಲೆ ಇಳಿದಿದ್ದರೂ ಕೂಡ, ಪೆಟ್ರೋಲ್ ಡೀಸೆಲ್ ಬೆಲೆ ಹೆಚ್ಚುತ್ತಿದೆ. 65 ರಿಂದ 75 ಡಾಲರ್ ಬೆಲೆ ಇದ್ದಾಗ, ಈ ಕಡಿಮೆ ಬೆಲೆಯ ಲಾಭ, ಗ್ರಾಹಕರಿಗೆ ದೊರೆಯಲಿಲ್ಲ. ಪ್ರಸ್ತುತ ಕಚ್ಚಾ ತೈಲದ ಬೆಲೆ 100 ಡಾಲರ್ ಮಿತಿಯೊಳಗಿದ್ದರೂ, ಕೇಂದ್ರ ಸರ್ಕಾರ ಪೆಟ್ರೋಲ್ ಡೀಸೆಲ್ ಬೆಲೆಯನ್ನು ಸತತ ನಾಲ್ಕು ಬಾರಿ ಏರಿಕೆ ಮಾಡಿದೆ. ಇದರಿಂದಾಗಿ ಗ್ರಾಹಕರಿಗೆ, ರೈತರಿಗೆ, ಜನಸಾಮಾನ್ಯರಿಗೆ ಈ ಬೆಲೆಏರಿಕೆ ಬಿಸಿ ತಟ್ಟಲಿದೆ. ಮೋದಿಯವರು ದೇಶವನ್ನು ಹಾಗೂ ಜನಸಾಮಾನ್ಯರನ್ನು ಲೂಟಿ ಮಾಡುತ್ತಿದ್ದಾರೆ ಎಂದು ಸಿದ್ದರಾಮಯ್ಯ ಆಕ್ರೋಶ ವ್ಯಕ್ತಪಡಿಸಿದರು.**

ಮೇ 2014 ರಲ್ಲಿ (ಯುಪಿಎ ಅವಧಿಯಲ್ಲಿ) 412 ರೂ. ಇದ್ದ ಎಲ್ಪಿಜಿ ಸಿಲಿಂಡರ್ ಬೆಲೆ, ಮೇ 2026ರಲ್ಲಿ (ಎನ್‌ಡಿಎ ಅವಧಿಯಲ್ಲಿ) 915.50 ರೂ.ಕ್ಕೆ ಏರಿಕೆಯಾಗಿದೆ. ಅಂದರೆ 12 ವರ್ಷಗಳಲ್ಲಿ 503.5 ರೂ. ರಷ್ಟು (ಸುಮಾರು 122.21%) ಭಾರಿ ಏರಿಕೆಯಾಗಿದೆ. 2013-14ರಲ್ಲಿ (ಯುಪಿಎ ಅವಧಿಯಲ್ಲಿ) ಅಂತರರಾಷ್ಟ್ರೀಯ ಎಲ್ಪಿಜಿ ಬೆಲೆ ಪ್ರತಿ ಮೆಟ್ರಿಕ್ ಟನ್‌ಗೆ ಸುಮಾರು 880.5 ಅಮೆರಿಕನ್ ಡಾಲರ್ ಆಗಿತ್ತು. ಆದರೆ ಮಾರ್ಚ್ 2026 ರಲ್ಲಿ (ಸೌದಿ ಸಿಪಿ ಪ್ರಕಾರ) ಇದು ಪ್ರತಿ ಮೆಟ್ರಿಕ್ ಟನ್‌ಗೆ ಸುಮಾರು 542.5 ಅಮೆರಿಕನ್ ಡಾಲರ್ ಆಗಿದೆ. ಅಂದರೆ ಈ ಅವಧಿಯಲ್ಲಿ ಬೆಲೆ 339 ಅಮೆರಿಕನ್ ಡಾಲರ್ ನಷ್ಟು (ಸುಮಾರು 38.5%) ಕಡಿಮೆಯಾಗಿದೆ. 2014 ರಲ್ಲಿ, ವಾಣಿಜ್ಯ ಸಿಲಿಂಡರ್ ಬೆಲೆ 1,241 ರೂ. (ಪ್ರತಿ 19 ಕೆಜಿ ಸಿಲಿಂಡರ್‌ಗೆ) ಆಗಿತ್ತು. ಮೇ 2026 ರ ಪ್ರಸ್ತುತ ಬೆಲೆ 3,152 ರೂ. ಆಗಿದ್ದು, ಇದು 1,911 ರೂ. ರಷ್ಟು ಭಾರಿ ಏರಿಕೆಯಾಗಿದೆ. ಅಂರಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಬೆಲೆ ಕಡಿಮೆಯಾಗಿದ್ದರೂ, ವಾಣಿಜ್ಯ ಅನಿಲದ ಸಿಲಿಂಡರ್ ಬೆಲೆಗಳನ್ನು ಮಾರ್ಚ್ 1 ರಿಂದ ಮೇ 25ರ ನಡುವೆ 5 ಬಾರಿ ಹೆಚ್ಚಿಸಲಾಗಿದೆ. ಮೋದಿ ಸರ್ಕಾರ ಮತ್ತು ಬಿಜೆಪಿ ಈ ಇಂಧನ ಲೂಟಿಯನ್ನು ತಕ್ಷಣವೇ ನಿಲ್ಲಿಸಬೇಕು ಮತ್ತು ಪೆಟ್ರೋಲ್, ಡೀಸೆಲ್, ಗೃಹಬಳಕೆಯ ಗ್ಯಾಸ್, ವಾಣಿಜ್ಯ ಗ್ಯಾಸ್, ಸಣ್ಣ ಸಿಲಿಂಡರ್, ಸಿಎನ್ಜಿ ಮತ್ತು ಪಿಎನ್ಜಿ ಬೆಲೆಗಳನ್ನು ಕೂಡಲೇ ಕಡಿತಗೊಳಿಸಬೇಕು ಎಂದು ಕಾಂಗ್ರೆಸ್ ನಾಯಕರು ಆಗ್ರಹಿಸಿದ್ದಾರೆ.

ಸಚಿವ ದಿನೇಶ್ ಗುಂಡೂರಾವ್, ಅಭಿಷೇಕ್ ದತ್ತಾ ಮೊದಲಾದವರು ಉಪಸ್ಥಿತರಿದ್ದರು.

# ಬಿಐಎಎಲ್‌ನಿಂದ ಕೆಎಸ್‌ಐಐಡಿಸಿಗೆ 16.49 ಕೋಟಿ ರೂ. ಲಾಭಾಂಶ ಕೊಡುಗೆ



**ಬೆಂಗಳೂರು, ಮೇ25:** ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ನಿಯಮಿತವು (ಬಿಐಎಎಲ್) ತನ್ನಲ್ಲಿ ಶೇ.13ರಷ್ಟು ಬಂಡವಾಳ ಪಾಲು ಹೊಂದಿರುವ ರಾಜ್ಯ ಸರಕಾರಿ ಸ್ವಾಮ್ಯದ ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಕರ್ಯ ಅಭಿವೃದ್ಧಿ ನಿಗಮಕ್ಕೆ (ಕೆಎಸ್‌ಐಐಡಿಸಿ) 2025-26ನೇ ಸಾಲಿಗೆ ಅನ್ವಯವಾಗುವಂತೆ 16,49,93,400 ರೂ.ಗಳ ಲಾಭಾಂಶವನ್ನು ಸೋಮವಾರ ಹಸ್ತಾಂತರಿಸಲಾಯಿತು.

ಮುಖ್ಯಮಂತ್ರಿ ಸಿದ್ದರಾಮಯ್ಯ ಬಿಐಎಎಲ್ ಅಧ್ಯಕ್ಷ ಹರಿ ಮರಾರ್ ಅವರಿಂದ ಚೆಕ್ ಸ್ವೀಕರಿಸಿದರು. ಈ ಸಂದರ್ಭದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಕೆಎಸ್‌ಐಐಡಿಸಿ ವ್ಯವಸ್ಥಾಪಕ ನಿರ್ದೇಶಕರಾದ ಖುಷ್ಬೂ ಗೋಯೆಲ್ ಉಪಸ್ಥಿತರಿದ್ದರು. ಬಿಐಎಎಲ್ 2025-26ನೇ ಸಾಲಿಗೆ ಅನ್ವಯವಾಗುವಂತೆ ಪ್ರತೀ ಷೇರಿಗೆ 3 ರೂ. ಲಾಭಾಂಶ ಘೋಷಿಸಿದೆ. ಇದರಂತೆ ಕೆಎಸ್‌ಐಐಡಿಸಿಗೆ 16.49 ಕೋಟಿ ರೂಪಾಯಿ ಒಟ್ಟು ಲಾಭಾಂಶ ಕೊಡಲಾಗಿದೆ. ಇದರಲ್ಲಿ ತೆರಿಗೆ ಕಡಿತದ ನಂತರ ಆ ಸಂಸ್ಥೆಗೆ 14.84 ಕೋಟಿ ರೂಪಾಯಿ ಡಿವಿಡೆಂಡ್ ಸಿಕ್ಕಿದೆ ಎಂದಿದ್ದಾರೆ. ಈ ಲಾಭಾಂಶ ಘೋಷಣೆಯು ಬಿಐಎಎಲ್ ಸಂಸ್ಥೆಯ ಅತ್ಯುತ್ತಮ ಆರ್ಥಿಕ ನಿರ್ವಹಣೆಯ ಸಂಕೇತವಾಗಿದೆ. ಸಂಸ್ಥೆಯಲ್ಲಿ ಕೆಎಸ್‌ಐಐಡಿಸಿ ರಾಜ್ಯ ಸರಕಾರವನ್ನು ಪ್ರತಿನಿಧಿಸುತ್ತಿದೆ. ಬಿಐಎಎಲ್ ಸಂಸ್ಥೆಯು 2017-18ರ ಬಳಿಕ ಇದೇ ಮೊದಲ ಬಾರಿಗೆ ಡಿವಿಡೆಂಡ್ ಘೋಷಿಸಿದೆ. ಏತನ್ಮಧ್ಯೆ ನಾವು ಬಂದ ಲಾಭವನ್ನು ಮೂಲಸೌಕರ್ಯ ಮತ್ತು ಸಾಮರ್ಥ್ಯ ವಿಸ್ತರಣೆಯಂತಹ ಪ್ರಮುಖ ಯೋಜನೆಗಳನ್ನು ಪೂರ್ಣಗೊಳಿಸಿದ್ದು, ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಕಾರ್ಯಾಚರಣೆಗಳನ್ನು ದೃಢಗೊಳಿಸಿದ್ದೇವೆ ಎಂದು ಅವರು ತಿಳಿಸಿದ್ದಾರೆ.

ಮಿಕ್ಕಂತೆ ಬಿಐಎಎಲ್ ನಲ್ಲಿ ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರ ಶೇ.13, ಎಫ್‌ಐಎಚ್ ಮಾರಿಷಸ್ ಇನ್ವೆಸ್ಟ್ ಮೆಂಟ್ಸ್ ಲಿಮಿಟೆಡ್ ಶೇಕಡ 30.36 ಮತ್ತು ಆಂಕರೇಜ್ ಇನ್ಫ್ರಾಸ್ಟ್ರಕ್ಚರ್ ಇನ್ವೆಸ್ಟ್‌ಮೆಂಟ್ಸ್ ಹೋಲ್ಡಿಂಗ್ಸ್ ಲಿಮಿಟೆಡ್ ಶೇಕಡ 43.64ರಷ್ಟು ಬಂಡವಾಳ ಪಾಲು ಹೊಂದಿವೆ ಎಂದು ಅವರು ನುಡಿದಿದ್ದಾರೆ.

# ವಿಶೇಷಚೇತನರ ಸಾಧನ, ಸಲಕರಣೆಗಳಿಗೆ ಜಿಎಸ್‌ಟಿ ಸಂಪೂರ್ಣ ಮನ್ನಾ ಮಾಡಿ



■ **ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್‌ಗೆ ಕಾರ್ಮಿಕ ಸಚಿವ ಸಂತೋಷ್‌ಲಾಡ್ ಪತ್ರ**

**ಬೆಂಗಳೂರು, ಮೇ 25:** ವಿಶೇಷಚೇತನರು ಸ್ವತಂತ್ರ ಜೀವನ ನಡೆಸಲು ಸಹಾಯವಾಗುವ ಎಲ್ಲಾ ಸಾಧನ, ಸಲಕರಣೆಗಳಿಗೆ ಜಿಎಸ್‌ಟಿ ವಿನಾಯಿತಿ ನೀಡುವಂತೆ ಇಲ್ಲವೇ ಸಂಪೂರ್ಣ ಮನ್ನಾ ಮಾಡುವಂತೆ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರಿಗೆ ಕಾರ್ಮಿಕ ಸಚಿವ ಸಂತೋಷ್ ಲಾಡ್ ಪತ್ರ ಬರೆದಿದ್ದಾರೆ.

ವಿಶೇಷಚೇತನರಿಗೆ ಅಗತ್ಯವಾದ ಸಹಾಯಕ ಸಾಧನಗಳು, ಪುನರ್ವಸತಿ ಸಾಧನಗಳು, ಸಲಕರಣೆಗಳ ಮೇಲೆ ಜಿಎಸ್‌ಟಿವಿಧಿಸಲಾಗುತ್ತದೆ. ಈ ಸಾಧನಗಳು ಐಷಾರಾಮಿ ವಸ್ತುಗಳಲ್ಲ, ಬದಲಾಗಿ ಅನಿವಾರ್ಯ ಅವಶ್ಯಕತೆಗಳಾಗಿದ್ದು ಜಿಎಸ್‌ಟಿ ವಿನಾಯಿತಿ ಅಥವಾ ಸಂಪೂರ್ಣ ಜಿಎಸ್‌ಟಿ ತೆಗೆದುಹಾಕಿದರೆ ಅನುಕೂಲವಾಗುತ್ತದೆ ಎಂದು ಪತ್ರದಲ್ಲಿ ತಿಳಿಸಿದ್ದಾರೆ. ವಿಶೇಷ ಚೇತನರ ಬೆಂಬಲ ಸಾಧನಗಳನ್ನು ಶೂನ್ಯ ತೆರಿಗೆ ಅಥವಾ ವಿನಾಯಿತಿ ಪಡೆದ ವರ್ಗದ ಅಡಿಯಲ್ಲಿ ಸೇರಿಸಬೇಕು, ಈ ಪ್ರಯೋಜನಗಳನ್ನು ಪಡೆಯಲು ಪ್ರಮಾಣೀಕರಣ ಮತ್ತು ಖರೀದಿ ವಿಧಾನಗಳನ್ನು ಸರಳಗೊಳಿಸಬೇಕು, ಸಾಧನಗಳು ಕೈಗೆಟುಕುವ ರೀತಿ ತಯಾರಾಗಬೇಕು ಎಂದು ಪತ್ರದಲ್ಲಿ ಕೋರಿದ್ದಾರೆ. ಹಾಗೂ ಈ ನಿಟ್ಟಿನಲ್ಲಿ ನೆರವಾದರೆ ವಿಭಿನ್ನ ಸಾಮರ್ಥ್ಯ ಹೊಂದಿರುವ ನಾಗರಿಕರಿಗೆ ಹೆಚ್ಚಿನ ಪ್ರಯೋಜನವಾಗಲಿದೆ ಎಂದು ತಿಳಿಸಿದ್ದಾರೆ. ವಿಶೇಷಚೇತನರು ಬಳಸುವ ಸಾಧನಗಳ ಮೇಲೆ ತೆರಿಗೆ ವಿನಾಯಿತಿ ನೀಡಿದರೆ ಅವರ ಶಿಕ್ಷಣ, ಉದ್ಯೋಗ, ಆರೋಗ್ಯ ರಕ್ಷಣೆ ಮತ್ತು ದೈನಂದಿನ ಸಾಮಾಜಿಕ ಜೀವನದಲ್ಲಿ ಭಾಗವಹಿಸಲು ಅನುವು ಮಾಡಿಕೊಡುತ್ತದೆ. ಅವರಲ್ಲಿ ಅನೇಕರು ಈಗಾಗಲೇ ಹೆಚ್ಚಿನ ಆರ್ಥಿಕ ಮತ್ತು ಸಾಮಾಜಿಕ ಸವಾಲುಗಳನ್ನು ಎದುರಿಸುತ್ತಿದ್ದಾರೆ. ಈ ಎಲ್ಲಾ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ಮನವಿಯನ್ನು ಪರಿಗಣಿಸಬೇಕು ಎಂದು ಹೇಳಿದ್ದಾರೆ.

# ಪೆಟ್ರೋಲ್ ದರ ಏರಿಕೆಯಿಂದ ಲಾಭ ಪಡೆಯುತ್ತಿರುವ ರಾಜ್ಯ ಸರ್ಕಾರ ವ್ಯಾಟ್ ಕಡಿಮೆ ಮಾಡಲಿ

**ಪ್ರತಿಪಕ್ಷ ನಾಯಕ ಆರ್.ಅಶೋಕ ಆಗ್ರಹ**

**ಹೆಚ್ಚುವರಿ ಆದಾಯದ ಮಾಹಿತಿ ಮುಚ್ಚಿಟ್ಟ ಕಾಂಗ್ರೆಸ್**



**ಬೆಂಗಳೂರು, ಮೇ 25:** ಪೆಟ್ರೋಲ್ ದರ ಏರಿಕೆಯಿಂದ ವಾರ್ಷಿಕ 6,000 ಕೋಟಿ ರೂ. ಹೆಚ್ಚುವರಿ ಆದಾಯ ಗಳಿಸುತ್ತಿರುವ ಕಾಂಗ್ರೆಸ್ ಸರ್ಕಾರ, ವ್ಯಾಟ್ ಕಡಿಮೆ ಮಾಡದೆ ಕೇಂದ್ರ ಸರ್ಕಾರದ ಮೇಲೆ ಆರೋಪ ಮಾಡುತ್ತಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪೆಟ್ರೋಲ್ ದರ ಏರಿಕೆ ವಿಚಾರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜಕಾರಣ ಮಾಡುತ್ತಿದ್ದಾರೆ. ಯುದ್ಧದಿಂದಾಗಿ ಪೆಟ್ರೋಲ್ ಬಳಕೆ ಕಡಿಮೆ ಮಾಡಲು ಬೇರೆ ದೇಶಗಳು ನಿರ್ಬಂಧ ಹಾಕಿದ್ದರೂ ಪ್ರಧಾನಿ ನರೇಂದ್ರ ಮೋದಿ ಅಂತಹ ನಿರ್ಬಂಧ ಹಾಕಿಲ್ಲ. ಕರ್ನಾಟಕದಲ್ಲಿ ಪೆಟ್ರೋಲ್ ದರ ಲೀಟರ್ಗೆ 107.70 ರೂ. ಇದ್ದರೆ, ದೆಹಲಿಯಲ್ಲಿ 99.50 ರೂ., ಗುಜರಾತ್ನಲ್ಲಿ 99.10 ರೂ., ಉತ್ತರ ಪ್ರದೇಶದಲ್ಲಿ 99.50 ರೂ., ಹರ್ಯಾಣದಲ್ಲಿ 99.70 ರೂ. ದರವಿದೆ. ಅಂದರೆ ರಾಜ್ಯದಲ್ಲಿ ಮಾತ್ರ ದರ ಹೆಚ್ಚಿದೆ. ಕಾಂಗ್ರೆಸ್ ಸರ್ಕಾರ ಪೆಟ್ರೋಲ್ ಮೇಲಿನ ವ್ಯಾಟ್ ಹೆಚ್ಚಳ ಮಾಡಿದ್ದು, ಅದನ್ನು ಕಡಿಮೆ ಮಾಡದೆ ಕೇಂದ್ರ ಸರ್ಕಾರದ ಮೇಲೆ ಗೂಬೆ ಕೂರಿಸುವ ಕೆಲಸ ಮಾಡುತ್ತಿದೆ. ದರ ಏರಿಕೆಯಿಂದ ಕೇಂದ್ರ ಸರ್ಕಾರಕ್ಕೆ ಆದಾಯ ಬರುವುದಿಲ್ಲ. ರಾಜ್ಯ ಸರ್ಕಾರಕ್ಕೆ ಹೆಚ್ಚುವರಿಯಾಗಿ ವಾರ್ಷಿಕ 6,000 ಕೋಟಿ ರೂ. ಆದಾಯ ಬರಲಿದೆ. ಇದನ್ನು ಗ್ಯಾರಂಟಿಗೆ ಬಳಸುತ್ತಾರೆ ಎಂದು ದೂರಿದರು.

ಈಗ ಪ್ರತಿ ಲೀಟರ್ ಪೆಟ್ರೋಲ್ ಮಾರಾಟದಿಂದ 1.15 ರೂ. ಹೆಚ್ಚುವರಿ ಆದಾಯ ರಾಜ್ಯ ಸರ್ಕಾರಕ್ಕೆ ಬರುತ್ತಿದೆ. ಜನರಿಗೆ ಸಹಾಯ ಮಾಡಬೇಕೆಂಬ ಮನಸ್ಸಿದ್ದರೆ ರಾಜ್ಯ ಸರ್ಕಾರದ ಕಡೆಯಿಂದಲೇ ತೆರಿಗೆ ಇಳಿಕೆ ಮಾಡಬೇಕು. ಇಲ್ಲವಾದರೆ ಹೆಚ್ಚುವರಿ ಆದಾಯ ಪಡೆಯುತ್ತಿರುವ ಬಗ್ಗೆ ಜನರಿಗೆ ಹೇಳಬೇಕು. ದರ ಏರಿಕೆಯ ವಿರುದ್ಧ ಕಾಂಗ್ರೆಸ್ ಹೋರಾಟ ಮಾಡುವುದು ಎಂದರೆ ಅದು ಜನರಿಗೆ ಮಾಡುವ ವಂಚನೆ ಎಂದರು.

ಆಳಂದದ ಕೋಮುಗಲಭೆ ಪ್ರಕರಣದಲ್ಲಿ ಮುಸ್ಲಿಮರ ವಿರುದ್ಧ ಕೇಸು ವಾಪಸ್ ಪಡೆಯಲಾಗಿದೆ. ನಂತರ ಭಟ್ಕಳದಲ್ಲಿ ಹಿಂದೂಗಳು ಕಟ್ಟಿದ್ದ ಮೂರಿನಕಟ್ಟೆಯನ್ನು ಮುಸ್ಲಿಮ್ ಮತಾಂಧರು ಒಡೆದು ಹಾಕಿದ್ದಾರೆ. ಈ ಭಯೋತ್ಪಾದಕರ ಸಂತತಿಯವರು ಇಷ್ಟೆಲ್ಲ ಮಾಡಿದರೂ ಪೊಲೀಸರು ಕ್ರಮ ವಹಿಸಿಲ್ಲ. ಸಿದ್ದರಾಮಯ್ಯ ಇರುವವರೆಗೂ ಕೇಸು ವಾಪಸ್ ಪಡೆಯುತ್ತಾರೆ ಎಂಬ ನಂಬಿಕೆ ಮುಸ್ಲಿಮ್ ಮತಾಂಧರಲ್ಲಿದೆ. ಮತಬ್ಯಾಂಕ್ ರಾಜಕಾರಣಕ್ಕಾಗಿ ಇಂತಹ ಗಲಭೆ ನಡೆಯುತ್ತಿದೆ. ಇಲ್ಲಿ ಪೊಲೀಸರ ಮೇಲೆ ಹಲ್ಲೆಯಾದರೂ ಕ್ರಮ ಕೈಗೊಂಡಿಲ್ಲ. ಇದನ್ನು ಹಗುರವಾಗಿ ಪರಿಗಣಿಸಿದೆ ನಿಷ್ಪಕ್ಷಪಾತ ತನಿಖೆ ಮಾಡಬೇಕು. ಪೊಲೀಸರ ಮೇಲೆ ಕೈ ಮಾಡಿದ ಮತಾಂಧರನ್ನು ಗೂಂಡಾ ಕಾಯ್ದೆಯಡಿ ಬಂಧಿಸಬೇಕು. ಇದರ ನೈತಿಕ ಹೊಣೆ ಹೊತ್ತು ಗೃಹ ಸಚಿವ ಡಾ.ಜಿ.ಪರಮೇಶ್ವರ್ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದರು.

ಕೇಂದ್ರ ಸರ್ಕಾರ ಅಭಿವೃದ್ಧಿಗಾಗಿ ಸಾಲ ಮಾಡಿದೆ. ರೈಲು, ಹೆದ್ದಾರಿ, ರಕ್ಷಣಾ ಸಾಮಗ್ರಿ ರಫ್ತು ಮೊದಲಾದವುಗಳಿಗೆ ಸಾಲದ ಹಣ ಬಳಕೆಯಾಗಿದೆ. ಆರ್ಥಿಕ ಸಚಿವೆ ನಿರ್ಮಲಾ ಸೀತಾರಾಮನ್ 49 ವಸ್ತುಗಳ ಮೇಲಿನ ಜಿಎಸ್‌ಟಿ ಕಡಿಮೆ ಮಾಡಿದ್ದಾರೆ. ಈ ಮಾದರಿಯಲ್ಲಿ ಸಿದ್ದರಾಮಯ್ಯ ಆಡಳಿತ ನಡೆಸಿಲ್ಲ. ಸಾಲ ಮಾಡುವುದರ ಜೊತೆಗೆ ಎಲ್ಲ ವಸ್ತುಗಳ ತೆರಿಗೆಗಳನ್ನು ಹೆಚ್ಚಿಸಿದ್ದಾರೆ. ಕಸಕ್ಕೆ ಹೊಸದಾಗಿ ತೆರಿಗೆ ಹೇರಿದ್ದಾರೆ. ಇದರ ಜೊತೆಗೆ ಸಿಎಂ ಕುರ್ಚಿಗಾಗಿ ಕಾದಾಟ ನಡೆಯುತ್ತಿದೆ. ಡಿ.ಕೆ.ಶಿವಕುಮಾರ್ ಭವಿಷ್ಯ ನೋಡಿಕೊಳ್ಳುತ್ತಾರೋ ಅಥವಾ ಬೇರೆ ಪಕ್ಷಕ್ಕೆ ಹೋಗುತ್ತಾರೋ ಎಂದು ಗೊತ್ತಿಲ್ಲ. ಸಿದ್ದರಾಮಯ್ಯ ಮಾತ್ರ ಸಿಎಂ ಕುರ್ಚಿಯನ್ನು ಖಾಲಿ ಮಾಡುವುದಿಲ್ಲ, ಆದರೆ ಡಿ.ಕೆ.ಶಿಗೆ ಖಾಲಿ ತಟ್ಟೆಯನ್ನು ಕೊಟ್ಟಿದ್ದಾರೆ ಎಂದರು.

ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆಯಿಂದ ಬಾಂಗ್ಲಾ ಅಕ್ರಮ ನಿವಾಸಿಗಳ ಪತ್ತೆಯಾಗಲಿದೆ. ನಿಜವಾದ ಮತದಾರರು ಮಾತ್ರ ಮತದಾರರ ಪಟ್ಟಿಯಲ್ಲಿ ಉಳಿದುಕೊಳ್ಳುತ್ತಾರೆ. ಪಡಿತರ ಚೀಟಿಯ ಪರಿಷ್ಕರಣೆಗೆ ಅಭಿಯಾನ ಮಾಡುವ ಅಗತ್ಯವಿಲ್ಲ.

ಮರಣ ಪ್ರಮಾಣ ಪತ್ರ ಮಂಜೂರಾದ ಕೂಡಲೇ ಸ್ವಯಂಚಾಲಿತವಾಗಿ ಪಡಿತರ ಚೀಟಿ ರದ್ದಾಗಬೇಕು. ಆದರೆ ಗ್ಯಾರಂಟಿಗಳಲ್ಲಿ ಹಣ ಉಳಿಸಲು ಪಡಿತರ ಚೀಟಿ ರದ್ದು ಮಾಡಲಾಗುತ್ತಿದೆ. ಕೇಂದ್ರದಿಂದ ಅಕ್ಕಿ ಸಿಗುತ್ತಿಲ್ಲ ಎಂದು ಡಿ.ಕೆ.ಶಿವಕುಮಾರ್ ಹೇಳಿದ್ದಾರೆ. ಆದರೆ ಕೇಂದ್ರ ಸರ್ಕಾರದಿಂದ ಜೂನ್ವರೆಗೆ ಅಕ್ಕಿ ಲಭ್ಯವಿದೆ. 4 ಲಕ್ಷ ಟನ್ ಅಕ್ಕಿ ಸಿದ್ಧವಾಗಿದ್ದರೂ, ಆರ್ಥಿಕ ಇಲಾಖೆಯಿಂದ ಕೆಜಿಗೆ 23 ರೂ. ನಂತೆ ಹಣ ಬಿಡುಗಡೆ ಮಾಡಿಲ್ಲ. ರಾಜ್ಯ ಸರ್ಕಾರ ಹಣ ನೀಡಿದ ಕೂಡಲೇ ಕೇಂದ್ರ ಅಕ್ಕಿ ನೀಡುತ್ತದೆ. ಅಂದರೆ ಖಜಾನೆ ಖಾಲಿಯಾಗಿದೆ ಎಂದು ಮತ್ತೆ ಸಾಬೀತಾಗಿದೆ. ಜಿಬಿಎನಲ್ಲಿ ಕಸ ವಿಲೇವಾರಿ ಮಾಡುವವರಿಗೆ ಹಣ ನೀಡಿಲ್ಲ ಜೊತೆಗೆ ಹೊಸ ಟೆಂಡರ್‌ನಲ್ಲಿ ಮೊತ್ತ ಅಧಿಕವಾಗಿದೆ. ಇದರಿಂದಾಗಿ ಎಲ್ಲ ಕಡೆ ಕಸದ ರಾಶಿ ಕಂಡುಬರುತ್ತಿದೆ. ಸರ್ಕಾರ ದಿವಾಳಿಯ ಅಂಚಿಗೆ ಬಂದಿದೆ ಎಂದರು.

ದೇಶ ವಿರೋಧಿಗಳು ಕಾಕ್ರೋಚ್ ಜನತಾ ಪಾರ್ಟಿಯ ಮೂಲಕ ದೇಶ ಒಡೆಯುವ ಹುನ್ನಾರ ಮಾಡಿದ್ದಾರೆ. ಇದರಲ್ಲಿ ಪಾಕಿಸ್ತಾನ, ಬಾಂಗ್ಲಾದೇಶದವರೂ ಇದ್ದಾರೆ. ಇಂತಹ ಟೂಲ್ಕಿಟ್ ಅನ್ನು ಜನರು ನಂಬಬಾರದು ಎಂದರು.

ಸಮುದ್ರ, ನದಿಗೆ ಚಿಪ್ಪು ಸಂಗ್ರಹಕ್ಕೆ ಇಳಿಯುವವರಿಗೆ ಅಧಿಕಾರಿಗಳು ಮಾರ್ಗದರ್ಶನ ನೀಡಬೇಕು. ಆದರೆ ಭಟ್ಕಳದ ದುರಂತದಲ್ಲಿ ಜಿಲ್ಲಾಡಳಿತದ ಲೋಪ ಕಾಣುತ್ತಿದೆ. ಇಂತಹ ಕೆಲಸ ಮಾಡುವವರಿಗೆ ಅಧಿಕಾರಿಗಳು ಸೂಕ್ತ ಸಲಹೆ, ಮಾರ್ಗದರ್ಶನ ನೀಡಬೇಕಿತ್ತು ಎಂದರು.

# ಮೇಕೆದಾಟು ಯೋಜನೆ: ಡಿಕೆಶಿ ಹೇಳಿಕೆಗೆ ತಮಿಳುನಾಡಿನಲ್ಲಿ ಆಕ್ರೋಶ

**ಚೆನ್ನೈ, ಮೇ 25:** ಮೇಕೆದಾಟು ವಿರೋಧಿಸಲು ತಮಿಳುನಾಡಿಗೆ ಯಾವುದೇ ಹಕ್ಕಿಲ್ಲ ಎಂಬ ಡಿಕೆಶಿ ಹೇಳಿಕೆ ಇದೀಗ ತಮಿಳುನಾಡಿನಲ್ಲಿ ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ.

ಡಿಸಿಎಂ ಡಿ.ಕೆ. ಶಿವಕುಮಾರ್ ಹೇಳಿಕೆಗೆ ತೀವ್ರವಾಗಿ ಪ್ರತಿಕ್ರಿಯಿಸಿದ ಡಿಎಂಕೆ ನಾಯಕ ಕೆ.ಎನ್. ನೆಹರೂ, ಡಿಕೆ ಶಿವಕುಮಾರ್ ಅವರ ಹೇಳಿಕೆಗಳು ಅವರ ಅಹಂಕಾರವನ್ನು ತೋರಿಸುತ್ತವೆ. ರಾಜ್ಯದಲ್ಲಿ ಅಧಿಕಾರ ಬದಲಾದ ನಂತರ ತಮಿಳುನಾಡಿನಲ್ಲಿ ದುರ್ಬಲ ಮೈತ್ರಿ ಸರ್ಕಾರ ಇದೆ ಎಂದು ಭಾವಿಸಿ ಕರ್ನಾಟಕ ನಾಯಕರು ಹೀಗೆ ಮಾತನಾಡುತ್ತಿದ್ದಾರೆ. ಇಲ್ಲಿ ಕಾಂಗ್ರೆಸ್ ಪಕ್ಷವೂ ಆಡಳಿತ ಸರ್ಕಾರದ ಮೈತ್ರಿಯ ಭಾಗವಾಗಿರುವುದರಿಂದ ವಿರೋಧ ಎದುರಾಗುವುದಿಲ್ಲ ಎಂದು ಭಾವಿಸಿರಬಹುದು. ಮೇಕೆದಾಟು ಯೋಜನೆಯನ್ನು ತಮಿಳುನಾಡಿನ ವಿರುದ್ಧದ ದ್ರೋಹ. ಈ ಜಲಾಶಯ ನಿರ್ಮಾಣವಾದರೆ ಕಾವೇರಿ ನೀರಿನ ಮೇಲೆ ಅವಲಂಬಿತವಾಗಿರುವ ತೀರ ಪ್ರದೇಶದ ರೈತರು ಭಯಭೀತರಾಗುತ್ತಾರೆ. ಜೊತೆಗೆ ವಿಜಯ್ ಅವರನ್ನು ಟೀಕಿಸಿದ ಅವರು, ಮುಖ್ಯಮಂತ್ರಿ ಈಗಾದರೂ ಬಾಯಿ ತೆರೆಯುತ್ತಾರೆಯೇ ಎಂಬುದನ್ನು ಜನರು ಕಾದು ನೋಡುತ್ತಿದ್ದಾರೆ. ತಮಿಳುನಾಡಿನ ಎಲ್ಲಾ ರಾಜಕೀಯ ಪಕ್ಷಗಳು ಕಾವೇರಿ ವಿಚಾರದಲ್ಲಿ ಒಂದೇ ಧ್ವನಿಯಲ್ಲಿ ನಿಂತಿವೆ ಎಂಬುದನ್ನು ಕರ್ನಾಟಕದ ಕಾಂಗ್ರೆಸ್ ಸರ್ಕಾರಕ್ಕೆ ಸ್ಪಷ್ಟವಾಗಿ ತಿಳಿಸುವಂತೆ ವಿಜಯ್ ಅವರಿಗೆ ನೆಹರು ಆಗ್ರಹಿಸಿದರು.



### ಸುಪ್ರೀಂ ಕೋರ್ಟ್ ತೀರ್ಪಿನ ಬಗ್ಗೆ ಕರ್ನಾಟಕದಿಂದ ತಪ್ಪು ಗ್ರಹಿಕೆ

ಪಿಎಂಕೆ ನಾಯಕ ಅನ್ಬುಮಣಿ ರಾಮದಾಸ್, ಮೇಕೆದಾಟು ವಿಚಾರದಲ್ಲಿ ಸುಪ್ರೀಂ ಕೋರ್ಟ್ ತೀರ್ಪನ್ನು ಕರ್ನಾಟಕ ತಪ್ಪಾಗಿ ಬಳಸುತ್ತಿದೆ. ಮೇಕೆದಾಟು ಯೋಜನೆಯನ್ನು ತಮಿಳುನಾಡು ವಿರೋಧಿಸಲು ಸಾಧ್ಯವಿಲ್ಲ ಎಂದು ಸುಪ್ರೀಂ ಕೋರ್ಟ್ ಎಂದಿಗೂ ಹೇಳಿಲ್ಲ. ಅದು ಸ್ಪಷ್ಟವಾದ ಸುಳ್ಳು ಎಂದು ಹೇಳಿದರು. ಮೇಕೆದಾಟಿನಲ್ಲಿ ಅಣೆಕಟ್ಟು ನಿರ್ಮಾಣವಾದರೆ ತಮಿಳುನಾಡಿನ 14 ಜಿಲ್ಲೆಗಳ ನೀರಾವರಿ ವ್ಯವಸ್ಥೆ ಹಾಗೂ ಐದು ಕೋಟಿ ಜನರ ಕುಡಿಯುವ ನೀರಿನ ಸರಬರಾಜಿಗೆ ಹಾನಿಯಾಗಬಹುದು. ಎಐಎಡಿಎಂಕೆ ಮುಖ್ಯಸ್ಥ ಎಡಪ್ಪಾಡಿ ಪಳನಿಸ್ವಾಮಿ ಆಡಳಿತಾರೂಢ ಸರ್ಕಾರದ ಮೌನವನ್ನು ಪ್ರಶ್ನಿಸಿದರು. ಕಾಂಗ್ರೆಸ್ ಮೇಲೆ ಅವಲಂಬಿತವಾಗಿರುವ ಸರ್ಕಾರವು ಕರ್ನಾಟಕದ ಕಾಂಗ್ರೆಸ್ ಸರ್ಕಾರದ ವಿರುದ್ಧ ದೃಢ ನಿಲುವು ತೆಗೆದುಕೊಳ್ಳಬಹುದೇ ಎಂದು ಪ್ರಶ್ನಿಸಿದರು. ಮೇಕೆದಾಟು ಅಣೆಕಟ್ಟು ನಿರ್ಮಾಣವಾದರೆ ಕಾವೇರಿ ಕಣಿವೆ ಜಿಲ್ಲೆಗಳು ಮರುಭೂಮಿಯಾಗುತ್ತವೆ ಎಂದರು.

### ಕಾನೂನು ನಿರ್ದೇಶನಗಳ ನಿರ್ಲಕ್ಷ್ಯ

ಕಾಂಗ್ರೆಸ್ ಸಂಸದ ಮಾಣಿಕ್ಕಮ್ ಠಾಗೋರ್ ಕೂಡ ಡಿ ಕೆ ಶಿವಕುಮಾರ್ ಅವರ ಹೇಳಿಕೆಗಳನ್ನು ತೀವ್ರವಾಗಿ ವಿರೋಧಿಸಿದರು. ಸುಪ್ರೀಂ ಕೋರ್ಟ್ ಹಾಗೂ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಈಗಾಗಲೇ ತಮಿಳುನಾಡಿನ ಅನುಮತಿ ಇಲ್ಲದೆ ಕಾವೇರಿ ನದಿಗೆ ಅಡ್ಡವಾಗಿ ಯಾವುದೇ ಹೊಸ ಅಣೆಕಟ್ಟು ನಿರ್ಮಿಸಲು ಸಾಧ್ಯವಿಲ್ಲ ಎಂದು ಸ್ಪಷ್ಟಪಡಿಸಿವೆ ಎಂದು ಠಾಗೋರ್ ಹೇಳಿದರು. ಇದಾದ ಬಳಿಕವೂ ಡಿ ಕೆ ಶಿವಕುಮಾರ್ ಪ್ರಚೋದನಕಾರಿ ಹೇಳಿಕೆಗಳನ್ನು ಮುಂದುವರಿಸುತ್ತಿದ್ದಾರೆ. ಇದು ಕಾನೂನು ನಿರ್ದೇಶನಗಳನ್ನೂ, ಫೆಡರಲಿಸಂ ತತ್ವಗಳನ್ನೂ ನಿರ್ಲಕ್ಷಿಸುವಂತಾಗಿದೆ ಎಂದು ಆರೋಪಿಸಿದರು. ಕಾವೇರಿ ಒಂದು ರಾಜ್ಯದ ಆಯುಧವಲ್ಲ. ಅದು ತಮಿಳುನಾಡಿನ ಕೋಟ್ಯಂತರ ಜನರ ಜೀವನಾಡಿಯಾಗಿದೆ ಎಂದು ಹೇಳಿದ ಅವರು, ಕೇಂದ್ರ ಸರ್ಕಾರವು ಈ ಪ್ರಸ್ತಾವನೆಯನ್ನು ತಿರಸ್ಕರಿಸಬೇಕು ಎಂದು ಒತ್ತಾಯಿಸಿದರು.

## ಹಳೇ ತಪ್ಪುಗಳಿಂದ ಎನ್‌ಟಿಎ ಪಾಠ ಕಲಿಯದಿರುವುದು ದುರದೃಷ್ಟಕರ: ಸುಪ್ರೀಂಕೋರ್ಟ್ ಆಕ್ರೋಶ

**ನವದೆಹಲಿ, ಮೇ 25:** ನೀಟ್ ಯುಜಿ ಪರೀಕ್ಷೆಯಲ್ಲಿ ಪ್ರಶ್ನೆಪತ್ರಿಕೆ ಸೋರಿಕೆ ಆರೋಪಗಳ ನಡುವೆ ಸುಪ್ರೀಂ ಕೋರ್ಟ್ ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದೆ. 2024ರ ಪ್ರಕರಣದಲ್ಲಿ ನೀಡಿದ ನಿರ್ದೇಶನಗಳ ಹೊರತಾಗಿಯೂ ಎನ್‌ಟಿಎ ಪಾಠ ಕಲಿಯದಿರುವುದು ದುಃಖಕರ ಎಂದು ನ್ಯಾಯಾಲಯ ಹೇಳಿದೆ.



ನ್ಯಾಯಮೂರ್ತಿಗಳಾದ ಪಿ.ಎಸ್. ನರಸಿಂಹ ಮತ್ತು ಆಲೋಕ್ ಅರಾಧೆ ಅವರ ವಿಭಾಗೀಯ ಪೀಠವು ಕೇಂದ್ರ ಮತ್ತು ಎನ್‌ಟಿಎಗೆ ನೋಟಿಸ್ ಜಾರಿ ಮಾಡಿದೆ. ಯುನೈಟೆಡ್ ಡಾಕ್ಟರ್ಸ್ ಫ್ರಂಟ್ ಸೇರಿದಂತೆ ಹಲವು ಅರ್ಜಿಗಳ ವಿಚಾರಣೆಯನ್ನು ಸುಪ್ರೀಂಕೋರ್ಟ್ ನಡೆಸುತ್ತಿದೆ. ಎನ್‌ಟಿಎಯನ್ನು ವಿಸರ್ಜನೆಗೊಳಿಸಿ, ಮುಂದಿನ ಪರೀಕ್ಷೆಯನ್ನು ಮಾಜಿ ಸುಪ್ರೀಂ ಕೋರ್ಟ್ ನ್ಯಾಯಾಧೀಶರ ನೇತೃತ್ವದಲ್ಲಿ ಮೇಲ್ವಿಚಾರಣೆ ಮಾಡುವಂತೆ ಅರ್ಜಿಯಲ್ಲಿ ಮನವಿ ಮಾಡಿದೆ.

2024 ರಲ್ಲಿ ನೀಡಿದ ನಿರ್ದೇಶನ ಮತ್ತು ಸಮಿತಿ ಶಿಫಾರಸುಗಳ ಅನುಸರಣೆಯ ಬಗ್ಗೆ ವಿವರಿಸಬೇಕು ಅವುಗಳ ಅನುಷ್ಠಾನಕ್ಕೆ ಯಾವ ಕ್ರಮಗಳನ್ನು ತೆಗೆದುಕೊಂಡಿದ್ದಾರೆ ಎಂದು ವಿವರಿಸುವ ಅಫಿಡವಿಟ್ ಸಲ್ಲಿಸಬೇಕು ಎಂದು ನ್ಯಾಯಾಲಯ ಎನ್‌ಟಿಎಗೆ ಸೂಚಿಸಿದೆ. ಫೆಡರೇಷನ್ ಆಫ್ ಆಲ್ ಇಂಡಿಯಾ ಮೆಡಿಕಲ್ ಅಸೋಸಿಯೇಷನ್ ಸಲ್ಲಿಸಿದ ಅರ್ಜಿಯಲ್ಲಿ ಎನ್‌ಟಿಎಯನ್ನು ಪುನರ್ ರಚನೆ ಮಾಡುವುದು ಅಥವಾ ಬದಲಾಯಿಸುವುದು, ಸ್ವಾಯತ್ತ ಸಂಸ್ಥೆಯನ್ನು ರಚಿಸುವುದು, ಹಾಗೂ ಉನ್ನತ ನಿರ್ವಹಣಾ ಸಮಿತಿ ನೇಮಕ ಮಾಡುವುದು ಸೇರಿದಂತೆ ವಿವಿಧ ಬೇಡಿಕೆಗಳಿವೆ. ಈ ಕಮಿಟಿಯಲ್ಲಿ ಮಾಜಿ ಸುಪ್ರೀಂ ಕೋರ್ಟ್ ನ್ಯಾಯಾಧೀಶ, ಸೈಬರ್ ಸೆಕ್ಯುರಿಟಿ ತಜ್ಞ ಮತ್ತು ಫಾರೆನ್ಸಿಕ್ ವಿಜ್ಞಾನಿ ಇರಬೇಕು ಎಂದು ಕೋರಲಾಗಿದೆ.

## ಸಾರ್ವಜನಿಕ ಸ್ಥಳದಲ್ಲಿ ಪ್ರಾರ್ಥನೆ ಸಲ್ಲಿಸುವಂತಿಲ್ಲ ಪ್ರಾಣಿಬಲಿ ಕೊಡುವಂತಿಲ್ಲ: ಸಿಎಂ ಯೋಗಿ

**ಲಖನೌ, ಮೇ 25:** ಈದ್ ಅಲ್-ಅಧಾ ದಿನದಂದು ರಸ್ತೆಗಳು ಸೇರಿದಂತೆ ಸಾರ್ವಜನಿಕ ಸ್ಥಳಗಳಲ್ಲಿ ನಮಾಜ್ ಮಾಡುವುದು ಅಥವಾ 'ಕುರ್ಬಾನಿ' (ಪ್ರಾಣಿಬಲಿ)ಗೆ ಅವಕಾಶ ನೀಡದಂತೆ ಸಿಎಂ ಯೋಗಿ ಆದಿತ್ಯನಾಥ್ ಆದೇಶಿಸಿದ್ದಾರೆ. ಜೊತೆಗೆ ಬಕ್ರೀದ್ ಹಬ್ಬಕ್ಕೆ ಸಂಬಂಧಿಸಿದಂತೆ 10 ಕಟ್ಟುನಿಟ್ಟಿನ ನಿರ್ದೇಶನಗಳನ್ನು ಹೊರಡಿಸಿದ್ದಾರೆ. ಮಸೀದಿ ಆವರಣದೊಳಗೆ ಮಾತ್ರ ನಮಾಜ್ ಮಾಡಬೇಕು, ತೆರೆದ ಸಾರ್ವಜನಿಕ ಸ್ಥಳಗಳಲ್ಲಿ ಅಥವಾ ರಸ್ತೆಗಳಲ್ಲಿ ಪ್ರಾರ್ಥನೆಗಳನ್ನು ನಡೆಸಬಾರದು, ಪ್ರಾರ್ಥನೆ ಸಲ್ಲಿಸಲು ರಸ್ತೆಗಳನ್ನು ನಿರ್ಬಂಧಿಸಬಾರದು ಮತ್ತು ಭಕ್ತರ ಸಂಖ್ಯೆ ಹೆಚ್ಚಿದ್ದರೆ, ಪಾಳಿಯಲ್ಲಿ ಪ್ರಾರ್ಥನೆಗಳನ್ನು ನಡೆಸಬೇಕೆಂದು ಎಂದು ನಿರ್ದೇಶಿಸಿದೆ.



ತೆರೆದ ಪ್ರದೇಶಗಳಲ್ಲಿ ಯಾವುದೇ ಪ್ರಾಣಿಬಲಿ ನೀಡಬಾರದು ಮತ್ತು ನಿಷೇಧಿತ ಪ್ರಾಣಿಗಳ ಬಲಿ ತಡೆಯನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಪ್ರಾಣಿ ಬಲಿಯ ನಂತರ ಯಾವುದೇ ಅನೈರ್ಮಲ್ಯದ ಪರಿಸ್ಥಿತಿಗಳು ಉದ್ಭವಿಸದಂತೆ ನೋಡಿಕೊಳ್ಳಲು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದು, ಸರಿಯಾದ ನೈರ್ಮಲ್ಯ ವ್ಯವಸ್ಥೆಗಳನ್ನು ಮಾಡುವಂತೆ ಅಧಿಕಾರಿಗಳಿಗೆ ಆದೇಶಿಸಿದ್ದಾರೆ. ದುಷ್ಕರ್ಮಿಗಳ ಮೇಲೆ ತೀವ್ರ ನಿಗಾ ಇಡಬೇಕು. ಈದ್ಗಾಗಳಲ್ಲಿ ಪೊಲೀಸ್ ಪಡೆಗಳನ್ನು ನಿಯೋಜಿಸಬೇಕು. ಸೂಕ್ಷ್ಮ ಪ್ರದೇಶಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳು ಮತ್ತು ಡ್ರೋನ್ ಬಳಸಿ ಕಣ್ಗಾವಲು ನಡೆಸಬೇಕು, ಕಾನೂನು ಸುವ್ಯವಸ್ಥೆ ಬಗ್ಗೆ ಎಚ್ಚರಿಕೆ ವಹಿಸಲು ಅಧಿಕಾರಿಗಳಿಗೆ ಸೂಚಿಸಿದ್ದಾರೆ.



ನವದೆಹಲಿಯಲ್ಲಿ ಮೆಟ್ರೋ ಮತ್ತು ಡಿಟಿಸಿ ಬಸ್‌ನಲ್ಲಿ ಸೋಮವಾರ ಪ್ರಯಾಣಿಸಿ ದೆಹಲಿ ಸಚಿವಾಲಯ ತಲುಪಿದ ಮುಖ್ಯಮಂತ್ರಿ ರೇಖಾ ಗುಪ್ತಾ, ಸಾರ್ವಜನಿಕ ಸಾರಿಗೆಯ ಹೆಚ್ಚಿದ ಬಳಕೆಯು ಸಂಚಾರ, ಮಾಲಿನ್ಯ ಮತ್ತು ಇಂಧನ ಬಳಕೆಯನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ ಎಂದು ಹೇಳಿದರು.

## ಸಿಜೆಪಿ ವಿರುದ್ಧ ತುರ್ತು ವಿಚಾರಣೆಗೆ ಸುಪ್ರೀಂ ನಕಾರ

**ನವದೆಹಲಿ, ಮೇ 25:** ಕಾಕ್ರೋಚ್ ಜನತಾ ಪಾರ್ಟಿ ವಿರುದ್ಧದ ಅರ್ಜಿಯ ತುರ್ತು ವಿಚಾರಣೆ ನಡೆಸಲು ನಿರಾಕರಿಸಿದ ಸುಪ್ರೀಂ ಕೋರ್ಟ್, ಈ ವಿಚಾರವನ್ನು ಅಷ್ಟೊಂದು ಭಾವನಾತ್ಮಕವಾಗಿ ತೆಗೆದುಕೊಳ್ಳಬೇಡಿ ಎಂದು ಅರ್ಜಿದಾರರಿಗೆ ಹೇಳಿದೆ.

ಉದ್ಯೋಗ ಸಿಗದ ಕೆಲವು ಯುವಕರು ಜಿರಳೆಗಳಂತೆ ಹೆಚ್ಚುತ್ತಾ, ಸಮಾಜದಲ್ಲಿ ವ್ಯವಸ್ಥೆಯ ಮೇಲೆ ದಾಳಿ ಮಾಡಲು ಆರಂಭಿಸುತ್ತಾರೆ ಎಂಬ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಅವರ ಹೇಳಿಕೆಯು ಕಾಕ್ರೋಚ್ ಜನತಾ ಪಾರ್ಟಿ (ಸಿಜೆಪಿ) ಎಂಬ ವಿಡಂಬನಾತ್ಮಕ ಸಾಮಾಜಿಕ ಮಾಧ್ಯಮ ಚಳವಳಿಗೆ ಕಾರಣವಾಗಿದೆ. ಸಿಜೆಐ ತಾವು ನಕಲಿ ಪದವೀಧರರನ್ನು ಉದ್ದೇಶಿಸಿ ಈ ಹೇಳಿಕೆ ನೀಡಿದ್ದು ಎಂದು ಹೇಳಿಕೊಂಡಿದ್ದಾರೆ.

ಸಾಮಾಜಿಕ ಮಾಧ್ಯಮಗಳಲ್ಲಿ ಕಾಕ್ರೋಚ್ ಜನತಾ ಪಾರ್ಟಿ ಖಾತೆ ತೆರೆದ ಕೆಲವೇ ದಿನಗಳಲ್ಲಿ ಲಕ್ಷಾಂತರ ಫಾಲೋವರ್ಸ್ ಆಗಿದ್ದಾರೆ. ಈ ಬೆನ್ನಲ್ಲೇ ಕೇಂದ್ರ ಸರ್ಕಾರವು ಗುಪ್ತಚರ ಇಲಾಖೆಯ ಸಲಹೆ ಎಂಬ ನೆಪ ನೀಡಿ ಈ ಖಾತೆಯನ್ನು ಬ್ಯಾನ್ ಮಾಡಿದೆ.

ಈ ಕಾಕ್ರೋಚ್ ಜನತಾ ಪಾರ್ಟಿ ವಿರುದ್ಧ ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿಯೂ ಸಲ್ಲಿಕೆಯಾಗಿದೆ. ಕಾಕ್ರೋಚ್ ಜನತಾ ಪಾರ್ಟಿಗೆ ಸಂಬಂಧಿಸಿದ ವ್ಯಕ್ತಿಗಳ ಚಟುವಟಿಕೆಗಳ ಬಗ್ಗೆ ಕೇಂದ್ರ ತನಿಖಾ ದಳ (ಸಿಬಿಐ) ತನಿಖೆ ನಡೆಸಬೇಕೆಂದು ಈ ಅರ್ಜಿಯಲ್ಲಿ ಕೋರಲಾಗಿದೆ. ಅರ್ಜಿದಾರರ ಪರವಾಗಿ ಹಾಜರಾದ ವಕೀಲ ಎನ್ ಕೆ ಗೋಸ್ವಾಮಿ, ಈ ಸಿಜೆಪಿ ನ್ಯಾಯಾಂಗದ ವರ್ಚಸ್ಸಿಗೆ ಕಳಂಕ ತರುತ್ತಿದೆ ಎಂದು ಹೇಳಿದ್ದಾರೆ.

ಇದಕ್ಕೆ ಪ್ರತಿಕ್ರಿಯಿಸಿದ ಸಿಜೆಐ ಸೂರ್ಯ ಕಾಂತ್, ನ್ಯಾಯಮೂರ್ತಿಗಳಾದ ಜೋಯ್ಮಲ್ಯ ಬಾಗ್ಚಿ ಮತ್ತು ವಿ ಎಂ ಪಾಂಚೋಲಿ ಅವರನ್ನು ಒಳಗೊಂಡ ಪೀಠವು, ಈ ವಿಚಾರವನ್ನು ಅಷ್ಟೊಂದು ಭಾವನಾತ್ಮಕವಾಗಿ ತೆಗೆದುಕೊಳ್ಳಬೇಡಿ. ಅಂತಹ ಗಂಭೀರ ತುರ್ತು ಏನಿಲ್ಲ. ನಾವು ನೋಡುತ್ತೇವೆ ಎಂದು ಅರ್ಜಿದಾರರಿಗೆ ತಿಳಿಸಿದೆ.

## ಪ.ಬಂಗಾಳದ ಫಾಲ್ಟಾ ಮರುಚುನಾವಣೆ: ಅಚ್ಚರಿಯ ಫಲಿತಾಂಶ

**ಕೋಲ್ಕತ್ತಾ, ಮೇ 25:** ಪಶ್ಚಿಮ ಬಂಗಾಳದ ಫಾಲ್ಟಾ ವಿಧಾನಸಭಾ ಕ್ಷೇತ್ರದ ಮರುಚುನಾವಣೆಯ ಫಲಿತಾಂಶ ಭಾನುವಾರ ಹೊರಬಿದ್ದಿದೆ. ಬಿಜೆಪಿ ಅಭ್ಯರ್ಥಿ ದೇಬಾಂಗ್ಶು ಪಾಂಡಾ 1,09,021 ಮತಗಳ ಬೃಹತ್ ಅಂತರದಿಂದ ಐತಿಹಾಸಿಕ ಜಯ ಸಾಧಿಸಿದ್ದಾರೆ.

ರಾಜಕೀಯ ವಲಯದಲ್ಲೇ ಅತ್ಯಂತ ವಿಚಿತ್ರ, ಅಚ್ಚರಿಯ ಫಲಿತಾಂಶ ಇದಾಗಿದೆ. ಅದಕ್ಕೆ ಮುಖ್ಯ ಕಾರಣ ಟಿಎಂಸಿ ಭದ್ರಕೋಟೆಯಾಗಿದ್ದ ಈ ಕ್ಷೇತ್ರದಲ್ಲಿ ಟಿಎಂಸಿಯೇ ತೀವ್ರ ಹಿನ್ನಡೆ ಅನುಭವಿಸಿರುವುದು. ತೃಣಮೂಲ ಕಾಂಗ್ರೆಸ್ನ ಪ್ರಭಾವಿ ನಾಯಕ ಅಭಿಷೇಕ್ ಬ್ಯಾನರ್ಜಿ ಅವರ ಡೈಮಂಡ್ ಹಾರ್ಬರ್ ಲೋಕಸಭಾ ವ್ಯಾಪ್ತಿಗೆ ಬರುವ ಈ ಕ್ಷೇತ್ರವು ಟಿಎಂಸಿಯ ಭದ್ರಕೋಟೆಯಾಗಿತ್ತು. ಆದರೆ ಈ ಕ್ಷೇತ್ರದಲ್ಲಿ ಟಿಎಂಸಿ ಅಭ್ಯರ್ಥಿ ಜಹಾಂಗೀರ್ ಖಾನ್ ಕೇವಲ 7,783 ಮತಗಳನ್ನು ಪಡೆದು ನಾಲ್ಕನೇ ಸ್ಥಾನದಲ್ಲಿರುವುದು ಅಚ್ಚರಿ ಮೂಡಿಸಿದೆ. ಪಶ್ಚಿಮ ಬಂಗಾಳದಲ್ಲಿ ಎರಡು ಹಂತಗಳಲ್ಲಿ ವಿಧಾನಸಭೆ ಚುನಾವಣೆ ನಡೆದಿದೆ. ಏಪ್ರಿಲ್ 23ರಂದು ಮೊದಲ ಹಂತ, ಏಪ್ರಿಲ್ 29ರಂದು ಎರಡನೇ ಹಂತದ ಮತದಾನ ನಡೆದಿದೆ. ಎರಡನೇ ಹಂತದಲ್ಲಿ ಫಾಲ್ಟಾ ಕ್ಷೇತ್ರದಲ್ಲಿಯೂ ಮತದಾನ ನಡೆದಿದೆ. ಆದರೆ ಚುನಾವಣೆಯ ಸಂದರ್ಭದಲ್ಲಿ ಈ ಕ್ಷೇತ್ರದಲ್ಲಿ ವ್ಯಾಪಕ ಅಕ್ರಮಗಳು ನಡೆದ ಆರೋಪಗಳು ಕೇಳಿಬಂದಿದ್ದವು. ಇವಿಎಂ ಯಂತ್ರಗಳ ಮೇಲೆ ಬಿಜೆಪಿ ಚಿಹ್ನೆಗೆ ಟೇಪ್ ಅಂಟಿಸಿದ್ದು ಹಾಗೂ ಮತದಾರರಿಗೆ ಬೆದರಿಕೆ ಹಾಕಿದ ದೂರುಗಳು ಬಂದಿದ್ದವು. ಈ ಹಿನ್ನೆಲೆಯಲ್ಲಿ ಚುನಾವಣಾ ಆಯೋಗವು ಹಳೆಯ ಮತದಾನ ರದ್ದುಪಡಿಸಿ, ಮೇ 21ರಂದು ಕ್ಷೇತ್ರದ ಎಲ್ಲ 285 ಮತಗಟ್ಟೆಗಳಲ್ಲೂ ಕಠಿಣ ಭದ್ರತೆಯೊಂದಿಗೆ ಮರುಮತದಾನ ನಡೆಸಿತ್ತು. ಅದರ ಫಲಿತಾಂಶವು ಮೇ 24ರಂದು ಹೊರಬಿದ್ದಿದೆ.




ಇನ್ನು ಮರುಮತದಾನಕ್ಕೆ ಕೆಲವೇ ದಿನಗಳು ಇರುವಾಗ ಈ ಕ್ಷೇತ್ರದಲ್ಲಿ ಹೈಡ್ರಾಮಾ ನಡೆದಿದೆ. ಟಿಎಂಸಿ ಅಭ್ಯರ್ಥಿ ಜಹಾಂಗೀರ್ ಖಾನ್ ಚುನಾವಣಾ ಕಣದಿಂದ ನಿಗೂಢವಾಗಿ ಹಿಂದೆ ಸರಿದಿದ್ದರು. ಮುಖ್ಯಮಂತ್ರಿ ಸುವೇಂದು ಅಧಿಕಾರಿ ಫಾಲ್ಟಾ ಪ್ರದೇಶದ ಅಭಿವೃದ್ಧಿಗೆ ವಿಶೇಷ ಪ್ಯಾಕೇಜ್ ನೀಡುವುದಾಗಿ ಭರವಸೆ ನೀಡಿರುವ ಕಾರಣ ತಾನು ಈ ಚುನಾವಣೆಯಿಂದ ಹಿಂದೆ ಸರಿಯುವುದಾಗಿ ಘೋಷಿಸಿಕೊಂಡಿದ್ದರು. ಆದರೆ ಟಿಎಂಸಿ ಇದು ಪಕ್ಷದ ನಿರ್ಧಾರವಲ್ಲ, ಖಾನ್ನ ವೈಯಕ್ತಿಕ ನಿರ್ಧಾರ ಎಂದು ಸ್ಪಷ್ಟಪಡಿಸಿತ್ತು.

ಆದರೆ ನಾಮಪತ್ರ ಹಿಂಪಡೆಯುವ ಅವಧಿ ಮುಗಿದಿದ್ದರಿಂದ ಖಾನ್ ಅಧಿಕೃತವಾಗಿ ಹಿಂದೆ ಕಣದಿಂದ ಸರಿಯುವಂತಿರಲಿಲ್ಲ. ಮರು ಮತದಾನದ ಸಮಯದಲ್ಲಿ ಕ್ಷೇತ್ರದಲ್ಲಿ ಖಾನ್ ನೇತೃತ್ವದಲ್ಲಿ ಟಿಎಂಸಿ ಪ್ರಚಾರವೂ ಅಷ್ಟಾಗಿ ಕಂಡುಬಂದಿರಲಿಲ್ಲ. ಖಾನ್ ಕೂಡಾ ಕಂಡು ಬಂದಿರಲಿಲ್ಲ. ಮತದಾನದ ದಿನದಂದು, ಅವರ ಮನೆಯೂ ಬಂದ್ ಆಗಿತ್ತು. ಇವಿಎಂ ಬ್ಯಾಲೆಟ್ನಲ್ಲಿ ಖಾನ್ ಹೆಸರಿತ್ತು. ಆದರೆ ಟಿಎಂಸಿ ಭದ್ರಕೋಟೆಯಲ್ಲಿ ಟಿಎಂಸಿ ಅಭ್ಯರ್ಥಿ ಖಾನ್‌ಗೆ ಸಿಕ್ಕಿದ್ದು ಅತ್ಯಲ್ಪ ಮತ. ಈ ವಿಚಿತ್ರ ರಾಜಕೀಯ ಪರಿಸ್ಥಿತಿಯಲ್ಲಿ ಸಿಪಿಐ(ಎಂ) ಅಭ್ಯರ್ಥಿ ಶಂಭುನಾಥ್ ಕುರ್ಮಿ 40,645 ಮತಗಳನ್ನು ಪಡೆದು ಎರಡನೇ ಸ್ಥಾನ ಗಳಿಸಿದರೆ, ಕಾಂಗ್ರೆಸ್ ಅಭ್ಯರ್ಥಿ ಅಬ್ದುರ್ ರಝಾಕ್ ಮೊಲ್ಲಾ 10,000ಕ್ಕೂ ಹೆಚ್ಚು ಮತಗಳನ್ನು ಮೂರನೇ ಸ್ಥಾನ ಪಡೆದಿದ್ದಾರೆ. ಟಿಎಂಸಿಯ ಜಹಾಂಗೀರ್ ಖಾನ್ ಕೇವಲ 7,783 ಮತಗಳನ್ನು ಪಡೆದು ನಾಲ್ಕನೇ ಸ್ಥಾನ ಪಡೆದಿದ್ದಾರೆ.

## ರಣವೀರ್‌ಗೆ ನಿಷೇಧ ಹೇರಿದ ಫಿಲಂ ವರ್ಕರ್ಸ್ ಫೆಡರೇಷನ್

**ನವದೆಹಲಿ, ಮೇ 25:** ಫರ್ಹಾನ್ ಅಖ್ತರ್ ನಿರ್ದೇಶನದ ಡಾನ್ 3 ಚಿತ್ರದಿಂದ ಹಠಾತ್ ನಿರ್ಗಮನದ ಹಿನ್ನೆಲೆಯಲ್ಲಿ ನಟ ರಣವೀರ್ ಸಿಂಗ್ ಅವರಿಗೆ ವೆಸ್ಟರ್ನ್ ಇಂಡಿಯಾ ಸಿನಿ ಎಂಪ್ಲಾಯೀಸ್ ಫೆಡರೇಷನ್ ನಿಷೇಧ ಹೇರಿದೆ. ಸುದ್ದಿಗೋಷ್ಠಿ ನಡೆಸಿ ಫೆಡರೇಷನ್ ತನ್ನ ಅಂತಿಮ ನಿರ್ಧಾರವನ್ನು ಘೋಷಿಸಿದೆ.



ಫೆಡರೇಷನ್ ರಣವೀರ್ ಸಿಂಗ್ ಜೊತೆಗೆ ಯಾರೂ ಕೆಲಸ ಮಾಡಬಾರದು ಎಂಬ ಕಟ್ಟುನಿಟ್ಟಿನ ನಿರ್ದೇಶನ ಹೊರಡಿಸಿದೆ. ನಿರ್ಮಾಪಕರು 45 ಕೋಟಿ ರೂ. ನಷ್ಟದ ಪರಿಹಾರವನ್ನು ರಣವೀರ್ ಅವರಿಂದ ಬೇಡುತ್ತಿದ್ದಾರೆ. ಈ ವಿವಾದ ಇನ್ನೂ ಇತ್ಯರ್ಥವಾಗದಿದ್ದರೆ ನಿಷೇಧ ಮುಂದುವರಿಯಲಿದೆ ಎಂದು ಫೆಡರೇಷನ್ ಸ್ಪಷ್ಟಪಡಿಸಿದೆ.

ಸಿನಿಮಾ ಉದ್ಯಮವು ಒಂದು ದೊಡ್ಡ ಕುಟುಂಬದಂತೆ ಕಾರ್ಯನಿರ್ವಹಿಸುತ್ತದೆ. ಎಲ್ಲಾ ಕಲಾವಿದರು, ತಂತ್ರಜ್ಞರು ಮತ್ತು ಕಾರ್ಮಿಕರು ಒಟ್ಟಾಗಿ ಕೆಲಸ ಮಾಡುತ್ತಾರೆ. ಹಿರಿಯ ನಟರು ಕೊನೆಯ ಕ್ಷಣದಲ್ಲಿ ಕೈಕೊಡುವುದು ಉದ್ಯಮದ ಸ್ಥಿರತೆಗೆ ದೊಡ್ಡ ಬೆದರಿಕೆಯಾಗಿದೆ ಎಂದು ಫೆಡರೇಷನ್ ತೀವ್ರವಾಗಿ ಖಂಡಿಸಿದೆ. ಫೆಡರೇಷನ್ ಮುಖ್ಯ ಸಲಹೆಗಾರ ಅಶೋಕ್ ಪಾಂಡೆ ಅವರು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿದ್ದು, ಉದ್ಯಮದ ಹಿತದೃಷ್ಟಿಯಿಂದ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಹೇಳಿದ್ದಾರೆ.

ಎಕ್ಸಲ್ ಎಂಟರ್‌ಟೈನ್ಮೆಂಟ್ ನಿರ್ಮಾಣ ಸಂಸ್ಥೆಯು ಏಪ್ರಿಲ್‌ನಲ್ಲಿ ದೂರು ದಾಖಲಿಸಿದ್ದು, ರಣವೀರ್ ಸಿಂಗ್ ಅವರು ಮೂರು ಚಿತ್ರಗಳ ಒಪ್ಪಂದಕ್ಕೆ ಸಹಿ ಹಾಕಿದ್ದರೂ ಕೊನೆಯ ಕ್ಷಣದಲ್ಲಿ (ಶೂಟಿಂಗ್ ಆರಂಭಕ್ಕೆ ಕೆಲವು ದಿನಗಳ ಮುಂಚೆ) ಹೊರಬಂದಿದ್ದಾರೆ ಎಂದು ಆರೋಪಿಸಿದೆ. ಚಿತ್ರ ನಿರ್ಮಾಣಕ್ಕೆ ಭಾರಿ ವೆಚ್ಚವಾಗಿದೆ ಎಂದು ನಿರ್ಮಾಪಕರು ಹೇಳುತ್ತಿದ್ದಾರೆ. ಈ ವಿಷಯವು ಮೊದಲು ಭಾರತೀಯ ನಿರ್ಮಾಪಕರ ಸಂಘಕ್ಕೆ ತಲುಪಿದ್ದು, ಮಧ್ಯಸ್ಥಿಕೆ ವಿಫಲವಾಗಿತ್ತು.

## 12 ವರ್ಷದ ಬಾಲಕಿ ಮೇಲೆ ಅತ್ಯಾಚಾರ ಜಮ್ಮು–ಕಾಶ್ಮೀರದಲ್ಲಿ ಜನಾಕ್ರೋಶ

**ಶ್ರೀನಗರ, ಮೇ 25:** ಜಮ್ಮು ಮತ್ತು ಕಾಶ್ಮೀರದ ಬುದ್ಗಾಮ್ ಜಿಲ್ಲೆಯಲ್ಲಿ ಭಾನುವಾರು 12 ವರ್ಷದ ಬಾಲಕಿಯೊಬ್ಬಳನ್ನು ಅತ್ಯಾಚಾರ ಮಾಡಿ ಭೀಕರವಾಗಿ ಕೊಲೆ ಮಾಡಿರುವ ಘಟನೆ ಬೆಳಕಿಗೆ ಬಂದಿದ್ದು, ಇಡೀ ಕಣಿವೆ ರಾಜ್ಯವನ್ನು ತಲ್ಲಣಗೊಳಿಸಿದೆ.

ಬಾಲಕಿಯ ಮೃತದೇಹ ಆಕೆಯ ಮನೆಯಿಂದ ಕೇವಲ 200 ಮೀಟರ್ ದೂರದಲ್ಲಿ ಪತ್ತೆಯಾಗಿದ್ದು, ಕೃತ್ಯದ ವಿರುದ್ಧ ಸಾರ್ವಜನಿಕ ವಲಯದಲ್ಲಿ ತೀವ್ರ ಆಕ್ರೋಶ ವ್ಯಕ್ತವಾಗಿದೆ. ಅಪರಾಧಿಗಳನ್ನು ತಕ್ಷಣವೇ ಬಂಧಿಸಿ ಕಠಿಣ ಶಿಕ್ಷೆ ವಿಧಿಸಬೇಕೆಂದು ಆಗ್ರಹಿಸಿ ಸ್ಥಳೀಯರು ಬೃಹತ್ ಪ್ರತಿಭಟನೆ ನಡೆಸುತ್ತಿದ್ದಾರೆ. ವರದಿಗಳ ಪ್ರಕಾರ, ಬುದ್ಗಾಮ್ ಜಿಲ್ಲೆಯ ಗಲ್ವಾನ್ಪೋರಾ ಗ್ರಾಮದ ಈ ಬಾಲಕಿಯು ಶನಿವಾರ ಸಂಜೆ ಧಾರ್ಮಿಕ ತರಗತಿಗೆ ಹೋಗಲೆಂದು ಸಂಜೆ 4 ಗಂಟೆಗೆ ಮನೆಯಿಂದ ಹೊರಟಿದ್ದಳು.

ಆದರೆ, ತರಗತಿ ಮುಗಿದರೂ ಆಕೆ ಮನೆಗೆ ಮರಳದೆ ನಾಪತ್ತೆಯಾಗಿದ್ದಳು. ಭಾನುವಾರ ಮುಂಜಾನೆ ಗ್ರಾಮದ ಹತ್ತಿರದ ಜಮೀನಿನಲ್ಲಿ ಆಕೆಯ ಮೃತದೇಹ ಪತ್ತೆಯಾಗಿದೆ. ಬಾಲಕಿಯು ತನ್ನೊಂದಿಗೆ ಕೊಂಡೊಯ್ದಿದ್ದ ಪವಿತ್ರ ಕುರಾನ್ ಗ್ರಂಥವೂ ಮೃತದೇಹದ ಬಳಿಯೇ ಬಿದ್ದಿರುವುದು ಪತ್ತೆಯಾಗಿದೆ. ಘಟನಾ ಸ್ಥಳಕ್ಕೆ ಧಾವಿಸಿದ ಬುದ್ಗಾಮ್ ಎಸ್‌ಎಸ್ಪಿ ಹರಿಪ್ರಸಾದ್ ಕೆ ಕೆ ಮಾಹಿತಿ ನೀಡಿ, ಮೇಲ್ನೋಟಕ್ಕೆ ಇದು ಅತ್ಯಾಚಾರ ಮತ್ತು ಕೊಲೆಯ ಪ್ರಕರಣ ಎಂದು ಕಂಡುಬಂದಿದೆ. ಎಲ್ಲಾ ವೈದ್ಯಕೀಯ ಮತ್ತು ಕಾನೂನು ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲಾಗಿದೆ. ಪ್ರಕರಣದ ನಿಷ್ಪಕ್ಷಪಾತ, ಪಾರದರ್ಶಕ ತನಿಖೆಗಾಗಿ ವಿಶೇಷ ತನಿಖಾ ತಂಡ ರಚಿಸಲಾಗಿದೆ ಎಂದು ತಿಳಿಸಿದ್ದಾರೆ. ತನಿಖೆಗೆ ಅಡ್ಡಿಯಾಗುವ ಹಾಗೂ ಜನರಲ್ಲಿ ಗೊಂದಲ ಮೂಡಿಸುವ ಅಥವಾ ವದಂತಿಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹರಡಬಾರದು ಎಂದು ಪೊಲೀಸರು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

ಘಟನೆಯನ್ನು ಜಮ್ಮು–ಕಾಶ್ಮೀರದ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ತೀವ್ರವಾಗಿ ಖಂಡಿಸಿದ್ದಾರೆ. ಬಾಲಕಿಯ ಮರಣಕ್ಕೆ ತೀವ್ರ ಸಂತಾಪ ಸೂಚಿಸಿರುವ ಅವರು, ಈ ಘಟನೆಯು ಅತ್ಯಂತ ಆಘಾತಕಾರಿ ಮತ್ತು ತೀವ್ರ ಬೇಸರ ತರಿಸಿದೆ. ನಮ್ಮ ಸಣ್ಣ ಮಕ್ಕಳಿಗೆ ರಕ್ಷಣೆ ಇಲ್ಲದಂತಾಗಿರುವಾಗ ನಾವು ಸಮಾಜವಾಗಿ ಎತ್ತ ಸಾಗುತ್ತಿದ್ದೇವೆ ಎಂಬುದನ್ನು ನಾವೆಲ್ಲರೂ ಗಂಭೀರವಾಗಿ ಆತ್ಮಾವಲೋಕನ ಮಾಡಿಕೊಳ್ಳಬೇಕಾದ ಕ್ಷಣ ಇದಾಗಿದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ. ತನಿಖಾ ಸಂಸ್ಥೆಗಳಿಗೆ ಸರ್ಕಾರದಿಂದ ಸಂಪೂರ್ಣ ಬೆಂಬಲ ನೀಡಲಾಗುವುದು ಮತ್ತು ತಪ್ಪಿತಸ್ಥರಿಗೆ ಕಾನೂನಿನಡಿಯಲ್ಲಿ ಮಾದರಿ ಶಿಕ್ಷೆಯಾಗುವಂತೆ ನೋಡಿಕೊಳ್ಳಲಾಗುವುದು ಎಂದು ಸಿಎಂ ಭರವಸೆ ನೀಡಿದ್ದಾರೆ.

## ಚುನಾವಣಾ ಅಕ್ರಮದ ಮೂಲಕ 150 ಸ್ಥಾನ ಕದ್ದಿರುವ ಬಿಜೆಪಿ: ಮಮತಾ

**ಕೋಲ್ಕತ್ತಾ, ಮೇ 25:** ಏಪ್ರಿಲ್‌ನಲ್ಲಿ ನಡೆದ ಪಶ್ಚಿಮ ಬಂಗಾಳ ಚುನಾವಣೆಯಲ್ಲಿ ಬಿಜೆಪಿ ಚುನಾವಣಾ ಅಕ್ರಮಗಳನ್ನು ನಡೆಸಿದೆ. ಪ್ರಜಾಪ್ರಭುತ್ವದ ನಿಯಮಗಳನ್ನು ಗಾಳಿಗೆ ತೂರಿ, ಅಕ್ರಮ ಎಸಗಿ ಟಿಎಂಸಿಯ ಬರೋಬ್ಬರಿ 150 ವಿಧಾನಸಭಾ ಸ್ಥಾನಗಳನ್ನು ಬಿಜೆಪಿ ಕದ್ದಿದೆ ಎಂದು ಮಾಜಿ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಆರೋಪಿಸಿದ್ದಾರೆ. ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.



ತಮ್ಮ ರಾಜಕೀಯ ರ್‍ಯಾಲಿಯಲ್ಲಿ ಬಿಜೆಪಿ ವಿರುದ್ಧ ಗಂಭೀರ ಆರೋಪಗಳನ್ನು ಮಾಡಿರುವ ಮಮತಾ, ಬಿಜೆಪಿ ಕೇಂದ್ರ ಸರ್ಕಾರದ ಅಧಿಕಾರ, ಕೇಂದ್ರದಲ್ಲಿರುವ ಸೌಲಭ್ಯಗಳು ಹಾಗೂ ವಿವಿಧ ವ್ಯವಸ್ಥೆಗಳನ್ನು ದುರುಪಯೋಗಪಡಿಸಿಕೊಂಡು ಚುನಾವಣಾ ಪ್ರಕ್ರಿಯೆಯಲ್ಲಿ ಭಾರೀ ಅಕ್ರಮಗಳನ್ನು ಎಸಗಿದೆ ಎಂದು ದೂರಿದ್ದಾರೆ. ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರವು ತನಿಖಾ ಸಂಸ್ಥೆಗಳನ್ನು ಮತ್ತು ಚುನಾವಣಾ ವ್ಯವಸ್ಥೆಯನ್ನು ತನ್ನ ರಾಜಕೀಯ ಲಾಭಕ್ಕಾಗಿ ಬಳಸಿಕೊಳ್ಳುತ್ತಿದೆ. ಬಂಗಾಳದಾದ್ಯಂತ ಟಿಎಂಸಿಗೆ ಜನಬೆಂಬಲ ಪ್ರಬಲವಾಗಿದ್ದರೂ, ಅನೇಕ ಕ್ಷೇತ್ರಗಳಲ್ಲಿ ಕೇಂದ್ರ ಪಡೆಗಳ ಅತಿಯಾದ ಹಸ್ತಕ್ಷೇಪ ಮತ್ತು ಮತಗಟ್ಟೆಗಳ ಮಟ್ಟದಲ್ಲಿ ನಡೆದ ವ್ಯವಸ್ಥಿತ ಅಕ್ರಮಗಳಿಂದಾಗಿ ಟಿಎಂಸಿ ಗೆಲ್ಲಬೇಕಾಗಿದ್ದ ಕನಿಷ್ಠ 150 ಸ್ಥಾನಗಳ ಫಲಿತಾಂಶವನ್ನು ಬದಲಾಯಿಸಲಾಗಿದೆ. ಬಂಗಾಳದ ಜನತೆ ನಮಗೆ ನೀಡಿದ ಸ್ಪಷ್ಟ ಜನಾದೇಶವನ್ನು ಕಸಿದುಕೊಳ್ಳಲು ದೆಹಲಿಯ ನಾಯಕರು ಸಂಚು ರೂಪಿಸಿದ್ದರು ಎಂದು ಆರೋಪಿಸಿದ್ದಾರೆ.

ಬಿಜೆಪಿಯ ಈ ಮತಗಳ ಕಳ್ಳತನ ಮತ್ತು ರಾಜಕೀಯ ತಂತ್ರಗಾರಿಕೆಗೆ ಬಂಗಾಳದ ಹೆಮ್ಮೆಯ ಜನತೆ ಎಂದಿಗೂ ಮಣಿಯುವುದಿಲ್ಲ. ಕೇಂದ್ರ ಸರ್ಕಾರವು ಎಷ್ಟೇ ದಬ್ಬಾಳಿಕೆ ನಡೆಸಿದರೂ ಅಥವಾ ತಮ್ಮ ಪಕ್ಷದ ನಾಯಕರನ್ನು ಗುರಿಯಾಗಿಸಿಕೊಂಡು ಕೇಂದ್ರ ತನಿಖಾ ಸಂಸ್ಥೆಗಳ ಮೂಲಕ ದಾಳಿ ಮಾಡಿಸಿದರೂ, ನಾವು ಯಾವುದೇ ಕಾರಣಕ್ಕೂ ಇಂತಹ ಬೆದರಿಕೆಗಳಿಗೆ ಹೆದರುವುದಿಲ್ಲ ಎಂದಿದ್ದಾರೆ.

ತಮ್ಮ ರಾಜ್ಯದ ಹಕ್ಕುಗಳಿಗಾಗಿ ಮತ್ತು ಜನರ ಸ್ವಾಭಿಮಾನಕ್ಕಾಗಿ ತಾವು ನಡೆಸುತ್ತಿರುವ ಹೋರಾಟ ಮತ್ತಷ್ಟು ತೀವ್ರಗೊಳ್ಳಲಿದ್ದು, ಬಿಜೆಪಿಯ ಇಂತಹ ಜನ ವಿರೋಧಿ ಧೋರಣೆಗಳನ್ನು ಜನರ ನ್ಯಾಯಾಲಯದಲ್ಲೇ ಬಲವಾಗಿ ಎದುರಿಸುವುದಾಗಿ ಸವಾಲು ಹಾಕಿದ್ದಾರೆ.

## ನಟ ಧರ್ಮೇಂದ್ರಗೆ ಮರಣೋತ್ತರ ಪದ್ಮವಿಭೂಷಣ ಭಾವುಕರಾಗಿ ಪ್ರಶಸ್ತಿ ಸ್ವೀಕರಿಸಿದ ಪತ್ನಿ ಹೇಮಾಮಾಲಿನಿ

**ನವದೆಹಲಿ, ಮೇ 25:** ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಸೋಮವಾರ ನವದೆಹಲಿಯ ರಾಷ್ಟ್ರಪತಿ ಭವನದಲ್ಲಿ ನಡೆದ ಸಮಾರಂಭದಲ್ಲಿ 2026ನೇ ಸಾಲಿನ ಪ್ರತಿಷ್ಠಿತ 'ಪದ್ಮ' ಪ್ರಶಸ್ತಿಗಳನ್ನು ಪ್ರದಾನ ಮಾಡಿದರು. ಈ ಭವ್ಯ ಸಮಾರಂಭದಲ್ಲಿ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

2025ರ ನವೆಂಬರ್‌ನಲ್ಲಿ ನಿಧನರಾದ ಬಾಲಿವುಡ್‌ನ ದಂತಕಥೆ, ನಟ ಧರ್ಮೇಂದ್ರ ಅವರಿಗೆ ದೇಶದ ಎರಡನೇ ಅತ್ಯುನ್ನತ ನಾಗರಿಕ ಪ್ರಶಸ್ತಿಯಾದ 'ಪದ್ಮವಿಭೂಷಣ'ವನ್ನು ಮರಣೋತ್ತರವಾಗಿ ಪ್ರದಾನ ಮಾಡಲಾಯಿತು. ಅವರ ಪರವಾಗಿ ಪ್ರಶಸ್ತಿ ಸ್ವೀಕರಿಸಿದ ಪತ್ನಿ, ನಟಿ ಹಾಗೂ ರಾಜಕಾರಣಿ ಹೇಮಾಮಾಲಿನಿ ಅವರು ತೀವ್ರ ಭಾವುಕರಾದರು. ಇದಕ್ಕೂ ಮುನ್ನ, ಧರ್ಮೇಂದ್ರ ಅವರಿಗೆ 2012ರಲ್ಲಿ 'ಪದ್ಮಭೂಷಣ' ಪ್ರಶಸ್ತಿ ನೀಡಿ ಗೌರವಿಸಲಾಗಿತ್ತು. ಪಿಟೀಲು ವಾದಕಿ ಎನ್.ರಾಜಂ ಅವರಿಗೂ ಪದ್ಮವಿಭೂಷಣ ಗೌರವ ಸಮರ್ಪಿಸಲಾಯಿತು. ಮಹಾರಾಷ್ಟ್ರದ ಮಾಜಿ ರಾಜ್ಯಪಾಲ ಭಗತ್‌ಸಿಂಗ್ ಕೋಶ್ಯಾರಿ ಮತ್ತು ಪ್ರಮುಖ ಬ್ಯಾಂಕರ್ ಉದಯ್ ಕೋಟಕ್ ಅವರಿಗೆ ಪದ್ಮಭೂಷಣ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಭಾರತೀಯ ಮಹಿಳಾ ಕ್ರಿಕೆಟ್ ತಂಡದ ನಾಯಕಿ ಹರ್ಮನ್‌ಪ್ರೀತ್ ಕೌರ್ ಅವರಿಗೆ ಪದ್ಮಶ್ರೀ ಪ್ರಶಸ್ತಿ ಪ್ರದಾನ ಮಾಡಲಾಯಿತು. ಭಾರತೀಯ ಚಿತ್ರರಂಗಕ್ಕೆ, ವಿಶೇಷವಾಗಿ ಬೆಂಗಾಲಿ ಸಿನಿಮಾಗಳಿಗೆ ನೀಡಿದ ಅಪಾರ ಕೊಡುಗೆಗಾಗಿ ಖ್ಯಾತ ನಟ ಪ್ರೊಸೆಂಜಿತ್ ಚಟರ್ಜಿ ಅವರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಪದ್ಮಶ್ರೀ ಪ್ರಶಸ್ತಿ ನೀಡಿ ಗೌರವಿಸಿದರು. ಈ ವಿಶೇಷ ಸಂದರ್ಭಕ್ಕಾಗಿ ಪ್ರಸೇನಜಿತ್ ಚಟರ್ಜಿ ಅವರು ಸಾಂಪ್ರದಾಯಿಕ ಶೈಲಿಯ ಚಿನ್ನದ ಬಣ್ಣದ ಕುರ್ತಾ ಧರಿಸಿ ಗಮನ ಸೆಳೆದರು.

ಮತ್ತು ಚಿತ್ರರಂಗದ ಕ್ಷೇತ್ರಕ್ಕೆ ನೀಡಿದ ಅಪಾರ ಕೊಡುಗೆಗಾಗಿ ಮಲಯಾಳಂ ಚಿತ್ರರಂಗದ ದಂತಕಥೆ ಮಮ್ಮುಟ್ಟಿ ಹಾಗೂ ಹಿರಿಯ ಹಿನ್ನೆಲೆ ಗಾಯಕಿ ಅಲ್ಕಾ ಯಾಜ್ನಿಕ್ ಸೇರಿದಂತೆ ಹಲವು ಗಣ್ಯರಿಗೆ ಪ್ರತಿಷ್ಠಿತ 'ಪದ್ಮ' ಪ್ರಶಸ್ತಿ ಸಿಕ್ಕಿದೆ. ಖ್ಯಾತ ನಟ ಮಮ್ಮುಟ್ಟಿ, ಗಾಯಕಿ ಅಲ್ಕಾ ಯಾಗ್ನಿಕ್ ಮತ್ತು ಜಾಹೀರಾತು ಕ್ಷೇತ್ರದ ದಿಗ್ಗಜ ಪಿಯೂಷ್ ಪಾಂಡೆ (ಮರಣೋತ್ತರ) ಅವರಿಗೆ ದೇಶದ ಮೂರನೇ ಅತ್ಯುನ್ನತ ನಾಗರಿಕ ಪ್ರಶಸ್ತಿಯಾದ 'ಪದ್ಮಭೂಷಣ' ಒಲಿದಿದೆ. ಆದರೆ, ಅನಿವಾರ್ಯ ಕಾರಣಗಳಿಂದಾಗಿ ಮಮ್ಮುಟ್ಟಿ ಹಾಗೂ ಅಲ್ಕಾ ಯಾಜ್ನಿಕ್ ಅವರು ಈ ಪ್ರಶಸ್ತಿ ಪ್ರದಾನ ಸಮಾರಂಭಕ್ಕೆ ಗೈರುಹಾಜರಾಗಿದ್ದರು. ಮರಣೋತ್ತರ ಪ್ರಶಸ್ತಿ ಪಡೆದ ಪಿಯೂಷ್ ಪಾಂಡೆ ಅವರ ಪರವಾಗಿ ಅವರ ಪತ್ನಿ ನೀತಾ ಪಾಂಡೆ ಅವರು ರಾಷ್ಟ್ರಪತಿಗಳಿಂದ ಪ್ರಶಸ್ತಿಯನ್ನು ಸ್ವೀಕರಿಸಿದರು.

ವಿಭಾಗದಲ್ಲಿ ಭಾರತೀಯ ಚಿತ್ರರಂಗದ ಪ್ರಮುಖ ನಟರುಗಳಾದ ಆರ್. ಮಾಧವನ್, ಪ್ರಸೇನಜಿತ್ ಚಟರ್ಜಿ, ಸತೀಶ್ ಶಾ, ಮುರಳಿ ಮೋಹನ್ ಮತ್ತು ರಾಜೇಂದ್ರ ಪ್ರಸಾದ್ ಅವರಿಗೆ 'ಪದ್ಮಶ್ರೀ' ಪ್ರಶಸ್ತಿ ಪ್ರದಾನ ಮಾಡಲಾಯಿತು. ಈ ಸಮಾರಂಭದಲ್ಲಿ ನಟ ಪ್ರಸೇನಜಿತ್ ಚಟರ್ಜಿ ಅವರು ಖುದ್ದಾಗಿ ಉಪಸ್ಥಿತರಿದ್ದು ಪ್ರಶಸ್ತಿ ಸ್ವೀಕರಿಸಿದರೆ, ನಟರಾದ ಆರ್. ಮಾಧವನ್, ಮುರಳಿ ಮೋಹನ್ ಮತ್ತು ರಾಜೇಂದ್ರಪ್ರಸಾದ್ ಅವರು ಕಾರ್ಯಕ್ರಮಕ್ಕೆ ಹಾಜರಾಗಲು ಸಾಧ್ಯವಾಗಲಿಲ್ಲ. ಭಾರತದ ಅತ್ಯುನ್ನತ ನಾಗರಿಕ ಪ್ರಶಸ್ತಿಗಳಲ್ಲಿ ಒಂದಾದ 'ಪದ್ಮ' ಪ್ರಶಸ್ತಿಗಳು ದೇಶದ ವಿವಿಧ ಕ್ಷೇತ್ರಗಳಲ್ಲಿ ಅಪೂರ್ವ ಹಾಗೂ ಅತ್ಯುನ್ನತ ಸೇವೆ ಸಲ್ಲಿಸಿದ ಸಾಧಕರನ್ನು ಗುರುತಿಸಿ ಗೌರವಿಸುವ ಪ್ರತಿಷ್ಠಿತ ಪುರಸ್ಕಾರಗಳಾಗಿವೆ. ಕಲೆ, ಸಮಾಜ ಸೇವೆ, ಸಾರ್ವಜನಿಕ ವ್ಯವಹಾರಗಳು, ವಿಜ್ಞಾನ ಮತ್ತು ಇಂಜಿನಿಯರಿಂಗ್, ವ್ಯಾಪಾರ ಮತ್ತು ಕೈಗಾರಿಕೆ, ವೈದ್ಯಕೀಯ, ಸಾಹಿತ್ಯ ಮತ್ತು ಶಿಕ್ಷಣ, ಕ್ರೀಡೆ ಹಾಗೂ ಸಿವಿಲ್ ಸೇವೆ ಸೇರಿದಂತೆ ವಿವಿಧ ರಂಗಗಳಲ್ಲಿ ಗಣನೀಯ ಕೊಡುಗೆ ನೀಡಿದ ನಾಗರಿಕರಿಗೆ ಪ್ರತಿ ವರ್ಷ ಈ ಪ್ರಶಸ್ತಿಗಳನ್ನು ನೀಡಲಾಗುತ್ತದೆ.

# ಎಸ್‌ಐಆರ್ ಮಹತ್ವದ ಸಭೆಗೆ ಗೈರುಹಾಜರು: ಶಿಸ್ತುಕ್ರಮ

## ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್, ಉಸ್ತುವಾರಿ ರಣದೀಪ್‌ಸಿಂಗ್ ಸುರ್ಜೇವಾಲಾ ಆದೇಶ

**ಬೆಂಗಳೂರು, ಮೇ 25:** ರಾಜ್ಯ ಕಾಂಗ್ರೆಸ್‌ನಲ್ಲಿ ಆಂತರಿಕ ಶಿಸ್ತು ಉಲ್ಲಂಘಿಸುವವರ ವಿರುದ್ಧ ಹೈಕಮಾಂಡ್ ಅತ್ಯಂತ ಕಠಿಣ ನಿಲುವನ್ನು ತಳೆದಿದೆ. ದೇವನಹಳ್ಳಿ ಹೊರವಲಯದ ಖಾಸಗಿ ಹೋಟೆಲ್‌ನಲ್ಲಿ ಹಮ್ಮಿಕೊಳ್ಳಲಾಗಿದ್ದ ಎಸ್‌ಐಆರ್ ಕುರಿತಾದ ಕಾಂಗ್ರೆಸ್ ನಾಯಕರ ಸಭೆಗೆ ಗೈರುಹಾಜರಾದ 100ಕ್ಕೂ ಹೆಚ್ಚು ಪಕ್ಷದ ಉಪಾಧ್ಯಕ್ಷರು ಹಾಗೂ ಪ್ರಧಾನ ಕಾರ್ಯದರ್ಶಿಗಳನ್ನು ತಕ್ಷಣವೇ ಹುದ್ದೆಯಿಂದ ತೆಗೆದುಹಾಕುವಂತೆ ಎಐಸಿಸಿ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಆದೇಶಿಸಿದ್ದಾರೆ.

ಎರಡು ದಿನ ನಡೆದ ಸಭೆಯ ಗಂಭೀರತೆಯನ್ನು ಅರಿಯದ ನಾಯಕರ ವಿರುದ್ಧ ಕೆಪಿಸಿಸಿ ಅಧ್ಯಕ್ಷ ಹಾಗೂ ಡಿಸಿಎಂ ಡಿ.ಕೆ. ಶಿವಕುಮಾರ್ ಮತ್ತು ರಣದೀಪ್ ಸಿಂಗ್ ಸುರ್ಜೇವಾಲ ಅವರು ಜಂಟಿಯಾಗಿ ಶಿಸ್ತುಕ್ರಮದ ಚಾಟಿ ಬೀಸಿದ್ದಾರೆ.

ರಾಜ್ಯದಲ್ಲಿ 'ಎಸ್‌ಐಆರ್' ವಿಷಯಕ್ಕೆ ಸಂಬಂಧಿಸಿದಂತೆ ಭವಿಷ್ಯದ ಕಾರ್ಯತಂತ್ರಗಳನ್ನು ರೂಪಿಸಲು ಕಾಂಗ್ರೆಸ್ ಹಿರಿಯ ನಾಯಕರು ಎರಡು ದಿನ ದೇವನಹಳ್ಳಿಯ ಹೊರವಲಯದಲ್ಲಿರುವ ಖಾಸಗಿ ಹೋಟೆಲ್‌ನಲ್ಲಿ




ಸುದೀರ್ಘ ಸಭೆ ಕರೆದಿದ್ದರು. ಪಕ್ಷದ ಸಂಘಟನೆ ಹಾಗೂ ಸರ್ಕಾರದ ಮಟ್ಟದಲ್ಲಿ ಅತ್ಯಂತ ಮಹತ್ವದ ಪ್ರಕ್ರಿಯೆ ಇದಾಗಿದ್ದರಿಂದ, ಕೆಪಿಸಿಸಿಯ ಎಲ್ಲಾ ಪ್ರಮುಖ ಪದಾಧಿಕಾರಿಗಳು ಈ ಸಭೆಯಲ್ಲಿ ಪಾಲ್ಗೊಳ್ಳುವುದು ಕಡ್ಡಾಯವಾಗಿತ್ತು. ಆದರೆ, ಪಕ್ಷದ ಜವಾಬ್ದಾರಿಯುತ ಸ್ಥಾನಗಳಲ್ಲಿರುವ ನಾಯಕರೇ ಸಭೆಯಿಂದ ದೂರ ಉಳಿದಿರುವುದು ಹೈಕಮಾಂಡ್ ನಾಯಕರ ಕೆಂಗಣ್ಣಿಗೆ ಗುರಿಯಾಗಿದೆ.

ಸಭೆಯ ಉಸ್ತುವಾರಿ ವಹಿಸಿದ್ದ ರಣದೀಪ್ ಸಿಂಗ್ ಸುರ್ಜೇವಾಲ ಅವರು ಪದಾಧಿಕಾರಿಗಳ ಹಾಜರಾತಿಯನ್ನು ಪರಿಶೀಲಿಸಿದಾಗ, 100ಕ್ಕೂ ಹೆಚ್ಚು ಉಪಾಧ್ಯಕ್ಷರು ಮತ್ತು ಪ್ರಧಾನ ಕಾರ್ಯದರ್ಶಿಗಳು ಸಭೆಗೆ ಗೈರುಹಾಜರಾಗಿದ್ದು ಬೆಳಕಿಗೆ ಬಂದಿದೆ. ಇದರಿಂದ ತೀವ್ರ ಆಕ್ರೋಶಗೊಂಡ ಸುರ್ಜೇವಾಲ, ಬೇಜವಾಬ್ದಾರಿತನ ಪ್ರದರ್ಶಿಸಿದ ಎಲ್ಲಾ ನಾಯಕರನ್ನು ಅವರವರ ಹುದ್ದೆಗಳಿಂದ ತಕ್ಷಣವೇ ಮುಕ್ತಗೊಳಿಸುವಂತೆ (ಕೋಕ್ ನೀಡುವಂತೆ) ಕೆಪಿಸಿಸಿ ಅಧ್ಯಕ್ಷ ಡಿ. ಕೆ.ಶಿವಕುಮಾರ್‌ಗೆ ಸೂಚನೆ ನೀಡಿದ್ದಾರೆ.

ಸಭೆಯಲ್ಲೇ ಬಹಿರಂಗವಾಗಿ ಅಸಮಾಧಾನ ಹೊರಹಾಕಿದ ರಣದೀಪ್ ಸಿಂಗ್ ಸುರ್ಜೇವಾಲ ಅವರು, "ಪಕ್ಷದ ಪದಾಧಿಕಾರಿಗಳಿಗೆ ಇಷ್ಟೊಂದು ಪ್ರಮುಖವಾದ ಎಸ್‌ಐಆರ್ ಸಭೆಯ ಗಂಭೀರತೆಯೇ ಅರ್ಥವಾಗಿಲ್ಲ ಎಂದರೆ, ಇನ್ನು ನೀವು ಪಕ್ಷಕ್ಕಾಗಿ ಕ್ಲಿಷ್ಟಕರ ಸಮಯದಲ್ಲಿ ಏನು ಕೆಲಸ ಮಾಡಲು ಸಾಧ್ಯ" ಎಂದು ತರಾಟೆಗೆ ತೆಗೆದುಕೊಂಡಿದ್ದಾರೆ. ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರದಲ್ಲಿದ್ದರೂ ಪಕ್ಷದ ಆಂತರಿಕ ಸಭೆಗಳನ್ನು ಹಗುರವಾಗಿ ಪರಿಗಣಿಸುವ ನಾಯಕರಿಗೆ ಈ ಮೂಲಕ ಹೈಕಮಾಂಡ್ ನೇರ ಎಚ್ಚರಿಕೆಯ ಸಂದೇಶ ರವಾನಿಸಿದೆ. ಡಿ.ಕೆ. ಶಿವಕುಮಾರ್ ಮತ್ತು ಸುರ್ಜೇವಾಲ ಈ ಖಡಕ್ ನಿರ್ಧಾರದಿಂದಾಗಿ ಸದ್ಯ ಕೆಪಿಸಿಸಿ ವಲಯದಲ್ಲಿ ತಲ್ಲಣ ಸೃಷ್ಟಿಯಾಗಿದೆ.

# ಗೃಹಲಕ್ಷ್ಮೀ, ಗೃಹಜ್ಯೋತಿ ಫಲಾನುಭವಿಗಳ ಪಟ್ಟಿ ಪರಿಷ್ಕರಣೆಗೆ ಸರ್ಕಾರ ನಿರ್ಧಾರ

**ಬೆಂಗಳೂರು, ಮೇ 25:** ಕಾಂಗ್ರೆಸ್ ಸರ್ಕಾರದ ಮಹತ್ವಾಕಾಂಕ್ಷೆಯ ಪ್ರಮುಖ ಗ್ಯಾರಂಟಿ ಯೋಜನೆಗಳಾದ ಗೃಹಲಕ್ಷ್ಮಿ ಮತ್ತು ಗೃಹಜ್ಯೋತಿ ಫಲಾನುಭವಿಗಳ ಪಟ್ಟಿಯನ್ನು ಪರಿಷ್ಕರಿಸಲು ರಾಜ್ಯ ಸರ್ಕಾರ ಮಹತ್ವದ ನಿರ್ಧಾರ ಕೈಗೊಂಡಿದೆ.

ಭಾನುವಾರ ನಡೆದ ಎಸ್‌ಐಆರ್ ಸಭೆಯಲ್ಲಿ ಈ ಕುರಿತು ವಿಸ್ತೃತವಾಗಿ ಚರ್ಚಿಸಲಾಗಿದ್ದು, ಫಲಾನುಭವಿಗಳ ಅರ್ಹತೆಯನ್ನು ಸಮಗ್ರವಾಗಿ ಪರಿಶೀಲಿಸಲು ಸರಕಾರ ಮುಂದಾಗಿದೆ. ಸರ್ಕಾರದ ಬೊಕ್ಕಸಕ್ಕೆ ಹೊರೆಯಾಗದಂತೆ, ನಿಜವಾದ ಅರ್ಹ ಬಡ ಜನರಿಗೆ ಮಾತ್ರ ಯೋಜನೆ ತಲುಪಬೇಕು ಎಂಬ ಉದ್ದೇಶದಿಂದ ಈ ನಿರ್ಧಾರಕ್ಕೆ ಬರಲಾಗಿದೆ ಎಂದು ತಿಳಿದುಬಂದಿದೆ.

ಗೃಹಲಕ್ಷ್ಮಿ ಯೋಜನೆ ಅಡಿಯಲ್ಲಿ ಪ್ರತಿ ತಿಂಗಳು 1 ಕೋಟಿ 64 ಲಕ್ಷ ಮಹಿಳೆಯರು 2,000 ರೂ. ಹಣ ಪಡೆಯುತ್ತಿದ್ದಾರೆ. ಗೃಹಜ್ಯೋತಿ ಯೋಜನೆಯಲ್ಲೂ 1 ಕೋಟಿ 67 ಲಕ್ಷ ಫಲಾನುಭವಿಗಳಿದ್ದಾರೆ. ಗೃಹಲಕ್ಷ್ಮಿ ಯೋಜನೆಯಲ್ಲಿ ಅರ್ಹತೆ ಮೀರಿದವರು ಜೊತೆಗೆ ಸತ್ತವರ ಹೆಸರಿನಲ್ಲೂ ಹಣ ಪಡೆಯಲಾಗುತ್ತಿದೆ ಎಂಬ ಮಾಹಿತಿ ಇದೆ. ಗೃಹಜ್ಯೋತಿ ಯೋಜನೆಯಲ್ಲೂ ಬಹುತೇಕ ಅರ್ಹತೆ ಮೀರಿದವರು ಫಲಾನುಭವಿಗಳಾಗುತ್ತಿದ್ದಾರೆ ಎನ್ನುವ ಮಾಹಿತಿ ಇದೆ. ಅದೇ ಕಾರಣಕ್ಕೆ ಎರಡು ಯೋಜನೆಯ ಪರಿಷ್ಕರಣೆಗೆ ಇಂದಿನ ಸಭೆಯಲ್ಲಿ ತೀರ್ಮಾನಿಸಲಾಗಿದೆ. ಯೋಜನೆಯಲ್ಲಿ ಪಾರದರ್ಶಕತೆ ಮತ್ತು ಅರ್ಹ ಫಲಾನುಭವಿಗಳಿಗೆ ಮಾತ್ರ ಸೌಲಭ್ಯ ದೊರೆಯುವಂತೆ ಮಾಡುವುದಾಗಿದೆ. ಗೃಹಲಕ್ಷ್ಮಿ ಯೋಜನೆಯಡಿ ಹಣವು ಮೃತಪಟ್ಟವರ ಹೆಸರಿನಲ್ಲಿಯೂ ಸಂದಾಯವಾಗುತ್ತಿರುವ ಹಲವಾರು ಪ್ರಕರಣಗಳು ವರದಿಯಾಗಿವೆ.

**ತೆರಿಗೆ ಪಾವತಿದಾರರನ್ನು ಯೋಜನೆಯಿಂದ ಹೊರಗಿಡಲು ಚಿಂತನೆ**




ದೊಡ್ಡ ಪ್ರಮಾಣದ ಫಲಾನುಭವಿಗಳ ಪಟ್ಟಿಯಲ್ಲಿ ಹಲವು ತಾಂತ್ರಿಕ ದೋಷಗಳು ಹಾಗೂ ನಿಯಮ ಉಲ್ಲಂಘನೆಗಳು ಪತ್ತೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ಇದು ಸರಕಾರಿ ಹಣದ ದುರುಪಯೋಗಕ್ಕೆ ಕಾರಣವಾಗುತ್ತಿದೆ. ಅಲ್ಲದೆ, ತೆರಿಗೆ ಪಾವತಿಸುವವರು ಕೂಡ ಗೃಹಲಕ್ಷ್ಮಿ ಮತ್ತು ಗೃಹಜ್ಯೋತಿ ಯೋಜನೆಗಳ ಲಾಭ ಪಡೆಯುತ್ತಿರುವುದು ಗಮನಕ್ಕೆ ಬಂದಿದೆ. ಈ ಯೋಜನೆಗಳ ಮುಖ್ಯ ಉದ್ದೇಶ ಆರ್ಥಿಕವಾಗಿ ಹಿಂದುಳಿದವರಿಗೆ ನೆರವು ನೀಡುವುದಾಗಿದ್ದು, ಹೀಗಾಗಿ ತೆರಿಗೆ ಪಾವತಿಸುವವರನ್ನು ಈ ವ್ಯಾಪ್ತಿಯಿಂದ ಹೊರಗಿಡಲು ಚಿಂತನೆ ನಡೆಸಲಾಗಿದೆ. ಇದಲ್ಲದೆ, ಒಂದೇ ಮನೆಯಲ್ಲಿ ಇಬ್ಬಿಬ್ಬರಿಗೆ ಗೃಹಲಕ್ಷ್ಮಿ ಹಣ ಜಮೆಯಾಗುತ್ತಿರುವ ಅಕ್ರಮಗಳು ಸಹ ಬೆಳಕಿಗೆ ಬಂದಿದ್ದು, ಈ ಬಗ್ಗೆಯೂ ಪರಿಶೀಲನೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳಲು ಸರ್ಕಾರ ಮುಂದಾಗಿದೆ.

ಈ ಎಲ್ಲಾ ಅಕ್ರಮಗಳನ್ನು ಮತ್ತು ಅನರ್ಹ ಫಲಾನುಭವಿಗಳನ್ನು ಗುರುತಿಸಿ ಪಟ್ಟಿಯಿಂದ ಕೈಬಿಡುವ ಸಲುವಾಗಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದಲ್ಲಿ ಸಮಗ್ರ ಪರಿಶೀಲನೆಗೆ ಚಿಂತನೆ ನಡೆಸಲಾಗಿದೆ. ಇತ್ತೀಚೆಗಷ್ಟೇ ಜೆಡಿಎಸ್ ಯುವಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಗೃಹಲಕ್ಷ್ಮಿ ಹಣದಲ್ಲಿ 5,000 ಕೋಟಿ ರೂ. ಹಗರಣ ನಡೆದಿದೆ ಎಂದು ಆರೋಪಿಸಿದ್ದರು.

# ಸದ್ದಿಲ್ಲದೆ ಜಿಬಿಎ ಪಾಲಿಕೆ ಚುನಾವಣೆಗೆ 3 ಪಕ್ಷಗಳಿಂದ ಸಿದ್ಧತೆ

## ಸುಪ್ರೀಂಕೋರ್ಟ್ ಚಾಟಿ ಬೀಸಿದ ನಂತರ ಎಚ್ಚೆತ್ತುಕೊಂಡಿರುವ ನಾಯಕರು

**ಬೆಂಗಳೂರು, ಮೇ 25:** ಸುಪ್ರೀಂ ಕೋರ್ಟ್ ಚಾಟಿ ಬೀಸಿದ ನಂತರ ಎಚ್ಚೆತ್ತುಕೊಂಡಿರುವ ಪ್ರಮುಖ ಮೂರು ರಾಜಕೀಯ ಪಕ್ಷಗಳು ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯ ಪಂಚಪಾಲಿಕೆಗಳ ಚುನಾವಣೆಗೆ ಸದ್ದಿಲ್ಲದೆ ತಯಾರಿ ಆರಂಭಿಸಿವೆ.

ಸುಪ್ರೀಂ ಆದೇಶದಂತೆ ಆ.31 ರೊಳಗೆ ಪಂಚ ಪಾಲಿಕೆಗಳಿಗೆ ಚುನಾವಣೆ ನಡೆಸಲೇ ಬೇಕಿದೆ. ಈ ಕುರಿತಂತೆ ಯಾವುದೇ ಮೇಲನವಿ ಸಲ್ಲಿಸಬಾರದು ಎಂದು ನ್ಯಾಯಲಯ ಕಟ್ಟುನಿಟ್ಟಿನ ಆದೇಶ ಹೊರಡಿಸಿರುವುದರಿಂದ ಆಡಳಿತಾರೂಢ ಕಾಂಗ್ರೆಸ್ ಪಕ್ಷ ಚುನಾವಣೆಗೆ ತಯಾರಾಗುವಂತೆ ತಮ ಪಕ್ಷದ ಕಾರ್ಯಕರ್ತರು ಹಾಗೂ ಮುಖಂಡರಿಗೆ ಸೂಚನೆ ನೀಡಿದೆ. ಭಾನುವಾರ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ನಮಗೆ ಯಾವುದೇ ಪರ್ಯಾಯ ಮಾರ್ಗವಿಲ್ಲ. ಪಂಚ ಪಾಲಿಕೆಗಳಿಗೆ ಚುನಾವಣೆ ನಡೆಸಲೇಬೇಕಿದೆ. ಹೀಗಾಗಿ ಈ ಕೂಡಲೇ ಚುನಾವಣಾ ಸಿದ್ಧತೆ ಮಾಡಿಕೊಳ್ಳುವಂತೆ ಪಕ್ಷದ ಮುಖಂಡರಿಗೆ ಆದೇಶಿಸಿದ್ದಾರೆ. ಮಾತ್ರವಲ್ಲ, ಇಂದು ಅಥವಾ ನಾಳೆ ಒಳಗೆ ಚುನಾವಣಾ ಸಿದ್ದತೆಗಾಗಿ ಆಯಾ ಕ್ಷೇತ್ರಗಳ ಕಾಂಗ್ರೆಸ್ ಶಾಸಕರ ನೇತೃತ್ವದಲ್ಲಿ ಸಮಿತಿ ರಚನೆ ಮಾಡಲು ತೀರ್ಮಾನಿಸಿದೆ ಎಂದು ಪಕ್ಷದ ಉನ್ನತ ಮೂಲಗಳು ಈ ಸಂಜೆಗೆ ತಿಳಿಸಿವೆ.



**ಬಿಜೆಪಿ ಕೂಡ ಸಿದ್ದತೆ**

ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬೀನ್ ಅವರು ಮುಂದೆ ನಮ್ಮ ಸರ್ಕಾರ ಬರುತ್ತದೆ ಎಂಬ ಭ್ರಮೆಯಲ್ಲಿ ಇರಬೇಡಿ ಕೂಡಲೇ ಚುನಾವಣಾ ಸಿದ್ದತೆ ಮಾಡಿಕೊಳ್ಳಿ ರಾಜ್ಯ ಚುನಾವಣೆಗೂ ಮುನ್ನ ಆ.31 ರೊಳಗೆ ನಡೆಯಲಿರುವ ಜಿಬಿಎ ಚುನಾವಣೆಯಲ್ಲಿ ತಮ ಪಕ್ಷದ ತಾಕತ್ತು ತೋರಿಸುವಂತೆ ಸೂಚನೆ ನೀಡಿರುವುದರಿಂದ ಕೇಸರಿ ಪಾಳಯ ಕೂಡ ಪಂಚ ಪಾಲಿಕೆಗಳ ಚುನಾವಣೆಗೆ ಸಿದ್ಧತೆ ನಡೆಸಿದೆ. ಐದು ಪಾಲಿಕೆಗಳಲ್ಲೂ ಬಿಜೆಪಿ ಜಯಭೇರಿ ಬಾರಿಸುವಂತೆ ನೋಡಿಕೊಳ್ಳಿ ಎಂದು ನಬಿನ್ ಸೂಚನೆ ನೀಡಿರುವುದರಿಂದ ಗೆಲ್ಲಬಹುದಾದ ಅರ್ಹ ಅಭ್ಯರ್ಥಿಗಳಿಗಾಗಿ ಹುಡುಕಾಟ ನಡೆಸಲಾಗುತ್ತಿದೆ. ನಗರದ ನಾಗರೀಕರು ಯಾವುದೇ ಗ್ಯಾರಂಟಿಗಳಿಗೆ ಮಣೆ ಹಾಕುವುದಿಲ್ಲ. ಅವರಿಗೆ ಬೇಕಾಗಿರುವುದು ದಕ್ಷ ಆಡಳಿತ ಹೀಗಾಗಿ ಐದು ಪಾಲಿಕೆಗಳಲ್ಲೂ ಬಿಜೆಪಿ ಪಕ್ಷ ಗೆಲುವು ಸಾಧಿಸುವ ಸಾಧ್ಯತೆ ಇದೆ ಎಂಬ ಆಂತರಿಕ ಸಮೀಕ್ಷೆ ಆಧಾರದ ಮೇಲೆ ಆ ಪಕ್ಷದ ಮುಖಂಡರು ಪಾಲಿಕೆ ಚುನಾವಣೆಗಳ ಗೆಲುವಿಗಾಗಿ ತಂತ್ರ ಎಣೆಯುತ್ತಿದ್ದಾರೆ.

**ಜೆಡಿಎಸ್ ಮುಂದು**

ರಾಷ್ಟ್ರೀಯ ಪಕ್ಷಗಳಾದ ಕಾಂಗ್ರೆಸ ಮತ್ತು ಬಿಜೆಪಿಗಿಂತ ಒಂದು ಹೆಜ್ಜೆ ಮುಂದೆ ಹೋಗಿರುವ ಜೆಡಿಎಸ್ ಪಕ್ಷ ಈಗಾಗಲೇ ಕೋರ್ ಕಮಿಟಿ ಸಭೆಯಲ್ಲಿ ಪಂಚ ಪಾಲಿಕೆಗಳನ್ನು ಗೆಲ್ಲುವ ಬಗ್ಗೆ ಕಾರ್ಯತಂತ್ರ ರೂಪಿಸುತ್ತಿದೆ.ಪಂಚ ಪಾಲಿಕೆ ಚುನಾವಣೆಗಳಲ್ಲಿ ಬಿಜೆಪಿ ಜೊತೆ ಮೈತ್ರಿ ಮಾಡಿಕೊಳ್ಳುವುದು ಬಿಡುವುದು ಹೈಕಮಾಂಡ್‌ಗೆ ಬಿಟ್ಟ ವಿಚಾರ. ಒಂದು ವೇಳೆ ಮೈತ್ರಿಯಾದರೆ ತಮಗೆ ಸಿಗುವ ಸ್ಥಾನಗಳಲ್ಲಿ ಗೆಲ್ಲುವುದು ಹೇಗೆ ಎಂಬ ಬಗ್ಗೆ ಚಿಂತನ ಮಂಥನ ನಡೆಸಿದೆ. ಒಂದು ವೇಳೆ ಮೈತ್ರಿ ವಿಫಲವಾದರೆ ಐದು ಪಾಲಿಕೆಗಳಲ್ಲೂ ಸ್ವತಂತ್ರವಾಗಿ ಸ್ಪರ್ಧಿಸುವ ಬಗ್ಗೆಯೂ ಮಾತುಕತೆ ನಡೆಸಲಾಗಿದೆ.

**ಜುಲೈನಲ್ಲಿ ಚುನಾವಣೆ ಸಾಧ್ಯತೆ:** ಆ. 31 ರೊಳಗೆ ಪಂಚ ಪಾಲಿಕೆಗಳಿಗೆ ಚುನಾವಣೆ ನಡೆಸಲೇಬೇಕಾದ ಅನಿವಾರ್ಯ ಪರಿಸ್ಥಿತಿಯಲ್ಲಿರುವ ರಾಜ್ಯ ಚುನಾವಣಾ ಆಯೋಗ ಈಗಾಗಲೇ ಎಲ್ಲ ಸಿದ್ಧತೆ ಮಾಡಿಕೊಂಡಿರುವುದರಿಂದ ಜುಲೈ ತಿಂಗಳಿನಲ್ಲೇ ಚುನಾವಣೆ ನಡೆಸುವ ಬಗ್ಗೆ ಚಿಂತನೆ ನಡೆಸಿದೆ ಎಂದು ತಿಳಿದುಬಂದಿದೆ.ಹೀಗಾಗಿ ಆ.31ರೊಳಗೆ ಜಿಬಿಎ ಚುನಾವಣೆ ನಡೆಯುವುದು ಬಹುತೇಕ ಖಚಿತ ಎಂದು ಮೂರು ಪಕ್ಷಗಳ ಮುಖಂಡರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಎರಡು ಪಾಲಿಕೆಗಳ ರಚನೆ ಸಾಧ್ಯವೇ; ಆ.31 ರೊಳಗೆ ಪಂಚ ಪಾಲಿಕೆಗಳಿಗೆ ಚುನಾವಣೆ ನಡೆಸುವ ಮುನ್ನವೇ ಅಧಿವೇಶನದಲ್ಲಿ ಪಂಚ ಪಾಲಿಕೆಗಳನ್ನು ರದ್ದುಗೊಳಿಸಿ ಕೇವಲ ಎರಡು ಇಲ್ಲವೇ ಮೂರು ಪಾಲಿಕೆ ರಚನೆ ಮಾಡಲು ಅನುಮೋದನೆ ಪಡೆದು ಸುಗ್ರಿವಾಜ್ಞೆ ಹೊರಡಿಸಲು ಸರ್ಕಾರ ಚಿಂತನೆ ನಡೆಸಿತ್ತು ಎಂದು ತಿಳಿದುಬಂದಿದೆ. ಒಂದು ವೇಳೆ ಅಧಿವೇಶನದಲ್ಲಿ ಎರಡು ಇಲ್ಲವೇ ಮೂರು ಪಾಲಿಕೆಗಳ ರಚನೆಗೆ ಸುಗ್ರಿವಾಜ್ಞೆ ರಚಿಸಿದರೂ ಅದಕ್ಕೆ ರಾಜ್ಯಪಾಲರ ಅಂಕಿತ ಬೀಳುವುದು ಕಷ್ಟ ಸಾಧ್ಯವಿರುವುದರಿಂದ ಅಂತಹ ಪ್ರಯತ್ನಕ್ಕೆ ಕೈ ಹಾಕದಿಸಲು ಸರ್ಕಾರ ನಿರ್ಧರಿಸಿದೆ ಎಂದು ಮೂಲಗಳು ಖಚಿತಪಡಿಸಿವೆ.

# ಮುಂಚೂಣಿ ಸಿಬ್ಬಂದಿಗೆ ಸುರಕ್ಷತಾ ಸಲಕರಣೆ ನೀಡಿ: ಖಂಡ್ರೆ ಸೂಚನೆ

**ಕಾರ್ಕಳ, ಮೇ 25:** ಅರಣ್ಯ ರಕ್ಷಣೆಯಲ್ಲಿ ಮುಂಚೂಣಿ ಸಿಬ್ಬಂದಿಯ ಪಾತ್ರ ಮಹತ್ವದ್ದಾಗಿದ್ದು, ಅವರ ಸುರಕ್ಷತೆಗಾಗಿ ವಿದ್ಯುತ್ ಪ್ರವಹಿಸುವ ಕೈಗೋಲು (ಸ್ಟಿಕ್), ಮಳೆಯಿಂದ ರಕ್ಷಿಸುವ ಜಾಕೆಟ್, ಶೂ ಇತ್ಯಾದಿ ನೀಡುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸೂಚಿಸಿದ್ದಾರೆ.



ಕಾರ್ಕಳದಲ್ಲಿಂದು ವಲಯ ಅರಣ್ಯಾಧಿಕಾರಿಗಳ ಕಚೇರಿ ಉದ್ಘಾಟಿಸಿದ ಬಳಿಕ ಅರಣ್ಯ ಅಧಿಕಾರಿಗಳಿಗೆ ಮತ್ತು ಸಿಬ್ಬಂದಿಗೆ ಒದಗಿಸಲಾಗಿರುವ ಆಧುನಿಕ ಮತ್ತು ಹಗುರ ಬಂದೂಕುಗಳ ಪರಿಶೀಲನೆ ನಡೆಸಿ ಮಾತನಾಡಿದ ಅವರು, ಮುಂಚೂಣಿ ಸಿಬ್ಬಂದಿಯ ಸುರಕ್ಷತೆಗೂ ಗಮನ ಹರಿಸುವಂತೆ ತಿಳಿಸಿದರು.

ಆನೆ ಕಾರ್ಯಪಡೆ, ಕಳ್ಳಬೇಟೆ ನಿಗ್ರಹ ಪಡೆ, ಮುಂಜೂಣಿ ಸಿಬ್ಬಂದಿಗಳಿಗೆ ವಸತಿಗೃಹಗಳನ್ನು ನೀಡಲಾಗಿದೆಯೇ ಎಂದೂ ಪ್ರಶ್ನಿಸಿದ ಸಚಿವರು, ಕಷ್ಟಪಟ್ಟು ಅಪಾಯದಲ್ಲಿ ಕಾರ್ಯ ನಿರ್ವಹಿಸುವ ಸಿಬ್ಬಂದಿಗೆ ಅಪಾಯಭತ್ಯೆ (ರಿಸ್ಕ್ ಅಲೊಯನ್ಸ್) ನೀಡಲಾಗುತ್ತಿದೆಯೇ ಎಂಬುದನ್ನು ಖಾತ್ರಿ ಪಡಿಸಿಕೊಳ್ಳುವಂತೆ ತಿಳಿಸಿದರು. ನಂತರ ಪ್ರವಾಸಿ ಮಂದಿರಕ್ಕೆ ತೆರಳಿದ ಸಚಿವರು ಪಕ್ಷದ ಕಾರ್ಯಕರ್ತರನ್ನು ಭೇಟಿ ಮಾಡಿ ಅಹವಾಲು ಆಲಿಸಿದರು.

# 50 ಸಾವಿರ ಡಾಲರ್ ಮೌಲ್ಯದ ಬಿಟ್‌ಕಾಯಿನ್ ಜಪ್ತಿ

**ಬೆಂಗಳೂರು, ಮೇ 25:** ದೇಶಾದ್ಯಂತ ಭಾರೀ ಸಂಚಲನ ಮೂಡಿಸಿರುವ ಬಹುಕೋಟಿ ಬಿಟ್‌ಕಾಯಿನ್ ಹಗರಣ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ ಅಧಿಕಾರಿಗಳು ಭರ್ಜರಿ ಕಾರ್ಯಾಚರಣೆ ನಡೆಸಿದ್ದು, ಮೂವರು ಪ್ರಮುಖ ಆರೋಪಿಗಳಿಂದ ಲಕ್ಷಾಂತರ ರೂಪಾಯಿ ಮೌಲ್ಯದ ಬಿಟ್‌ಕಾಯಿನ್ ಹಾಗೂ ಡಿಜಿಟಲ್ ಉಪಕರಣಗಳನ್ನು ವಶಪಡಿಸಿಕೊಂಡಿದ್ದಾರೆ. ಪ್ರಕರಣದ ಪ್ರಮುಖ ಆರೋಪಿಗಳಾದ ಶ್ರೀಕೃಷ್ಣ ಅಲಿಯಾಸ್ ಶ್ರೀಕಿ, ರಾಬಿನ್ ಖಂಡೇವಾಲ ಮತ್ತು ಸುನೀಶ್ ಹೆಗ್ಡೆ ಎಂಬುವವರಿಂದ ಸುಮಾರು 50 ಸಾವಿರ ಡಾಲರ್ ಮೌಲ್ಯದ ಬಿಟ್‌ಕಾಯಿನ್ ಅನ್ನು ಇ.ಡಿ ಅಧಿಕಾರಿಗಳು ಜಪ್ತಿ ಮಾಡಿದ್ದಾರೆ. ಇದರ ಭಾರತೀಯ ಕರೆನ್ಸಿ ಮೌಲ್ಯ ಸುಮಾರು 47,66,275 ರೂಪಾಯಿಗಳಾಗಿದೆ ಎಂದು ಅಂದಾಜಿಸಲಾಗಿದೆ. ಬಿಟ್ಕಾಯಿನ್ ಮಾತ್ರವಲ್ಲದೆ, ಆರೋಪಿಗಳಿಂದ ಕೃತ್ಯಕ್ಕೆ ಬಳಸಲಾಗಿದ್ದ 3 ಲ್ಯಾಪ್‌ಟಾಪ್ ಹಾಗೂ 3 ಮೊಬೈಲ್ ಫೋನ್‌ಗಳನ್ನು ಸಹ ಅಧಿಕಾರಿಗಳು ವಶಕ್ಕೆ ಪಡೆದುಕೊಂಡಿದ್ದಾರೆ.ತನಿಖೆಯ ವೇಳೆ ಆರೋಪಿಗಳು ಅಮೆರಿಕ ಮೂಲದ ಪ್ರತಿಷ್ಠಿತ ಕಂಪನಿಯೊಂದರ ನೆಟ್ವರ್ಕ್ ಹ್ಯಾಕ್ ಮಾಡಿರುವುದು ಬೆಳಕಿಗೆ ಬಂದಿದೆ. ಹೀಗೆ ಕಾನೂನುಬಾಹಿರವಾಗಿ ಹ್ಯಾಕ್ ಮಾಡಿದ ಹಣದ ಮೂಲಕವೇ ಆರೋಪಿಗಳು 50 ಸಾವಿರ USDT ಮೌಲ್ಯದ ಬಿಟ್ಕಾಯಿನ್ ಖರೀದಿಸಿದ್ದರು

# ಡಾ.ಮನಮೋಹನ್ ಸಿಂಗ್ ವಿ.ವಿ.ಉದ್ಯೋಗ ಮೇಳಕ್ಕೆ ಅದ್ದೂರಿ ಚಾಲನೆ

**ಬೆಂಗಳೂರು, ಮೇ 25:** ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ವತಿಯಿಂದ ಏರ್ಪಡಿಸಲಾಗಿದ್ದ ಉದ್ಯೋಗ ಮಹಾಮೇಳಕ್ಕೆ ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಉಪಾಧ್ಯಕ್ಷ ಪ್ರೊ.ಎಸ್. ಆರ್. ನಿರಂಜನ ವಿಧ್ಯುಕ್ತವಾಗಿ ಚಾಲನೆ ನೀಡಿದರು. ಸೆಂಟ್ರಲ್ ಕಾಲೇಜಿನ ಆವರಣದಲ್ಲಿರುವ ನೂತನ ಶೈಕ್ಷಣಿಕ ವಿಭಾಗದಲ್ಲಿ ಕುಲಪತಿಗಳಾದ ಪ್ರೊ.ಬಿ. ರಮೇಶ್ ರವರ ಅಧ್ಯಕ್ಷತೆಯಲ್ಲಿ ಜರುಗಿದ ಸಮಾರಂಭವನ್ನು ಉದ್ದೇಶಿಸಿ ಮಾತನಾಡಿದ ಅವರು ಕೌಶಲ್ಯ ಆಧಾರಿತ ಶಿಕ್ಷಣ ತಕ್ಷಣದ ಅಗತ್ಯವಾಗಿದೆ ಎಂದು ಪ್ರತಿಪಾದಿಸಿದರು.

ಪಠ್ಯಕ್ರಮದ ಅಧ್ಯಯನದ ಜೊತೆಗೆ ಸೃಜನಶೀಲತೆ, ವಿಮರ್ಶಾತ್ಮಕ ಚಿಂತನೆ ಮತ್ತು ವ್ಯಕ್ತಿತ್ವ ವಿಕಾಸದ ಮೂಲಕ ಶೈಕ್ಷಣಿಕ ಜೀವನದ ಗುರಿ ಸಾಧನೆಗೆ ಭದ್ರ ಅಡಿಪಾಯ ರೂಪಿಸಿಕೊಳ್ಳುವಂತೆ ವಿದ್ಯಾರ್ಥಿಗಳಿಗೆ




ಅವರು ಸಲಹೆಯಿತ್ತರು.

ನಳಂದ, ತಕ್ಷಶಿಲೆ ವಿಶ್ವವಿದ್ಯಾಲಯಗಳ ಶಿಕ್ಷಣ ವ್ಯವಸ್ಥೆ ಹಾಗೂ ಗುರು–ಶಿಷ್ಯ ಪರಂಪರೆಯ ಕುರಿತು ಪ್ರಸ್ತಾಪಿಸಿದ ಅವರು ಶಿಕ್ಷಣದ ಗುಣಮಟ್ಟ ಮತ್ತು ಬೋಧನಾ ವಿಧಾನಗಳ ಸುಧಾರಣೆಗೆ ವಿಶೇಷ ಗಮನ ಹರಿಸುವಂತೆ ಅವರು ಸೂಚಿಸಿದರು.

ರಾಜ್ಯದ 13 ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಉದ್ಯಮ ವಲಯ ನಿರ್ದೇಶಿತ ಪದವಿ ಕೋರ್ಸ್‌ಗಳನ್ನು ಪ್ರಾರಂಭಿಸುತ್ತಿರುವ ಬಗ್ಗೆ ತಿಳಿಸಿದ ಅವರು ಉನ್ನತ ಶಿಕ್ಷಣ ಇಲಾಖೆ ಇತ್ತೀಚೆಗೆ ಹಮ್ಮಿಕೊಂಡಿದ್ದ "ಕ್ಯಾಂಪಸ್ ಟು ಕ್ಯಾರಿಯರ್" ಕಾರ್ಯಕ್ರಮ ಹೊಸ ಆಯಾಮವನ್ನು ಒದಗಿಸಿದೆ ಎಂದು ವಿವರಿಸಿದರು.

ವಿದ್ಯಾರ್ಥಿಗಳಿಗೆ ಉದ್ಯೋಗ ಕೌಶಲ್ಯ ತರಬೇತಿ ಮತ್ತು ಮಾರ್ಗದರ್ಶನ ಹಾಗೂ ಉದ್ಯಮ ಸಹಭಾಗಿತ್ವ ಯೋಜನೆಯ ಮೂಲಕ ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ ರಾಜ್ಯದ ಇತರೆ ವಿಶ್ವವಿದ್ಯಾಲಯಗಳಿಗೆ ಮಾದರಿಯಾಗಿದೆ ಎಂದು ಅವರು ಶ್ಲಾಘಿಸಿದರು. ಬೃಹತ್ ಪ್ರಮಾಣದ ಉದ್ಯೋಗ ಮಹಾಮೇಳ ಆಯೋಜಿಸುವ ಮೂಲಕ ವಿದ್ಯಾರ್ಥಿಗಳಿಗೆ ಹೊಸ ಭರವಸೆ ಮೂಡಿಸಿದ ಕುಲಪತಿ ಪ್ರೊ. ರಮೇಶ್.ಬಿ. ಹಾಗೂ ವಿಶ್ವವಿದ್ಯಾನಿಲಯದ ಆಡಳಿತವರ್ಗವನ್ನು ಅವರು ಅಭಿನಂದಿಸಿದರು.

ಕುಲಸಚಿವರಾದ ಎ. ನವೀನ್ ಜೋಸೆಫ್, ಕುಲಸಚಿವ ಪ್ರೊ.ರಮೇಶ. ಬಿ.ಕುಡೇನಟ್ಟಿ, ಕೇಂದ್ರ ಸರ್ಕಾರದ ಕಾರ್ಪೊರೇಟ್ ವ್ಯವಹಾರಗಳ ಸಚಿವಾಲಯದ ಪ್ರಾದೇಶಿಕ ನಿರ್ದೇಶಕ ಲಕ್ಷ್ಮಿ ಪ್ರಸಾದ್. ಕೆ., ಹಾಗೂ ವಿಶ್ವವಿದ್ಯಾನಿಲಯದ ತರಬೇತಿ ಮತ್ತು ನಿಯೋಜನೆ ಕೇಂದ್ರದ ನಿರ್ದೇಶಕರಾದ ಪ್ರೊ. ರಿತಿಕಾ ಸಿನ್ಹಾ, ಸಂಯೋಜಕರಾದ ಡಾ. ಎ.ನಬಿ ಹಾಗೂ ಸಿಂಡಿಕೇಟ್ ಮತ್ತು ವಿದ್ಯಾವಿಷಯಕ ಪರಿಷತ್ತಿನ ಸದಸ್ಯರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

**ಮಹಾಮೇಳಕ್ಕೆ ಅತ್ಯುತ್ತಮ ಸ್ಪಂದನೆ:**

ಉದ್ಯೋಗ ಮಹಾಮೇಳದಲ್ಲಿ ವಿವಿಧ ವಲಯಗಳಿಗೆ ಸಂಬಂಧಿಸಿದ 175 ಕಂಪನಿಗಳ ಪ್ರತಿನಿಧಿಗಳು ಭಾಗವಹಿಸಿದ್ದರು. ಒಟ್ಟು ಸುಮಾರು ಮೂರು ಸಾವಿರ ಆಕಾಂಕ್ಷಿಗಳು ತಮ್ಮ ಹೆಸರು ನೊಂದಾಯಿಸಿಕೊಂಡು ನೇರ ಸಂದರ್ಶನದಲ್ಲಿ ಪಾಲ್ಗೊಂಡಿದ್ದರು.

ಕ್ವೆಸ್, ಎಥ್ನಸ್, ಎಡುಫ್ಯಾಕ್ಟರಿ, ಮ್ಯಾಜಿಕ್ ಬಸ್ ಮತ್ತು ಎಸ್‌ಎಸ್.ಬಿ.ಸಲ್ಯೂಷನ್ಸ್ ಸಂಸ್ಥೆಗಳ ಜಂಟಿ ಸಹಯೋಗದಲ್ಲಿ ಏರ್ಪಡಿಸಲಾಗಿದ್ದ ಈ ಮಹಾಮೇಳದಲ್ಲಿ ನೂರಾರು ಅರ್ಹ ಅಭ್ಯರ್ಥಿಗಳು ಉದ್ಯೋಗ ನೇಮಕಾತಿ ಪತ್ರಗಳನ್ನು ಪಡೆದುಕೊಂಡರು.

# ಬಿಜೆಪಿಯ ಬೆಲೆ ಏರಿಕೆಯ ಬರೆ, 110 ದಾಟಿದ ಪೆಟ್ರೋಲ್ ಬೆಲೆ: 78 ವರ್ಷಗಳಲ್ಲೇ ಇದೇ ಮೊದಲು!

**12 ವರ್ಷಗಳಲ್ಲಿ ಮೆಹಂಗಾಯ್ ಮ್ಯಾನ್ ಮೋದಿ (ದುಬಾರಿ ಮನುಷ್ಯ ಮೋದಿ) ಯಿಂದ 57 ಲಕ್ಷ ಕೋಟಿ ಲೂಟಿ**

**ಪ್ರತಿದಿನದ ಇಂಧನ ಲೂಟಿಯಿಂದ ಸಾಮಾನ್ಯ ಜನರ ಜೇಬನ್ನು ಪಿಕ್‌ಪಾಕೆಟ್ ಮಾಡುತ್ತಿದೆ ಬಿಜೆಪಿ**

**ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್ ಮತ್ತು ರಣದೀಪ್ ಸಿಂಗ್ ಸುರ್ಜೇವಾಲಾ ಅವರ ಜಂಟಿ ಮಾಧ್ಯಮ ಹೇಳಿಕೆ**

**ಬೆಂಗಳೂರು, ಮೇ 25:** ಕೇಂದ್ರದ ಬಿಜೆಪಿ ಸರ್ಕಾರವು ಪೆಟ್ರೋಲ್ ಮತ್ತು ಡೀಸೆಲ್ ಬೆಲೆಯನ್ನು ಪ್ರತಿ ಲೀಟರ್‌ಗೆ 7.52 ಹೆಚ್ಚಿಸುವ ಮೂಲಕ "ಇಂಧನ ಲೂಟಿ"ಯನ್ನು ಆರಂಭಿಸಿದೆ. ಕಳೆದ 11 ದಿನಗಳು ವೇತನ ವರ್ಗ, ರೈತರು, ಬಡವರು, ಗೃಹಿಣಿಯರು, ಸಣ್ಣ ಉದ್ಯಮಿಗಳು ಮತ್ತು ಜನಸಾಮಾನ್ಯರ ಜೇಬು ಹಾಗೂ ಬಜೆಟ್ ಪಾಲಿಗೆ ಅತ್ಯಂತ ವಿನಾಶಕಾರಿಯಾಗಿವೆ. ಬಿಜೆಪಿ ಸರ್ಕಾರ ಕನ್ನಡಿಗರಿಗೆ ಮಾಡುತ್ತಿರುವ ವಂಚನೆ ಮತ್ತು ಸುಲಿಗೆ ಅಕ್ಷಮ್ಯ.

ಈ ಅತಿರೇಕದ ಲೂಟಿ ಮತ್ತು ಪಿಕ್‌ಪಾಕೆಟ್ ವಿರುದ್ಧ ಸಾಮಾನ್ಯ ಜನರು ವಿವಿಧ ರೂಪದಲ್ಲಿ ತಮ್ಮ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಆದರೂ, ಬಿಜೆಪಿ ನಾಯಕರು ಮತ್ತು ಮೋದಿ ಸರ್ಕಾರವು ಜನರ ಸಂಕಷ್ಟವನ್ನು ಹಾಸ್ಯ ಮಾಡುತ್ತಾ, ಕನ್ನಡಿಗರು ಮತ್ತು ದೇಶದ ಜನರು ಎದುರಿಸುತ್ತಿರುವ ಜೀವನೋಪಾಯದ ಬಿಕ್ಕಟ್ಟಿಗೆ ಯಾವುದೇ ಸ್ಪಂದನೆ ನೀಡದೆ ಮೌನವಾಗಿದೆ.

ಈ "ಜನರ ಲೂಟಿ" ಕೇವಲ ಪೆಟ್ರೋಲ್ ಮತ್ತು ಡೀಸೆಲ್ ಬೆಲೆಗಳಿಗೆ ಮಾತ್ರ ಸೀಮಿತವಾಗಿಲ್ಲ, ಬದಲಿಗೆ ಗೃಹಬಳಕೆಯ ಗ್ಯಾಸ್, ವಾಣಿಜ್ಯ



ಗ್ಯಾಸ್, ಸಣ್ಣ ಎಫ್‌ಟಿಎಲ್ ಸಿಲಿಂಡರ್ ಹಾಗೂ ಸಿಎನ್‌ಜಿ ಬೆಲೆಗಳ ಭಾರಿ ಏರಿಕೆ ಕಂಡಿದೆ. ಇದು ದೈನಂದಿನ ಬಳಕೆಯ ಎಲ್ಲಾ ಅಗತ್ಯ ವಸ್ತುಗಳ ಬೆಲೆಗಳ ಮೇಲೂ ತೀವ್ರ ಪರಿಣಾಮ ಬೀರಿದೆ.

ಬಿಜೆಪಿ ಮತ್ತು ಮೋದಿ ಸರ್ಕಾರದ ಈ ಹಗಲು ದರೋಡೆಯು ಕೇವಲ ಪೆಟ್ರೋಲ್ ಮತ್ತು ಡೀಸೆಲ್ ಮೇಲೆ ಅಬಕಾರಿ ಮತ್ತು ಅಬಕಾರಿ ಸುಂಕವನ್ನು ವಿಧಿಸುವ ಮೂಲಕ 43 ಲಕ್ಷ ಕೋಟಿ ಸಂಗ್ರಹಿಸಿ ಸಾಮಾನ್ಯ ಜನರ ಜೇಬಿಗೆ ಕತ್ತರಿ ಹಾಕುವುದಕ್ಕೆ ಮಾತ್ರ ಸೀಮಿತವಾಗಿಲ್ಲ. ತುರ್ತು ಸಂದರ್ಭಗಳಲ್ಲಿ ದೇಶಕ್ಕೆ ನೆರವಾಗಲು ಇರುವ ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾದ "ತುರ್ತು ಮೀಸಲು ನಿಧಿ"ಯನ್ನು ಲೂಟಿ ಮಾಡುವ ಹಂತಕ್ಕೂ ತಲುಪಿದೆ. ಮೇ 23 ರಂದು, ಅಂದರೆ 2 ದಿನಗಳ ಹಿಂದೆ, ಡಾಲರ್ ಎದುರು ಭಾರತೀಯ ರೂಪಾಯಿಯ ಮೌಲ್ಯವು ತೀವ್ರವಾಗಿ ಕುಸಿದಿರುವುದರ ಲಾಭವನ್ನು ಪಡೆದುಕೊಂಡು, ಆರ್‌ಬಿಐನ ಅಮೂಲ್ಯವಾದ "ವಿದೇಶಿ ವಿನಿಮಯ ಮೀಸಲು" ಅನ್ನು ಮಾರಾಟ ಮಾಡುವ ಮೂಲಕ ಮೋದಿ ಸರ್ಕಾರವು ಆರ್‌ಬಿಐನಿಂದ 2.87 ಲಕ್ಷ ಕೋಟಿಯನ್ನು ಪಡೆದುಕೊಂಡಿದೆ.

ಕಳೆದ 12 ವರ್ಷಗಳಲ್ಲಿ, ಮೋದಿ ಸರ್ಕಾರವು ಆರ್‌ಬಿಐನಿಂದಲೇ 14 ಲಕ್ಷ ಕೋಟಿಯನ್ನು ಸಂಗ್ರಹಿಸಿದೆ. ಇದು ಬಿಜೆಪಿ ಸರ್ಕಾರ ನಡೆಸಿರುವ ಒಟ್ಟು 57 ಲಕ್ಷ ಕೋಟಿ (43 ಲಕ್ಷ ಕೋಟಿ + 14 ಲಕ್ಷ ಕೋಟಿ) ಲೂಟಿಯನ್ನು ಬಹಿರಂಗಪಡಿಸುತ್ತದೆ.

**ಕಳೆದ 12 ವರ್ಷಗಳಲ್ಲಿ ಮೋದಿ ಸರ್ಕಾರವು ಪೆಟ್ರೋಲ್ ಮತ್ತು ಡೀಸೆಲ್ ಮೇಲೆ ವಿಧಿಸಿರುವ ತೆರಿಗೆ ನೀತಿ ಹಾಗೂ ಸಾಮಾನ್ಯ ಜನರನ್ನು ವ್ಯವಸ್ಥಿತವಾಗಿ ಸುಲಿಗೆ ಮಾಡಿರುವುದು ಈ ಕೆಳಗಿನ ಅಂಶಗಳಿಂದ ಸ್ಪಷ್ಟವಾಗಿದೆ:**

1. ಕಳೆದ 12 ವರ್ಷಗಳಲ್ಲಿ ಮೋದಿ ಸರ್ಕಾರ ಪೆಟ್ರೋಲ್ ಮತ್ತು ಡೀಸೆಲ್ ಮೇಲೆ ತೆರಿಗೆ ವಿಧಿಸುವ ಮೂಲಕ 43 ಲಕ್ಷ ಕೋಟಿ ರೂಪಾಯಿಗಳನ್ನು ಸಂಗ್ರಹಿಸಿದೆ. ಇದು 2014 ರಿಂದ ಪ್ರತಿದಿನ 1,000 ಕೋಟಿ ರೂಪಾಯಿಗಳ ಸಂಗ್ರಹಕ್ಕೆ ಸಮನಾಗಿರುತ್ತದೆ.

**ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ಬೆಲೆ 5 ಬಾರಿ ಹೆಚ್ಚಳ**

- ಮಾರ್ಚ್ 1, 2026: ಸಿಲಿಂಡರ್ ಬೆಲೆಯಲ್ಲಿ 28 ಹೆಚ್ಚಳ
- ಮಾರ್ಚ್ 7, 2026: ಸಿಲಿಂಡರ್ ಬೆಲೆಯಲ್ಲಿ 114.50 ಹೆಚ್ಚಳ
- ಮಾರ್ಚ್ 23, 2026: ಸಿಲಿಂಡರ್ ಬೆಲೆಯಲ್ಲಿ 49 ಹೆಚ್ಚಳ
- ಏ.1, 2026: ಸಿಲಿಂಡರ್ ಬೆಲೆ ಯಲ್ಲಿ 195ರಿಂದ 218 ರವರೆಗೆ ಹೆಚ್ಚಳ
- ಮೇ 1, 2026: ಸಿಲಿಂಡರ್ ಬೆಲೆಯಲ್ಲಿ 993 ರಷ್ಟು ಭಾರಿ ಹೆಚ್ಚಳ

2. ಮೇ 26, 2014 ರಂದು (ಕಾಂಗ್ರೆಸ್–ಯುಪಿಎ ಅವಧಿಯಲ್ಲಿ) ಪೆಟ್ರೋಲ್ ಬೆಲೆ ಪ್ರತಿ ಲೀಟರ್‌ಗೆ 71.41 ಮತ್ತು ಡೀಸೆಲ್ ಬೆಲೆ ಪ್ರತಿ ಲೀಟರ್‌ಗೆ 56.71 ಆಗಿತ್ತು. ಆದರೆ ಇಂದು ಬೆಂಗಳೂರಿನಲ್ಲಿ ಪೆಟ್ರೋಲ್ ಪ್ರತಿ ಲೀಟರ್‌ಗೆ 110.93 ಹಾಗೂ ಡೀಸೆಲ್ ಪ್ರತಿ ಲೀಟರ್‌ಗೆ 98.89 ಕ್ಕೆ ಮಾರಾಟವಾಗುತ್ತಿದೆ. 2014 ರ ಕಚ್ಚಾ ತೈಲ ಬೆಲೆಗಳಿಗೆ (ಪ್ರತಿ ಬ್ಯಾರಲ್‌ಗೆ 108 ಡಾಲರ್) ಮತ್ತು ಪಶ್ಚಿಮ ಏಷ್ಯಾದಲ್ಲಿ ಯುದ್ಧ ಪ್ರಾರಂಭವಾಗುವ ಮುಂಚಿನ ಬೆಲೆಗೆ (ಪ್ರತಿ ಬ್ಯಾರಲ್‌ಗೆ 70 ಡಾಲರ್) ಹೋಲಿಸಿದರೆ, ಪೆಟ್ರೋಲ್ ಬೆಲೆ ಪ್ರತಿ ಲೀಟರ್‌ಗೆ 61.60 ಮತ್ತು ಡೀಸೆಲ್ ಬೆಲೆ ಪ್ರತಿ ಲೀಟರ್‌ಗೆ 56.99 ಇರಬೇಕಾಗಿತ್ತು. ಉಳಿದ ಹೆಚ್ಚುವರಿ ಹಣವೆಲ್ಲವೂ ಬಿಜೆಪಿಯ ಸಂಪೂರ್ಣ ಲೂಟಿಯಾಗಿದೆ.

**ಕಳೆದ 11 ದಿನಗಳಲ್ಲಿ ಬಿಜೆಪಿಯು ಸಾಮಾನ್ಯ ಜನರ ಮೇಲೆ 4 ಬಾರಿ ಬೆಲೆ ಏರಿಕೆಯ ದಾಳಿ ನಡೆಸಿದೆ:**

* ಮೇ 15, 2026: ಪೆಟ್ರೋಲ್ ಮತ್ತು ಡೀಸೆಲ್ ಬೆಲೆಯಲ್ಲಿ ಪ್ರತಿ ಲೀಟರ್‌ಗೆ 3 ಹೆಚ್ಚಳ

* ಮೇ 19, 2026: ಪೆಟ್ರೋಲ್ ಮತ್ತು ಡೀಸೆಲ್ ಬೆಲೆಯಲ್ಲಿ ಪ್ರತಿ ಲೀಟರ್‌ಗೆ 90 ಪೈಸೆ ಹೆಚ್ಚಳ

* ಮೇ 23, 2026: ಪೆಟ್ರೋಲ್ ಮತ್ತು ಡೀಸೆಲ್ ಬೆಲೆಯಲ್ಲಿ ಲೀಟರ್‌ಗೆ 91 ಪೈಸೆ ಹೆಚ್ಚಳ

* ಮೇ 25, 2026: ಪೆಟ್ರೋಲ್ ಮತ್ತು ಡೀಸೆಲ್ ಬೆಲೆಯಲ್ಲಿ ಲೀಟರ್‌ಗೆ 2.71 ಹೆಚ್ಚಳ

* ಕಳೆದ 11 ದಿನಗಳಲ್ಲಿ ಪ್ರತಿ ಲೀಟರ್‌ಗೆ 7.52 ಹೆಚ್ಚಳವಾಗಿದೆ.

ಮೇ 23, 2026 ರಂದು ಸಿಎನ್‌ಜಿ (ಅಓಉ) ಬೆಲೆಯನ್ನು ಸಹ ಪ್ರತಿ ಕೆ.ಜಿಗೆ 1 ರಷ್ಟು ಹೆಚ್ಚಿಸಲಾಗಿದ್ದು, ಕಳೆದ 11 ದಿನಗಳಲ್ಲಿ ಒಟ್ಟು 4 ಹೆಚ್ಚಳವಾಗಿದೆ. ಇದರ ಪರಿಣಾಮವಾಗಿ ಇಂದು ಬೆಂಗಳೂರಿನಲ್ಲಿ ಸಿಎನ್‌ಜಿ ಬೆಲೆ ಪ್ರತಿ ಕೆಜಿಗೆ 90.10 ತಲುಪಿದೆ.

3. 2014 ರಿಂದ 2025 ರವರೆಗೆ, ಮೋದಿ ಸರ್ಕಾರವು ಪೆಟ್ರೋಲ್ ಮೇಲೆ ಸರಾಸರಿ 19.70 ಮತ್ತು ಡೀಸೆಲ್ ಮೇಲೆ 15.50 ಅಬಕಾರಿ ಸುಂಕವನ್ನು ವಿಧಿಸಿದೆ. ಇದು ಸಾಮಾನ್ಯ ಭಾರತೀಯರು ಪೆಟ್ರೋಲ್ ಬೆಲೆಯ 25% ಮತ್ತು ಡೀಸೆಲ್ ಬೆಲೆಯ 22.1% ರಷ್ಟನ್ನು ಮೋದಿ ಸರ್ಕಾರದ ಖಜಾನೆಗೆ ತೆರಿಗೆ ರೂಪದಲ್ಲಿ ಸಂಗ್ರವಾಗುತ್ತಿದೆ. ಈ ಮೂಲಕ ಅತ್ಯಗತ್ಯ ಇಂಧನವನ್ನು ಲಾಭ ಗಳಿಸುವ ಸಾಧನವನ್ನಾಗಿ ಪರಿವರ್ತಿಸಲಾಗಿದೆ.

4. ಮೋದಿ ಸರ್ಕಾರವು ಅಬಕಾರಿ ಸುಂಕವನ್ನು 21 ಬಾರಿ ಪರಿಷ್ಕರಿಸಿದ್ದು, ಅದರಲ್ಲಿ 12 ಬಾರಿ ಬೆಲೆ ಹೆಚ್ಚಳ ಮಾಡಿದೆ. ಇದು "ಬೆಲೆಗಳನ್ನು ಕಡಿತಗೊಳಿಸುತ್ತೇವೆ" ಎಂದು ಹೇಳುತ್ತಲೇ ಸಾಮಾನ್ಯ ಜನರಿಂದ ಹಣವನ್ನು ದೋಚುವ ವ್ಯವಸ್ಥಿತ ಮಾದರಿಯನ್ನು ತೋರಿಸುತ್ತದೆ.

5. ಮೇ 2014 ರಲ್ಲಿ (ಯುಪಿಎ ಅವಧಿಯಲ್ಲಿ) 412 ಇದ್ದ ಎಲ್‌ಪಿಜಿ ಸಿಲಿಂಡರ್ ಬೆಲೆ, ಮೇ 2026 ರಲ್ಲಿ (ಎನ್‌ಡಿಎ ಅವಧಿಯಲ್ಲಿ) 915.50 ಕ್ಕೆ ಏರಿಕೆಯಾಗಿದೆ. ಅಂದರೆ 12 ವರ್ಷಗಳಲ್ಲಿ 503.5 ರಷ್ಟು (ಸುಮಾರು 122.21%) ಭಾರಿ ಏರಿಕೆಯಾಗಿದೆ. 2013–14ರಲ್ಲಿ (ಯುಪಿಎ ಅವಧಿಯಲ್ಲಿ) ಅಂತರರಾಷ್ಟ್ರೀಯ ಎಲ್‌ಪಿಜಿ ಬೆಲೆ ಪ್ರತಿ ಮೆಟ್ರಿಕ್ ಟನ್‌ಗೆ ಸುಮಾರು 880.5 ಡಾಲರ್ ಆಗಿತ್ತು. ಆದರೆ ಮಾರ್ಚ್ 2026 ರಲ್ಲಿ (ಸೌದಿ ಸಿಪಿ ಪ್ರಕಾರ) ಇದು ಪ್ರತಿ ಮೆಟ್ರಿಕ್ ಟನ್‌ಗೆ ಸುಮಾರು 542.5 ಅಮೆರಿಕನ್ ಡಾಲರ್ ಆಗಿದೆ. ಅಂದರೆ ಈ ಅವಧಿಯಲ್ಲಿ ಬೆಲೆ 339 ಡಾಲರ್ ನಷ್ಟು (ಸುಮಾರು 38.5%) ಕಡಿಮೆಯಾಗಿದೆ.

6. 2014 ರಲ್ಲಿ, ವಾಣಿಜ್ಯ ಸಿಲಿಂಡರ್ ಬೆಲೆ 1,241 (ಪ್ರತಿ 19 ಕೆಜಿ ಸಿಲಿಂಡರ್‌ಗೆ) ಆಗಿತ್ತು. ಮೇ 2026 ರ ಪ್ರಸ್ತುತ ಬೆಲೆ 3,152 ಆಗಿದ್ದು, ಇದು 1,911 ರಷ್ಟು ಭಾರಿ ಏರಿಕೆಯಾಗಿದೆ.

ಮೋದಿ ಸರ್ಕಾರ ಮತ್ತು ಬಿಜೆಪಿ ಈ ಇಂಧನ ಲೂಟಿಯನ್ನು ತಕ್ಷಣವೇ ನಿಲ್ಲಿಸಬೇಕು ಮತ್ತು ಪೆಟ್ರೋಲ್, ಡೀಸೆಲ್, ಗೃಹಬಳಕೆಯ ಗ್ಯಾಸ್, ವಾಣಿಜ್ಯ ಗ್ಯಾಸ್, ಸಣ್ಣ ಸಿಲಿಂಡರ್, ಸಿಎನ್‌ಜಿ ಮತ್ತು ಪಿಎನ್‌ಜಿ ಬೆಲೆಗಳನ್ನು ಕೂಡಲೇ ಕಡಿತಗೊಳಿಸಬೇಕು!

# ಕಲಬುರಗಿಯಲ್ಲಿ 'ಪಿಎಂ ಮಿತ್ರ ಜವಳಿ ಪಾರ್ಕ್' ನಿರ್ಮಾಣ ಕಾಮಗಾರಿಗಳಿಗೆ ಮತ್ತಷ್ಟು ವೇಗ: ಎಂ.ಬಿ.ಪಾಟೀಲ್



**ಕಲಬುರಗಿ, ಮೇ. 25:** ನಗರದ ಹೊರವಲಯದ ಫರಹತಾಬಾದ ವಲಯದಲ್ಲಿ ಸ್ಥಾಪನೆಯಾಗಲಿರುವ ಮಹತ್ವಾಕಾಂಕ್ಷಿ 'ಪಿಎಂ ಮಿತ್ರ ಜವಳಿ ಪಾರ್ಕ್' ಯೋಜನೆಯ ಕಾಮಗಾರಿ ಕುರಿತು ಸಚಿವ ಎಂ.ಬಿ. ಪಾಟೀಲ್, ಪ್ರಿಯಾಂಕ್ ಖರ್ಗೆ ಅವರು ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಕಾಮಗಾರಿಗಳನ್ನು ತೀವ್ರಗೊಳಿಸಿ ಇದರ ಫಲ ಬೇಗ ಜನರಿಗೆ ತಲುಪಬೇಕು. ಬಜೆಟ್‌ನಲ್ಲಿ ಮಾಡಿದ ಘೋಷಣೆ ಕಾಲಮಿತಿಯಲ್ಲಿ ಜಾರಿಗೆ ತರಲು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಕಲಬುರಗಿ ಜವಳಿ ಪಾರ್ಕ್‌ನ ಬಾಹ್ಯ ಮೂಲಸೌಕರ್ಯ ಕಾಮಗಾರಿಗಳನ್ನು ಒಳಗೊಂಡಂತೆ ಸಮಗ್ರ ಯೋಜನಾ ವರದಿಯನ್ನು ತಕ್ಷಣವೇ ಪರಿಷ್ಕರಿಸಿ, ಕೇಂದ್ರ ಯೋಜನಾ ಅನುಮೋದನೆ ಸಮಿತಿಗೆ ಸಲ್ಲಿಸಲು ಕೈಮಗ್ಗ ಮತ್ತು ಜವಳಿ ಇಲಾಖೆಗೆ ಈ ಸಂದರ್ಭದಲ್ಲಿ ಸೂಚಿಸಲಾಯಿತು. ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿ ಮೂಲಕ ಪಾರ್ಕ್‌ನ ಮೊದಲ ಹಂತದ ಅಭಿವೃದ್ಧಿ ಕಾಮಗಾರಿಗಳನ್ನು ತಕ್ಷಣವೇ ಆರಂಭಿಸಲು ಸಭೆಯಲ್ಲಿ ಸೂಚಿಸಿದ್ದು, ಮೊದಲ ಹಂತದ ಯಶಸ್ವಿ ಅನುಷ್ಠಾನದ ನಂತರವಷ್ಟೇ ಉದ್ಯೋಗ ಸೃಷ್ಟಿ ಮತ್ತು ಹೂಡಿಕೆ ಪ್ರಮಾಣ ಆಧರಿಸಿ ಎರಡನೇ ಹಂತದ ಅಭಿವೃದ್ಧಿಗೆ ಚಾಲನೆ ನೀಡಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ಕೇಂದ್ರ ಸರ್ಕಾರದ 'ಅಭಿವೃದ್ಧಿ ಬಂಡವಾಳ ಬೆಂಬಲ' ಯೋಜನೆಯಡಿ ಒಟ್ಟು ಯೋಜನಾ ವೆಚ್ಚದ ಶೇ. 30 ರಷ್ಟು (ಗರಿಷ್ಠ 500 ಕೋಟಿ) ಅನುದಾನ ಲಭ್ಯವಾಗಲಿದ್ದು, ಇದನ್ನು ಎರಡು ಹಂತಗಳಲ್ಲಿ ಬಳಸಿಕೊಳ್ಳಲಾಗುವುದು. ಕೇಂದ್ರದ ಮಾರ್ಗಸೂಚಿಗಳ ಪ್ರಕಾರ, ಪಾರ್ಕ್‌ನ ಗೇಟ್‌ನಿಂದ ಹೊರಗಡೆ ನಡೆಯುವ ಬಾಹ್ಯ ಕಾಮಗಾರಿಗಳನ್ನು ಒಟ್ಟಾರೆ ಅನುದಾನದ ಅರ್ಹತೆಗಾಗಿ ಪರಿಗಣಿಸಬಹುದಾದರೂ, ಕೇಂದ್ರದ ನಿಜವಾದ ಧನಸಹಾಯವನ್ನು ಕೇವಲ ಪಾರ್ಕ್‌ನ ಒಳಗಿನ ಆಂತರಿಕ ಮೂಲಸೌಕರ್ಯಗಳಾದ ರಸ್ತೆ, ನೀರು, ವಿದ್ಯುತ್, ತ್ಯಾಜ್ಯ ನೀರು ಸಂಸ್ಕರಣಾ ಘಟಕ ಮತ್ತು ವಸತಿ ನಿಲಯಗಳಿಗಾಗಿ ಬಳಸಲಾಗುವುದು ಎಂದರು.

ಕಲಬುರಗಿ ಜಿಲ್ಲೆಯ ಆರ್ಥಿಕ ಚಿತ್ರಣವನ್ನು ಬದಲಿಸಬಲ್ಲ ಹಾಗೂ ಸಾವಿರಾರು ಜನರಿಗೆ ಉದ್ಯೋಗ ನೀಡಬಲ್ಲ ಈ ಬೃಹತ್ ಜವಳಿ ಪಾರ್ಕ್ ಯೋಜನೆಯ ಮೊದಲ ಕಂತಿನ ಹಣ ಬಿಡುಗಡೆಗೆ ಅನುವಾಗುವಂತೆ, ರಾಜ್ಯ ಅನುಷ್ಠಾನ ಸಂಸ್ಥೆಯು ಕನಿಷ್ಠ 25 ಕೋಟಿ ಹಣವನ್ನು ಭೌತಿಕ ಮೂಲಸೌಕರ್ಯಗಳಿಗಾಗಿ ವಿನಿಯೋಗಿಸುವ ಪ್ರಕ್ರಿಯೆಗೆ ಚಾಲನೆ ನೀಡಲು ಸಭೆಯಲ್ಲಿ ಅಧಿಕಾರಿಗಳಿಗೆ ಸೂಚಿಸಲಾಯಿತು.

ರಾಜ್ಯದ ಟೆಕ್ಸ್ ಟೈಲ್ಸ್ ಉದ್ಯಮಕ್ಕೆ ಹೊಸ ಆಯಾಮ ನೀಡುವ ಈ ಮಹತ್ವಾಕಾಂಕ್ಷಿ ಯೋಜನೆಯ ಮೊದಲ ಹಂತವನ್ನು ಕೆಐಎಡಿಬಿ ಮೂಲಕ ಜಾರಿಗೊಳಿಸುವ ಕುರಿತು ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಯಿತು. ಜೊತೆಗೆ ಯೋಜನೆಗೆ ಅಗತ್ಯವಾದ ಆಡಳಿತಾತ್ಮಕ ಅನುಮೋದನೆಗಾಗಿ ಸಚಿವ ಸಂಪುಟ ಸಭೆಯಲ್ಲಿ ಮಂಡಿಸಲು ಸಹ ನಿರ್ಧರಿಸಲಾಯಿತು.

ಈ ಟೆಕ್ಸ್ ಟೈಲ್ಸ್ ಪಾರ್ಕ್ ಸ್ಥಾಪನೆಯಿಂದ ಕಲಬುರಗಿ ಭಾಗದಲ್ಲಿ ಭಾರಿ ಪ್ರಮಾಣದ ಹೂಡಿಕೆ, ಸಾವಿರಾರು ಉದ್ಯೋಗಾವಕಾಶಗಳು ಹಾಗೂ ಜವಳಿ ಕ್ಷೇತ್ರದಲ್ಲಿ ಸಮಗ್ರ ಕೈಗಾರಿಕಾ ಪರಿಸರ ನಿರ್ಮಾಣವಾಗಲಿದ್ದು, ಹೈದರಾಬಾದ್–ಕರ್ನಾಟಕ ಭಾಗದ ಆರ್ಥಿಕ ಅಭಿವೃದ್ಧಿಗೆ ಹೊಸ ಚೈತನ್ಯ ದೊರೆಯಲಿದೆ. ಸಭೆಯಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಸೇರಿದಂತೆ ಸಂಬಂಧಿತ ಇಲಾಖೆಗಳ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಕಲಬುರಗಿ – ಬೆಂಗಳೂರು ವಿಮಾನ ಸಂಚಾರ ಪುನಾರಂಭ: ಪೆರ್ಲ ಅಭಿನಂದನೆ




**ಕಲಬುರಗಿ ಮೇ. 25:** ಕಲಬುರಗಿಯಿಂದ ಬೆಂಗಳೂರಿಗೆ ಜೂನ್ 10 ರಿಂದ ವಿಮಾನ ಸಂಚಾರ ಪುನರಾರಂಭಗೊಳ್ಳುವುದು ಹರ್ಷದ ಸಂಗತಿ ಹಾಗೂ ಉತ್ತರ ಕರ್ನಾಟಕ ಮತ್ತು ಕರಾವಳಿ ಕರ್ನಾಟಕವನ್ನು ಸಂಪರ್ಕ ಕಲ್ಪಿಸುವ ಕಲಬುರಗಿ – ಮಂಗಳೂರು ಮಧ್ಯೆ ವಿಮಾನ ಸೇವೆ ಕೂಡಲೇ ಆರಂಭಿಸಲು ಜನಪ್ರತಿನಿಧಿಗಳು ಪ್ರಯತ್ನಿಸಬೇಕೆಂದು ದಕ್ಷಿಣ ಕನ್ನಡ ಸಂಘದ ಮಾಜಿ ಅಧ್ಯಕ್ಷರಾದ ಡಾ.ಸದಾನಂದ ಪೆರ್ಲ ಒತ್ತಾಯಿಸಿದ್ದಾರೆ.

ಕಲಬುರಗಿಯಿಂದ ಬೆಂಗಳೂರಿಗೆ ವಿಮಾನ ಸಂಚಾರ ಪುನರಾರಂಭಗೊಂಡಿರುವುದರಿಂದ ರಾಜಧಾನಿಗೆ ಸಂಚರಿಸಲು ಕಲ್ಯಾಣ ಕರ್ನಾಟಕ ಭಾಗದ ಹಾಗೂ ಸುತ್ತು ಮುತ್ತಲು ಜಿಲ್ಲೆಗಳ ಜನತೆಗೆ ವರದಾನವಾಗಲಿದೆ. ಇದರಿಂದ ಕೈಗಾರಿಕೆ, ಪ್ರವಾಸೋದ್ಯಮ, ಶಿಕ್ಷಣ, ಕೃಷಿ ಸೇರಿದಂತೆ ಹಲವು ಕ್ಷೇತ್ರಗಳ ಪ್ರಗತಿಗೆ ಪೂರಕವಾಗಲಿದೆ. ಆದರೆ ಉತ್ತರ ಮತ್ತು ದಕ್ಷಿಣದ ಕರಾವಳಿ ಕರ್ನಾಟಕವನ್ನು ಜೋಡಣೆ ಮಾಡಲು ವಿಮಾನ ಸಂಪರ್ಕ ವ್ಯವಸ್ಥೆ ಅತ್ಯಂತ ಅಗತ್ಯವಾಗಿದ್ದು ಬೀದರ್, ಕಲಬುರಗಿ, ರಾಯಚೂರು, ಯಾದಗಿರಿ ಅಕ್ಕಲಕೋಟ್ ಸೋಲಾಪುರ, ಲಾತೂರ್ ಮುಂತಾದಡೆಗಳಿಂದ ಶಿಕ್ಷಣ, ಪ್ರವಾಸೋದ್ಯಮ ಹಾಗೂ ದೇವಾಲಯಗಳ ಪ್ರವಾಸಿಗರ ಸಂಖ್ಯೆ ಅತ್ಯಧಿಕವಿದೆ . ಆದರೆ ಪ್ರಸ್ತುತ ಬಸ್ ಗಳಲ್ಲಿ ಕನಿಷ್ಠ 17 ಗಂಟೆಗಳ ಪ್ರವಾಸ ಮಾಡಿ ಕರಾವಳಿಯ ಉಡುಪಿ ಅಥವಾ ಮಂಗಳೂರನ್ನು ತಲುಪಬೇಕಾಗಿದೆ. ಖಾಸಗಿ ವಾಹನದಲ್ಲಿ ಕನಿಷ್ಠ 12 ಗಂಟೆಗಳ ಪ್ರಯಾಣ ಸಮಯ ತಗಲುತ್ತದೆ. ಆದುದರಿಂದ ಕಲಬುರಗಿ ಮತ್ತು ಬೀದರ್ ನಿಂದ ಮಂಗಳೂರಿಗೆ ವಯಾ ಬೆಂಗಳೂರು ಮಾರ್ಗವಾಗಿ ( ಒನ್ ಸ್ಟಾಪ್) ಸಂಚರಿಸುವ ವಿಮಾನ ಸೇವೆ ಅತ್ಯಂತ ಅಗತ್ಯವಾಗಿದೆ ಎಂದು ಡಾ.ಪೆರ್ಲ ತಿಳಿಸಿದ್ದಾರೆ. ಪ್ರಸ್ತುತ ಬೀದರ್ ಕಲಬುರಗಿಯಿಂದ ಒಟ್ಟು ನಾಲ್ಕೈದು ಖಾಸಗಿ ಬಸ್ಸುಗಳು ವಿಜಯಪುರ ಹುಬ್ಬಳ್ಳಿ, ಅಂಕೋಲಾ, ಉಡುಪಿ, ಭಟ್ಕಳ ದಾರಿಯಾಗಿ ಮಂಗಳೂರಿಗೆ ಸ'ಂಚ'ರಿಸ'ುತ್ತಿದ'. ಂು'ಾದ'ಗಿರಿ ಶಹಾಪುರದಿಂದಲೂ ಖ

ಾಸಗಿ ಬಸ್ ಸಂಚಾರವಿದೆ. ಕರಾವಳಿ ಹಾಗೂ ಕಲ್ಯಾಣ ಕರ್ನಾಟಕ ಭಾಗದ ಸಂಸದರು ಜಂಟಿಯಾಗಿ ಪ್ರಯತ್ನಿಸಿ ಈ ಮಾರ್ಗದಲ್ಲಿ ವಿಮಾನ ಸೇವೆ ಆರಂಭಿಸಲು ಪ್ರಾಮಾಣಿಕ ಪ್ರಯತ್ನ ಮಾಡಬೇಕು. ಕೇಂದ್ರ ಸರ್ಕಾರವು ಉಡಾನ್ ಯೋಜನೆಯಡಿಯಲ್ಲಿ ಕಲಬುರಗಿ ಸೇರ್ಪಡೆ ಮಾಡಿ ಸಾಮಾನ್ಯ ಜನರು ಕೂಡಾ ವಿಮಾನದಲ್ಲಿ ಸಂಚರಿಸಲು ಅವಕಾಶ ಮಾಡಿಕೊಡಬೇಕು ಎಂದು ಡಾ. ಸದಾನಂದ ಪೆರ್ಲ ಪತ್ರಿಕಾ ಪ್ರಕಟಣೆಯಲ್ಲಿ ಒತ್ತಾಯಿಸಿದ್ದಾರೆ.

ಪ್ರಯಾಣಿಕ ಸ್ನೇಹಿ ಸಂಚಾರ ಸಮಯ ಅಗತ್ಯ ಜೂ. 10 ರಿಂದ ಬೆಂಗಳೂರಿನಿಂದ ಸಾಯಂಕಾಲ 6 ಗಂಟೆಗೆ ಗೆ ಹಾಗೂ ಕಲಬುರಗಿಯಿಂದ ಮರಳಿ 7.40 ಕ್ಕೆ ಬೆಂಗಳೂರಿಗೆ ವಿಮಾನ ಸಂಚರಿಸುವ ವೇಳಾಪಟ್ಟಿ ಇದ್ದು ಇದರ ಬದಲಾಗಿ ಬೆಳಗಿನ ಅವಧಿಯಲ್ಲಿ ವಿಮಾನ ಸಂಚಾರ ಇರುತ್ತಿದ್ದರೆ ಒಂದೇ ದಿನದಲ್ಲಿ ಬೆಂಗಳೂರಿನಲ್ಲಿ ಕೆಲಸ ಮುಗಿಸಿ ರಾತ್ರಿ ರೈಲುಗಾಡಿ ಮೂಲಕ ವಾಪಸಾಗುವ ಅನುಕೂಲವಿತ್ತು. ಈ ಬಗ್ಗೆ ಮುಂದಿನ ದಿನಗಳಲ್ಲಿ ಸ್ಟಾರ್ ಏರ್‌ಲೈನ್ಸ್ ನವರು ಸಮಯ ಬದಲಾವಣೆಗೆ ಚಿಂತನೆ ಮಾಡುವುದು ಉತ್ತಮ ಹಾಗೂ ಬೆಳಗ್ಗೆ ವಿಮಾನ ಸಂಚಾರ ಪ್ರಾರಂಭಿಸಿದರೆ ಬೆಂಗಳೂರು ಒನ್ ಸ್ಟಾಪ್ ಮಾಡಿ ಮುಂದೆ ಮಂಗಳೂರು ವರೆಗೆ ಸಂಚಾರ ವಿಸ್ತರಿಸಲು ಅವಕಾಶವಿದೆ ಎಂದು ಡಾ. ಪೆರ್ಲ ತಿಳಿಸಿದ್ದಾರೆ

# ಇಂದು ಬೆಳಗಾವಿ ಪಾಲಿಕೆ ಕಚೇರಿಗೆ ಹಾಕಲು ಕನ್ನಡಪರ ಸಂಘಟನೆಗಳ ನಿರ್ಧಾರ: ಕರ್ನಾಟಕ ಪರ ಗೊತ್ತುವಳಿಗೆ ಆಗ್ರಹ

**ಬೆಳಗಾವಿ, ಮೇ 25:** ಬೆಳಗಾವಿ ಮಹಾನಗರ ಪಾಲಿಕೆಯಲ್ಲಿ ಕರ್ನಾಟಕ ಪರವಾದ ಗೊತ್ತುವಳಿಗೆ ಆಗ್ರಹಿಸಿ ವಿವಿಧ ಕನ್ನಡಪರ ಸಂಘಟನೆಗಳು ಮಂಗಳವಾರ ಮಹಾನಗರ ಪಾಲಿಕೆ ಕಚೇರಿಗೆ ಮುತ್ತಿಗೆ ಹಾಕಲು ನಿರ್ಧರಿಸಿವೆ.

ಕನ್ನಡಸೇನೆ–ಕರ್ನಾಟಕ, ಕಿತ್ತೂರು ಕರ್ನಾಟಕ ಸೇನೆ, ಗಡಿನಾಡ ಕನ್ನಡಿಗರ ಸೇನೆ, ಕನ್ನಡ ಕ್ರಿಯಾ ಸಮಿತಿ ಸೇರಿದಂತೆ 20ಕ್ಕೂ ಹೆಚ್ಚು ವಿವಿಧ ಕನ್ನಡಪರ ಸಂಘಟನೆಗಳ ನೇತೃತ್ವದಲ್ಲಿ ಈ ಹೋರಾಟ ನಡೆಯಲಿದೆ. ನಾಳಿನ ಹೋರಾಟದಲ್ಲಿ ನಾಡಿನ ಕನ್ನಡಪರ ಹಿರಿಯ ಹೋರಾಟಗಾರರಾದ ಕನ್ನಡ ವಾಟಾಳ್ ಪಕ್ಷದ ಅಧ್ಯಕ್ಷ ವಾಟಾಳ್ ನಾಗರಾಜ್, ಡಾ. ರಾಜ್‌ಕುಮಾರ್ ಅಭಿಮಾನಿಗಳ ಸಂಘದ ಅಧ್ಯಕ್ಷ ಸಾ.ರಾ. ಗೋವಿಂದು, ಕನ್ನಡಸೇನೆ–ಕರ್ನಾಟಕ ರಾಜ್ಯಾಧ್ಯಕ್ಷ ಕೆ.ಆರ್. ಕುಮಾರ್ ಮತ್ತಿತರ ಮುಖಂಡರು ನೇತೃತ್ವ ವಹಿಸಲಿದ್ದಾರೆ.

ಪ್ರತಿಭಟನೆಗೆ ಮುನ್ನ ಬೆಳಗಾವಿಯ ಜಿಲ್ಲಾಧಿಕಾರಿಗಳ ಕಚೇರಿಯ ಆವರಣದಲ್ಲಿ ಪುನರ್ ಸ್ಥಾಪನೆಗೊಂಡ ಹಲ್ಮಿಡಿ ಶಾಸನದ ಪೂಜಾ ಕಾರ್ಯಕ್ರಮ ಆಯೋಜನೆಗೊಂಡಿದೆ. ಈ ವೇಳೆ ಕನ್ನಡಪರ ಹೋರಾಟಗಾರರು, ಹಲ್ಮಿಡಿ ಶಾಸನದ ಪ್ರತಿಕೃತಿಗೆ ಮಲಪ್ರಭೆ, ಘಟಪ್ರಭೆ, ದೂಧಗಂಗಾ, ಹಿರಣ್ಯಕೇಶಿ ಹಾಗೂ ಕೃಷ್ಣಾ ನದಿ ಪವಿತ್ರ ಜಲಾಭಿಷೇಕ ಹಾಗೂ ಕ್ಷೀರಾಭಿಷೇಕ ನೆರವೇರಿಸಲಿದ್ದಾರೆ. ಕಳೆದ ದಶಕಗಳಿಂದಲೂ ಬೆಳಗಾವಿ ಮಹಾನಗರ ಪಾಲಿಕೆಯಲ್ಲಿ ಕರ್ನಾಟಕ ಪರವಾದ ಗೊತ್ತುವಳಿಗೆ ಒತ್ತಾಯಿಸಿ ನಿರಂತರ ಹೋರಾಟ ನಡೆಯುತ್ತಿದೆ. ಆದರೂ, ಮಹಾನಗರ ಪಾಲಿಕೆ ಮತ್ತು ಸರ್ಕಾರಗಳು ಜಾಣಕುರುಡರಂತೆ ವರ್ತಿಸುತ್ತಿವೆ. ಬೆಳಗಾವಿ ಕರ್ನಾಟಕ ಅವಿಭಾಜ್ಯ ಅಂಗ, ಗಡಿ ವಿವಾದ ಪರಿಹಾರಕ್ಕೆ ಆಯೋಗದ ವರದಿಯೇ ಅಂತಿಮ ಎಂಬ ಗೊತ್ತುವಳಿಯನ್ನು ಅಂಗೀಕರಿಸಬೇಕೆನ್ನುವುದು ಹಕ್ಕೊತ್ತಾಯವಾಗಿದೆ ಎಂದು ಕನ್ನಡಸೇನೆ–ಕರ್ನಾಟಕದ ರಾಜ್ಯಾಧ್ಯಕ್ಷ ಕೆ.ಆರ್. ಕುಮಾರ್ ತಿಳಿಸಿದ್ದಾರೆ. ಹಲ್ಮಿಡಿ ಶಾಸನದ ಪೂಜೆ ಮತ್ತು ಮಹಾನಗರ ಪಾಲಿಕೆಗೆ ಮುತ್ತಿಗೆ ಕಾರ್ಯಕ್ರಮಕ್ಕೆ ಕನ್ನಡಿಗರು, ಕನ್ನಡಾಭಿಮಾನಿಗಳು, ಸಾರ್ವಜನಿಕರು, ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಮನವಿ ಮಾಡಿದ್ದಾರೆ.

# ಎಂಟು ತಿಂಗಳಲ್ಲಿ ರೈಲ್ವೆ ಕೆಳಸೇತುವೆ ಕಾಮಗಾರಿ ಪ್ರಾರಂಭ: ಸಂಸದ ಸಾಗರ ಖಂಡ್ರೆ



**ಬೀದರ್, ಮೇ. 25:** ನಗರದ ಹಳೇ ಆದರ್ಶ ಕಾಲೋನಿ ನ್ಯಾಷನಲ್ ಕಾಲೇಜು ಹತ್ತಿರ ರೈಲ್ವೆ ಕೆಳಸೇತುವೆ ನಿರ್ಮಾಣ ಕಾರ್ಯಕ್ಕಾಗಿ ಸಂಸದ ಸಾಗರ ಈಶ್ವರ ಖಂಡ್ರೆ ಅವರು ಜಿಲ್ಲಾಧಿಕಾರಿ, ರೈಲ್ವೆ ಇಲಾಖೆ ಅಧಿಕಾರಿ, ಏರ್ಫೋರ್ಸ್ ಅಧಿಕಾರಿ ಹಾಗೂ ಪುರಾತತ್ವ ಇಲಾಖೆ ಅಧಿಕಾರಿಗಳೊಂದಿಗೆ ಜಂಟಿಯಾಗಿ ಸ್ಥಳ ಪರಿಶೀಲನೆ ಮಾಡಿದರು.

ಈ ಸಮಯದಲ್ಲಿ ಸಂಸದರು ಅಧಿಕಾರಿಗಳೊಂದಿಗೆ ರೈಲ್ವೆ ಕೆಳಸೇತುವೆ ನಿರ್ಮಾಣದ ಸಾಧಕ–ಬಾದಕಗಳ ಬಗ್ಗೆ ಸಮಾಲೋಚನೆ ನಡೆಸಿದರು. ನಂತರ ಮಾತನಾಡಿದ ಅವರು, ಹಳೇ ಆದರ್ಶ ಕಾಲೋನಿ ಬಳಿ ರೈಲ್ವೆ ಕೆಳಸೇತುವೆ ನಿರ್ಮಾಣ ಮಾಡಬೇಕು ಎಂಬುದು ಜನರ ಬಹುದಿನಗಳ ಬೇಡಿಕೆಯಾಗಿತ್ತು. ಆದರೆ ಕೆಲವು ಸಮಸ್ಯೆಗಳ ಕಾರಣದಿಂದಾಗಿ ತೊಡಕಾಗಿತ್ತು, ನಿರಂತರ ಮೇಲ್ವಿಚಾರಣೆ ನಡೆಸಿ ಸಮಸ್ಯೆಗನ್ನು ಪರೇಹರಿಸಿ ಇಂದು ವಾಯುಪಡೆ, ರೈಲ್ವೆ ಹಾಗೂ ಪುರಾತತ್ವ ಇಲಾಖೆಯ ಅಧಿಕಾರಿಗಳೊಂದಿಗೆ ಜಂಟಿ ಸಮೀಕ್ಷೆ ನಡೆಸಿದ್ದೇನೆ. ಸೇತುವೆ ನಿರ್ಮಾಣಕ್ಕೆ ವಾಯುಪಡೆಯ 0.33, ಖಾಸಗಿಯ 0.33 ಎಕರೆ ಜಾಗ ಬೇಕಾಗುವ ನಿರೀಕ್ಷೆ ಇದೇ. ವಾಯು ಪಡೆಯ ಅಧಿಕಾರಿಗಳು ಈಗಾಗಲೇ ತಾವು ನಮಗೆ ಪ್ರಸ್ತಾವನೆ ಸಲ್ಲಿಸಿದಲ್ಲಿ ರಕ್ಷಣಾ ಸಚಿವಾಲಯದಿಂದ ಅನುಮೋದನೆ ಕೊಡಿಸುವುದಾಗಿ ಭರವಸೆ ನೀಡಿದ್ದಾರೆ. ಸ್ಮಾರಕಗಳು ಇರುವುದರಿಂದ ಪುರಾತತ್ವ ಇಲಾಖೆಯವರು ಸಹ ಸಹಕಾರ ನೀಡಿ ಅನುಮತಿ ಕೊಡಿಸುವುದಾಗಿ ತಿಳಿಸಿದ್ದಾರೆ. ಈಗಾಗಲೇ ಪ್ರಾಥಮಿಕ ವರದಿ ಸಿದ್ದವಾಗಿದೆ. ಅಧಿಕಾರಿಗಳು ಮಾರ್ಗದ ರೂಪುರೇಷೆ ನಿಗದಿ ಮಾಡುತ್ತಿದ್ದಾರೆ.

ಒಂದು ತಿಂಗಳಲ್ಲಿ ವಿಸ್ತೃತ ವರದಿ ತಯಾರಿಸಿ ಸಂಬಂಧಿಸಿದ ಇಲಾಖೆಗಳಿಂದ ಎನ್.ಓ.ಸಿ ಪಡೆದು 8 ರಿಂದ 9 ತಿಂಗಳಲ್ಲಿ ಟೆಂಡರ್ ಕರೆದು ಕಾಮಗಾರಿ ಪ್ರಾರಂಭಿಸಲಾಗುವುದು. ಈ ರೈಲ್ವೆ ಕೆಳ ಸೇತುವೆ ನಿರ್ಮಾಣದಿಂದ ಟ್ರಾಫಿಕ್ ಸಮಸ್ಯೆ ನಿವಾರಣೆಯಾಗಿ ಜನರಿಗೆ ಅನುಕೂಲವಾಗಲಿದೆ ಎಂದರು.ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಮಹಾನಗರ ಪಾಲಿಕೆ ಆಯುಕ್ತ ಮುಕುಲ್ ಜೈನ್, ರೈಲ್ವೆ ಇಲಾಖೆ, ವಾಯುಪಡೆ ಹಾಗೂ ಪುರಾತತ್ವ ಇಲಾಖೆಯ ಅಧಿಕಾರಿಳು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಎಸ್‌ಐಆರ್, ಇವಿಎಂ ವಿರೋಧಿಸಿ 21 ದಿನಗಳ ಉಪವಾಸ ಸತ್ಯಾಗ್ರಹ ಅಂತ್ಯ




**ಬೀದರ್, ಮೇ. 25:** ಮತದಾರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಹಾಗೂ ಇವಿಎಂ ರದ್ದುಗೊಳಿಸುವಂತೆ ಆಗ್ರಹಿಸಿ ಸಾಮಾಜಿಕ ಕಾರ್ಯಕರ್ತ ಗೋಪಾಲ್ ಸಿಂಗ್ ಠಾಕೂರ್ ಅವರು ನಡೆಸುತ್ತಿದ್ದ 21 ದಿನಗಳ ಏಕಾಂಗಿ ಉಪವಾಸ ಸತ್ಯಾಗ್ರಹ ಇಂದು ಅಂತ್ಯಗೊಳಿಸಲಾಯಿತು.ಔರಾದ ಪಟ್ಟಣದ ಮಿನಿ ವಿಧಾನಸೌಧ ಎದುರು ವೋಟ್ ಸತ್ಯಾಗ್ರಹ ಹೆಸರಿನಲ್ಲಿ ಮೇ 30 ರಿಂದ ಕೇವಲ ನೀರು ಸೇವಿಸಿ ಉಪವಾಸ ಆರಂಭಿಸಿದ್ದ ಅವರು,

ರಾಷ್ಟ್ರಪತಿಗಳಿಗೆ ಹಕ್ಕೊತ್ತಾಯ ಪತ್ರ ರವಾನಿಸುವಂತೆ ಆಗ್ರಹಿಸಿದ್ದರು. ಬೀದರ್ ಜಿಲ್ಲಾ ಎಸ್‌ಐಆರ್ ವಿರೋಧಿ ಸಮಿತಿಯ ಪ್ರಮುಖರು ಆರೋಗ್ಯದ ಹಿತದೃಷ್ಟಿಯಿಂದ ಸತ್ಯಾಗ್ರಹ ಹಿಂಪಡೆಯುವಂತೆ ಮನವೊಲಿಸಿದ ಹಿನ್ನೆಲೆಯಲ್ಲಿ ತಹಶೀಲ್ದಾರ್ ಮಹೇಶ್ ಪಾಟೀಲ್ ಹಾಗೂ ಸಮಿತಿಯ ಸದಸ್ಯರು ಎಳೆನೀರು ಕುಡಿಸಿ ಉಪವಾಸ ಅಂತ್ಯಗೊಳಿಸಿದರು. ಉಪವಾಸ ಅಂತ್ಯ ಬಳಿಕ ಮಾತನಾಡಿದ ಗೋಪಾಲ್ ಸಿಂಗ್ ಠಾಕೂರ್, ಪ್ರಜಾಪ್ರಭುತ್ವದಲ್ಲಿ ಪ್ರಜೆಗಳ ಹಕ್ಕು ಕಸಿಯುವ ಕೆಲಸ ಆಗಬಾರದು. ಎಸ್‌ಐಆರ್ ಹಾಗೂ

ಇವಿಎಂ ಮೂಲಕ ಪ್ರಜಾತಂತ್ರ ದುರ್ಬಲಗೊಳಿಸುವ ನೀತಿಯ ವಿರುದ್ಧ ಗಾಂಧೀಜಿಯವರ ಅಹಿಂಸಾ ಮಾರ್ಗದಲ್ಲಿ ಹೋರಾಟ ನಡೆಸಿದ್ದೇನೆ. ಇವಿಎಂ ಬದಲಿಗೆ ಬ್ಯಾಲೆಟ್ ಪೇಪರ್ ಜಾರಿಗೆ ತರಬೇಕು ಎಂದರು. ಸಿದ್ಧರಾಮ ಶರಣರು ಬೆಲ್ದಾಳ, ಅಬ್ದುಲ್ ಮನ್ನಾನ್ ಸೇಠ್, ಬಾಬುರಾವ್ ಹೊನ್ನಾ ಮಾತನಾಡಿ ದೇಶದಲ್ಲಿ ಪ್ರಜಾಪ್ರಭುತ್ವದ ಮೌಲ್ಯಗಳಿಗೆ ಧಕ್ಕೆ ಉಂಟಾಗುತ್ತಿದೆ. ಎಸ್‌ಐಆರ್ ಹಾಗೂ ಇವಿಎಂ ಹೆಸರಿನಲ್ಲಿ ಜನರ ಹಕ್ಕು ಕಸಿಯುವ ಪ್ರಯತ್ನ ನಡೆಯುತ್ತಿದೆ. ಇದರ ವಿರುದ್ಧ ಸಂಘಟಿತ ಹೋರಾಟ ಅಗತ್ಯಎಂದು ಹೇಳಿದರು. ವಿಧಾನ ಪರಿಷತ್ ಮಾಜಿ ಸದಸ್ಯ ಕೆ. ಪುಂಡಲಿಕರಾವ್, ಅರವಿಂದಕುಮಾರ ಅರಳಿ, ಮುಖಂಡರಾದ ಮಾರುತಿ ಬೌದ್ಧೆ, ಫಯಾಜ್ ಅಲಿ, ಬಂಟಿ ದರ್ಬಾರೆ, ಶರಣಪ್ಪ ಪಾಟೀಲ್ ಇದ್ದರು.

# ಕಲಬುರಗಿ: ಬಕ್ರೀದ್ ವೇಳೆ ಪ್ರಾಣಿವಧೆ ತಡೆಗೆ ಆಗ್ರಹ



**ಕಲಬುರಗಿ, ಮೇ. 25:** ಬಕ್ರೀದ್ ವೇಳೆ ಗೋ ಅಕ್ರಮ ಸಾಗಣೆ ಹಾಗೂ ಹತ್ಯೆ ನಡೆಯುವದನ್ನು ತಡೆಯಬೇಕು ಎಂದು ಆಗ್ರಹಿಸಿ ವಿಶ್ವ ಹಿಂದೂ ಪರಿಷತ್ ಮತ್ತು ಬಜರಂಗದಳದ ಪದಾಧಿಕಾರಿಗಳು ನಗರ ಪೊಲೀಸ್ ಆಯುಕ್ತರ ಕಚೇರಿ ಎದುರು ಪ್ರತಿಭಟನೆ ನಡೆಸಿದರು. ರಾಜ್ಯ ಸರ್ಕಾರದ ವಿರುದ್ಧ ಹಾಗೂ ಗೋವಿನ ಮಹತ್ವದ ಕುರಿತು ಘೋಷಣೆಗಳನ್ನು ಮೊಳಗಿಸಿದರು.

ಬಳಿಕ ಬಜರಂಗದಳದ ಪ್ರಾಂತೀಯ ಸಂಯೋಜಕ ಬಸವರಾಜ ಸೂಗೂರ ಮಾತನಾಡಿ, ರಾಜ್ಯದಲ್ಲಿ ಪ್ರಾಣಿವಧೆ ಅಪರಾಧವಾಗಿದೆ. ಅದನ್ನು ನಿಷೇಧಿಸುವ ಕಾಯ್ದೆಯನ್ನು ಕಟ್ಟುನಿಟ್ಟಾಗಿ ಜಾರಿಗೆ ತರಬೇಕು. ವಧಾಗಾರಗಳನ್ನು ಸರ್ಕಾರ ಮುಟ್ಟುಗೋಲು ಹಾಕಿಕೊಳ್ಳಬೇಕು ಎಂದು ಆಗ್ರಹಿಸಿದರು.

ಪೊಲೀಸರು ಗೋರಕ್ಷಣೆಯ ಪ್ರತಿ ಪ್ರಕರಣವನ್ನು ಗಂಭೀರವಾಗಿ ತೆಗೆದುಕೊಳ್ಳಬೇಕು. ಪ್ರಾಣಿವಧೆ ಆಗದಂತೆ ಪೊಲೀಸರೇ ಬೀಟ್ ಅಥವಾ ವಿಚಕ್ಷಣಾ ವ್ಯವಸ್ಥೆ ಮೂಲಕ ಮಾಹಿತಿ ಪಡೆದುಕೊಂಡು ಕ್ರಮ ಕೈಗೊಳ್ಳಬೇಕು. ಒಂದು ವೇಳೆ ಬೀಟ್ ಪೊಲೀಸ್ ಸರಿಯಾದ ಮಾಹಿತಿಯನ್ನು ಕ್ಷಿಪ್ರ ಸಮಯಕ್ಕೆ ಕೊಡದೇ ಹೋಗಿ, ಗೋಹತ್ಯೆ ನಡೆದಲ್ಲಿ ತಕ್ಷಣ ಅವರನ್ನು ಅಮಾನತು ಮಾಡಬೇಕು ಎಂದು ಒತ್ತಾಯಿಸಿದರು.

ಗೋವುಗಳ ಅಕ್ರಮ ಸಾಗಣೆ ತಡೆಯಲು ಪೊಲೀಸರಿಗೆ ಸಂಪೂರ್ಣ ಅಧಿಕಾರವಿದೆ. ಯಾವುದೇ ವಾಹನದಲ್ಲಿ ಗೋ ಅಕ್ರಮ ಸಾಗಾಟ ಆಗದಂತೆ ವಿಶೇಷವಾಗಿ ಮೇ 28ರ ವರೆಗೆ ಸಂಪೂರ್ಣ ಬಂದೋಬಸ್ತ್ ಮಾಡಬೇಕು. ವಿಶೇಷವಾಗಿ ಗಡಿಭಾಗದಲ್ಲಿ ಕೂಡ ಚೆಕ್‌ಪೋಸ್ಟ್ ಹಾಕಿ ತಡೆಯಬೇಕು. ಮುಚ್ಚಿದ ಕಂಟೇನರ್‌ಗಳನ್ನು ಸರಿಯಾಗಿ ತಪಾಸಣೆ ಮಾಡಬೇಕು ಎಂದರು.

ಗೋವುಗಳ ಕಳವು ಆದ ಕಡೆ ತಕ್ಷಣ ಶ್ವಾನದಳ ಕರೆಸಿ, ಅದರ ವಧೆ ಆಗುವ ಮೊದಲೇ ಮಾಲು ಸಹಿತ ಕಳ್ಳನನ್ನು ಬಂಧಿಸಬೇಕು. ಗೋರಕ್ಷಣೆಗಾಗಿ ಪೊಲೀಸರು ಅತ್ಯಾಧುನಿಕ ತಂತ್ರಜ್ಞಾನ ಬಳಸಬೇಕು. ವಾಹನದೊಳಗೆ ಜಾನುವಾರುಗಳಿವೆಯೋ ಎಂದು ಪರೀಕ್ಷಿಸಲು ಟೋಲ್ ಪ್ಲಾಜಾದಂತಹ ಆಯಕಟ್ಟಿನ ಸ್ಥಳಗಳಲ್ಲಿ ಎಲೆಕ್ಟ್ರಾನಿಕ್ ಸ್ಕ್ಯಾನರ್ ಬಳಸಬೇಕು ಎಂದು ಆಗ್ರಹಿಸಿದರು.

ಪೊಲೀಸರು ಪ್ರಕರಣ ದಾಖಲಿಸಿದ ಬಳಿಕ ಆರೋಪಿಗಳಿಗೆ ಶಿಕ್ಷೆ ಆಗುವಂತೆ ನೋಡಿಕೊಳ್ಳಬೇಕು. ಗೋ ಅಕ್ರಮ ಸಾಗಣೆ ವೇಳೆ ವಶಪಡಿಸಿಕೊಂಡ ಗೋವುಗಳನ್ನು ಸಾಕಲು ಎಲ್ಲ ಜಿಲ್ಲೆಗಳಲ್ಲಿ ಸರ್ಕಾರಿ ಗೋಶಾಲೆ ತೆರೆಯಬೇಕು. ಜಿಲ್ಲೆಯ ಜಾನುವಾರುಗಳ ಸಂಖ್ಯೆಯ ಶೇ 0.75ರಷ್ಟು ಜಾನುವಾರು ಸಾಕುವಷ್ಟು ವ್ಯವಸ್ಥೆ ಅದರಲ್ಲಿ ಮಾಡಬೇಕು ಎಂದು ಸರ್ಕಾರಿ ಆದೇಶ ಇದೆ. ಅದನ್ನು ಪರಿಣಾಮಕಾರಿಯಾಗಿ ಕಾರ್ಯಗತ ಗೊಳಿಸಬೇಕು ಎಂದರು.

ಬಳಿಕ ಎಸಿಪಿ ಶರಣಬಸಪ್ಪ ಸುಬೇದಾರ ಅವರಿಗೆ ಮನವಿ ಸಲ್ಲಿಸಲಾಯಿತು.ಬಜರಂಗದಳದ ಮಹಾನಗರ ಸಂಯೋಜಕ ರಾಘವೇಂದ್ರ ಗುತ್ತೇದಾರ, ದಿವ್ಯಾ ಹಾಗರಗಿ, ಎಂ.ಎಸ್.ಪಾಟೀಲ ನರಿಬೋಳ, ಗೋರಕ್ಷಾ ಪ್ರಮುಖರಾದ ಕೌಸ್ತುಭ ಕುಲಕರ್ಣಿ, ಶಿವಕುಮಾರ ಸುಕುಲೂರ, ವಿಭಾಗೀಯ ಸಹ ಸಂಯೋಜಕ ಶಶಿಕುಮಾರ್ ಶೆಟ್ಟಿ ಸೇರಿ ಹಲವರು ಪಾಲ್ಗೊಂಡಿದ್ದರು.

# ಶಿವಲಿಂಗಕ್ಕೆ ಅಪಚಾರ ಎಸಗಿದವರ ರಕ್ಷಿಸದಿರಿ: ಭಗವಂತ ಖೂಬಾ



**ಬೀದರ್, ಮೇ. 25:** ಆಳಂದ ಪಟ್ಟಣದ ರಾಘವ ಚೈತನ್ಯ ಶಿವಲಿಂಗಕ್ಕೆ (ಲಾಡ್ಲೆ ಮಶಾಕ್ ದರ್ಗಾ) ಅಪಚಾರ ಮಾಡಿದವರನ್ನು ಯಾವುದೇ ಕಾರಣಕ್ಕೂ ಸರ್ಕಾರ ರಕ್ಷಿಸಬಾರದು ಎಂದು ಕೇಂದ್ರದ ಮಾಜಿ ಸಚಿವರೂ ಆದ ಬಿಜೆಪಿ ಮುಖಂಡ ಭಗವಂತ ಖೂಬಾ ಆಗ್ರಹಿಸಿದ್ದಾರೆ. ರಾಜ್ಯದಲ್ಲಿರುವ ಸಿದ್ದರಾಮಯ್ಯನವರ ಕಾಂಗ್ರೆಸ್ ಸರ್ಕಾರ, ಮುಸ್ಲಿಮರ ಅತಿಯದ ಓಲೈಕೆಗೆ ಮುಂದಾದೆ. ಬಹುಸಂಖ್ಯಾತ ಹಿಂದೂಗಳಿಗೆ ಅನ್ಯಾಯ ಮಾಡುತ್ತಿದೆ. ಯಾವುದೇ ಕಾರಣಕ್ಕೂ ರಾಘವ ಚೈತನ್ಯ ಶಿವಲಿಂಗ ಘಟನೆಯಲ್ಲಿ ದಾಖಲಾಗಿದ್ದ ಪ್ರಕರಣಗಳನ್ನು ಸರ್ಕಾರ ವಾಪಸ್ ಪಡೆದುಕೊಳ್ಳಬಾರದು. ಒಂದಿಂಚೂ ಬಹುಸಂಖ್ಯಾತರ ಭಾವನೆಗಳಿಗೆ ಸ್'ಂದಿಸ'ಬ'ೕಕ'ನ'ು್ನ ವ' ಮನೋಭಾವನೆಯು ಈ ಸರ್ಕಾರದಲ್ಲಿ ಸಂಪೂರ್ಣವಾಗಿ ಸತ್ತು ಹೋಗಿದೆ. ಕೇವಲ ಮುಸ್ಲಿಮರ ಓಲೈಕೆ ಮಾಡುವಂಥ ಆಡಳಿತ ನೀಡುತ್ತಿದೆ ಎಂದು ಟೀಕಿಸಿದರು. ಆಳಂದ ಪಟ್ಟಣದಲ್ಲಿರುವ ರಾಘವ ಚೈತನ್ಯ ಶಿವಲಿಂಗ ಮಠವನ್ನು ಈ ಹಿಂದೆ ಮುಸ್ಲಿಮರು ಅತಿಕ್ರಮಿಸಿ, ಲಾಡ್ಲೆ ಮಶಾಕ್ ದರ್ಗಾ ಮಾಡಿಕೊಂಡಿದ್ದಾರೆ. ಅಲ್ಲಿರುವ ಶಿವಲಿಂಗಕ್ಕೆ ಅಲ್ಲಿನ ಮುಸ್ಲಿಮರು ಅಪಚಾರ ಎಸಗಿದ್ದರು. ಆಗ ನಾನು ಕೇಂದ್ರ ಸಚಿವನಾಗಿದ್ದೆ. ಲೋಕಸಭಾ ಇದನ್ನು ಖಂಡಿಸಿ ಆ ವರ್ಷದ ಶಿವರಾತ್ರಿ ಹಬ್ಬದಂದು ನಾನು ಸೇರಿದಂತೆ ಸ್ವಾಮೀಜಿಗಳು, ಹಿಂದೂ ಧರ್ಮೀಯರೊಂದಿಗೆ ಸರ್ಕಾರದಿಂದ ಅನುಮತಿ ಪಡೆದು, ರಾಘವ ಚೈತನ್ಯ ಶಿವಲಿಂಗಕ್ಕೆ ಪೂಜೆ ಸಲ್ಲಿಸಲು ತೆರಳಿದಾಗ, ಅಲ್ಲಿಮ ಮುಸ್ಲಿಮರು ಅವರ ಮನೆಗಳಲ್ಲಿ ತಲ್ವಾರ, ಕೊಡಲಿ, ಕಲ್ಲು, ಖಾರದ ಪುಡಿ ಸಂಗ್ರಹಿಸಿ, ನಮ್ಮ ಹಾಗೂ ಪೊಲೀಸರ ಮೇಲೆ ದಾಳಿ ನಡೆಸಿದ್ದರು. ಅಧಿಕಾರಿಗಳ ಕಾರುಗಳನ್ನು ಜಖಂಗೊಳಿಸಿದ್ದರು. ಆದಕಾರಣ ಅಂದಿನ ಸರ್ಕಾರ 13ಕ್ಕೂ ಹೆಚ್ಚು ಮುಸ್ಲಿಮರ ವಿರುದ್ಧ ಪ್ರಕರಣ ದಾಖಲಿಸಿತ್ತು. ವಾಸ್ತವ ಹೀಗಿರುವಾಗ ಆ ಪ್ರಕರಣ ಹಿಂಪಡೆಯುವುದು ಸರಿಯಲ್ಲ ಎಂದು ತಿಳಿಸಿದ್ದಾರೆ.

ಸಿದ್ದರಾಮಯ್ಯನವರ ಸರ್ಕಾರ ಈ 13 ಪ್ರಕರಣ ವಾಪಸ್ ತೆಗೆದುಕೊಂಡು ಅರಾಜಕತೆ ಸೃಷ್ಟಿಸುವ ದುಸ್ಸಾಹಸ ಮಾಡುತ್ತಿದೆ. ಇದನ್ನು ನಾನು ಖಂಡಿಸುತ್ತೇನೆ. ಇದನ್ನು ಹಿಂದೂಗಳು ಸಹಿಸುವುದಿಲ್ಲ. ಮುಂದಿನ ದಿನಗಳಲ್ಲಿ ಹಿಂದೂಗಳು ಇದಕ್ಕೆ ತಕ್ಕ ಉತ್ತರ ಕೊಡಲಿದ್ದಾರೆ. ಹಿಂದೂಗಳು ಪೂಜಿಸುವ ಶಿವಲಿಂಗಕ್ಕೆ ಅಪಚಾರ ಮಾಡಿರುವ ಮುಸ್ಲಿಮರ ವಿರುದ್ಧ ಕಾಂಗ್ರೆಸ್ ಪಕ್ಷದಲ್ಲಿರುವ ಹಿಂದೂ ಶಾಸಕರು, ಸಂಸದರು ಖಂಡಿಸಬೇಕು. ಪ್ರಕರಣ ವಾಪಸ್ ಪಡೆದುಕೊಳ್ಳುವ ಸರ್ಕಾರದ ಈ ನಿರ್ಧಾರವನ್ನು ವಿರೋಧಿಸಬೇಕೆಂದು ಆಗ್ರಹಿಸಿದ್ದಾರೆ.

# ನುಸುಳುಕೋರರ ಶಂಕೆ: ಹುಬ್ಬಳ್ಳಿಯಲ್ಲಿ ಪೊಲೀಸರಿಂದ ಪರಿಶೀಲನೆ



**ಹುಬ್ಬಳ್ಳಿ, ಮೇ. 25:** ಉತ್ತರ ಭಾರತದಿಂದ ಹುಬ್ಬಳ್ಳಿಗೆ ರೈಲಿನಲ್ಲಿ ಬಂದು, ಬಸ್‌ನಲ್ಲಿ ಗೋವಾಕ್ಕೆ ತೆರಳುತ್ತಿದ್ದ ಸುಮಾರು ಇನ್ನೂರಕ್ಕೂ ಹೆಚ್ಚು ಕಾರ್ಮಿಕರನ್ನು ಭದ್ರತೆ ದೃಷ್ಟಿಯಿಂದ ನಗರದ ಗೋಕುಲ ರಸ್ತೆಯ ಹೊಸ ಬಸ್ ನಿಲ್ದಾಣದಲ್ಲಿ ಪೊಲೀಸರು ಮತ್ತು ಕಂದಾಯ ಇಲಾಖೆ ಸಿಬ್ಬಂದಿ ಅವರನ್ನು ತಡೆದು ಪರಿಶೀಲನೆ ನಡೆಸಿದರು.

ಅಮರಾವತಿ ಎಕ್ಸ್‌ಪ್ರೆಸ್ ರೈಲಿನಲ್ಲಿ ಹುಬ್ಬಳ್ಳಿ ರೈಲು ನಿಲ್ದಾಣಕ್ಕೆ ಬೆಳಿಗ್ಗೆ 9ಕ್ಕೆ ಕುಟುಂಬ ಸಮೇತ ಬಂದಿದ್ದ ಕಾರ್ಮಿಕರು, ಬಸ್‌ನಲ್ಲಿ ಗೋವಾಕ್ಕೆ ತೆರಳಲೆಂದು ಗೋಕುಲ ರಸ್ತೆಯ ಬಸ್ ನಿಲ್ದಾಣಕ್ಕೆ ಬಂದಿದ್ದರು. ಆಗ ಹಿಂದೂ ಸಂಘಟನೆ ಕಾರ್ಯಕರ್ತರು,

'ಪಶ್ಚಿಮ ಬಂಗಾಳದಿಂದ ಬಂದ ಬಾಂಗ್ಲಾ ನುಸುಳುಕೋರರು ಇರಬಹುದು' ಎಂದು ಸಂಶಯ ವ್ಯಕ್ತಪಡಿಸಿ, ಪೊಲೀಸರಿಗೆ ಮಾಹಿತಿ ನೀಡಿದ್ದರು.

ಮುಂಜಾಗ್ರತಾ ಕ್ರಮವಾಗಿ ಪೊಲೀಸರು ಕಂದಾಯ ಇಲಾಖೆ ಜೊತೆಗೂಡಿ, ಪೊಲೀಸ್ ಹೊರಠಾಣೆ ಮತ್ತು ವಿಶ್ರಾಂತಿ ಗೃಹದಲ್ಲಿ ಕಾರ್ಮಿಕರ ಗುರುತು ಪತ್ರಗಳ ಪರಿಶೀಲನೆ ನಡೆಸಿದರು. ಆಗ ಒಡಿಶಾದ ಪತಿ–ಪತ್ನಿ ಮತ್ತು ಇಬ್ಬರು ಮಕ್ಕಳಿರುವ ಕುಟುಂಬವೊಂದರ ದಾಖಲೆ ಪತ್ರಗಳು ಆಧಾರ್ ಕಾರ್ಡ್‌ಗೆ ಹೋಲಿಕೆಯಾಲಿಲ್ಲ. ಆದರೆ, ಅವರು ಅದೇ ಗ್ರಾಮದವರೆಂದು ಅಲ್ಲಿನ ಪಂಚರು ದೃಢಪಡಿಸಿದರು. ಶಾಸಕ ಮಹೇಶ ಟೆಂಗಿನಕಾಯಿ ಭೇಟಿ ನೀಡಿ, ಪೊಲೀಸರಿಂದ ಮಾಹಿತಿ ಪಡೆದರು.ಪಶ್ಚಿಮ ಬಂಗಾಳ, ಒಡಿಶಾ, ಜಾರ್ಖಂಡ್, ಉತ್ತರ ಭಾರತ ಹಾಗೂ ಬಿಹಾರ ರಾಜ್ಯದ ಕೂಲಿ ಕಾರ್ಮಿಕರು ಗೋವಾ ಹಾಗೂ ಕರ್ನಾಟಕ ರಾಜ್ಯದ ಕೆಲ ಜಿಲ್ಲೆಗಳಲ್ಲಿ ಕೂಲಿ ಕೆಲಸ ಮಾಡುತ್ತಿದ್ದಾರೆ. ಕರ್ನಾಟಕದಿಂದ ಗೋವಾ ಸಂಪರ್ಕ ಕಲ್ಪಿಸುವ ರೈಲು ಹಳಿಯ ದುರಸ್ತಿ ಕಾರ್ಯದ ಹಿನ್ನೆಲೆಯಲ್ಲಿ ಗೋವಾಕ್ಕೆ ತೆರಳುವ ರೈಲುಗಳು ಹುಬ್ಬಳ್ಳಿ ನಿಲ್ದಾಣದಲ್ಲಿ ಕೊನೆ ಆಗುತ್ತಿವೆ.

ಹೀಗಾಗಿ ಕಾರ್ಮಿಕರು ಗೋಕುಲ ರಸ್ತೆ ಬಸ್ ನಿಲ್ದಾಣಕ್ಕೆ ಬಂದು ಪಣಜಿ ಬಸ್ ಹತ್ತುವಾಗ, ಅಷ್ಟೊಂದು ಸಂಖ್ಯೆಯ ಜನರನ್ನು ಕಂಡು ಹಿಂದೂ ಕಾರ್ಯಕರರ್ತರು ಬಾಂಗ್ಲಾದೇಶದಿಂದ ಬಂದಿದ್ದಾರೆ ಎಂದು ಸಂಶಯ ವ್ಯಕ್ತಪಡಿಸಿದ್ದರು ಎಂದು ಪೊಲೀಸರು ತಿಳಿಸಿದರು.

# 371–ಜೆ ಹೋರಾಟಗಾರರ ಸಮಾವೇಶದಲ್ಲಿ 13 ಗೊತ್ತುವಳಿ ಸ್ವೀಕಾರ



**ರಾಯಚೂರು, ಮೇ. 25:** ಹೈದರಾಬಾದ್ ಕರ್ನಾಟಕ ಜನಾಂದೋಲನ ಕೇಂದ್ರದಿಂದ ನಗರದಲ್ಲಿ ನಡೆದ ಕಲ್ಯಾಣ ಕರ್ನಾಟಕದ ಜಿಲ್ಲೆಗಳ 371–ಜೆ ಹೋರಾಟಗಾರರ ಸಮಾವೇಶದಲ್ಲಿ ಸುಧೀರ್ಘ ಚರ್ಚೆ ನಡೆಸಿ, ಕೆಕೆಆರ್‌ಡಿಬಿಯಿಂದಾದ ಬದಲಾವಣೆಯ ಅಧ್ಯಯನ ನಡೆಸಬೇಕು ಎನ್ನುವುದು ಸೇರಿದಂತೆ ಪ್ರಮುಖ 13 ಗೊತ್ತುವಳಿಗಳನ್ನು ಸ್ವೀಕರಿಸಲಾಯಿತು.

ಸರ್ಕಾರಿ ಉದ್ಯೋಗ ನೇಮಕಾರಿ ಆದೇಶ 2013 ರ ನಿಯಮ 12(ಎ) ರಂತೆ 371(ಜೆ) ವ್ಯಾಜ್ಯಗಳಿಗೆ ಸಂಬಂಧಪಟ್ಟಂತೆ ಪ್ರತ್ಯೇಕ 1371(ಜೆ) ನ್ಯಾಯಮಂಡಳಿ ರಚಿಸಬೇಕು. ರಾಜ್ಯಮಟ್ಟದ ವಿಭಾಗೀಯ ಕಚೇರಿಗಳನ್ನು (ಕೆ.ಪಿ.ಎಸ್.ಸಿ. ಕೆ.ಇ.ಎ. ಪಿ.ಯು.ಬೋರ್ಡ್ ಇತ್ಯಾದಿ) ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ವರ್ಗಾಯಿಸಬೇಕು. ಇಂದಿಗೂ 371(ಜೆ) ಮೀಸಲಾತಿ ಅನುಷ್ಠಾನಗೊಳಿಸದ ಇಲಾಖೆಗಳನ್ನು ಗುರುತಿಸಿ ಕಾಲಮಿತಿಗಳೊಳಗೆ ಶೇ.8 ರ ಮೀಸಲಾತಿ ಅನುಷ್ಠಾನ ಮಾಡಬೇಕು ಎಂದು ಒತ್ತಾಯಿಸಲಾಯಿತು.

ರಾಜ್ಯದ ಎಲ್ಲ ವಿಶ್ವವಿದ್ಯಾಲಯಗಳಿಗೆ ಎಂ.ಫಿಲ್ /ಪಿಎಚ್ ಡಿ ಕೋರ್ಸುಗಳ ಪ್ರವೇಶ ಪ್ರಕ್ರಿಯೆಯ ಅಧಿಸೂಚನೆಯಲ್ಲಿ ಕಡ್ಡಾಯವಾಗಿ 371(ಜೆ) ಮೀಸಲಾತಿ ನಿಗದಿಗೊಳಿಸುವಂತೆ ನಿರ್ದೇಶನ ನೀಡಬೇಕು. ಕಲ್ಯಾಣ ಕರ್ನಾಟಕ ಭಾಗದಲ್ಲಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಹಾಗೂ ಪಿಯು ಕಾಲೇಜುಗಳ ಜೊತೆಗೆ ತಾಂತ್ರಿಕ ಶಿಕ್ಷಣ ಕಾಲೇಜುಗಳಲ್ಲಿ ಖಾಲಿ ಇರುವ ಅಂದಾಜು 40 ಸಾವಿರ ಹುದ್ದೆಗಳನ್ನು ಕೂಡಲೇ ನೇಮಕಾತಿ ಮಾಡಬೇಕು ಎಂದು ಒತ್ತಾಯಿಸಿ ಗೊತ್ತುವಳಿ ಸ್ವೀಕರಿಸಲಾಯಿತು.

ಕಲ್ಯಾಣ ಕರ್ನಾಟಕದ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ವಿದ್ಯಾರ್ಥಿನಿಯರ ಸಂಖ್ಯೆಗೆ ಅನುಗುಣವಾಗಿ ಶೌಚಾಲಯಗಳ ನಿರ್ಮಾಣ ಮಾಡಬೇಕು. ಬಾಲಕಿಯರಿಗೆ ಶಾಲಾ ಕಾಲೇಜುಗಳಲ್ಲಿ ಪ್ರತ್ಯೇಕ ಕೊಠಡಿ ವ್ಯವಸ್ಥೆ ಮಾಡಬೇಕು. ಅವರಿಗೆ ಪ್ಯಾಡ್‌ಗಳನ್ನು ಉಚಿತವಾಗಿ ಒದಗಿಸಬೇಕು ಎಂದು ಆಗ್ರಹಿಸಲಾಯಿತು. ರಾಜ್ಯ ಸರ್ಕಾರ ಎಲ್ಲ ಪ್ರಾಥಮಿಕ ಶಾಲೆಗಳಿಗೆ ಪರಿಚಾರಕರನ್ನು ನೇಮಕಾತಿ ಮಾಡಬೇಕು. ಕರ್ನಾಟಕ ಪಬ್ಲಿಕ್ ಶಾಲೆಗಳ ಹಾಗೂ ಮ್ಯಾಗ್ನೆಟ್ ಶಾಲೆ ನಿರ್ಮಿಸಿ ಹಾಜರಾತಿ ಕಡಿಮೆ ಎಂಬ ನೆಪವೊಡ್ಡಿ ಗ್ರಾಮೀಣ ಪ್ರದೇಶದ ಶಾಲೆಗಳನ್ನು ಮುಚ್ಚುವ ನಿರ್ಧಾರವನ್ನು ಕೈಬಿಡಬೇಕು ಹಾಗೂ ಕೆ.ಪಿ.ಎಸ್. ಶಾಲೆಗಳಿಗೆ ಕಲ್ಯಾಣ ಕರ್ನಾಟಕ ಪ್ರವೇಶಾಭಿವೃದ್ಧಿ ಮಂಡಳಿಯಿಂದ ಪ್ರತಿ ಶಾಲೆಗೆ 2 ಕೋಟಿ ಅನುದಾನ ಹಣ ನೀಡುವುದನ್ನು ರದ್ದುಗೊಳಿಸಬೇಕು ಎಂದು ಒತ್ತಾಯಿಸಲಾಯಿತು

ಕಲ್ಯಾಣ ಕರ್ನಾಟಕ ಪ್ರವೇಶಾಭಿವೃದ್ಧಿ ಮಂಡಳಿಯು 12 ವರ್ಷಗಳಲ್ಲಿ ಕೈಗೊಂಡಿರುವ ಅಭಿವೃದ್ಧಿ ಕಾರ್ಯಗಳ ಕುರಿತು ಹಾಗೂ ಈ ಮಂಡಳಿಯಿಂದ ಆಗಿರುವ ಬದಲಾವಣೆ ಕುರಿತು ಅಧ್ಯಯನ ನಡೆಸಬೇಕು.

ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯು ಮುಂದಿನ 10 ವರ್ಷಗಳಲ್ಲಿ ಆ ಪ್ರದೇಶದ ಸಮಗ್ರ ಅಭಿವೃದ್ಧಿ ಕುರಿತು ಒಂದು ಸಮಗ್ರ ಯೋಜನಾ ವರದಿ ತಯಾರಿಸಬೇಕು ಎಂದು ಮನವಿ ಮಾಡಲಾಯಿತು.

ಯರಮರಸ್ ಶಾಖೋತ್ಪನ್ನು ವಿದ್ಯುತ್ ಉತ್ಪಾದನಾ ಕೇಂದ್ರದ ನಿರ್ವಹಣೆಯನ್ನು 780 ಹುದ್ದೆಗಳ ಜೊತೆಗೆ ಹೈದರಾಬಾದ್ ಮೂಲದ ಕಂಪನಿಗೆ ಹೊರಗುತ್ತಿಗೆ ನೀಡಿದ್ದು, ಹೊರಗುತ್ತಿಗೆ ಕರಾರಿನಲ್ಲಿ 371(ಜೆ) ನಿಯಮಗಳ ಉಲ್ಲಂಘನೆ ಯಾಗಿದೆ. ಹೊರಗುತ್ತಿಗೆಯಲ್ಲಿಯೂ 371(ಜೆ) ನೀಡಬೇಕೆಂಬ ನಿಯಮವಿದ್ದರೂ ಕಡೆಗಣಿಸಲಾಗಿದೆ. ಕಾರಣ ಸದರಿ ಕರಾರನ್ನು ಮಾರ್ಪಡು ಮಾಡಿ 371(ಜೆ) ಮೀಸಲಾತಿಯಂತೆ ಮಾನ ಸಂಪನ್ಮೂಲ ಒದಗಿಸಲು ಕ್ರಮ ವಹಿಸಬೇಕು. ಆರ್‌ಟಿಪಿಎಸ್‌ನಲ್ಲಿ 20 ವರ್ಷಕ್ಕಿಂತ ಹೆಚ್ಚು ಕಾಲ ಸೇವೆ ಸಲ್ಲಿಸುತ್ತಿರುವ ಗುತ್ತಿಗೆ ಕಾರ್ಮಿಕರನ್ನು ಕಾಯಂ ಮಾಡಬೇಕು ಎಂದು ಆಗ್ರಹಿಸಲಾಯಿತು.

ಕೊಪ್ಪಳ ಜಿಲ್ಲೆಯ ಗಿಣಿಗೇರಾ ಸುತ್ತಮುತ್ತ, ಯಾದಗಿರಿ ಜಿಲ್ಲೆಯ ಕಡೆಚೂರು ಕೈಗಾರಿಕ ಪ್ರದೇಶ ಮತ್ತು ರಾಯಚೂರಿನ ಶಕ್ತಿನಗರ ಭಾಗದಲ್ಲಿ ಅತಿಯಾದ ಪ್ರಮಾಣದಲ್ಲಿ ಮಾರಕ ರಾಸಾಯನಿಕ ಉದ್ದಿಮೆಗಳು ಅತೀಯಾಗಿ ಸ್ಥಾಪನೆಯಾಗಿವೆ. ಈ ಉದ್ದಿಮೆಗಳ ಮಾಲಿನ್ಯದಿಂದ ಜನಜೀವನದ ಮೇಲೆ ದುಷ್ಪರಿಣಾಮಗಳಾಗುತ್ತಿವೆ. ನೆಲಜಲ ವಾಯು ವಿಷಯಯುಕ್ತವಾಗುತ್ತಿದೆ. ಈ ಉದ್ದಿಮೆಗಳ ತ್ಯಾಜ್ಯವನ್ನು ವೈಜ್ಞಾನಿಕವಾಗಿ ನಿರ್ವಹಣೆ ಮಾಡಲು ಕಟ್ಟುನಿಟ್ಟಿನ ಕ್ರಮ ವಹಿಸಬೇಕು.

ಕೊಪ್ಪಳದ ಬಲ್ಡೋಟ ಉಕ್ಕಿನ ಕಾರ್ಖಾನೆಗೆ ನೀಡಿದ ಪರವಾನಿಗೆಯನ್ನು ಕೂಡಲೇ ರದ್ದು ಮಾಡಬೇಕು ಎಂದು ಒತ್ತಾಯಿಸಲಾಯಿತು. ರಾಯಚೂರಿಗೆ ಏಮ್ಸ್ ಮಂಜೂರು ಮಾಡಬೇಕು ಎಂದು ಸಭೆ ಒಕ್ಕೊರಲಿನಿಂದ ಒತ್ತಾಯಿಸಿ ನಿರ್ಣಯ ತೆಗೆದುಕೊಳ್ಳಲಾಯಿತು. ಕಲ್ಯಾಣ ಕರ್ನಾಟಕದ ಜಿಲ್ಲೆಗಳ ಹೋರಾಟಗಾರರು ಸಮಾವೇಶದಲ್ಲಿ ಹಾಜರಿದ್ದರು.

# ಕಮಲಾಪುರ ಗ್ರಾಮದಲ್ಲಿ ಕುಡಿಯುವ ನೀರಿಗೆ ಪರದಾಟ



**ರಾಯಚೂರು, ಮೇ. 25:** ಗ್ರಾಮೀಣ ಭಾಗಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಗಂಭೀರ ಸ್ವರೂಪ ಪಡೆದುಕೊಳ್ಳುತ್ತಿದೆ. ತಾಲ್ಲೂಕಿನ ಕಮಲಾಪುರ ಗ್ರಾಮಸ್ಥರ ಸ್ಥಿತಿ ಇನ್ನೂ ಗಂಭೀರವಾಗಿದೆ. ನೀರಿಗಾಗಿ ಮಹಿಳೆಯರು, ವೃದ್ಧರು, ಮಕ್ಕಳು ಸಾಲುಗಟ್ಟಿ ಕೊಡಗಳನ್ನು ಇಟ್ಟು ಕಾಯುತ್ತಿರುವ ದೃಶ್ಯಗಳು ಗ್ರಾಮೀಣ ಭಾಗದ ದುಸ್ಥಿತಿಗೆ ಕನ್ನಡಿ ಹಿಡಿದಂತಿವೆ. ಒಂದು ಕಡೆ ಉರಿಯುವ ಬಿಸಿಲು, ಮತ್ತೊಂದೆಡೆ ನೀರಿನ ಅಭಾವ; ಈ ಎರಡರ ಮಧ್ಯೆ ಗ್ರಾಮಸ್ಥರ ಬದುಕು ಸಂಕಷ್ಟದ ಸುಳಿಯಲ್ಲಿ ಸಿಲುಕಿದೆ.

2,400 ಜನಸಂಖ್ಯೆ ಹೊಂದಿರುವ ಈ ಗ್ರಾಮದಲ್ಲಿ 1,700ಕ್ಕೂ ಹೆಚ್ಚು ಮನೆಗಳಿವೆ. ಗ್ರಾಮಸ್ಥರು ಮುಖ್ಯವಾಗಿ ಶುದ್ಧ ಕುಡಿಯುವ ನೀರಿನ ಘಟಕ, ತೆರೆದ ಬಾವಿ ಮತ್ತು ಕೊಳವೆಬಾವಿಗಳ ಮೇಲೆಯೇ ಅವಲಂಬಿತರಾಗಿದ್ದಾರೆ. ಆದರೆ ಇತ್ತೀಚಿನ ದಿನಗಳಲ್ಲಿ ಅಂತರ್ಜಲ ಮಟ್ಟ ಕುಸಿತ, ಮಳೆಯ ಕೊರತೆ ಹಾಗೂ ವಿದ್ಯುತ್ ವ್ಯತ್ಯಯಗಳಿಂದ ನೀರು ಪೂರೈಕೆ ಸಂಪೂರ್ಣ ಅಸ್ತವ್ಯಸ್ತಗೊಂಡಿದೆ. ಪರಿಣಾಮವಾಗಿ ದಿನನಿತ್ಯದ ಬದುಕೇ ದುಸ್ತರವಾಗಿದೆ.

ಗ್ರಾಮದ 3 ಕೊಳವೆಬಾವಿಗಳ ಪೈಕಿ ಕೇವಲ ಎರಡರಲ್ಲಿ ಅಲ್ಪ ಪ್ರಮಾಣದ ನೀರು ಬರುತ್ತಿದ್ದು, ಉಳಿದ ಒಂದು ಕೊಳವೆಬಾವಿ ಸಂಪೂರ್ಣ ಬರಿದಾಗಿವೆ. ಇದರಿಂದ ಗ್ರಾಮಸ್ಥರಿಗೆ ನೀರು ಪಡೆಯುವುದು ದೊಡ್ಡ ಸವಾಲಾಗಿ ಪರಿಣಮಿಸಿದೆ. ಎರಡರಲ್ಲಿ ಮೂಲದ ಮೇಲೆ ಸಂಪೂರ್ಣ ಗ್ರಾಮ ಅವಲಂಬಿತ ವಾಗಿರುವುದರಿಂದ ನೀರು ಸಂಗ್ರಹಿಸಲು ಜನರು ಗಂಟೆಗಳ ಕಾಲ ಸಾಲಿನಲ್ಲಿ ನಿಲ್ಲುವ ಪರಿಸ್ಥಿತಿ ನಿರ್ಮಾಣವಾಗಿದೆ.

ಮಹಿಳೆಯರು ಬೆಳಿಗ್ಗೆಯೇ ಕೊಡ, ಬಿಂದಿಗೆಗಳನ್ನು ಹಿಡಿದು ನೀರಿಗಾಗಿ ಸಾಲಿನಲ್ಲಿ ನಿಂತುಕೊಳ್ಳುವ ದೃಶ್ಯ ಸಾಮಾನ್ಯವಾಗಿದೆ. ಕೆಲವೊಮ್ಮೆ ಎರಡು ದಿನಕ್ಕೊಮ್ಮೆ ಮಾತ್ರ ನೀರು ಸಿಗುವುದರಿಂದ ಕುಟುಂಬದ ಅಗತ್ಯಗಳನ್ನು ಪೂರೈಸುವುದು ದುಸ್ತರವಾಗಿದೆ. ಕುಡಿಯಲು, ಅಡುಗೆಗೆ, ಸ್ವಚ್ಛತೆಗೆ ಬೇಕಾದ ನೀರನ್ನು ಜೋಪಾನವಾಗಿ ಬಳಸಬೇಕಾದ ಅನಿವಾರ್ಯತೆ ಎದುರಾಗಿದೆ. ಮಕ್ಕಳು ಶಾಲೆಗೆ ಹೋಗುವ ಬದಲು ನೀರು ತರುವ ಕೆಲಸದಲ್ಲಿ ತೊಡಗಿಕೊಳ್ಳಬೇಕಾದ ಪರಿಸ್ಥಿತಿ ಉಂಟಾಗಿದೆ ಎಂದು ಗ್ರಾಮಸ್ಥರು ಬೇಸರ ವ್ಯಕ್ತಪಡಿಸಿದ್ದಾರೆ.

ಗ್ರಾಮ ಪಂಚಾಯಿತಿ ವಿರುದ್ಧ ಸ್ಥಳೀಯರಲ್ಲಿ ಆಕ್ರೋಶ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ.

ನೀರಿನ ಸಮಸ್ಯೆ ಉಲ್ಬಣವಾಗುತ್ತಿದ್ದರೂ ಪಂಚಾಯಿತಿ ಸಮರ್ಪಕ ಕ್ರಮ ಕೈಗೊಂಡಿಲ್ಲ ಎಂಬ ಆರೋಪ ಕೇಳಿಬರುತ್ತಿದೆ. ಈಗಾಗಲೇ ನಾಲ್ಕು ಹೊಸ ಕೊಳವೆಬಾವಿ ತೋಡಿದರೂ ನೀರು ಸಿಗುತ್ತಿಲ್ಲ. ಇದರಿಂದ ಪಂಚಾಯಿತಿ ಕೈಕಟ್ಟಿ ಕುಳಿತಂತಾಗಿದೆ ಎಂಬ ಮಾತುಗಳು ಸಾರ್ವಜನಿಕರಲ್ಲಿ ಕೇಳಿಬರುತ್ತಿವೆ. ನೀರು ಪೂರೈಕೆಯಲ್ಲಿ ವ್ಯತ್ಯಯ ಉಂಟಾದಾಗ ತಕ್ಷಣ ಸ್ಪಂದಿಸಬೇಕಾದ ಅಧಿಕಾರಿಗಳು ನಿರ್ಲಕ್ಷ್ಯ ತೋರಿದ್ದಾರೆ ಎಂದು ಗ್ರಾಮಸ್ಥ ತಿರುಮಲ ದೂರಿದ್ದಾರೆ.

ಗ್ರಾಮದಲ್ಲಿ ದೊಡ್ಡ ಕೆರೆ ಇದ್ದರೂ ಶುದ್ಧೀಕರಿಸಿ ಬಳಕೆಗೆ ಯೋಗ್ಯವಾಗಿಸುವ ಯಾವುದೇ ಪ್ರಯತ್ನ ನಡೆದಿಲ್ಲ ಎನ್ನುವುದು ಸ್ಥಳೀಯರ ಮತ್ತೊಂದು ಆರೋಪ. ಕೆರೆಯನ್ನು ಅಭಿವೃದ್ಧಿಪಡಿಸಿ ಮಳೆ ನೀರು ಸಂಗ್ರಹಿಸುವ ವ್ಯವಸ್ಥೆ ಮಾಡಿದರೆ ಭವಿಷ್ಯದಲ್ಲಿ ನೀರಿನ ಸಮಸ್ಯೆಯನ್ನು ಕೆಲಮಟ್ಟಿಗೆ ನಿಯಂತ್ರಿಸಬಹುದಿತ್ತು ಎಂದು ಹಿರಿಯರು ಅಭಿಪ್ರಾಯಪಟ್ಟಿದ್ದಾರೆ. ಆದರೆ ದೀರ್ಘಕಾಲಿಕ ಯೋಜನೆಗಳ ಕೊರತೆಯಿಂದ ಗ್ರಾಮಸ್ಥರು ಪ್ರತಿವರ್ಷ ಬೇಸಿಗೆಯಲ್ಲಿ ಇದೇ ಸಂಕಷ್ಟ ಅನುಭವಿಸುತ್ತಿದ್ದಾರೆ.

ವಿದ್ಯುತ್ ಕಡಿತವೂ ನೀರಿನ ಸಮಸ್ಯೆಯನ್ನು ಮತ್ತಷ್ಟು ಗಂಭೀರ ಗೊಳಿಸಿದೆ. ಗ್ರಾಮ ಪಂಚಾಯಿತಿ ಮೋಟಾರ್‌ಗಳ ಮೂಲಕ ನೀರು ಪೂರೈಕೆ ಮಾಡಲು ಯತ್ನಿಸಿದರೂ ಪದೇಪದೇ ವಿದ್ಯುತ್ ವ್ಯತ್ಯಯ ಉಂಟಾಗುತ್ತಿರು ವುದರಿಂದ ಸಮರ್ಪಕವಾಗಿ ನೀರು ಒದಗಿಸಲು ಸಾಧ್ಯವಾಗುತ್ತಿಲ್ಲ. ವಿದ್ಯುತ್ ಬಂದಾಗ ಮಾತ್ರ ನೀರು ಪಂಪ್ ಮಾಡಲಾಗುತ್ತಿದ್ದು,

ಸಮಯಕ್ಕೆ ಸರಿಯಾಗಿ ಪೂರೈಕೆ ನಡೆಯುತ್ತಿಲ್ಲ. ಇದರಿಂದ ಜನರು ರಾತ್ರಿ ಹೊತ್ತಲ್ಲಿಯೂ ನೀರಿಗಾಗಿ ಕಾಯುವ ಪರಿಸ್ಥಿತಿ ಎದುರಾಗಿದೆ. ಗ್ರಾಮದಲ್ಲಿ ಜನಸಂಖ್ಯೆಗೆ ಅನುಗುಣವಾಗಿ ನೀರು ಪೂರೈಕೆ ನಡೆಯುತ್ತಿಲ್ಲ ಎಂದು ಸ್ಥಳೀಯರು ಹೇಳಿದ್ದಾರೆ.

ಪರಿಸ್ಥಿತಿ ಇದೇ ರೀತಿ ಮುಂದುವರಿದರೆ ಮುಂದಿನ ದಿನಗಳಲ್ಲಿ ನೀರಿನ ಸಮಸ್ಯೆ ಮತ್ತಷ್ಟು ಗಂಭೀರ ಸ್ವರೂಪ ಪಡೆದುಕೊಳ್ಳುವ ಸಾಧ್ಯತೆ ಇದೆ. ಮಳೆಯ ಕೊರತೆ ಮುಂದುವರಿದರೆ ಅಂತರ್ಜಲ ಮಟ್ಟ ಇನ್ನಷ್ಟು ಕುಸಿಯುವ ಆತಂಕವೂ ಎದುರಾಗಿದೆ. ರೈತರು ಈಗಾಗಲೇ ಬೆಳೆ ನಷ್ಟದಿಂದ ಸಂಕಷ್ಟದಲ್ಲಿದ್ದು, ಕುಡಿಯುವ ನೀರಿಗೂ ಪರದಾಡುವ ಸ್ಥಿತಿ ನಿರ್ಮಾಣವಾಗಿರುವುದು ಗ್ರಾಮೀಣ ಬದುಕಿನ ದುಸ್ಥಿತಿಯನ್ನು ಎತ್ತಿಹಿಡಿಯುತ್ತಿದೆ.

ಜಿಲ್ಲಾಡಳಿತ ಹಾಗೂ ಸಂಬಂಧಪಟ್ಟ ಅಧಿಕಾರಿಗಳಿಗೆ ತಕ್ಷಣ ಶಾಶ್ವತ ಪರಿಹಾರ ಕ್ರಮ ಕೈಗೊಳ್ಳುವಂತೆ ಗ್ರಾಮಸ್ಥರು ಆಗ್ರಹಿಸಿದ್ದಾರೆ.

ಹೊಸ ನೀರಿನ ಯೋಜನೆ ಜಾರಿಗೆ ತರುವುದು, ಕೆರೆ ಅಭಿವೃದ್ಧಿಪಡಿಸುವುದು, ಹೆಚ್ಚುವರಿ ಬೋರವೆಲ್ ವ್ಯವಸ್ಥೆ ಕಲ್ಪಿಸುವುದು ಹಾಗೂ ವಿದ್ಯುತ್ ಪೂರೈಕೆಯನ್ನು ಸಮರ್ಪಕಗೊಳಿಸುವ ಮೂಲಕ ಸಮಸ್ಯೆ ನಿವಾರಿಸಬೇಕು ಎಂದು ನರಸಿಂಹ ನಾಯಕ ಒತ್ತಾಯಿಸಿದ್ದಾರೆ.

> ದೂರದಿಂದ ನೀರು ಹೊತ್ತು ತಂದು ದಿನ ಸಾಗಿಸುತ್ತಿದ್ದೇವೆ. ಆದರೆ ನಮ್ಮ ಸಂಕಷ್ಟ ಕೇಳಲು ಜಿಲ್ಲೆಯಲ್ಲಿ ಯಾರಿಗೂ ಸಮಯವಿಲ್ಲ
> ವಸಂತಕುಮಾರ ನಾಯಕ, ಗ್ರಾಮಸ್ಥಗ್ರಾಮದಲ್ಲಿ ಕೆರೆ ಇದ್ದರೂ ಶುದ್ಧೀಕರಿಸಿ ನೀರು ಪೂರೈಕೆ ಮಾಡಲು ಪಂಚಾಯಿತಿ ಮುಂದಾಗುತ್ತಿಲ್ಲ. ಕೂಡಲೇ ಜಿಲ್ಲಾ ಮಟ್ಟದ ಅಧಿಕಾರಿಗಳು ಕೆರೆ ಶುದ್ಧೀಕರಿಸಿ ನೀರು ಪೂರೈಕೆ ಮಾಡಲು ಮುಂದಾಗಬೇಕು
> ಚಂದ್ರಶೇಖರ ಪವಾರ್, ರಾಯಚೂರು ತಾ.ಪಂ ಇಒರಾಯಚೂರು ತಾಲ್ಲೂಕಿನ ಕಮಲಾಪುರ ಗ್ರಾಮಕ್ಕೆ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿ,
> ಸಮಸ್ಯೆಯನ್ನು ಶೀಘ್ರವಾಗಿ ಬಗೆಹರಿಸಿ ಸಮರ್ಪಕವಾಗಿ ನೀರು ಸರಬರಾಜು ಮಾಡುವಂತೆ ಕ್ರಮ ಕೈಗೊಳ್ಳಲಾಗುವುದು.
> –ನಜೀರ್ ಸಾಬ್, ಗ್ರಾಮಸ್ಥ.




ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯದಲ್ಲಿ ದಲಿತ ವಿರೋಧಿ ನೀತಿ ಅನುಸರಿಸಲಾಗುತ್ತಿದೆ ಎಂದು ಆರೋಪಿಸಿ ರಾಷ್ಟ್ರೀಯ ಅಂಬೇಡ್ಕರ್ ಸೇನೆಯ ಸದಸ್ಯರು ಸೋಮವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಧರಣಿ ನಡೆಸಿದರು.

# ಸರ್ಕಾರಿ ಜಾಗ ಒತ್ತುವರಿ ಮಾಡಿ ಸೈಟ್ ಮಾರಾಟ ಪಾಲಿಕೆ ಸದಸ್ಯೆ ಪತಿ ಶಿವರಾಜ್ ವಿರುದ್ಧ ವಂಚನೆ ಆರೋಪ: ಪ್ರಕರಣ ದಾಖಲು



**ಬಳ್ಳಾರಿ, ಮೇ 25:** ನಗರದ ಹೊರವಲಯದ ಪಾತ್ರ ಬೂದಿಹಾಳ್ ಗ್ರಾಮದ ಸರ್ಕಾರಿ ಜಾಗವನ್ನು ಅಕ್ರಮವಾಗಿ ಒತ್ತುವರಿ ಮಾಡಿಕೊಂಡು ಬಡ ಜನರಿಗೆ ಸೈಟ್ ನೀಡುವುದಾಗಿ ನಂಬಿಸಿ ಲಕ್ಷಾಂತರ ರೂಪಾಯಿ ಸಂಗ್ರಹಿಸಿರುವ ಗಂಭೀರ ಆರೋಪ ಬಳ್ಳಾರಿ ಮಹಾನಗರ ಪಾಲಿಕೆಯ ಕಾಂಗ್ರೆಸ್ ಸದಸ್ಯೆ ಉಮಾದೇವಿ ಅವರ ಪತಿ ಶಿವರಾಜ್ ವಿರುದ್ಧ ಪ್ರಕರಣ ದಾಖಲಾಗಿದೆ.

ಪಾತ್ರ ಬೂದಿಹಾಳ್ ಗ್ರಾಮದ ಸರ್ವೆ ನಂ.125ಪಿ ವ್ಯಾಪ್ತಿಯ ಸುಮಾರು 7.87 ಎಕರೆ ಸರ್ಕಾರಿ ಜಾಗದಲ್ಲಿ ಅನುಮತಿ ಇಲ್ಲದೆ ಲೇಔಟ್ ನಿರ್ಮಿಸಿ, ಬಳಿಕ ಪ್ರತಿ ಸೈಟ್ ಅನ್ನು ಸುಮಾರು ?1.50 ಲಕ್ಷದವರೆಗೆ ಮಾರಾಟ ಮಾಡಲಾಗಿದೆ ಎಂದು ಸ್ಥಳೀಯರು ಆರೋಪಿಸಿದ್ದಾರೆ. ಈ ಸಂಬಂಧ ಹಲವಾರು ಬಡ ಕುಟುಂಬಗಳು ಹಣ ಕಳೆದುಕೊಂಡಿರುವ ಸಾಧ್ಯತೆ ವ್ಯಕ್ತವಾಗಿದೆ.

ಜಿಲ್ಲಾಡಳಿತದ ಸೂಚನೆಯ ಮೇರೆಗೆ ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಜುಬೇರ್ ನೇತೃತ್ವದಲ್ಲಿ ಇತ್ತೀಚೆಗೆ ನಡೆದ ಒತ್ತುವರಿ ತೆರವು ಕಾರ್ಯಾಚರಣೆಯ ವೇಳೆ ಅಕ್ರಮ ಲೇಔಟ್ ಹಾಗೂ ಸೈಟ್ ಮಾರಾಟದ ವಿಚಾರ ಬೆಳಕಿಗೆ ಬಂದಿದೆ ಎನ್ನಲಾಗಿದೆ. ಕಾರ್ಯಾಚರಣೆಯ ಸಂದರ್ಭದಲ್ಲಿ ಹಣ ನೀಡಿ ಸೈಟ್ ಪಡೆದಿದ್ದ ಹಲವಾರು ಕುಟುಂಬಗಳು ಅಧಿಕಾರಿಗಳ ಎದುರು ತಮ್ಮ ಅಳಲು ತೋಡಿಕೊಂಡಿದ್ದು, ?ನಮಗೆ ಮನೆ ಸೈಟ್ ಸಿಗುತ್ತದೆ ಎಂಬ ನಂಬಿಕೆಯಲ್ಲಿ ಹಣ ನೀಡಿದ್ದೇವೆ. ಈಗ ಎಲ್ಲವೂ ತೆರವುಗೊಳ್ಳುತ್ತಿದೆ? ಎಂದು ಕಣ್ಣೀರಿಟ್ಟಿದ್ದಾರೆ ಎಂದು ತಿಳಿದುಬಂದಿದೆ.

**ದಾಖಲೆ ಇಲ್ಲದೆ ಹಣ ವಸೂಲಿ ಆರೋಪ:–** ಸಂತ್ರಸ್ತರ ಆರೋಪದ ಪ್ರಕಾರ, ?ಲೇಔಟ್ ಪೂರ್ಣಗೊಂಡ ಬಳಿಕ ನಿಮ್ಮ ಹೆಸರಿಗೆ ರಿಜಿಸ್ಟರ್ ಮಾಡಿ ದಾಖಲೆಗಳನ್ನು ನೀಡುತ್ತೇವೆ? ಎಂದು ನಂಬಿಸಿ ಹಲವರಿಂದ ಹಣ ಪಡೆಯಲಾಗಿದೆ. ಆದರೆ ಹಣ ಸ್ವೀಕರಿಸಿದ್ದಕ್ಕೆ ಯಾವುದೇ ಅಧಿಕೃತ ರಶೀದಿ ಅಥವಾ ದಾಖಲೆ ನೀಡಲಾಗಿಲ್ಲ ಎಂದು ದೂರಲಾಗಿದೆ.

ಕೆಲವರು ಹಣ ನೀಡುವ ಸಂದರ್ಭದ ವೀಡಿಯೊಗಳನ್ನು ರಹಸ್ಯವಾಗಿ ಚಿತ್ರೀಕರಿಸಿಕೊಂಡಿದ್ದು, ಅವು ಇದೀಗ ಬಹಿರಂಗವಾಗಿವೆ ಎನ್ನಲಾಗಿದೆ. ಈ ವೀಡಿಯೊಗಳಲ್ಲಿ ಹಣ ವಹಿವಾಟಿನ ದೃಶ್ಯಗಳಿರುವುದಾಗಿ ಸ್ಥಳೀಯರು ಹೇಳುತ್ತಿದ್ದಾರೆ.

**ಬಡ ಕುಟುಂಬಗಳ ಸಂಕಷ್ಟ:–** ಸ್ವಂತ ಮನೆ ಕಟ್ಟಿಕೊಳ್ಳುವ ಕನಸಿನಿಂದ ಕೂಲಿ ಕಾರ್ಮಿಕರು, ಸಣ್ಣ ವ್ಯಾಪಾರಿಗಳು ಹಾಗೂ ಆರ್ಥಿಕವಾಗಿ ಹಿಂದುಳಿದ ಕುಟುಂಬಗಳು ತಮ್ಮ ಉಳಿತಾಯ ಹಣವನ್ನು ನೀಡಿ ಸೈಟ್ ಪಡೆದಿದ್ದರು ಎಂದು ತಿಳಿದುಬಂದಿದೆ. ಆದರೆ ಇದೀಗ ಜಾಗ ಸರ್ಕಾರಿ ಸ್ವತ್ತಾಗಿರುವುದು ಹಾಗೂ ಲೇಔಟ್ ಅಕ್ರಮ ಎನ್ನುವ ವಿಚಾರ ಹೊರಬಂದ ಹಿನ್ನೆಲೆ ಹಲವು ಕುಟುಂಬಗಳು ಸಂಕಷ್ಟಕ್ಕೆ ಸಿಲುಕಿವೆ.

ವರ್ಷಗಳ ಕಾಲ ದುಡಿದು ಉಳಿಸಿಕೊಂಡ ಹಣವನ್ನು ಕೊಟ್ಟಿದ್ದೇವೆ. ಈಗ ನಮಗೆ ಸೈಟ್ ಇಲ್ಲ, ಹಣವೂ ಮರಳಿ ಸಿಗುತ್ತಿಲ್ಲ? ಎಂದು ಕೆಲವು ಸಂತ್ರಸ್ತರು ಬೇಸರ ವ್ಯಕ್ತಪಡಿಸಿದ್ದಾರೆ.

**ಸ್ಥಳೀಯರಲ್ಲಿ ಆಕ್ರೋಶ:–** ಸರ್ಕಾರಿ ಹಳ್ಳದ ಜಾಗವನ್ನು ಒತ್ತುವರಿ ಮಾಡಿಕೊಂಡು ಅಕ್ರಮ ಲೇಔಟ್ ನಿರ್ಮಿಸಿ ಬಡ ಜನರಿಗೆ ಸೈಟ್ ಮಾರಾಟ ಮಾಡಲಾಗಿದೆ ಎಂಬ ಆರೋಪದಿಂದ ಸ್ಥಳೀಯರಲ್ಲಿ ಆಕ್ರೋಶ ವ್ಯಕ್ತವಾಗಿದೆ. ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಹಾಗೂ ವಂಚನೆಗೆ ಒಳಗಾದ ಕುಟುಂಬಗಳಿಗೆ ನ್ಯಾಯ ಒದಗಿಸಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

ಈ ಪ್ರಕರಣದಲ್ಲಿ ಎಷ್ಟು ಜನರಿಂದ ಹಣ ವಸೂಲಿ ಮಾಡಲಾಗಿದೆ, ಒಟ್ಟು ಎಷ್ಟು ಮೊತ್ತ ಸಂಗ್ರಹಿಸಲಾಗಿದೆ ಎಂಬುದು ಇನ್ನೂ ಸ್ಪಷ್ಟವಾಗಿಲ್ಲ. ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆ ತನಿಖೆ ಕೈಗೊಂಡ ಬಳಿಕವೇ ಸಂಪೂರ್ಣ ಮಾಹಿತಿ ಬಹಿರಂಗವಾಗುವ ಸಾಧ್ಯತೆ ಇದೆ.

# ಬಳ್ಳಾರಿಯ ರಾಜೀವ್ ಗಾಂಧಿ ನಗರದಲ್ಲಿ ಮೂಲಸೌಕರ್ಯ ಕಾಮಗಾರಿಗಳಿಗೆ ಪಾಲಿಕೆ ಸದಸ್ಯೆ ಚಾಲನೆ



**ಬಳ್ಳಾರಿ, ಮೇ.25:** ಬಳ್ಳಾರಿ ಮಹಾನಗರ ಪಾಲಿಕೆಯ ವಾರ್ಡ್ ನಂ.34ರ ರಾಜೀವ್ ಗಾಂಧಿ ನಗರದಲ್ಲಿ ಕುಡಿಯುವ ನೀರು, ಒಳಚರಂಡಿ ಹಾಗೂ ಪೇವರ್ಸ್ ಅಳವಡಿಸುವ ಅಭಿವೃದ್ಧಿ ಕಾಮಗಾರಿಗೆ ಮಾಜಿ ಮಹಾಪೌರರು ಹಾಗೂ ಪಾಲಿಕೆ ಸದಸ್ಯರಾದ ರಾಜೇಶ್ವರಿ ಸುಬ್ಬರಾಯುಡು ಅವರು ಭೂಮಿ ಪೂಜೆ ನೆರವೇರಿಸಿದರು.

ಈ ಪ್ರದೇಶದಲ್ಲಿ ಹಲವು ವರ್ಷಗಳಿಂದ ಸಮರ್ಪಕ ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಒಳಚರಂಡಿ ಸೌಲಭ್ಯ ಇಲ್ಲದ ಕಾರಣ ಸಾರ್ವಜನಿಕರು ಸಾಕಷ್ಟು ಸಮಸ್ಯೆ ಅನುಭವಿಸುತ್ತಿದ್ದರು. ಮಳೆಯ ಸಮಯದಲ್ಲಿ ರಸ್ತೆಗಳಲ್ಲಿ ನೀರು ನಿಂತು ಸಂಚಾರಕ್ಕೂ ತೊಂದರೆ ಉಂಟಾಗುತ್ತಿತ್ತು. ಇದರಿಂದ ಸ್ಥಳೀಯ ನಿವಾಸಿಗಳು ಮೂಲಸೌಕರ್ಯ ಅಭಿವೃದ್ಧಿಗೆ ಒತ್ತಾಯಿಸುತ್ತಿದ್ದರು.

ಸಾರ್ವಜನಿಕರ ಬೇಡಿಕೆಯನ್ನು ಪರಿಗಣಿಸಿ 15ನೇ ಹಣಕಾಸು ಆಯೋಗದ ಅನುದಾನದಡಿ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದೆ.

ಕಾಮಗಾರಿಯಡಿ ಕುಡಿಯುವ ನೀರಿನ ಪೈಪ್‌ಲೈನ್ ಅಳವಡಿಕೆ, ಒಳಚರಂಡಿ ನಿರ್ಮಾಣ ಹಾಗೂ ಪೇವರ್ಸ್ ಅಳವಡಿಕೆ ಕಾರ್ಯ ನಡೆಯಲಿದೆ. ಕಾಮಗಾರಿ ಪೂರ್ಣ ಗೊಂಡ ಬಳಿಕ ಪ್ರದೇಶದ ಜನರಿಗೆ ಮೂಲಭೂತ ಸೌಲಭ್ಯಗಳು ಸುಧಾರಿಸಲಿದ್ದು, ಸಂಚಾರ ಹಾಗೂ ಸ್ವಚ್ಛತೆ ಸಮಸ್ಯೆಗೂ ಪರಿಹಾರ ಸಿಗಲಿದೆ ಎಂದು ಸ್ಥಳೀಯರು ಅಭಿಪ್ರಾಯಪಟ್ಟರು.

ಭೂಮಿಪೂಜೆ ಬಳಿಕ ಮಾತನಾಡಿದ ರಾಜೇಶ್ವರಿ ಸುಬ್ಬ ರಾಯುಡು ಅವರು, ನಗರದ ಪ್ರತಿಯೊಂದು ವಾರ್ಡ್‌ನಲ್ಲೂ ಮೂಲಸೌಕರ್ಯ ಅಭಿವೃದ್ಧಿಗೆ ಆದ್ಯತೆ ನೀಡಲಾಗುತ್ತಿದೆ. ಸಾರ್ವಜನಿಕರಿಗೆ ಅಗತ್ಯವಿರುವ ಸೌಲಭ್ಯಗಳನ್ನು ಹಂತ ಹಂತವಾಗಿ ಒದಗಿಸಲಾಗುತ್ತಿದೆ. ರಾಜೀವ್ ಗಾಂಧಿ ನಗರದ ನಿವಾಸಿಗಳ ಸಮಸ್ಯೆಯನ್ನು ಮನಗಂಡು ಈ ಕಾಮಗಾರಿ ಆರಂಭಿಸಲಾಗಿದೆ, ಎಂದು ತಿಳಿಸಿದರು. ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಿರುವುದಕ್ಕೆ ಸ್ಥಳೀಯ ನಿವಾಸಿಗಳು ಸಂತಸ ವ್ಯಕ್ತಪಡಿಸಿ, ರಾಜೇಶ್ವರಿ ಸುಬ್ಬರಾಯುಡು ಅವರ ಕಾರ್ಯವನ್ನು ಮೆಚ್ಚಿದರು.

ಈ ಸಂದರ್ಭದಲ್ಲಿ ಸ್ಥಳೀಯ ಮುಖಂಡರಾದ ಕಟ್ಟಾ ರಘು, ತುಕಾರಾಂ, ಷನ್ಮೂಖ, ಬಾಬು, ಕಟ್ಟಿ, ಜಂಬಣ್ಣ, ಲೋಕೇಶ್, ಯುವ ಮುಖಂಡ ಯೋಗಾನಂದ ರೆಡ್ಡಿ ಹಾಗೂ ಸ್ಥಳೀಯ ನಿವಾಸಿಗಳು ಹಾಜರಿದ್ದರು.

# ಹಳ್ಳದ ಜಮೀನು ಪ್ರಕರಣ ಬೆನ್ನಲ್ಲೇ ಶಿವರಾಜ್ ವಿರುದ್ಧ ಹೊಸ ಆರೋಪ: ರಸ್ತೆ ಅಗಲೀಕರಣಕ್ಕೆ ಮನೆ ಕಳೆದುಕೊಂಡ ಕುಟುಂಬಗಳ ಆಕ್ರೋಶ



**ಬಳ್ಳಾರಿ, ಮೇ 25:** ಹಳ್ಳದ ಜಮೀನು ಮತ್ತೊಬ್ಬರಿಗೆ ಮಾರಾಟ ಮಾಡಿದ ಆರೋಪದ ಪ್ರಕರಣ ಇನ್ನೂ ಮಾಸುವ ಮುನ್ನವೇ, ಬಳ್ಳಾರಿ ಮಹಾನಗರ ಪಾಲಿಕೆಯ ಏಳನೇ ವಾರ್ಡಿನ ಕಾರ್ಪೊರೇಟರ್ ಪತಿ ಶಿವರಾಜ್ ವಿರುದ್ಧ ಇದೀಗ ಮತ್ತೊಂದು ಆರೋಪ ಕೇಳಿಬಂದಿದೆ.

ವಾರ್ಡ್ ನಂ. 7 ಮತ್ತು 8ಕ್ಕೆ ಹೊಂದಿಕೊಂಡಿರುವ ರಸ್ತೆ ಅಗಲೀಕರಣ ಕಾಮಗಾರಿಯ ಹಿನ್ನೆಲೆ ಕಳೆದ ವರ್ಷ ರಸ್ತೆಯ ಒಂದು ಬದಿಯಲ್ಲಿದ್ದ ಇಪ್ಪತ್ತಕ್ಕೂ ಹೆಚ್ಚು ಕುಟುಂಬಗಳ ಮನೆಗಳನ್ನು ತೆರವುಗೊಳಿಸಲಾಗಿತ್ತು. ಆ ವೇಳೆ ಸಂತ್ರಸ್ತ ಕುಟುಂಬಗಳಿಗೆ ಬೇರೆಡೆ ನಿವೇಶನ ನೀಡುವುದಾಗಿ ಭರವಸೆ ನೀಡಲಾಗಿತ್ತು ಎನ್ನಲಾಗಿದೆ.

ಆದರೆ ವರ್ಷ ಕಳೆದರೂ ಯಾವುದೇ ವಸತಿ ವ್ಯವಸ್ಥೆ ಮಾಡಿಲ್ಲ ಎಂದು ಕುಟುಂಬಗಳು ಆರೋಪಿಸಿವೆ. ಇದೀಗ ರಸ್ತೆ ನಿರ್ಮಾಣ ಕಾಮಗಾರಿಗೆ ಮುಂದಾಗಿರುವ ಹಿನ್ನೆಲೆಯಲ್ಲಿ, ತಮಗೆ ಪರ್ಯಾಯ ನಿವೇಶನ ನೀಡುವವರೆಗೆ ರಸ್ತೆ ಕಾಮಗಾರಿ ನಡೆಸಲು ಅವಕಾಶ ನೀಡುವುದಿಲ್ಲ ಎಂದು ಸಂತ್ರಸ್ತರು ಪಟ್ಟು ಹಿಡಿದಿದ್ದಾರೆ.

ಇನ್ನೊಂದೆಡೆ, ಇದೇ ಸಂತ್ರಸ್ತರಿಗೆ ಹಳ್ಳದ ಜಮೀನಿನಲ್ಲೇ ನಿವೇಶನ ನೀಡುವುದಾಗಿ ಕಾಂಗ್ರೆಸ್ ಮುಖಂಡ ಶಿವರಾಜ್ ಹೇಳುತ್ತಿದ್ದಾರೆ ಎನ್ನುವ ಆರೋಪವೂ ಕೇಳಿಬಂದಿದೆ.

ಆದರೆ ಆ ಜಾಗವನ್ನು ಈಗಾಗಲೇ ಜಿಲ್ಲಾಡಳಿತ ಒತ್ತುವರಿ ಪ್ರದೇಶವೆಂದು ಗುರುತಿಸಿ ತೆರವುಗೊಳಿಸಿರುವುದರಿಂದ, ಮತ್ತೆ ಅದೇ ಜಾಗದಲ್ಲಿ ನಿವೇಶನ ನೀಡಿದರೆ ಭವಿಷ್ಯದಲ್ಲಿ ಮತ್ತೊಮ್ಮೆ ತೆರವುಗೊಳ್ಳುವ ಭೀತಿ ಇದೆ ಎಂದು ನಿವಾಸಿಗಳು ಆತಂಕ ವ್ಯಕ್ತಪಡಿಸಿದ್ದಾರೆ.

ಹೀಗಾಗಿ ಸುರಕ್ಷಿತ ಹಾಗೂ ಕಾನೂನುಬದ್ಧ ನಿವೇಶನ ಒದಗಿಸಬೇಕು. ಇಲ್ಲವಾದರೆ ರಸ್ತೆ ಕಾಮಗಾರಿ ನಡೆಸಲು ಬಿಡುವುದಿಲ್ಲ ಎಂದು ಸಂತ್ರಸ್ತ ಕುಟುಂಬಗಳು ಎಚ್ಚರಿಕೆ ನೀಡಿವೆ.

# ಮರದ ನೆರಳಲ್ಲಿ ಬೆಳೆ ಬೆಳೆಯುವುದಿಲ್ಲವೆಂಬ ನೆಪ ಹೊಲದಲ್ಲಿನ ಸಹಸ್ರಾರು ಮರಗಳಿಗೆ ಕೊಡಲಿ ಏಟು

**ಕಲಬುರಗಿ, ಮೇ. 25:** ಬಿಸಿಲಿನಿಂದ ಬಸವಳಿಯುತ್ತಿರುವ ಜಿಲ್ಲೆಯ ತಾಪಮಾನ ತಗ್ಗಿಸಲು ತಾಲ್ಲೂಕಿನ ಹೊನ್ನಕಿರಣಗಿ ಗ್ರಾಮದ ಬಳಿ ನೆಟ್ಟಿದ್ದ ಸಾವಿರಾರು ಮರಗಳನ್ನು ಏಕಾಏಕಿ ರೈತರು ನೆಲಸಮಗೊಳಿಸಿದ್ದಾರೆ. ಘಟನೆಯ ಮಾಹಿತಿ ಪಡೆಯುತ್ತಿದ್ದಂತೆಯೇ ಅರಣ್ಯಾಧಿಕಾರಿಗಳು ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದರು.

2012–13ರಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಹೊನ್ನಕಿರಣಗಿಯ ಸರ್ಕಾರಿ ಜಾಗದಲ್ಲಿ 68 ಸಾವಿರಕ್ಕೂ ಅಧಿಕ ಸಸಿಗಳನ್ನು ನೆಡಲಾಗಿದೆ. ಅಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾಗಿದ್ದ ಅನಿರುದ್ಧ ಶ್ರವಣ್ ಅವರ ಆಸಕ್ತಿಯ ಫಲವಾಗಿ ಸಾವಿರಾರು ನರೇಗಾ ಕಾರ್ಮಿಕರನ್ನು ಬಳಸಿಕೊಂಡು ಸಾಮಾಜಿಕ ಅರಣ್ಯ ಯೋಜನೆಯಡಿ ಈ ಸಸಿಗಳನ್ನು ನೆಡಲಾಗಿತ್ತು. ಇದೀಗ ಬೃಹತ್ ಮರಗಳಾಗಿ ಬೆಳೆದಿವೆ.

ಈ ಜಮೀನನ್ನು ಸೋಲಾರ್ ಪಾರ್ಕ್ ನಿರ್ಮಾಣ ಮಾಡಲು ಸರ್ಕಾರ ಭೂಸ್ವಾಧೀನ ಮಾಡಿಕೊಂಡಿತ್ತು. ಹೀಗಾಗಿ ಸರ್ಕಾರಿ ಸ್ವಾಮ್ಯದ ಭೂಮಿಯಲ್ಲಿ ಮರಗಳಿದ್ದರೂ ಪಕ್ಕದ ಜಮೀನಿನ ರೈತ ಮರಗಳಿಂದ ನೆರಳು ಬಿದ್ದು ಬೆಳೆ ತೆಗೆಯಲು ಆಗುವುದಿಲ್ಲ ಎಂಬ ಕಾರಣಕ್ಕೆ ಅರಣ್ಯ ಇಲಾಖೆಯ ಅನುಮತಿಯನ್ನೂ ಪಡೆಯದೇ ಮರಗಳನ್ನು ಕಡಿದು ಹಾಕಿದ್ದಾರೆ ಎಂದು ಈ ಮರಗಳನ್ನು ನಿರ್ವಹಣೆ ಮಾಡಿರುವ ನರೇಗಾ ಕಾರ್ಮಿಕ ಸದಾಶಿವ ಹೈದ್ರಾ ಬಳಿ ಅಳಲು ತೋಡಿಕೊಂಡರು.

ರೈತ ಸುಮಾರು 1800ಕ್ಕೂ ಅಧಿಕ ಮರಗಳನ್ನು ಕಡಿದು ಹಾಕಿದ್ದು ಅತ್ಯಂತ ಆಘಾತ ತಂದಿದೆ. ಅರಣ್ಯಾಧಿಕಾರಿಗಳು ಕಠಿಣ ಕಾನೂನು ಕ್ರಮ ಕೈಗೊಂಡು ಭವಿಷ್ಯದಲ್ಲಿ ಮರಗಳಿಗೆ ಕೊಡಲಿ ಏಟು ಬೀಳದಂತೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ಒತ್ತಾಯಿಸಿದರು.

2024ರ ಡಿಸೆಂಬರ್‌ನಲ್ಲಿಯೂ ನರೇಗಾ ಯೋಜನೆಯಡಿ ಹೊನ್ನಕಿರಣಗಿ, ತಾಡತೆಗನೂರು, ನದಿ ಸಿನ್ನೂರ ಗ್ರಾಮಗಳ ವ್ಯಾಪ್ತಿಯಲ್ಲಿ ನೆಟ್ಟಿದ್ದ 400 ಮರಗಳನ್ನು ಕಡಿಯಲಾಗಿತ್ತು. ಈ ಕುರಿತು ಮಾಹಿತಿ ಪಡೆಯಲು ಕಲಬುರಗಿ ವಲಯ (ಸಾಮಾಜಿಕ) ಅರಣ್ಯಾಧಿಕಾರಿ ಮೌಲಾಲಿಸಾಬ್ ಅವರನ್ನು ಸಂಪರ್ಕಿಸಲು ಯತ್ನಿಸಲಾಯಿತು. ಅವರು ಸಂಪರ್ಕಕ್ಕೆ ಲಭ್ಯರಾಗಲಿಲ್ಲ.





## ಮೂರು ವರ್ಷದ ಸೇವಾವಧಿ ಪೂರ್ಣಗೊಳಿಸಿದ ಹಜ್ ಸಚಿವ

# ರಹೀಂ ಖಾನ್

## ಅವರಿಗೆ ಹೃತ್ಪೂರ್ವಕ ಅಭಿನಂದನೆಗಳು



ಕರ್ನಾಟಕ ಸರ್ಕಾರದ ಪೌರಾಡಳಿತ ಮತ್ತು ಹಜ್ ಸಚಿವರಾಗಿ ನನ್ನ ಮೂರನೇ ವರ್ಷದ ಸೇವಾ ಅವಧಿ ಪೂರ್ಣಗೊಳ್ಳುತ್ತಿರುವ ಸಂದರ್ಭದಲ್ಲಿ ಈ ಅವಧಿಯ ಪ್ರಮುಖ ಸಾಧನೆಗಳು ಮತ್ತು ಯೋಜನೆಗಳ ಪ್ರಗತಿಯನ್ನು ಒಳಗೊಂಡ ವರದಿಯನ್ನು ನಿಮಗೆ ಸಲ್ಲಿಸುತ್ತಿರುವುದು ನನಗೆ ಹೆಮ್ಮೆಯ ಸಂಗತಿಯಾಗಿದೆ.

ಕಳೆದ ಮೂರು ವರ್ಷಗಳಲ್ಲಿ ಪೌರಾಡಳಿತ ಇಲಾಖೆಯಲ್ಲಿ ನಗರ ಸ್ಥಳೀಯ ಸಂಸ್ಥೆಗಳ ಮೂಲ ಸೌಕರ್ಯ ಅಭಿವೃದ್ಧಿ, ಪೌರಸೇವೆಗಳ ಡಿಜಿಟಲೀಕರಣ, ತ್ಯಾಜ್ಯ ನಿರ್ವಹಣೆ ಸ್ವಚ್ಛತಾ ಕಾರ್ಯಗಳು ಗೃಹ ಯೋಜನೆಗಳು ಹಾಗೂ ನಾಗರಿಕರಿಗೆ ಸುಲಭ ಸೇವೆಗಳನ್ನು ನೀಡುವತ್ತ ಸಾಕಷ್ಟು ಹೆಜ್ಜೆ ಹಾಕಿದೆ. ಹಜ್ ಕಾರ್ಯಚರಣೆಗಳ ಸಹಾಯ ಹಾಗೂ ವ್ಯವಸ್ಥೆಯ ನಿರ್ವಹಣೆಯಲ್ಲೂ ನಾವು ಬದ್ಧತೆಯಿಂದ ಕಾರ್ಯ ನಿರ್ವಹಿಸುತ್ತಿದ್ದೇವೆ.

ಈ ಸಂದರ್ಭದಲ್ಲಿ ಸಾಧನೆಗಳ ವರದಿಯನ್ನು ನಿಮಗೆ ಸಲ್ಲಿಸುತ್ತಿದ್ದೇನೆ. ಈ ವರದಿಯಲ್ಲಿ ಮೇ ೨೦೨೩ ರಿಂದ ಮೇ ೨೦೨೬ರವರೆಗೆ ನಡೆದ ಪ್ರಮುಖ ಯೋಜನೆಗಳು, ತಾಂತ್ರಿಕ ಅಭಿವೃದ್ಧಿಗಳು ಮತ್ತು ಪ್ರಗತಿಯ ವಿವರವಿದೆ. ಇದು ಮಾನ್ಯ ಮುಖ್ಯಮಂತ್ರಿಗಳ ನೇತೃತ್ವದಲ್ಲಿ ರೂಪುಗೊಂಡ ಉತ್ತಮ ಆಡಳಿತದ ಚಿಂತನೆಗೆ ಸಾಕ್ಷಿಯಾಗಿದೆ.

ನಿಮ್ಮ ಬಹುಮೌಲ್ಯವಾದ ಸಲಹೆ ಹಾಗೂ ಮಾರ್ಗದರ್ಶನ ನಮ್ಮ ಮುಂದಿನ ಪ್ರಯತ್ನಗಳಿಗೆ ಪ್ರೇರಣೆಯಾಗಲಿದೆ ಈ ವರದಿಯನ್ನು ತಮ್ಮ ದಯಪೂರ್ವಕ ಅವಗಾಹನೆಗೆ ಸಲ್ಲಿಸಿದೆ.



## ಪೌರಾಡಳಿತ ಮತ್ತು ಹಜ್ ಸಚಿವರ -ಮೂರು ವರ್ಷಗಳ ಪ್ರಗತಿ

ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಸಿದ್ದರಾಮಯ್ಯ ಅವರ ಸಮರ್ಥ ಹಾಗೂ ದೂರದರ್ಶಿ ನಾಯಕತ್ವದಡಿ, ಕಳೆದ ಮೂರು ವರ್ಷಗಳ ಅವಧಿಯಲ್ಲಿ ಪೌರಾಡಳಿತ ಹಾಗೂ ಹಜ್ ಇಲಾಖೆಯಲ್ಲಿ ನಗರ ಆಡಳಿತವನ್ನು ಬಲಪಡಿಸುವುದು, ಪಾರದರ್ಶಕತೆ ಹೆಚ್ಚಿಸುವುದು ಮತ್ತು ರಾಜ್ಯದ ನಾಗರಿಕರ ಜೀವನಮಟ್ಟವನ್ನು ಉನ್ನತಗೊಳಿಸುವ ಉದ್ದೇಶದಿಂದ ವ್ಯಾಪಕ ಸುಧಾರಣೆಗಳು ಮತ್ತು ಅಭಿವೃದ್ಧಿ ಕಾರ್ಯಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿದೆ. ಜನಕೇಂದ್ರಿತ ಮತ್ತು ಫಲಿತಾಂಶಾಧಾರಿತ ಆಡಳಿತದ ಮೂಲಕ ಮಹತ್ವದ ಸಾಧನೆಗಳನ್ನು ಈ ಅವಧಿಯಲ್ಲಿ ಸಾಧಿಸಲಾಗಿದೆ.

ನಗರ ಆಹಾರ ಭದ್ರತೆ

* ನಗರ ಸ್ಥಳೀಯ ಸಂಸ್ಥೆಗಳಲ್ಲಿ 186 ಹೊಸ ಇಂದಿರಾ ಕ್ಯಾಂಟೀನ್‌ಗಳ ಸ್ಥಾಪನೆ.
* 197 ಇಂದಿರಾ ಕ್ಯಾಂಟೀನ್‌ಗಳ ಪುನಶ್ಚೇತನ, ಸುಧಾರಿತ ಮೂಲ ಸೌಕರ್ಯ ಮತ್ತು ನಾಗರಿಕ ಸ್ನೇಹಿ.
* ನಗರ ಬಡವರು ಹಾಗೂ ದುಡಿಯುವ ವರ್ಗಕ್ಕೆ ಅಗ್ಗದ ಹಾಗೂ ಪೌಷ್ಠಿಕ ಆಹಾರ ಒದಗಿಕೆ.

ಆಸ್ತಿ ನಿಯಮಿತಗೊಳಿಸುವುದು ಮತ್ತು ಆದಾಯವೃದ್ಧಿ

* ರಾಜ್ಯಾದ್ಯಂತ ಅನಧಿಕೃತ ಆಸ್ತಿಗಳಿಗೆ ಬಿ–ಖಾತಾ ಪ್ರಮಾಣಪತ್ರಗಳ ಜಾರಿ ಮೂಲಕ ತೆರಿಗೆ ವ್ಯಾಪ್ತಿಗೆ ಒಳಪಡಿಕೆ.
* ನಗರ ಸ್ಥಳೀಯ ಸಂಸ್ಥೆಗಳ ತೆರಿಗೆ ಆದಾಯವೃದ್ಧಿ ಹಾಗೂ ಆರ್ಥಿಕ ಸ್ವಾವಲಂಬನೆಗೆ ಒತ್ತು.

ಡಿಜಿಟಲ್ ಆಡಳಿತ ಮತ್ತು ಪಾರದರ್ಶಕತೆ

* ಭ್ರಷ್ಟಾಚಾರ ರಹಿತ ಇ–ಖಾತಾ ವ್ಯವಸ್ಥೆ: ನಾಗರಿಕ ಲಾಗಿನ್ ಮೂಲಕ ಡ್ರಾಫ್ಟ್ ಪರಿಶೀಲನೆ, ತಿದ್ದುಪಡಿ ಹಾಗೂ ಖಾತಾ ವಿತರಣೆ.
* ಮುನ್ಸಿಪಾಲಿಟಿ ಕಚೇರಿಗೆ ಭೇಟಿ ಅಗತ್ಯವಿಲ್ಲದೆ ಆನ್‌ಲೈನ್‌ಮೂಲಕ ಇ–ಖಾತಾ ಪಡೆಯುವ ವ್ಯವಸ್ಥೆ.
* ಕಟ್ಟಡ ಯೋಜನಾ ಅನುಮೋದನೆ, OC ಮತ್ತು CC ಗಳಿಗೆ ಆನ್‌ಲೈನ್ ಸೌಲಭ್ಯ.
* ಸಮಯ ಬದ್ಧ ಹಾಗೂ ಪಾರದರ್ಶಕ ಸೇವೆಗಾಗಿ ವಿವಿಧ ನಾಗರಿಕ ಸೇವೆಗಳ ಡಿಜಿಟಲೀಕರಣ.

ಕಾರ್ಮಿಕ ಕಲ್ಯಾಣ ಮತ್ತು ಸಿಬ್ಬಂದಿ ಸದೃಢೀಕರಣ

* ಪೌರಕಾರ್ಮಿಕರ ಗೃಹ ಭಾಗ್ಯ ವಸತಿ ಯೋಜನೆ:
* 847 ಫಲಾನುಭವಿಗಳಿಗೆ 84 ಕೋಟಿ ರೂ. ಮಂಜೂರು.
* ಒಟ್ಟು 6,119 ಫಲಾನುಭವಿಗಳ ಆಯ್ಕೆ.
* 5,389 ಮನೆಗಳ ನಿರ್ಮಾಣ ಪೂರ್ಣ, 730 ಮನೆಗಳು ಪ್ರಗತಿಯಲ್ಲಿ.
* ತಾತ್ಕಾಲಿಕ ಪೌರಕಾರ್ಮಿಕರ ಶಾಶ್ವತಗೊಳಿಕೆ, ಉದ್ಯೋಗ ಭದ್ರತೆ ಮತ್ತು ಗೌರವ.
* ನಗರ ಸ್ಥಳೀಯ ಸಂಸ್ಥೆಗಳಲ್ಲಿ ಗುಂಪು A, B ಮತ್ತು ಅ ಹುದ್ದೆಗಳ ನೇಮಕಾತಿ.

ಕ್ಷೇತ್ರಮಟ್ಟದ ಪರಿಶೀಲನೆ ಮತ್ತು ಮೇಲ್ವಿಚಾರಣೆ

* ಸಚಿವರಿಂದ ಬಹುತೇಕ ಎಲ್ಲಾ ಜಿಲ್ಲೆಗಳ ವೈಯಕ್ತಿಕ ಭೇಟಿ.
* ಇಂದಿರಾ ಕ್ಯಾಂಟೀನ್‌ಗಳು, ಘನತ್ಯಾಜ್ಯ ನಿರ್ವಹಣಾ ಕೇಂದ್ರಗಳು (SWM) ಹಾಗೂ ULB ಕಚೇರಿಗಳ ಪರಿಶೀಲನೆ.
* ಪ್ರಮುಖ ಯೋಜನೆಗಳ ಅನುಷ್ಠಾನದ ನಿಕಟ ಮೇಲ್ವಿಚಾರಣೆ.

ಪ್ರಮುಖ ನಗರಾಭಿವೃದ್ಧಿ ಯೋಜನೆಗಳು, ನಗರೋತ್ಥಾನ ಯೋಜನೆ

* 304 ನಗರ ಸ್ಥಳೀಯ ಸಂಸ್ಥೆಗಳಲ್ಲಿ 3 ವರ್ಷಗಳ ಅವಧಿಗೆ ಜಾರಿ.
* ಒಟ್ಟು ವೆಚ್ಚ: 3,885 ಕೋಟಿ ರೂ.
* 1,616 ಕೋಟಿ ರೂ. ಬಿಡುಗಡೆ.
* 3,231 ಕಾಮಗಾರಿಗಳು ಪೂರ್ಣಗೊಂಡಿವೆ.

AMRUT ಉದ್ಯಾನ ಮತ್ತು ಕೆರೆಗಳ ಅಭಿವೃದ್ಧಿ

* 75 ULBಗಳಲ್ಲಿ 158 ಜಲಾಶಯಗಳ ಪುನಶ್ಚೇತನಕ್ಕೆ 304 ಕೋಟಿ ರೂ. ಮಂಜೂರು.
* 72 ULBಗಳಲ್ಲಿ 196 ಉದ್ಯಾನಗಳ ಅಭಿವೃದ್ಧಿಗೆ 82 ಕೋಟಿ ರೂ. ಮಂಜೂರು.

15ನೇ ಹಣಕಾಸು ಆಯೋಗ

* 2023–24 ರಿಂದ 2,578 ಕೋಟಿ ರೂ. ಅನುದಾನ
* 1,001 ಕೋಟಿ ರೂ. ಬಿಡುಗಡೆ.
* ಬಿಡುಗಡೆಯಾದ ಅನುದಾನದ ಸುಮಾರು 90% ಬಳಕೆ.

ಅರ್ಬನ್ ಚಾಲೆಂಜ್ ಫಂಡ್ (UCF)

* ಜನಸಂಖ್ಯೆ ಆಧರಿಸಿ ULB ಗಳಿಗೆ UCF ನಕೇಂದ್ರ ಪಾಲಿನ(25%) ಅನುದಾನ ರಾಜ್ಯ/ ULB ಪಾಲಿನ (25%) ಅನುದಾನ ಮತ್ತು ಶೇ.50% ಸಾಲ/PPP ಮಾದರಿಯಲ್ಲಿ ಹಂಚಿಕೆ ಮಾಡಿ, ಪ್ರಸ್ತಾವನೆಗಳನ್ನು ಕ್ರೋಡೀಕರಿಸಿ ಕ್ರಮ ಕೈಗೊಳ್ಳಲಾಗುತ್ತಿದೆ.
* ULB ಗಳಿಗೆ 1,897 ಕೇಂದ್ರದ ಪಾಲಿನ ಅನುದಾನ ಹಂಚಿಕೆಯಾಗಿದ್ದು, ಅದೇ ಪ್ರಮಾಣದ ಅನುದಾನವನ್ನು ರಾಜ್ಯ/ULB ಅನುದಾನ ಹಂಚಿಕೆ ಮಾಡಲಾಗಿರುತ್ತದೆ.

### ಸ್ವಚ್ಛ ಭಾರತ್ ಮಿಷನ್ (ನಗರ)– ಹಸಿ ಕಸದ ನಿರ್ವಹಣೆ

* 91 ULB ಗಳು, – 362ಕೋಟಿ DPR.ಅನುಮೋದನೆ
* 1,011 ಕಾಮಗಾರಿಗಳು ಆರಂಭ, 575ಪೂರ್ಣ.

ಒಣಕಸದನಿರ್ವಹಣೆ

* 309 ULBಗಳು, 418 ಕೋಟಿ ರೂ. DPR ಅನುಮೋದನೆ
* 2,369 ಕಾಮಗಾರಿಗಳು, 1,481 ಪೂರ್ಣ.

ಪಾರಂಪರಿಕ ಕಸದ ನಿರ್ವಹಣೆ

* 222 ULBಗಳು, 558 ಕೋಟಿ ಆಕಖ .ಅನುಮೋದನೆ
* 344 ಯೋಜನೆಗಳು, 132 ಪೂರ್ಣ.

ಸಾನಿಟರಿ ಲ್ಯಾಂಡ್‌ಫಿಲ್ ಘಟಕಗಳು

* 226 ULBಗಳಲ್ಲಿ SLF ಘಟಕಸ್ಥಾಪನೆ.
* 30 ಕೋಟಿ DPR, 226 ಕಾಮಗಾರಿಗಳು.

ಸ್ವಚ್ಛತಾ ಮೂಲ ಸೌಕರ್ಯ

* 2,476 ಶೌಚಾಲಯಗಳ ನಿರ್ಮಾಣ ಯೋಜನೆ, 164 ಕೋಟಿ ಆಕಖ.

ಸ್ಥಳೀಯ ಸಂಸ್ಥೆಗಳ ಬಲವರ್ಧನೆ ಮತ್ತು ನಗರ ಸುಧಾರಣೆ

* ಎಲ್ಲಾ ULB ಗಳಲ್ಲಿ ಸರ್ಕಾರಿ ನಾಮ ನಿರ್ದೇಶಿತರ ನೇಮಕ.
* ಜನಸಂಖ್ಯೆ ಆಧಾರಿತ ಮೇಲ್ದರ್ಜೆಗೇರಿಕೆ:
* ಗ್ರಾಮಪಂಚಾಯಿತಿ, ಟಿಪಿ, ಟಿಎಂಸಿ, ಸಿಎಂಸಿ, ಮಹಾನಗರಪಾಲಿಕೆ.

ನಾಗರಿಕ ಕೇಂದ್ರೀಕೃತ ನಗರ ಆಡಳಿತ

* ಘನತ್ಯಾಜ್ಯ ನಿರ್ವಹಣೆ, ಸ್ವಚ್ಛತೆ, ವಸತಿ ಮತ್ತು ಡಿಜಿಟಲ್ ಸೇವೆಗಳಮೂಲಕ ನಾಗರಿಕ ಸ್ನೇಹಿ ಆಡಳಿತಕ್ಕೆ ಆದ್ಯತೆ.

ಹಜ್ ಕಾರ್ಯಾಚರಣೆ

* ಪಾರದರ್ಶಕತೆ, ಕಾರ್ಯಕ್ಷಮತೆ ಮತ್ತು ಸಮುದಾಯ ಸೇವೆಗೆ ಒತ್ತು ನೀಡಿ ಹಜ್ ಕಾರ್ಯಾಚರಣೆಗಳ ಯಶಸ್ವಿ ನಿರ್ವಹಣೆ.

ಮೂರು ವರ್ಷಗಳ ಈ ಅವಧಿಸ್ವಚ್ಛ, ಸ್ಥಿರ ಮತ್ತು ಜನಪರ ಪಟ್ಟಣ/ನಗರಗಳ ನಿರ್ಮಾಣದದಿಟ್ಟ ಆಡಳಿತಕ್ಕೆ ಸಾಕ್ಷಿಯಾಗಿದೆ. ಜೊತೆಗೆ ಹಜ್‌ಇಲಾಖೆಯ ಮೂಲಕ ಸಮುದಾಯ ಸೇವೆಯ ಬದ್ಧತೆಯನ್ನೂ ಯಶಸ್ವಿಯಾಗಿ ನಿರ್ವಹಿಸಲಾಗಿದೆ.

## 3 ದಿನಗಳ 8ನೇ ಇಂಡಿಯನ್ ಓಪನ್ ಪ್ಯಾರಾ ಅಥ್ಲೆಟಿಕ್ಸ್‌ಗೆ ಇಂದು ಚಾಲನೆ

ಬೆಂಗಳೂರು, ಮೇ 25: ಭಾರತೀಯ ಪ್ಯಾರಾಲಿಂಪಿಕ್ಸ್ ಸಮಿತಿ(ಪಿಸಿಐ) ಆಯೋಜಿಸುತ್ತಿರುವ 8ನೇ ಆವೃತ್ತಿಯ ಇಂಡಿಯನ್ ಓಪನ್ ಪ್ಯಾರಾ ಅಥ್ಲೆಟಿಕ್ಸ್ ಅಂತಾರಾಷ್ಟ್ರೀಯ ಚಾಂಪಿಯನ್ಶಿಪ್ಗೆ ಕಂಠೀರವ ಕ್ರೀಡಾಂಗಣದಲ್ಲಿ ಮಂಗಳವಾರ ಚಾಲನೆ ದೊರೆಯಲಿದೆ. 3 ದಿನಗಳ ಕಾಲ ನಡೆಯಲಿರುವ ಚಾಂಪಿಯನ್‌ಶಿಪ್‌ನಲ್ಲಿ ಭಾರತದ 341 ಮಂದಿ ಸೇರಿ ಒಟ್ಟು 5 ರಾಷ್ಟ್ರಗಳ 350 ಕ್ರೀಡಾಪಟುಗಳು ಪಾಲ್ಗೊಳ್ಳಲಿದ್ದಾರೆ.ಕೂಟದಲ್ಲಿ ಒಟ್ಟು 155 ವಿಭಾಗಗಳಲ್ಲಿ ಸ್ಪರ್ಧೆಗಳು ನಡೆಯಲಿವೆ. ಈ ಕೂಟವು ಅಕ್ಟೋಬರ್ 18ರಿಂದ 24ರ ವರೆಗೂ ಜಪಾನ್‌ನ ಐಚಿ–ನಗೊಯಾದಲ್ಲಿ ನಡೆಯಲಿರುವ 5ನೇ ಪ್ಯಾರಾ ಏಷ್ಯನ್ ಗೇಮ್ಸ್‌ಗೆ ಅರ್ಹತಾ ಕೂಟವಾಗಿರಲಿದೆ.155 ವಿಭಾಗಗಳ ಪೈಕಿ 89 ವಿಭಾಗಗಳಲ್ಲಿ ಪುರುಷ ಅಥ್ಲೀಟ್‌ಗಳು, 66 ವಿಭಾಗಗಳಲ್ಲಿ ಮಹಿಳಾ ಅಥ್ಲೀಟ್‌ಗಳಿಗೆ ಸ್ಪರ್ಧೆಗಳು ನಡೆಯಲಿವೆ. ಭಾರತದ 341 ಅಥ್ಲೀಟ್‌ಗಳು ಪೈಕಿ 66 ಮಂದಿಗೆ ಪ್ಯಾರಾ ಏಷ್ಯನ್ ಗೇಮ್ಸ್‌ಗೆ ಅರ್ಹತೆ ದೊರೆಯಲಿದೆ.

ವಿದೇಶಿಗರ ಪೈಕಿ ಶ್ರೀಲಂಕಾದ ಮೂವರು, ಕಿರ್ಗಿಸ್ತಾನದ ಇಬ್ಬರು, ಥಾಯ್ಲೆಂಡ್ ಹಾಗೂ ಫಿಲಿಪ್ಪೀನ್ಸ್ನ ತಲಾ ಒಬ್ಬರು ಇದ್ದಾರೆ. ಅಫ್ಘಾನಿಸ್ತಾನದ ಇಬ್ಬರು ಆಗಮಿಸುವ ನಿರೀಕ್ಷೆ ಇದೆ ಎಂದು ಆಯೋಜಕರು ತಿಳಿಸಿದ್ದಾರೆ.ಸದ್ಯ ಪಟ್ಟಿಯಲ್ಲಿರುವ ಅಥ್ಲೀಟ್ಗಳ ಪೈಕಿ 30 ಮಂದಿ ತಲಾ 3 ಸ್ಪರ್ಧೆಗಳಲ್ಲಿ





ಪಾಲ್ಗೊಂಡು ಗಮನ ಸೆಳೆಯಲಿದ್ದಾರೆ.

ಭಾರತದ 19 ರಾಜ್ಯ ಹಾಗೂ ಸರ್ವಿಸಸ್‌ನ ಅಥ್ಲೀಟ್‌ಗಳು ಕಣಕ್ಕಿಳಿಯಲಿದ್ದಾರೆ. ಕರ್ನಾಟಕದ 15 ಅಥ್ಲೀಟ್‌ಗಳಿದ್ದರೆ, ಅತಿಹೆಚ್ಚು ಅಥ್ಲಿಟ್‌ಗಳು ಹರ್ಯಾಣ ರಾಜ್ಯದವರಾಗಿದ್ದಾರೆ. ಆ ರಾಜ್ಯದ 84 ಮಂದಿ ಸ್ಪರ್ಧೆಗಿಳಿಯಲಿದ್ದಾರೆ. ಗೋವಾದ ಏಕೈಕ ಪ್ಯಾರಾ ಅಥ್ಲೀಟ್ ಪಾಲ್ಗೊಳ್ಳುತ್ತಿರುವುದು ಕೂಡ ವಿಶೇಷ.ಮೇ 28ರ ವರೆಗೂ ನಡೆಯಲಿರುವ ಕೂಟಕ್ಕೆ ಭಾರತೀಯ ಪ್ಯಾರಾ ಅಥ್ಲೆಟಿಕ್ಸ್ ಸಂಸ್ಥೆ ಸಕಲ ಸಿದ್ಧತೆ ಮಾಡಿಕೊಂಡಿದೆ. ಅಥ್ಲೀಟ್ಗಳಿಗೆ ಎಲ್ಲಾ ಸೌಕರ್ಯಗಳನ್ನು ಒದಗಿಸಲಾಗುತ್ತದೆ. ಮುಂಬರುವ ಪ್ಯಾರಾ ಏಷ್ಯನ್ ಕ್ರೀಡಾಕೂಟದಲ್ಲಿ ದಾಖಲೆಯ ಪದಕಗಳನ್ನು ಗೆಲ್ಲಲು ಈ ಕೂಟ ಮೊದಲ ಹೆಜ್ಜೆ ಆಗಲಿದೆ ಎಂದು ಭಾರತೀಯ ಪ್ಯಾರಾಲಿಂಪಿಕ್ ಸಮಿತಿಯ ಮುಖ್ಯಸ್ಥ ಡಾ.ಸತ್ಯನಾರಾಯಣ ತಿಳಿಸಿದ್ದಾರೆ.

## ಬೆಂಗಳೂರಲ್ಲಿ ಮೊದಲ ಬಾರಿಗೆ "ರಾಷ್ಟ್ರೀಯ AI ಮತ್ತು ಡಿಜಿಟಲ್ ವಾಟರ್ ಶೃಂಗಸಭೆ " ಆಯೋಜನೆ: BWSSB

ಬೆಂಗಳೂರು, ಮೇ 25: ಬದಲಾವಣೆ, ತ್ವರಿತ ನಗರೀಕರಣ ಹಾಗೂ ಅಂತರ್ಜಲ ಕುಸಿತದಂತಹ ಜಾಗತಿಕ ಸವಾಲುಗಳನ್ನು ತಂತ್ರಜ್ಞಾನದ ಮೂಲಕ ಸಮರ್ಥವಾಗಿ ಎದುರಿಸಲು ಬೆಂಗಳೂರು ಜಲಮಂಡಳಿ ಸಜ್ಜಾಗಿದೆ. ಈ ನಿಟ್ಟಿನಲ್ಲಿ ಭವಿಷ್ಯದ ಜಲ ನಿರ್ವಹಣೆ ಕುರಿತು ಚರ್ಚಿಸಲು ಬೆಂಗಳೂರು ನೀರು ಸರಬರಾಜು ಹಾಗೂ ಒಳಚರಂಡಿ ಮಂಡಳಿ ನಗರದಲ್ಲಿ ಮೇ 27 ರಂದು ದೇಶದ ಮೊಟ್ಟಮೊದಲ ಹಾಗೂ ಅತಿದೊಡ್ಡ 'ರಾಷ್ಟ್ರೀಯ ಎಐ ಮತ್ತು ಡಿಜಿಟಲ್ ವಾಟರ್ ಶೃಂಗಸಭೆ 2026' ಆಯೋಜಿಸಿದೆ.

ಫೋರ್ ಸೀಸನ್ಸ್ ಹೋಟೆಲ್ ರಾಯಭಾರ ಕಚೇರಿ ಒನ್‌ನಲ್ಲಿ ಈ ಮಹತ್ವದ ಕಾರ್ಯಕ್ರಮ ನಡೆಯಲಿದೆ. ಅಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಈ ಬೃಹತ್ ಶೃಂಗಸಭೆಗೆ ಅಧಿಕೃತ ಚಾಲನೆ ನೀಡಲಿದ್ದಾರೆ ಎಂದು ಜಲಮಂಡಳಿ ಅಧ್ಯಕ್ಷರಾದ ಡಾ. ರಾಮ್ ಪ್ರಸಾತ್ ಮನೋಹರ್ ಅವರು ಸೋಮವಾರ ಮಾಹಿತಿ ನೀಡಿದರು.




ವಿಶ್ವದ ಸ್ಮಾರ್ಟ್ ಜಲ ನಿರ್ವಹಣಾ ವ್ಯವಸ್ಥೆಗಳನ್ನು ರೂಪಿಸುವ ಗುರಿ ಹೊಂದಿರುವ ಈ ಶೃಂಗಸಭೆಯಲ್ಲಿ ಜಾಗತಿಕ ಜಲ ತಜ್ಞರು, ಎಐ ಪರಿಣತರು ಮತ್ತು ತಂತ್ರಜ್ಞಾನ ಸಂಸ್ಥೆಗಳ ಪ್ರತಿನಿಧಿಗಳು ಭಾಗವಹಿಸ ಲಿದ್ದಾರೆ. ಪ್ರಮುಖವಾಗಿ ಎಐ ಆಧಾರಿತ ಜಲ ಆಡಳಿತ, ಸ್ಮಾರ್ಟ್ ಯುಟಿಲಿಟಿ, ಡಿಜಿಟಲ್ ಟ್ವಿನ್ಸ್, ಐಒಟಿ ಮೇಲ್ವಿಚಾರಣೆ, ತ್ಯಾಜ್ಯನೀರು ಮರುಬಳಕೆ, ಮುನ್ಸೂಚಕ ವಿಶ್ಲೇಷಣೆ ಹಾಗೂ ಭವಿಷ್ಯದ ಆರ್ಥಿಕ ಮಾದರಿಗಳ ಕುರಿತು ವಿಸ್ತೃತ ಚರ್ಚೆಗಳು ನಡೆಯಲಿವೆ.

ಬೆಂಗಳೂರು ಜಲಮಂಡಳಿಯ ಸ್ಕಾಡಾ, ಜಿಐಎಸ್ ಮ್ಯಾಪಿಂಗ್, ಐಒಟಿ ಟ್ಯಾಂಕರ್ ಟ್ರ್ಯಾಕಿಂಗ್ ಹಾಗೂ ಸ್ಮಾರ್ಟ್ ಮೀಟರಿಂಗ್ ವ್ಯವಸ್ಥೆಗಳನ್ನು ಪ್ರದರ್ಶಿಸಲಾಗುವುದು. ಜೊತೆಗೆ, ಜಲಮಂಡಳಿಯ ಕೃತಕ ಬುದ್ಧಿಮತ್ತೆ ಆಧಾರಿತ 'ಪ್ರಜ್ಞಾ', ದತ್ತಾಂಶ ಆಧಾರಿತ 'ನೀತಿ', ಸ್ಮಾರ್ಟ್ ಮೂಲಸೌಕರ್ಯದ 'ತಂತ್ರಜ್ಞಾನ', ಸುಸ್ಥಿರ ಹೂಡಿಕೆಯ 'ಅರ್ಥ' ಹಾಗೂ ಹವಾಮಾನ ಭದ್ರತೆಯ 'ಸ್ಥಿರತೆ'ಯನ್ನು ಒಳಗೊಂಡಿರುವ ಮಹತ್ವಾಕಾಂಕ್ಷೆಯ 'ಪಂಚಸೂತ್ರ'ಗಳ ಕಾರ್ಯತಂತ್ರವು ಈ ಶೃಂಗಸಭೆಯ ಪ್ರಮುಖ ಆಕರ್ಷಣೆಯಾಗಲಿದೆ.